ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 24 ಬುಧವಾರ 2022

ಸಂಪುಟ: 43 | ಸಂಚಿಕೆ: 129 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4

ಎಸಿಬಿ ರದ್ದು: ಹೈಕೋರ್ಟ್ ಆದೇಶ ಪಾಲಿಸುತ್ತೇವೆ



ಬೆಂಗಳೂರು, ಆ. 23(ಕೆಎಂಶಿ)– ಎಸಿಬಿ ರದ್ದುಗೊಳಿಸಿದ ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಪ್ರಸ್ತಾಪವೇ ಸರ್ಕಾರದ ಮುಂದಿಲ್ಲ ಎಂದು ಸಿಎಂ ಬಸವರಾಜ ಬೊಮ್ಮಾಯಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸಿಬಿ ರದ್ದುಗೊಳಿಸಿ, ಹೈಕೋರ್ಟ್ ನೀಡಿರುವ ಆದೇಶವನ್ನು ನಾವು ಪಾಲಿಸುತ್ತೇವೆ ಮತ್ತು ಅದನ್ನು ಜಾರಿಗೆ ತರಲು ಸಿದ್ಧತೆ ನಡೆದಿದೆ ಎಂದರು.

ಈ ಬಗ್ಗೆ ಸಂಪುಟ ಸಭೆಯಲ್ಲಿ ಅಂತಿಮ ನಿರ್ಧಾರವನ್ನು ಈ ಹಿಂದೆಯೇ ತೆಗೆದುಕೊಂಡಿದ್ದೇವೆ. ಇದೇ ನಿಲುವನ್ನು ಪ್ರಸಂಗ ಬಂದಾಗ ಸುಪ್ರೀಂ ಕೋರ್ಟ್‌ನಲ್ಲೂ ತಿಳಿಸುತ್ತೇವೆ. ಎಸಿಬಿ ರದ್ದುಗೊಳಿಸಿದ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಖಾಸಗಿ ವ್ಯಕ್ತಿಗಳು ಮೇಲ್ಮನವಿ ಸಲ್ಲಿಸಿದ್ದಾರೆ. ಅದಕ್ಕೂ ನಮಗೂ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು.

ದಸರಾ ಮಹೋತ್ಸವದ ಪ್ರತಿ ಕಾರ್ಯಕ್ರಮ ಸ್ಥಳದಲ್ಲೂ

ನಾನಾ ಖಾದ್ಯ ಮಳಿಗೆ ತೆರೆಯಲು ಚಿಂತನೆ

- ದಸರಾ ಆಹಾರ ಮೇಳದ ಜೊತೆಗೆ ಜನರಿಗೆ ಅನುಕೂಲ ಕಲ್ಪಿಸಲು ಈ ಹೊಸ ಆಲೋಚನೆ
- ಆಹಾರ ಮೇಳದ ಒತ್ತಡ ತಡೆ ಜೊತೆಗೆ ಜನರಿಗೆ ಅಲ್ಲಲ್ಲೇ ಹಸಿವು ನೀಗುವ ಉದ್ದೇಶ



■ ಎಸ್.ಬಿ.ದೇವರಾಜ

ಮೈಸೂರು, ಆ.23–ಮೈಸೂರು ದಸರಾ ಮಹೋತ್ಸವದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಸ್ಥಳಗಳಲ್ಲೂ ಸ್ವಾದಿಷ್ಟ ಖಾದ್ಯಗಳ ಮಳಿಗೆ ತೆರೆಯುವ ನಿಟ್ಟಿನಲ್ಲಿ ಚಿಂತನೆ ನಡೆದಿದೆ. ಈ ಬಾರಿಯೂ ಸ್ಕೌಟ್ ಅಂಡ್ ಗೈಡ್ಸ್ ಹಾಗೂ ಲಲಿತಮಹಲ್ ಪ್ಯಾಲೇಸ್

ಸೆ.26ರಿಂದ ಅ.4ರವರೆಗೆ ಆಹಾರ ಮೇಳ

ಸ್ಕೌಟ್ ಅಂಡ್ ಗೈಡ್ಸ್ ಹಾಗೂ ಲಲಿತಮಹಲ್ ಹೋಟೆಲ್ ಸಮೀಪದ ಮೈದಾನದಲ್ಲಿ ಸೆ.26ರಿಂದ ಅ.4ರವರೆಗೆ ಆಹಾರ ಮೇಳ ಆಯೋಜಿಸಲಾಗುವುದು. ಇಲ್ಲಿ ಕ್ರಮವಾಗಿ 90–100 ಹಾಗೂ 50–70 ಮಳಿಗೆಗಳ ವ್ಯವಸ್ಥೆ ಮಾಡಲಾಗುವುದು. ವಾಟರ್ ಪ್ರೂಫ್ ಪೆಂಡಾಲ್ ಮಾದರಿ ಮಳಿಗೆ ನಿರ್ಮಿಸಬೇಕೆಂಬ ಸಲಹೆ ಕೇಳಿಬಂದಿದೆ. ಹಿಂದಿನ ವರ್ಷಗಳಲ್ಲಿನ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಆಹಾರ ಮೇಳ ಏರ್ಪಡಿಸಲಾಗುತ್ತದೆ. ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಿದ ಬಳಿಕ ದಸರಾ ವಿಶೇಷಾಧಿಕಾರಿಗಳ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುವುದು. –ಕುಮುದಾ ಶರತ್,
ಜಂಟಿ ನಿರ್ದೇಶಕಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ



ಹೋಟೆಲ್ ಸಮೀಪದ ಮುಡಾ ಮೈದಾನದಲ್ಲಿ 'ದಸರಾ ಆಹಾರ ಮೇಳ' ಆಯೋಜಿಸಲು ನಿರ್ಧರಿಸಲಾಗಿದೆ. ಇದರೊಂದಿಗೆ ಯುವ ದಸರಾ, ಮಹಿಳಾ ದಸರಾ, ಮಕ್ಕಳ ದಸರಾ, ರೈತ ದಸರಾ, ಕ್ರೀಡಾ ದಸರಾ, ಪುಸ್ತಕ ಮೇಳ, ಕೃಷಿ ಮೇಳ ಹೀಗೆ ಇತರೆ ನಾನಾ ಕಾರ್ಯಕ್ರಮಗಳ ಸ್ಥಳದಲ್ಲೂ ದಸರಾ ▶ 8ನೇ ಪುಟಕ್ಕೆ

ಗಣೇಶ ಹಬ್ಬಕ್ಕೆ ಮುನ್ನೆಚ್ಚರಿಕೆ



ಬೆಂಗಳೂರು: ಗೌರಿ–ಗಣೇಶ ಹಬ್ಬಕ್ಕಾಗಿ ವಿವಿಧ ಇಲಾಖೆಯ ಮಧ್ಯೆ ಸಮನ್ವಯಕ್ಕಾಗಿ ಸರ್ಕಾರ ಸುತ್ತೋಲೆ ಹೊರಡಿಸಿದ್ದು, ಉತ್ಸವಕ್ಕೆ ಮುಂಚಿತವಾಗಿಯೇ ಕೋಮು ಸೌಹಾರ್ದ ಸಭೆ ನಡೆಸುವಂತೆ ತಿಳಿಸಿದೆ.


ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರಿಗೂ ಸೇರಿದಂತೆ ಸುತ್ತೋಲೆ ಹೊರಡಿಸಿದೆ. ಉತ್ಸವಕ್ಕೂ ಮುಂಚೆ ನಾಗರಿಕ ಸಮಿತಿ, ಮೊಹಲ್ಲಾ ಸಮಿತಿ, ಕಾವಲು ಸಮಿತಿ ಸೇರಿದಂತೆ ಎಲ್ಲಾ ಸಂಘ ಸಂಸ್ಥೆಗಳ ಮುಖ್ಯಸ್ಥರನ್ನು ಒಳಗೊಂಡಂತೆ ಸಭೆ ನಡೆಸಲು ಸೂಚನೆ ನೀಡಿದೆ. ಆಗಸ್ಟ್ 30ರಿಂದ ಗೌರಿ–ಗಣೇಶ ಹಬ್ಬವನ್ನು ರಾಜ್ಯದಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತದೆ. ಈ ಹಬ್ಬದ ಹಿನ್ನೆಲೆಯಲ್ಲಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸುವ ಪ್ರಕ್ರಿಯೆ ಸಾಮಾನ್ಯವಾಗಿದ್ದು, ಈ ಸಂದರ್ಭದಲ್ಲಿ ಉತ್ಸವವನ್ನು ಆಯೋಜಿಸುವ ಆಯೋಜಕರಿಗೆ ಪರವಾನಗಿ ನೀಡುವುದು ವಿವಿಧ ಇಲಾಖೆಗಳ ಜವಾಬ್ದಾರಿಯಾಗಿರುತ್ತದೆ. ಈ ಕಾರ್ಯವನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಮಹಾನಗರಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕ್ರಮ ವಹಿಸಬೇಕು ಎಂದು ಹೇಳಿದೆ.

ಸರ್ಕಾರದ ಸುತ್ತೋಲೆಯಲ್ಲಿ ಏನಿದೆ?

- ಗಣೇಶ ಪ್ರತಿಷ್ಠಾಪನೆಗೆ ಅಗತ್ಯವಿರುವ ಸ್ಥಳ, ಪೆಂಡಾಲ್ ವಿದ್ಯುತ್ ಸಂಪರ್ಕ, ಪರವಾನಗಿಗಳನ್ನು ನೀಡಲು ಕಂದಾಯ, ಲೋಕೋಪಯೋಗಿ, ಇಂಧನ ಅಗ್ನಿಶಾಮಕ, ಪೊಲೀಸ್ ಇಲಾಖೆಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸಂಯೋಜಿತವಾಗಿ ಪರವಾನಗಿ ನೀಡಲು ಸೂಕ್ತ ಕ್ರಮ ವಹಿಸುವುದು.
- ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಪ್ರತಿ ವಾರ್ಡ್‌ಗಳ ಮಟ್ಟದಲ್ಲಿ ಸಂಬಂಧಿಸಿದ ವಿವಿಧ ಇಲಾಖೆಗಳ ಪ್ರತಿನಿಧಿಗಳನ್ನು ಒಳಗೊಂಡಂತೆ ಏಕಗವಾಕ್ಷಿ ವ್ಯವಸ್ಥೆಯನ್ನು ಸ್ಥಾಪಿಸಿ ಪ್ರಚಾರ ಮಾಡುವುದು.
- ಕಾರ್ಯಕ್ರಮದ ಆಯೋಜಕರು ನಿಗದಿತ ನಮೂನೆಯಲ್ಲಿ ಮುಂಚಿತವಾಗಿಯೇ ಅರ್ಜಿ ಸಲ್ಲಿಸುವುದು ಹಾಗೂ ಆಯೋಜಕರು ಸಲ್ಲಿಸುವ ಅರ್ಜಿಗಳನ್ನು ▶ 8ನೇ ಪುಟಕ್ಕೆ

ವಿಧಾನಸೌಧದಲ್ಲಿ ಬಸವಣ್ಣ, ಕೆಂಪೇಗೌಡರ ಪ್ರತಿಮೆ ಸ್ಥಾಪನೆ

ಪ್ರಬಲ ಸಮುದಾಯಗಳ ಓಲೈಕೆಗಾಗಿ ಬಿಜೆಪಿ ಸ್ಟ್ಯಾಚ್ಯು ಪಾಲಿಟಿಕ್ಸ್!





ಬೆಂಗಳೂರು: ರಾಜ್ಯ ವಿಧಾನಸಭೆ ಚುನಾವಣೆಗೆ ಕೆಲವೇ ತಿಂಗಳುಗಳು ಬಾಕಿ ಇರುವಾಗ ಬಿಜೆಪಿ ಸರ್ಕಾರವು ವಿಧಾನಸೌಧದಲ್ಲಿ ಸಮಾಜ ಸುಧಾರಕ, ದಾರ್ಶನಿಕ ಬಸವಣ್ಣ ಮತ್ತು ನಾಡಪ್ರಭು ಕೆಂಪೇಗೌಡರ ಪ್ರತಿಮೆಗಳನ್ನು ಸ್ಥಾಪಿಸುವ ಮೂಲಕ ರಾಜ್ಯದ ಎರಡು ದೊಡ್ಡ ಸಮುದಾಯಗಳಾದ ಲಿಂಗಾಯತ ಮತ್ತು ಒಕ್ಕಲಿಗರನ್ನು ಓಲೈಸಲು ಪ್ರಯತ್ನಿಸುತ್ತಿದೆ. ಕನ್ನಡ ರಾಜ್ಯೋತ್ಸವ ದಿನವಾದ ನವೆಂಬರ್ 1 ರಂದು ಪ್ರತಿಮೆಗಳು ಅನಾವರಣಗೊಳ್ಳುವ ನಿರೀಕ್ಷೆಯಿದೆ.

ವಿಧಾನಸೌಧದ ಆವರಣದಲ್ಲಿ ಈಗ ಡಾ.ಬಿ.ಆರ್.ಅಂಬೇಡ್ಕರ್, ಕೆಂಗಲ್ ಹನುಮಂತಯ್ಯ, ಮಹಾತ್ಮ ಗಾಂಧಿ ಮತ್ತಿತರರ ಪ್ರತಿಮೆಗಳಿವೆ. ವಾಸ್ತವವಾಗಿ, 2021ರಲ್ಲಿ, ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ, ವಿಧಾನಸೌಧದಲ್ಲಿ ಬಸವಣ್ಣ ಪ್ರತಿಮೆ ಸ್ಥಾಪನೆಗೆ ಕ್ಯಾಬಿನೆಟ್ ಅನುಮೋದನೆ ನೀಡಿತು, ಆದರೆ ಅದು ಕಾರ್ಯರೂಪಕ್ಕೆ ▶ 6ನೇ ಪುಟಕ್ಕೆ

ಕಾಂಗ್ರೆಸ್‌ನ ಮಡಿಕೇರಿ ಚಲೋ ಮುಂದೂಡಿಕೆ

ಬೆಂಗಳೂರು, ಆ. 23(ಕೆಎಂಶಿ)– ಕಾಂಗ್ರೆಸ್ ವತಿಯಿಂದ ಆಗಸ್ಟ್ 26ರಂದು ಹಮ್ಮಿಕೊಳ್ಳಲು ಉದ್ದೇಶಿಸಿದ್ದ ಮಡಿಕೇರಿ ಚಲೋವನ್ನು ಮುಂದೂಡಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ವಿಧಾನಸಭೆಯ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಜಿಲ್ಲಾಡಳಿತ ನಿಷೇಧಾಜ್ಞೆ ಜಾರಿ ಮಾಡಿರುವ ಹಿನ್ನೆಲೆಯಲ್ಲಿ ಮುಂದೂಡಲಾಗಿದೆ ಎಂದರು. ವಿರೋಧ ಪಕ್ಷದ ನಾಯಕನಾಗಿ, ಮಾಜಿ ಮುಖ್ಯಮಂತ್ರಿಯಾಗಿ ನಾನು ಕಾನೂನನ್ನು ಉಲ್ಲಂಘಿಸುವ ತಪ್ಪು ಮಾಡಲ್ಲ. ನಮ್ಮ ಪಕ್ಷ ಕಾನೂನು ಮೀರುವುದನ್ನು ಬಯಸುವುದಿಲ್ಲ. ಇದು ಪಕ್ಷದ ಕಾರ್ಯಕ್ರಮ. ಪಕ್ಷದ ಮುಖಂಡರೊಂದಿಗೆ ಚರ್ಚೆ ಮಾಡಿ ಪ್ರತಿಭಟನೆ ಮುಂದೂಡುವ ನಿರ್ಧಾರ ಮಾಡಿದ್ದೇನೆ.

ಮುಂದೆ ಮತ್ತೆ ಮುಖಂಡರೊಂದಿಗೆ ಚರ್ಚೆ ಮಾಡಿ ಪ್ರತಿಭಟನೆ ಮಾಡುವ ಬಗ್ಗೆ ತೀರ್ಮಾನ ಮಾಡುತ್ತೇನೆ ಎಂದು ಅವರು ಹೇಳಿದ್ದಾರೆ. ನಾನು 26ರಂದು ಸರ್ಕಾರದ ನಿಷ್ಕ್ರಿಯತೆ, ಭದ್ರತಾ ವೈಫಲ್ಯ ಹಾಗೂ ಶಾಸಕರ ಭ್ರಷ್ಟಾಚಾರದ ವಿರುದ್ಧ ಪ್ರತಿಭಟನೆ ಮಾಡುತ್ತೇವೆ ಎಂದು ಘೋಷಣೆ ಮಾಡಿದೆ. ಅದಕ್ಕೆ ಬಿಜೆಪಿಯವರು ತಾವೂ ಒಂದು ಜಾಗೃತಿ ಸಮಾವೇಶ ಮಾಡುತ್ತೇವೆ ಎಂದು ಘೋಷಣೆ ಮಾಡಿದರು. ಅವರು ಸಮಾವೇಶ ಮಾಡಲು ನಮ್ಮ ತಕರಾರಿಲ್ಲ. ಆದರೆ ನಾವು ಘೋಷಣೆ ಮಾಡಿದ ಮರುದಿನವೇ ನಾವು ಮಾಡುತ್ತೇವೆ ಎಂದು ಹೇಳಿ ಬಿಜೆಪಿಯವರು ದ್ವೇಷದಿಂದ ಸಮಾವೇಶ ಮಾಡಲು ಹೊರಟಿದ್ದು, ಪ್ರತಿಭಟನೆ ನಮ್ಮ ಸಂವಿಧಾನಾತ್ಮಕ ಹಕ್ಕು. ಸರ್ಕಾರ ಅದಕ್ಕೂ ಅವಕಾಶ ನೀಡುತ್ತಿಲ್ಲ.



ಅನಗತ್ಯವಾಗಿ ನನ್ನ ವಿರುದ್ಧ ಮೊಟ್ಟೆ, ಕಲ್ಲು ಎಸೆದು, ಕಪ್ಪು ಬಾವುಟ ಪ್ರದರ್ಶನ ಮಾಡಿದ್ದು ಏಕೆ? ಇವು ಯಾವುದಕ್ಕೂ ಸರಿಯಾದ ಕಾರಣಗಳಿಲ್ಲ. ನಮ್ಮ ಪ್ರತಿಭಟನೆಯನ್ನು ಜನರಿಗೆ ತಪ್ಪಾಗಿ ಬಿಂಬಿಸಲು ಸರ್ಕಾರ ಕುಟಿಲ ಪ್ರಯತ್ನ ಮಾಡಿದೆ. ಈಗ ಡಿಸಿ ಮತ್ತು ಎಸ್‌ಪಿ ಅವರು ಕೊಡಗಿನಲ್ಲಿ ನಾವು ಅನುಮತಿ ನೀಡಿಲ್ಲ ಎಂದು 144 ಸೆಕ್ಷನ್ ಹಾಕಿದ್ದಾರೆ.

ಇದನ್ನು ಮೀರಿಯೂ ನಾವು ಪ್ರತಿಭಟನೆ ಮಾಡಬಹುದು. ಆದರೆ ಇಷ್ಟೆಲ್ಲಾ ಘಟನೆಗಳು ನಡೆದ ನಂತರ ▶ 6ನೇ ಪುಟಕ್ಕೆ

ಮೈಸೂರಲ್ಲಿ ವೀರ್ ಸಾವರ್ಕರ್ ರಥಯಾತ್ರೆಗೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಚಾಲನೆ

ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯಲ್ಲಿ ಸಾಗಿ ಸಾವರ್ಕರ್ ತ್ಯಾಗ, ಬಲಿದಾನ, ದೇಶಪ್ರೇಮದ ಸಂದೇಶ ಸಾರಲಿದೆ ಈ ಯಾತ್ರೆ



ಮೈಸೂರು, ಆ. 23(ಆರ್‌ಕೆ)– ಮೈಸೂರಿನಲ್ಲಿ ಇಂದಿನಿಂದ ಆರಂಭವಾದ ಸ್ವಾತಂತ್ರ್ಯ ಸೇನಾನಿ ವೀರ್ ಸಾವರ್ಕರ್ ರಥಯಾತ್ರೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿಧ್ಯುಕ್ತ ಚಾಲನೆ ನೀಡಿದರು.

ಸಾವರ್ಕರ್ ಪ್ರತಿಷ್ಠಾನದ ವತಿಯಿಂದ ಏರ್ಪಡಿಸಿರುವ 8 ದಿನಗಳ ಈ ರಥಯಾತ್ರೆಗೆ ಮೈಸೂರಿನ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಹಸಿರು ನಿಶಾನೆ ತೋರಿದ ಯಡಿಯೂರಪ್ಪ, ಅದೇ ವೇಳೆ ಸಾವರ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು. ಈ ಸಂದರ್ಭ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್, ಸಚಿವ ಕೆ.ಸಿ.ನಾರಾಯಣಗೌಡ, ಸಾವರ್ಕರ್ ಪ್ರತಿಷ್ಠಾನದ ಅಧ್ಯಕ್ಷೆ ಯಶಸ್ವಿನಿ, ರಥಯಾತ್ರೆ ಸಂಚಾಲಕ ರಜತ್, ಮೃಗಾಲಯ ಪ್ರಾಧಿಕಾರದ ಮಾಜಿ ▶ 8ನೇ ಪುಟಕ್ಕೆ

ಚಿಲ್ಲರೆ ರಾಜಕಾರಣಕ್ಕಾಗಿ ಸಾವರ್ಕರ್ ಬಗ್ಗೆ ಅಪಪ್ರಚಾರ ಅಕ್ಷಮ್ಯ ಅಪರಾಧ

ಮೈಸೂರು: ಕ್ಷುಲ್ಲಕ ಚಿಲ್ಲರೆ ರಾಜಕಾರಣಕ್ಕಾಗಿ ಕನ್ನಡ ನಾಡಿನಲ್ಲಿ ದೇಶಪ್ರೇಮಿ ವೀರ ಸಾವರ್ಕರ್ ಬಗ್ಗೆ ಅಪಪ್ರಚಾರ ಮಾಡುವುದು ಅಕ್ಷಮ್ಯ ಅಪರಾಧ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಿಡಿಕಾರಿದ್ದಾರೆ. ಮೈಸೂರಿನ ಅರಮನೆ ಬಲರಾಮ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಸಾವರ್ಕರ್ ರಥಯಾತ್ರೆಗೆ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಜೈಲುವಾಸ ಅನುಭವಿಸಿದ ಸಾವರ್ಕರ್ ಒಬ್ಬ ಅಪ್ಪಟ ದೇಶಭಕ್ತನಾಗಿದ್ದು, ಇಡೀ ದೇಶವೇ ಕೊಂಡಾಡುವಂತಹ ತ್ಯಾಗ ಮಾಡಿರುವ ಅವರ ವಿರುದ್ಧ ಅಪಪ್ರಚಾರ ಮಾಡಿ ದೇಶದ ಮೌಲ್ಯಗಳಿಗೆ ಮಸಿ ಬಳಿಯುವ ಕೆಲಸವಾಗುತ್ತಿದೆ ಎಂದರು. ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಮೈಸೂರಿಗೆ ವಿಶಿಷ್ಟ ಸ್ಥಾನವಿದೆ. ಇಂತಹ ಪುಣ್ಯ ಭೂಮಿಯಲ್ಲಿ ಸಾವರ್ಕರ್ ಯಾತ್ರೆಗೆ ಚಾಲನೆ ನೀಡುತ್ತಿರುವುದು ನನ್ನ ಸೌಭಾಗ್ಯ. 8 ದಿನಗಳ ಕಾಲ ಅಷ್ಟ ದಿಕ್ಕುಗಳಲ್ಲಿ ವೀರ ಸಾವರ್ಕರ್ ಅವರ ಜೀವನ ಮೌಲ್ಯ, ತ್ಯಾಗ, ದೇಶ ಪ್ರೇಮದ ಸಂದೇಶ ಪಸರಿಸಲಿ ಎಂದ ಅವರು, ಇಂದು ನಾವು ▶ 8ನೇ ಪುಟಕ್ಕೆ

ಸಂಸದ ಪ್ರತಾಪ್‌ಸಿಂಹ ಅವರ ವಿಶೇಷ ಲೇಖನ: ■ ಪುಟ–4

ಮೈಸೂರು ಮಿತ್ರ



ಮೈಸೂರು ರಾಜಮನೆತನದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಸಿಎಂ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಪ್ರತಿಭಾ ಕಾರಂಜಿಯಲ್ಲಿ ಮಕ್ಕಳ ಪ್ರತಿಭೆ ಅನಾವರಣ



ಮೈಸೂರು, ಆ.23(ಎಂಟಿವೈ)- ಮೈಸೂರಿನ ಸಿದ್ಧಾರ್ಥ ಬಡಾವಣೆಯಲ್ಲಿರುವ ಗೀತಾ ಭಾರತಿ ಶಿಶು ಶಿಕ್ಷಣ ಸಂಸ್ಥೆಯಲ್ಲಿ ಮೈಸೂರು ದಕ್ಷಿಣ ವಲಯದ ಕುರುಬಾರಹಳ್ಳಿ ಕ್ಲಸ್ಟರ್ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ನೂರಾರು ವಿದ್ಯಾರ್ಥಿಗಳು ತಮ್ಮ ಸುಪ್ತ ಪ್ರತಿಭೆ ಅನಾವರಣಗೊಳಿಸಿದರು.

ಕಳೆದ 2 ವರ್ಷದಿಂದ ಪ್ರತಿಭಾ ಕಾರಂಜಿ ಕಾರ್ಯಕ್ರಮ ನಡೆಸಿರಲಿಲ್ಲ. ಈ ಹಿನ್ನೆಲೆಯಲ್ಲಿ ನಡೆದ ಕುರುಬಾರಹಳ್ಳಿ ಕ್ಲಸ್ಟರ್ ವಿಭಾಗದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ 35 ಶಾಲೆಗಳ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡು, ವಿವಿಧ ವಿಭಾಗಗಳಲ್ಲಿ ವಿವಿಧ ಬಗೆಯ ಕಲಾಪ್ರಕಾರವನ್ನು ಪ್ರದರ್ಶಿಸಿ, ಸೈ ಎನಿಸಿಕೊಂಡರು. ಕಾರ್ಯಕ್ರಮವನ್ನು ಬಿಇಓ ರಾಮಾರಾಧ್ಯ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಿ, ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವವನ್ನು ಪ್ರತಿ ವರ್ಷವೂ ನಡೆಸಲಾಗುತ್ತದೆ. ಈ ಕಾರ್ಯಕ್ರಮ ಸರ್ಕಾರಿ ಶಾಲಾ ಮಕ್ಕಳಿಗೆ ಉತ್ತಮ ವೇದಿಕೆಯಾಗಿದೆ. ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಿ ಸಾಧನೆಯತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು. ಸ್ಪರ್ಧೆಯಲ್ಲಿ 3 ವಿಭಾಗದಲ್ಲಿ ವಿವಿಧ ಸ್ಪರ್ಧೆ ಆಯೋಜಿಸಲಾಗಿತ್ತು. 1ರಿಂದ 4ನೇ ತರಗತಿ, 5ರಿಂದ 7ನೇ ತರಗತಿ, ಹಾಗೂ 8-10ನೇ ತರಗತಿಯ ವಿದ್ಯಾರ್ಥಿಗಳು ಪ್ರತ್ಯೇಕ ವಿಭಾಗದಲ್ಲಿ ವಿವಿಧ ಸ್ಪರ್ಧೆ ಎದುರಿಸಿದರು. ಭಾಷಣ, ಛದ್ಮವೇಷ, ಚಿತ್ರಕಲೆ, ಭರತನಾಟ್ಯ, ಭಕ್ತಿಗೀತೆ, ಭಾವಗೀತೆ, ಕವ್ವಾಲಿ, ರಸಪ್ರಶ್ನೆ, ಕಂಠಪಾಠ ಸ್ಪರ್ಧೆ, ಆಶು ಭಾಷಣ, ಮಿಮಿಕ್ರಿ ಸೇರಿದಂತೆ ವಿವಿಧ ಸ್ಪರ್ಧೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು. ಈ ಸಂದರ್ಭದಲ್ಲಿ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಶ್ರೀಕಂಠಸ್ವಾಮಿ, ಕರ್ನಾಟಕ ರಾಜ್ಯ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಮಾಲಂಗಿ ಸುರೇಶ್, ದಕ್ಷಿಣ ವಲಯದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸುಬ್ಬೇಗೌಡ, ಪ್ರಧಾನ ಕಾರ್ಯದರ್ಶಿ ಹರ್ಷ, ಗೀತಾ ಭಾರತಿ ಶಿಶು ಶಿಕ್ಷಣ ಸಂಸ್ಥೆಯ ಆಡಳಿತ ಸಂಯೋಜನಾಧಿಕಾರಿ ನಟರಾಜ್, ಪ್ರಾಚಾರ್ಯರಾದ ಹೇಮಲತಾ, ಕುರುಬಾರಹಳ್ಳಿ ಕ್ಲಸ್ಟರ್‌ನ ಬಿಆರ್‌ಪಿ ಅಂಕೇಶ, ಸಿಆರ್‌ಪಿ ವೀಣಾಶ್ರೀ ಹಾಗೂ ವಿದ್ಯಾರ್ಥಿಗಳಿಗೆ ಲಘು ಉಪಾಹಾರ ವ್ಯವಸ್ಥೆಯ ರಾಜೇಶ್ ಪತ್ತಾರ್ ಹಾಗೂ ಎಲ್ಲಾ ಅನುಪಾಲನಾಧಿಕಾರಿಗಳು ಉಪಸ್ಥಿತರಿದ್ದರು.

ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಕೇಸ್

ಮಾಜಿ ಸಚಿವ ಈಶ್ವರಪ್ಪಗೆ ಮತ್ತೆ ಸಂಕಷ್ಟ



ಬೆಂಗಳೂರು: ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಅವರಿಗೆ ಮತ್ತೆ ಸಂಕಷ್ಟ ಎದುರಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಸಲ್ಲಿಸಿದ್ದ ಬಿ. ರಿಪೋರ್ಟ್ ಪ್ರಶ್ನಿಸಿ ಸಂತೋಷ್ ಸೋದರ ಸಂಬಂಧಿ ಪ್ರಶಾಂತ್ ಪಾಟೀಲ್ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ.

ಪೂರ್ವಾಗ್ರಹ ಪೀಡಿತರಾಗಿ, ಪ್ರಭಾವಕ್ಕೊಳಗಾಗಿ ಪೊಲೀಸರು ತನಿಖೆ ನಡೆಸಿದ್ದು, ಪ್ರಕರಣದ ತನಿಖೆಯನ್ನು ಮತ್ತೊಂದು ತನಿಖಾ ಸಂಸ್ಥೆಗೆ ವಹಿಸುವಂತೆ ಕೋರಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಬಿಲ್ ಮಂಜೂರು ಮಾಡಲು ಕೆ.ಎಸ್.ಈಶ್ವರಪ್ಪ 40 ಪರ್ಸೆಂಟ್ ಕಮಿಷನ್ ಕೇಳುತ್ತಿದ್ದಾರೆ ಎಂದು ಆರೋಪಿಸಿ ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆಗೆ ಶರಣಾಗಿದ್ದರು. ಪ್ರಕರಣ ಸಂಬಂಧ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಪ್ರಕರಣದ ತನಿಖೆಯನ್ನು ನಡೆಸಿದ ಪೊಲೀಸರು ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ವಿರುದ್ಧ ಬಿ ರಿಪೋರ್ಟ್ ಸಲ್ಲಿಸಿದ್ದರು.

ಪ್ರವಾದಿ ಕುರಿತು ವಿವಾದಾತ್ಮಕ ಹೇಳಿಕೆ

ತೆಲಂಗಾಣ ಬಿಜೆಪಿ ಶಾಸಕ ರಾಜಾ ಸಿಂಗ್ ಅಮಾನತು



ಹೈದರಾಬಾದ್: ಪ್ರವಾದಿ ಮುಹಮ್ಮದ್ ಅವರನ್ನು ಗುರಿಯಾಗಿಸಿಕೊಂಡು ವಿವಾದಾತ್ಮಕ ಹೇಳಿಕೆ ನೀಡಿದ್ದ ತೆಲಂಗಾಣ ಬಿಜೆಪಿ ಶಾಸಕ ರಾಜಾ ಸಿಂಗ್ ಅವರನ್ನು ಮಂಗಳವಾರ ಪಕ್ಷದಿಂದ ಅಮಾನತುಗೊಳಿಸಲಾಗಿದೆ. ವಿವಾದಾತ್ಮಕ ಹೇಳಿಕೆಯ ನಂತರ ರಾಜಾ ಸಿಂಗ್ ಅವರ ವಿರುದ್ಧ ತೀವ್ರ ಪ್ರತಿಭಟನೆಗಳು ನಡೆದಿದ್ದವು. ಇದನ್ನು ಗಮನದಲ್ಲಿಟ್ಟುಕೊಂಡು ಪೊಲೀಸರು ಬಿಜೆಪಿ ಶಾಸಕನ ವಿರುದ್ಧ ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುವ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿ, ಇಂದು ಅವರನ್ನು ಬಂಧಿಸಿದ್ದರು. ಬಂಧನಕ್ಕೊಳಗಾಗಿರುವ ರಾಜಾ ಸಿಂಗ್ ಅವರನ್ನು ಬಿಜೆಪಿ, ಪಕ್ಷದಿಂದ ಅಮಾನತುಗೊಳಿಸಿದೆ. 'ನೀವು(ರಾಜಾ ಸಿಂಗ್) ವಿವಿಧ ವಿಷಯಗಳಲ್ಲಿ ಪಕ್ಷದ ನಿಲುವಿಗೆ ವಿರುದ್ಧವಾದ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದೀರಿ. ಇದು ಭಾರತೀಯ ಜನತಾ ಪಕ್ಷದ ನಿಯಮವನ್ನು ಸ್ಪಷ್ಟವಾಗಿ ಉಲ್ಲಂಘಿಸುತ್ತದೆ. ನಿಮ್ಮನ್ನು ಪಕ್ಷದಿಂದ ಮತ್ತು ನಿಮ್ಮ ಜವಾಬ್ದಾರಿಗಳು/ನಿಯೋಜನೆಗಳು ಯಾವುದಾದರೂ ಇದ್ದರೆ ಅದರಿಂದ ತಕ್ಷಣವೇ ಜಾರಿಗೆ ಬರುವಂತೆ ಅಮಾನತುಗೊಳಿಸಲಾಗಿದೆ ಎಂದು ಬಿಜೆಪಿ ಕೇಂದ್ರ ಶಿಸ್ತು ಸಮಿತಿಯ ಕಾರ್ಯದರ್ಶಿ ಓಂ ಪಾಠಕ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ. ನಿಮ್ಮನ್ನು ಪಕ್ಷದಿಂದ ಏಕೆ ಉಚ್ಚಾಟಿಸಬಾರದು ಎಂಬುದಕ್ಕೆ 10 ದಿನಗಳೊಳಗೆ ಕಾರಣವನ್ನು ನೀಡಬೇಕು ಎಂದು ಪಾಠಕ್, ರಾಜಾ ಸಿಂಗ್‌ಗೆ ಸೂಚಿಸಿದ್ದಾರೆ.

ಎಸಿಬಿ ರದ್ದು: ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ

ಬೆಂಗಳೂರು: ಭ್ರಷ್ಟಾಚಾರ ನಿಗ್ರಹ ದಳ(ಎಸಿಬಿ)ವನ್ನು ರದ್ದುಗೊಳಿಸಿ, ಅಲ್ಲಿರುವ ಎಲ್ಲಾ ಪ್ರಕರಣಗಳನ್ನು ಲೋಕಾಯುಕ್ತಕ್ಕೆ ವರ್ಗಾವಣೆ ಮಾಡಿದ್ದ ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿದೆ.

ಕನಕರಾಜು ಎನ್ನುವ ವ್ಯಕ್ತಿಯೊಬ್ಬರು ವಕೀಲ ಅಶೋಕ್ ಪಾಣಿಗ್ರಾಹಿ ಅವರ ಮೂಲಕ ಮುಖ್ಯ ನ್ಯಾಯಮೂರ್ತಿ ಎನ್.ವಿ.ರಮಣ, ನ್ಯಾಯಮೂರ್ತಿಗಳಾದ ಹಿಮಾ ಕೊಹ್ಲಿ, ಸಿ.ಟಿ.ರವಿಕುಮಾರ್ ಪೀಠದ ಮುಂದೆ ಖಾಸಗಿ ಅರ್ಜಿ ಸಲ್ಲಿಸಿದ್ದಾರೆ. ಶೀಘ್ರವೇ ಅರ್ಜಿಯ ವಿಚಾರಣೆ ಕೈಗೆತ್ತಿಕೊಳ್ಳುವುದಾಗಿ ಪೀಠ ಹೇಳಿದೆ. ಇದಕ್ಕು ಮುನ್ನ ರಾಜ್ಯ ಸರ್ಕಾರವೇ ಎಸಿಬಿ ರದ್ದು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ ಎಂದು ವರದಿಯಾಗಿತ್ತು. ಆದರೆ ಈ ವರದಿಯನ್ನು ತಳ್ಳಿಹಾಕಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು, "ಖಾಸಗಿ ಮೇಲ್ಮನವಿ ಅರ್ಜಿ ದಾಖಲಾಗಿದೆ. ಈ ವಿಚಾರದಲ್ಲಿ ಸರ್ಕಾರದ ನಿರ್ಧಾರದಲ್ಲಿ ಯಾವುದೇ ಬದಲಾವಣೆಯಿಲ್ಲ. ಎಸಿಬಿ ರದ್ದು ಮಾಡುವ ನಮ್ಮ ನಿರ್ಧಾರಕ್ಕೆ ಬದ್ಧರಾಗಿದ್ದೇವೆ' ಎಂದು ಹೇಳಿದ್ದಾರೆ. ಮಹತ್ವದ ಬೆಳವಣಿಗೆಯಲ್ಲಿ ಈ ಹಿಂದಿನ ಸರ್ಕಾರ 2016ರಲ್ಲಿ ರಚನೆ ಮಾಡಿದ್ದ ಭ್ರಷ್ಟಾಚಾರ ನಿಗ್ರಹ ದಳವನ್ನು ಕರ್ನಾಟಕ ಹೈಕೋರ್ಟ್ ಇತ್ತೀಚಿಗೆ ರದ್ದುಗೊಳಿಸಿದ್ದು, ಎಸಿಬಿಗೆ ನೀಡಲಾಗಿದ್ದ ಪೊಲೀಸ್ ಠಾಣೆ ಸ್ಥಾನಮಾನವನ್ನು ಮರಳಿ ಲೋಕಾಯುಕ್ತ ಸಂಸ್ಥೆಗೆ ನೀಡಿದೆ.

ದ್ವಿತೀಯ ಪಿಯು ಮರುಮೌಲ್ಯಮಾಪನದಲ್ಲಿ ಧ್ಯಾನ್‌ಗೆ 6 ಹೆಚ್ಚು ಅಂಕ



ಮೈಸೂರು,ಆ.23-ಮರುಮೌಲ್ಯಮಾಪನದ ಬಳಿಕ ಆಂಗ್ಲ ಭಾಷೆಯಲ್ಲಿ 6 ಹೆಚ್ಚುವರಿ ಅಂಕ ಪಡೆದ ನಗರ ಸದ್ವಿದ್ಯಾ ಸಂಯುಕ್ತ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ಜಿ. ಧ್ಯಾನ್ ದ್ವಿತೀಯ ಪಿಯುಸಿಯಲ್ಲಿ 600ಕ್ಕೆ 586(ಶೇ.97.66) ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಯಾಗಿದ್ದಾನೆ. ಅಲ್ಲದೆ ಸಿಇಟಿ(ಇಂಜಿನಿಯರ್ ವಿಭಾಗ)ಯಲ್ಲಿ 181ನೇ ರ್‍ಯಾಂಕ್ ಪಡೆದುಕೊಂಡಿದ್ದಾನೆ.

'ಮಹಾರಾಜ ಟ್ರೋಫಿ' ಕೆಎಸ್‌ಸಿಎ ಟಿ-20 ಪಂದ್ಯಾವಳಿ

2ನೇ ಕ್ವಾಲಿಫೈಯರ್ ಪಂದ್ಯದಲ್ಲಿ ಗುಲ್ಬರ್ಗಾ ಮೈಸ್ಟಿಕ್ಸ್ ವಿರುದ್ಧ ನಾಳೆ ಸೆಣಸಲಿದೆ ಮೈಸೂರು ವಾರಿಯರ್ಸ್

ಬೆಂಗಳೂರು, ಆ.23-ನಿಹಾಲ್ ಉಳ್ಳಾಲ್ ಆಕರ್ಷಕ ಅಜೇಯ ಅರ್ಧ ಶತಕ ಹಾಗೂ ಶ್ರೇಯಸ್ ಗೋಪಾಲ್ ಆಲ್‌ರೌಂಡರ್ ಆಟದ ನೆರವಿನಿಂದ ಮೈಸೂರು ವಾರಿಯರ್ಸ್, ಹುಬ್ಬಳ್ಳಿ ಟೈಗರ್ಸ್ ವಿರುದ್ಧ ಐದು ವಿಕೆಟ್‌ಗಳ ಭರ್ಜರಿ ಜಯ ಗಳಿಸಿದೆ. ಈ ಮೂಲಕ 2ನೇ ಕ್ವಾಲಿಫೈಯರ್ ಪಂದ್ಯದಲ್ಲಿ ಗುಲ್ಬರ್ಗಾ ಮೈಸ್ಟಿಕ್ಸ್ ವಿರುದ್ಧ ಸೆಣಸಲಿದೆ.



ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 'ಮಹಾರಾಜ ಟ್ರೋಫಿ' ಕೆಎಸ್‌ಸಿಎ ಟಿ20 ಪಂದ್ಯಾವಳಿಯ ಎಲಿಮಿನೇಟರ್ ಪಂದ್ಯದಲ್ಲಿ 165 ರನ್‌ಗಳ ಸವಾಲಿನ ಗುರಿ ಪಡೆದ ಮೈಸೂರು ವಾರಿಯರ್ಸ್ ತಂಡ ಆರಂಭಿಕ ಆಟಗಾರ ನಿಹಾಲ್ ಉಳ್ಳಾಲ್ ಆಕರ್ಷಕ ಅಜೇಯ ಅರ್ಧಶತಕ ದಾಖಲಿಸಿದರು.

ಆ.25ಕ್ಕೆ ಎರಡನೇ ಕ್ವಾಲಿಫೈಯರ್ ಪಂದ್ಯ...

'ಮಹಾರಾಜ ಟ್ರೋಫಿ' ಪಂದ್ಯಾವಳಿಯ 2ನೇ ಕ್ವಾಲಿಫೈಯರ್ ಪಂದ್ಯ ಆ.25ರಂದು ನಡೆಯಲಿದೆ. ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಸೋಲು ಅನುಭವಿಸಿರುವ ಗುಲ್ಬರ್ಗಾ ಮೈಸ್ಟಿಕ್ಸ್ ವಿರುದ್ಧ ಮೈಸೂರು ವಾರಿಯರ್ಸ್ ಸೆಣಸಲಿದೆ. 2ನೇ ಕ್ವಾಲಿಫೈಯರ್‌ನಲ್ಲಿ ಗೆದ್ದ ತಂಡ ಆ.26ರಂದು ಬೆಂಗಳೂರು ಬ್ಲಾಸ್ಟರ್ಸ್ ವಿರುದ್ಧ 'ಮಹಾರಾಜ ಟ್ರೋಫಿ'ಗಾಗಿ ಜಿದ್ದಾಜಿದ್ದಿಗಿಳಿಯಲಿದೆ.

58 ಎಸೆತಗಳನ್ನು ಎದುರಿಸಿದ ನಿಹಾಲ್ ಉಳ್ಳಾಲ್ 6 ಬೌಂಡರಿ, 6 ಸಿಕ್ಸರ್ ಸಹಿತ 77 ರನ್ ಸಿಡಿಸಿದರೆ, ಆಲ್‌ರೌಂಡರ್ ಪ್ರದರ್ಶನ ನೀಡಿದ ಶ್ರೇಯಸ್ ಗೋಪಾಲ್ ಬೌಲಿಂಗ್‌ನಲ್ಲಷ್ಟೇ ಅಲ್ಲದೆ ಬ್ಯಾಟಿಂಗ್‌ನಲ್ಲೂ ಕಮಾಲ್ ಮಾಡಿದರು.

19 ಎಸೆತ ಎದುರಿಸಿದ ಶ್ರೇಯಸ್ 32 ರನ್‌ಗಳ ಕಾಣಿಕೆ ನೀಡಿದರು. ನಾಯಕ ಕರುಣ್ ನಾಯರ್ 23, ಪವನ್ ದೇಶ್‌ಪಾಂಡೆ 24 ರನ್‌ಗಳ ಕಲೆ ಹಾಕಿದರು. ಅಂತಿಮವಾಗಿ 5 ವಿಕೆಟ್ ಕಳೆದುಕೊಂಡು ಇನ್ನೂ 4 ಎಸೆತಗಳು ಬಾಕಿ ಇರುವಂತೆ ಗೆಲುವಿನ ನಗೆ ಬೀರಿತು. ಹುಬ್ಬಳ್ಳಿ ಪರ ಆನಂದ್ ದೊಡ್ಡಮನಿ 4 ವಿಕೆಟ್ ಪಡೆದು ಗಮನ ಸೆಳೆದರು. ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಹುಬ್ಬಳ್ಳಿ ಟೈಗರ್ಸ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 164 ರನ್ ಗಳಿಸಿತು. ನಾಯಕ ಲುವ್ನಿತ್ ಸಿಸೋಡಿಯಾ 33, ಎಂಜಿ ನವೀನ್ 32, ಸ್ವಪ್ನಿಲ್ ಯೆಲವೆ 30* ರನ್‌ಗಳಿಸುವ ಮೂಲಕ ಸವಾಲಿನ ದಾಖಲಿಸಿದರು. ಮೈಸೂರು ವಾರಿಯರ್ಸ್ ಪರ ಶ್ರೇಯಸ್ ಗೋಪಾಲ್ 3, ಪ್ರತೀಕ್ ಜೈನ್, ವಿದ್ಯಾಧರ್ ಪಾಟೀಲ್, ಶುಭಾಂಗ್ ಹೆಗ್ಡೆ ಹಾಗೂ ಆದಿತ್ಯ ಗೋಯಲ್ ತಲಾ ಒಂದೊಂದು ವಿಕೆಟ್ ಕಬಳಿಸಿದರು. ಆಲ್‌ರೌಂಡರ್ ಪ್ರದರ್ಶನ ನೀಡಿದ ಶ್ರೇಯಸ್ ಗೋಪಾಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಎಲಿಮಿನೇಟರ್ ಪಂದ್ಯದಲ್ಲಿ ಸೋಲು ಅನುಭವಿಸಿದ ಹುಬ್ಬಳ್ಳಿ ಟೈಗರ್ಸ್ ಟೂರ್ನಿಯಿಂದ ನಿರ್ಗಮಿಸಿತು.

ಫೈನಲ್‌ಗೆ ಲಗ್ಗೆ ಇಟ್ಟ ಬೆಂಗಳೂರು ಬ್ಲಾಸ್ಟರ್ಸ್...



ಮಯಾಂಕ್ ಅಗರ್ವಾಲ್ ಭರ್ಜರಿ ಶತಕ ಹಾಗೂ ಎಲ್.ಆರ್.ಚೇತನ್ ಆಕರ್ಷಕ ಅರ್ಧಶತಕದ ನೆರವಿನಿಂದ ಗುಲ್ಬರ್ಗಾ ಮೈಸ್ಟಿಕ್ಸ್ ವಿರುದ್ಧ 44 ರನ್‌ಗಳ ಭರ್ಜರಿ ಜಯ ಸಾಧಿಸಿರುವ ಬೆಂಗಳೂರು ಬ್ಲಾಸ್ಟರ್ಸ್ ಫೈನಲ್‌ಗೆ ಲಗ್ಗೆ ಇಟ್ಟಿದೆ.

ಸಂಜೆ ನಡೆದ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಬೆಂಗಳೂರು ಬ್ಲಾಸ್ಟರ್ಸ್ ತಂಡದ ನಾಯಕ ಮಯಾಂಕ್ ಅಗರ್ವಾಲ್ ಹಾಗೂ ಎಲ್.ಆರ್.ಚೇತನ್ ಅಬ್ಬರ ಬ್ಯಾಟಿಂಗ್ ಪ್ರದರ್ಶನ ನೀಡಿದರು. ಕೇವಲ 61 ಎಸೆತಗಳಲ್ಲಿ 9 ಬೌಂಡರಿ, 6 ಸಿಕ್ಸರ್ ಸಹಿತ ಅಜೇಯ 112 ರನ್ ಸಿಡಿಸಿದ ಮಯಾಂಕ್, ಟೂರ್ನಿಯಲ್ಲಿ 2ನೇ ಶತಕ ದಾಖಲಿಸಿದರು. ಮತ್ತೊಂದೆಡೆ ಬಿರುಸಿನ ಆಟವಾಡಿದ ಆರಂಭಿಕ ಆಟಗಾರ ಎಲ್.ಆರ್. ಚೇತನ್ 48 ಎಸೆತಗಳಲ್ಲಿ 5 ಬೌಂಡರಿ, 5 ಸಿಕ್ಸರ್ ಸಹಿತ 80 ರನ್ ಬಾರಿಸುವ ಮೂಲಕ ಬೃಹತ್ ಮೊತ್ತ ಪೇರಿಸಲು ನೆರವಾದರು. ಅಂತಿಮವಾಗಿ ನಿಗದಿತ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 227 ರನ್ ಗಳಿಸಿತು. ಗುಲ್ಬರ್ಗಾ ಪರ ವಿದ್ವತ್ ಕಾವೇರಪ್ಪ 2 ವಿಕೆಟ್ ಪಡೆದರು. 228 ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಗುಲ್ಬರ್ಗಾ ಮೈಸ್ಟಿಕ್ಸ್ ತಂಡ ನಾಯಕ ಮನೀಶ್ ಪಾಂಡೆ (7), ಜೆಶ್ವತ್ ಆಚಾರ್ಯ (12), ಕೃಷ್ಣನ್ ಶ್ರೀಜೀತ್(7) ಬೇಗ ವಿಕೆಟ್ ಒಪ್ಪಿಸುವ ಮೂಲಕ ಅಭಿಮಾನಿಗಳಿಗೆ ನಿರಾಶೆ ಉಂಟು ಮಾಡಿದರು. ಒಂದೆಡೆ ವಿಕೆಟ್ ಬೀಳುತ್ತಿದ್ದರೂ ದಿಟ್ಟ ಪ್ರದರ್ಶನ ನೀಡಿದ ಎಡಗೈ ಆಟಗಾರ ರೋಹನ್ ಪಾಟಿಲ್ ಟೂರ್ನಿಯಲ್ಲಿ 2ನೇ ಶತಕ ದಾಖಲಿಸಿದರು. 49 ಎಸೆತಗಳಲ್ಲಿ 10 ಬೌಂಡರಿ, 7 ಸಿಕ್ಸರ್ ಸಹಿತ 108 ಸಿಡಿಸಿ, ಗೆಲುವಿಗಾಗಿ ಹೋರಾಟ ನಡೆಸಿದರಾದರೂ ಗೆಲುವು ಸಾಧ್ಯವಾಗಲಿಲ್ಲ. ಅಂತಿಮವಾಗಿ 18.2 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 183 ರನ್ ಗಳಿಸಲಷ್ಟೇ ಶಕ್ತವಾಯಿತು. ಬೆಂಗಳೂರು ಪರ ರೋನಿತ್ ಮೋರೆ 3, ಜಗದೀಶ್ ಸುಚಿತ್ 2 ವಿಕೆಟ್ ಪಡೆದು ಗಮನ ಸೆಳೆದರು. ಶತಕ ಸಿಡಿಸಿದ ಮಯಾಂಕ್ ಅಗರ್ವಾಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಸಾವರ್ಕರ್ ರಥಯಾತ್ರೆಗೆ ಮೈಸೂರಿನ ವಿವಿಧೆಡೆ ಅದ್ಧೂರಿ ಸ್ವಾಗತ

ಮೈಸೂರು, ಆ.23(ಜಿಎ)-ಮೈಸೂರು ನಗರದಾದ್ಯಂತ 'ಸಾವರ್ಕರ್ ರಥಯಾತ್ರೆ'ಯು ಸಂಚರಿಸಿ ವೀರ್ ಸಾವರ್ಕರ್ ಇತಿಹಾಸವನ್ನು ಸಾರಿತು.

ಮೈಸೂರಿನ ಕೋಟೆ ಆಂಜನೇಯ ಸ್ವಾಮಿ ಸೇವಸ್ಥಾನ ಮುಂಭಾಗ ಮಂಗಳವಾರ ಬೆಳಗ್ಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು 'ಸಾವರ್ಕರ್ ರಥಯಾತ್ರೆ'ಗೆ ಚಾಲನೆ ನೀಡಿದ್ದು, ಈ ರಥಯಾತ್ರೆಯು ಮೈಸೂರಿನ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ ಸಂಚರಿಸಿ ಸಾರ್ವಜನಿಕರಿಗೆ ಸಾವರ್ಕರ್ ಇತಿಹಾಸವನ್ನು ಸಾರಿದೆ. ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಬನ್ನೂರು ರಸ್ತೆ ಮಾರ್ಗವಾಗಿ ಯರಗನಹಳ್ಳಿ ವೃತ್ತ, ರಾಜ್‌ಕುಮಾರ್ ರಸ್ತೆ ಮೂಲಕ ಸಾಗಿ ಗಾಯಿತ್ರಿಪುರಂ, ಕ್ಯಾತಮಾರನಹಳ್ಳಿ ಟೆಂಟ್ ವೃತ್ತ ನಂತರ ಉದಯಗಿರಿ ರಸ್ತೆ ಮುಖಾಂತರ ರಾಜೇಂದ್ರ ನಗರದ 1008 ಗಣಪತಿ ವೃತ್ತ, ಎಲ್.ಐ.ಸಿ ವೃತ್ತದಿಂದ ಸಾಗಿ ಚಾಮರಾಜ ಕ್ಷೇತ್ರದ ತಿಲಕ್‌ನಗರ, ಸಂಯ್ಯಾಜಿ ರಾವ್ ರಸ್ತೆಯಲ್ಲಿರುವ ಶನಿಮಹಾತ್ಮ ವೃತ್ತ ತಲುಪಿತು. ಶನಿಮಹಾತ್ಮ ವೃತ್ತಕ್ಕೆ ಆಗಮಿಸಿದ 'ಸಾವರ್ಕರ್ ರಥಯಾತ್ರೆ'ಯನ್ನು ಕ್ಷೇತ್ರದ ಶಾಸಕ ಎಲ್. ನಾಗೇಂದ್ರ ಹಾಗೂ ಬಿಜೆಪಿ ಮುಖಂಡರು ಅದ್ಧೂರಿಯಾಗಿ ಬರಮಾಡಿಕೊಂಡು, ಅಲ್ಲಿಂದ ಬೈಕ್ ರ್‍ಯಾಲಿ ಮೂಲಕ ಬಂಬೂಬಜಾರ್, ಪಡುವಾರಹಳ್ಳಿ ಹಾದು ಮಾತೃ ಮಂಡಳಿ ವೃತ್ತ, ಹುಣಸೂರು ರಸ್ತೆ ನಂತರ ಜೆಸಿ ಕಾಲೇಜು ರಸ್ತೆ ಮಾರ್ಗವಾಗಿ ರಥವೂ ಚಾಮುಂಡೇಶ್ವರಿ ಕ್ಷೇತ್ರದ ಶಾರದಾದೇವಿನಗರ ತಲುಪಿತು. ನಂತರ ಅಲ್ಲಿಂದ ಹೈಟೆನ್ಷನ್ ರಸ್ತೆ, ರಾಮಕೃಷ್ಣ ಪರಮಹಂಸ ವೃತ್ತ, ವಿವೇಕಾನಂದ ವೃತ್ತ, ಡಿ.ಸಿ. ವೃತ್ತ, ನೃಪತುಂಗ ರಸ್ತೆ ಪಂಚಮಂತ್ರ ರಸ್ತೆ ಮೂಲಕ ರಥವೂ ಕೃಷ್ಣರಾಜ ಕ್ಷೇತ್ರ ತಲುಪಿತು. ಅಲ್ಲಿಂದ ಪಂಚಮಂತ್ರ ರಸ್ತೆ ಮೂಲಕ ಪ್ರವೇಶಿಸಿದ ರಥವೂ ಅಕ್ಷಯ ಭಂಡಾರ್, ನ್ಯೂ ಕಾಂತರಾಜೇ ಅರಸ್ ರಸ್ತೆ, ಜೆಎಲ್‌ಬಿ ರಸ್ತೆ, ಚಾಮುಂಡಿಪುರಂ ವೃತ್ತ, ಸೇರಿದಂತೆ ಕ್ಷೇತ್ರದಲ್ಲಿ ಸಂಚರಿಸಿ, ಅಗ್ರಹಾರದಲ್ಲಿ ಮುಕ್ತಾಯಗೊಂಡಿತು. ಎಲ್ಲಾ ಕ್ಷೇತ್ರದಲ್ಲಿ ಅಭೂತ ಪೂರ್ವ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ನಾಳೆ(ಆ.24) ಗ್ರಾಮಾಂತರ ಪ್ರದೇಶದಲ್ಲಿ ಸಂಚರಿಸಲಿದ್ದು, ಅದರಂತೆ ಮೊದಲು ಹಂಪಾಪುರಕ್ಕೆ ತೆರಳಲಿದೆ. ಅಲ್ಲಿಂದ ಹ್ಯಾಂಡ್‌ಪೋಸ್ಟ್, ಹೆಚ್.ಡಿ.ಕೋಟೆ ಟೌನ್ ತಲುಪಿ, ನಂತರ ಸರಗೂರಿಗೆ ತೆರಳಲಿದೆ.



ಚಾಮರಾಜ ಕ್ಷೇತ್ರಕ್ಕೆ ಆಗಮಿಸಿದ 'ಸಾವರ್ಕರ್ ರಥಯಾತ್ರೆ'ಯನ್ನು ಶಾಸಕ ಎಲ್.ನಾಗೇಂದ್ರ ಹಾಗೂ ಬಿಜೆಪಿ ಮುಖಂಡರು ಅದ್ಧೂರಿಯಾಗಿ ಬರಮಾಡಿಕೊಂಡರು.



ಎನ್.ಆರ್.ಕ್ಷೇತ್ರಕ್ಕೆ ಆಗಮಿಸಿದ 'ಸಾವರ್ಕರ್ ರಥಯಾತ್ರೆ'ಯನ್ನು ಕ್ಷೇತ್ರದ ಬಿಜೆಪಿ ಮುಖಂಡರಾದ ಸಂದೇಶ್ ಸ್ವಾಮಿ ಹಾಗೂ ಬಿಜೆಪಿ ಮುಖಂಡರು ಬರಮಾಡಿಕೊಂಡರು.



ಕೆ.ಆರ್. ಕ್ಷೇತ್ರದ ವಿವೇಕಾನಂದ ವೃತ್ತದಲ್ಲಿ ಸಾರ್ವಜನಿಕರು ಕುಳಿತು ಸಾವರ್ಕರ್ ಇತಿಹಾಸ ಕುರಿತ ಸಾಕ್ಷಚಿತ್ರವನ್ನು ವೀಕ್ಷಿಸಿದರು.

ಎನ್‌ಟಿಎಂ ಶಾಲಾ ಕಟ್ಟಡ ನಿರ್ಮಾಣಕ್ಕೆ ಆಗ್ರಹಿಸಿ ಧರಣಿ

ಮೈಸೂರು, ಆ.23(ಎಂಟಿವೈ)- ವಿವೇಕ ಸ್ಮಾರಕದೊಂದಿಗೆ ಎನ್‌ಟಿಎಂ ಶಾಲೆಯ ಕಟ್ಟಡವನ್ನೂ ನಿರ್ಮಿಸುವಂತೆ ಆಗ್ರಹಿಸಿ ಮಹಾರಾಣಿ (ಎನ್‌ಟಿಎಂ) ಶಾಲೆ ಉಳಿಸಿ ಹೋರಾಟ ಒಕ್ಕೂಟದ ಕಾರ್ಯಕರ್ತರು ಮಂಗಳವಾರ ಧರಣಿ ನಡೆಸಿದರು.

ಮೈಸೂರಿನ ಗನ್‌ಹೌಸ್ ಬಳಿಯ ಬಸವೇಶ್ವರ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿದ ಶಾಲೆ ಉಳಿಸಿ ಹೋರಾಟ ಸಮಿತಿ ಕಾರ್ಯಕರ್ತರು, ಆಶ್ರಮದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕಳೆದ 9 ವರ್ಷಗಳಿಂದ ಶಾಲೆಯ ಉಳಿವಿಗಾಗಿ ಹೋರಾಟ ನಡೆಸಲಾಗುತ್ತಿದೆ. ನ್ಯಾಯಾಲಯಗಳಲ್ಲಿ ತೀರ್ಪು ಬಂದ ಮೇಲೂ ಶಾಲೆಯಿದ್ದ ಜಾಗದ ಅರ್ಧ ಭಾಗದಲ್ಲಿ ಎನ್‌ಟಿಎಂ ಶಾಲೆಗಾಗಿ ಕಟ್ಟಡ ನಿರ್ಮಿಸಿ ಕೊಡುವುದಾಗಿ ರಾಮಕೃಷ್ಣ ಆಶ್ರಮದವರು ಸುತ್ತೂರು ಶ್ರೀಗಳ ಒತ್ತಾಸೆಯ ಮೇರೆಗೆ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರ ಮನೆಯಲ್ಲಿ ನಡೆದ ರಾಜೀ ಸಭೆಯಲ್ಲಿ ಒಪ್ಪಿಕೊಂಡಿದ್ದರು. ಈ ಸಭೆಯಲ್ಲಿ ಆದ ಒಪ್ಪಂದವನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಿ ಸಂಧಾನ ಪೂರ್ಣಗೊಳಿಸುವ ಭರವಸೆ ಸಂಸದ ಶ್ರೀನಿವಾಸ್ ಪ್ರಸಾದ್ ನೀಡಿದ್ದರು. ಆದರೆ ಇದೀಗ ಆಶ್ರಮದವರು, ಭರವಸೆಯನ್ನು ಕೊಟ್ಟಂತೆ ಶಾಲೆಯನ್ನು ನಿರ್ಮಿಸುವ ಪ್ರಸ್ತಾಪದಿಂದ ಹಿಂದೆ ಸರಿದಿದ್ದಾರೆ ಎಂದು ಹೋರಾಟಗಾರರು ಆರೋಪಿಸಿದರು. ರಾಮಕೃಷ್ಣ ಆಶ್ರಮದವರ ಮಾತನ್ನು ನಂಬಿ ಶಾಲೆ ಉಳಿಸಿ ಹೋರಾಟ ಒಕ್ಕೂಟ ಸುಪ್ರೀಂಕೋರ್ಟ್‌ನಲ್ಲಿ ಪ್ರಕರಣ ದಾಖಲಿಸಲಿಲ್ಲ ಎನ್‌ಟಿಎಂ ಶಾಲೆಯನ್ನು ರಾತ್ರೋರಾತ್ರಿ ಧ್ವಂಸ ಮಾಡಿ ಸ್ಮಾರಕ ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ. ಈಗಲಾದರೂ ಕೊಟ್ಟ ಮಾತಿನಂತೆ ಹೊಸದಾಗಿ ಶಾಲಾ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.



ಪ್ರತಿಭಟನೆಯಲ್ಲಿ ಮಾಜಿ ಮೇಯರ್ ಪುರುಷೋತ್ತಮ, ಕರ್ನಾಟಕ ಜನಪರ ಶಕ್ತಿ ವೇದಿಕೆಯ ಅಧ್ಯಕ್ಷೆ ಆ.ಮಧುಮತಿ, ಹೆಚ್.ಎನ್.ಪಾರ್ಥಸಾರಥಿ, ಬಿ.ಮಹದೇವ, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್.ಬಾಲಕೃಷ್ಣ, ಕೆ.ಪರಶಿವಮೂರ್ತಿ, ಆರ್.ಗೋವಿಂದರಾಜ್, ಸಿದ್ದಲಿಂಗಪ್ಪ, ಪಿ.ಮರಂಕಯ್ಯ, ಮಂಡಕಳ್ಳಿ ಮಹೇಶ್, ಎಲ್‌ಐಸಿ ಸಿದ್ದಪ್ಪ ಪಾಲ್ಗೊಂಡಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.08.2022 ಬುಧವಾರ, ಮಳೆ ನಕ್ಷತ್ರ : ಮಖೆ, 17.08.2022 ರಿಂದ 30.08.2022
ಶ್ರೀ ಶುಭಕೃತುನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ
ತಿಥಿ: ದ್ವಾದಶಿ, ನಕ್ಷತ್ರ : ಪುನರ್ವಸು, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಹೆಬ್ಬಾರ್ ಶ್ರೀ ವೈಷ್ಣವ ಗ್ರಾಮಾಂತರ ಜಿಲ್ಲಾ ಉಪಸಭೆ ಅಂಡಾಳ್ ಮಂದಿರಂ ಟ್ರಸ್ಟ್ :** ಸಂಜೆ 5.30 ರಿಂದ ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ವಿದ್ವಾನ್ ವಿ. ವಂಶೀಧರ್ ಅವರಿಂದ ಕೊಳಲು ವಾದನ, ವಿದುಷಿ ಅಧಿತಿ ಕೃಷ್ಣಪ್ರಕಾಶ್-ವಯೋಲಿನ್, ವಿದ್ವಾನ್ ರಾಧೇಶ್-ಮೃದಂಗ, ಸಂಜೆ 7.30 ಗಂಟೆಗೆ ಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ಆಂಡಾಳ್ ಮಂದಿರಂ ಟ್ರಸ್ಟ್, ವಿ.ವಿ. ಮೊಹಲ್ಲಾ.

■ **ಮರಿಮಲ್ಲಪ್ಪ ಮಹಿಳಾ ಕಲಾ ಮತ್ತು ವಾಣಿಜ್ಯ ಕಾಲೇಜು :** ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆ ಹಾಗೂ ಎನ್‌ಎಸ್‌ಎಸ್ ಸಮಾರೋಪ ಸಮಾರಂಭ, ಅಧ್ಯಕ್ಷತೆ : ಮರಿಮಲ್ಲಪ್ಪ ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರೊ. ಕೆ.ಎನ್. ಪಂಚಾಕ್ಷರಸ್ವಾಮಿ, ಮುಖ್ಯ ಅತಿಥಿಗಳು : ಮೈಸೂರು ಆಕಾಶವಾಣಿ ಹಿರಿಯ ಉದ್ಘೋಷಕ ಪ್ರಭುಸ್ವಾಮಿ ಮಳಿಮಠ್, ಉಪಸ್ಥಿತರು : ಪ್ರಾಂಶುಪಾಲರಾದ ಪ್ರೊ. ಹೆಚ್.ವಿ. ಲೀಲಾಂಬಿಕೆ, ಸಾಂಸ್ಕೃತಿಕ ವೇದಿಕೆ ಸಂಚಾಲಕರಾದ ಎ. ವೀಣಾ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಎ.ಎಸ್. ಪ್ರಭುಸ್ವಾಮಿ, ಸ್ಥಳ: ಜಗನ್ಮೋಹನ ಅರಮನೆ, ಬೆಳಗ್ಗೆ 10ಕ್ಕೆ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ :** ಸಂಗೀತ ಕಾರ್ಯಕ್ರಮ, ವಿದ್ವಾನ್ ಅಭಿರಾಮ್ ಬೋಡೆ ಅವರಿಂದ ಗಾಯನ, ವಿದುಷಿ ಮೈಸೂರು ದಯಾಕರ್ -ಪಿಟೀಲು, ವಿದ್ವಾನ್ ತುಮಕೂರು ಬಿ. ರವಿಶಂಕರ್-ಮೃದಂಗ, ವಿದ್ವಾನ್ ತುಮಕೂರು ಬಿ. ಶಶಿಶಂಕರ್-ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಗಾನಭಾರತಿ, ಕುವೆಂಪುನಗರ, ಸಂಜೆ 6 ರಿಂದ.

■ **ಶ್ರೀ ಸುತ್ತೂರು ಮಠ (ಮೈಸೂರು ಶಾಖೆ), ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ ಅವರಿಂದ ಶರಣ ಸಂಸ್ಕೃತಿ ಕುರಿತು ಪ್ರವಚನ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ : 6.05 ಚಿಂತನ, 6.20 ಗೀತಾರಾಧನ, 6.35 ನಖ ಶಿಖಾಂತ -ಆರೋಗ್ಯ ಸೌಂದರ್ಯಗಳ ವೈಜ್ಞಾನಿಕ ಮಾಹಿತಿ-ಡಾ. ಕೇಶವ ಕೊರಸೆ, 6.40 ಅರಿವಿನ ಶಿಖರ-ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಸರಣಿ, ಗಾಯನ- ನಿತಿನ್ ರಾಜಾರಾಂ ಶಾಸ್ತ್ರಿ, ಟಿ.ಎಸ್. ಸ್ನೇಹಾ, ಬಿ. ಶ್ರೀರಾಂ ಭಟ್, ವ್ಯಾಖ್ಯಾನ- ಡಾ.ಹೆಚ್.ಎನ್. ಮಂಜುರಾಜ್, 6.50 ರೈತರಿಗೆ ಸಲಹೆ, 10.00 ಹಿಂದೂಸ್ಥಾನಿ ಸಂಗೀತ-ಹರಿಪ್ರಸಾದ್ ಚೌರಾಸಿಯಾ-ಬಾನ್ಸುರಿ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 12.45 ಲಾಕ್‌ಡೌನ್ ಕಥಾ ನಾಟಕ, ಲಾಕ್‌ಡೌನ್ ಕಥೆಗಳನ್ನಾಧರಿಸಿದ ಸರಣಿ, "ಪೇಪರ್ ಸಾಬಣ್ಣ", ಮೂಲಕಥೆ- ಬಿ.ಕೆ. ಸೀತಾರಾಂ, ನಾಟಕರೂಪ- ಉಷಾ ನರಸಿಂಹ, ಪ್ರಸ್ತುತಿ- ಪ್ರಭುಸ್ವಾಮಿ ಮಳಿಮಠ್, 1.20 ಭಾವಗೀತೆ, 3.00 ಲಯ ಸಂಭ್ರಮ-ತಾಳ, ಲಯ ರಸಾಸ್ವಾದ. ಪರಿಕಲ್ಪನೆ ಮತ್ತು ಪ್ರಸ್ತುತಿ-ಎಚ್.ಎಲ್.ಶಿವಶಂಕರಸ್ವಾಮಿ, ನಿರ್ಮಾಣ- ಎಸ್.ಸುಬ್ರಹ್ಮಣ್ಯ, 4.00 ಮಹಿಳಾರಂಗ-ಸ್ತ್ರೀ ಚೇತನ, ನೇರ ಫೋನ್ ಇನ್ ಕಾರ್ಯಕ್ರಮ, 4.30 ಚಟ್‌ಪಟ್ ಚುರುಮುರಿ, ಪ್ರಸ್ತುತಿ- ಪ್ರಭುಸ್ವಾಮಿ ಮಳಿಮಠ್ ಹಾಗೂ ಕೆ.ಬಿ.ಮೀನಾ, 4.45 ಹಿಂದಿ ಪಾಠ-ಎಸ್. ಈಶ್ವರ ಭಟ್, 6.50 ಕೃಷಿರಂಗ-ಕಿಸಾನ್‌ವಾಣಿ, ಎಲ್ಲಿ, ಯಾವ ಗಿಡ ಮರ, ಈ ವಿಚಾರವಾಗಿ ಮನೋಜ್ ಕುಮಾರ್ ಅವರಿಂದ ಭಾಷಣ, 9.05 ಕ್ಷಿತಿಜ-Literacy ಗುರು-ಸಾಹಿತ್ಯ ದಿಗ್ಗಜರೊಂದಿಗೆ ಸಂವಾದ, 10.00 ಹಳ್ಳಿ ಹಾಡು, ಭಾಗವಹಿಸುವವರು- ಮಾದಿಗಳ್ಳಿ ಗ್ರಾಮದ ಜಯಮ್ಮ ಮತ್ತು ತಂಡ, ಪ್ರಸ್ತುತಿ- ಅಬ್ದುಲ್ ರಶೀದ್

ಸುತ್ತೂರಿನಲ್ಲಿಂದು

■ **ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಪ್ರವಚನ: ಜೆಎಸ್‌ಎಸ್ ಕಾಲೇಜು ಪ್ರಾಧ್ಯಾಪಕ ಪ್ರೊ. ಹೆಚ್.ಟಿ. ದೇವಣ್ಣ, ವಾಚನ: ಜೆಎಸ್‌ಎಸ್ ಪ್ರೌಢಶಾಲೆ ದೈಹಿಕ ಶಿಕ್ಷಕ ಡಿ.ಎಂ. ಸಿದ್ದಲಿಂಗಸ್ವಾಮಿ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಸುತ್ತೂರು ಮಠ, ಸಂಜೆ 6.30ರಿಂದ.

ರತ್ನಪುರಿಯಲ್ಲಿಂದು

■ **ಮಹಾಜನ ವಿದ್ಯಾಸಂಸ್ಥೆ, ರಾಜ್ಯ ಕಾನೂನು ವಿಶ್ವವಿದ್ಯಾಲಯ (ಹುಬ್ಬಳ್ಳಿ), ಎಸ್‌ಬಿಆರ್‌ಆರ್ ಮಹಾಜನ ಕಾಲೇಜು (ರಾಷ್ಟ್ರೀಯ ಸೇವಾ ಯೋಜನೆಯ ಘಟಕ):** ವಾರ್ಷಿಕ ವಿಶೇಷ ಶಿಬಿರ 2021-22, ಬೆಳಗ್ಗೆ 6.30ಕ್ಕೆ ಧ್ವಜಾರೋಹಣ, ಬೆಳಗ್ಗೆ 10 ಗಂಟೆಗೆ ಕಾನೂನು ಅರಿವು ಕಾರ್ಯಕ್ರಮ, ಅಧ್ಯಕ್ಷತೆ : ಮಹಾಜನ ವಿದ್ಯಾಸಂಸ್ಥೆ ಕಾರ್ಯದರ್ಶಿ ಶ್ರೀಮತಿ ವಿಜಯಲಕ್ಷ್ಮೀ ಮುರಳೀಧರ್, ಮುಖ್ಯ ಅತಿಥಿಗಳು : ಹಿರಿಯ ಸಿವಿಲ್ ನ್ಯಾಯಾಧೀಶ ದೇವರಾಜ್ ಭೂತೆ, ಹುಣಸೂರು ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ಶಿರಿನ್ ಜಾವಿದ್ ಅನ್ಸಾರಿ, ಸದಸ್ಯ ಕಾರ್ಯದರ್ಶಿ ಮನು ಪಟೇಲ್ ಬಿ.ವೈ., ವಕೀಲರ ಸಂಘದ ಅಧ್ಯಕ್ಷ ಯೋಗಣ್ಣೇಗೌಡ, ಮಹಾಜನ ಕಾನೂನು ಕಾಲೇಜು ಪ್ರಾಂಶುಪಾಲ ಪ್ರೊ. ಎಂ.ಎಂ. ಪ್ರಭುಸ್ವಾಮಿ, ಸ್ಥಳ: ಸರ್ಕಾರಿ ಪ್ರೌಢಶಾಲೆ, ರತ್ನಪುರಿ, ಹುಣಸೂರು ತಾ.

ದಸರಾ ಗಜಪಡೆಗೆ ಮಾಜಿ ಸಿಎಂ ಯಡಿಯೂರಪ್ಪ ಪೂಜೆ, ಸತ್ಕಾರ



ಮೈಸೂರು, ಆ.23(ಎಂಟಿವೈ)– ಮೈಸೂರು ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ಅಭಿಮನ್ಯು ನೇತೃತ್ವದ ಗಜಪಡೆಗೆ ಮಂಗಳವಾರ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಪೂಜೆ ಸಲ್ಲಿಸಿ, ಕಬ್ಬು, ಬೆಲ್ಲ ನೀಡಿ ಸತ್ಕರಿಸಿದರು.

ಸಾವರ್ಕರ್ ರಥಯಾತ್ರೆಗೆ ಚಾಲನೆ ನೀಡಲು ಮೈಸೂರಿಗೆ ಆಗಮಿಸಿದ್ದ ಮಾಜಿ ಸಿಎಂ ಯಡಿಯೂರಪ್ಪ, ಸಚಿವ ಎಸ್.ಟಿ.ಸೋಮಶೇಖರ್ ಅವರೊಂದಿಗೆ ಬೆಳಗ್ಗೆ ಅರಮನೆ ಆವರಣಕ್ಕೆ ಭೇಟಿ ನೀಡಿ, ಅಂಬಾರಿ ಆನೆ ಅಭಿಮನ್ಯು ಸೇರಿದಂತೆ ಗಜಪಡೆ ಇತರ ಆನೆಗಳಿಗೆ ಪೂಜೆ ಸಲ್ಲಿಸಿದರು. ನಂತರ ಆನೆಗಳಿಗೆ ಬೆಲ್ಲ, ಕಬ್ಬು ನೀಡಿದರು. ಈ ವೇಳೆ ಆನೆಗಳ ಆರೋಗ್ಯ ಸ್ಥಿತಿಗತಿ ಬಗ್ಗೆ ಮಾಹಿತಿ ಪಡೆದರು. ಕೆಲಕಾಲ ದಸರಾ ಗಜಪಡೆಯ ಕ್ಯಾಂಪ್‌ನಲ್ಲಿ ಇದ್ದು, ಆ ನಂತರ ಅರಮನೆ ಮುಂಭಾಗದ ಕೋಟೆ ಆಂಜನೇಯ ಸ್ವಾಮಿ ದೇವಾಲಯದತ್ತ ತೆರಳಿದರು. ಈ ಸಂದರ್ಭದಲ್ಲಿ ಸಚಿವ ನಾರಾಯಣಗೌಡ, ಶಾಸಕರಾದ ಎಲ್.ನಾಗೇಂದ್ರ, ನಿರಂಜನ್‌ಕುಮಾರ್, ಸಂಸದ ಪ್ರತಾಪಸಿಂಹ, ಡಿಸಿಎಫ್ ಡಾ.ವಿ.ಕರಿಕಾಳನ್, ಆರ್‌ಎಫ್‌ಓ ಸಂತೋಷ್ ಹೂಗಾರ್, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಂ.ಶಿವಕುಮಾರ್, ಮಾಜಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮೈಲ್ಯಾಕ್ ಅಧ್ಯಕ್ಷ ರಘು ಆರ್.ಕೌಟಿಲ್ಯ, ಮುಖಂಡರಾದ ಕಾಪು ಸಿದ್ದಲಿಂಗಸ್ವಾಮಿ, ಬಿ.ಪಿ. ಮಂಜುನಾಥ್, ಅರುಣ್‌ಕುಮಾರ್‌ಗೌಡ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ದ್ವಿತೀಯ ವರ್ಷದ ಡಿಪ್ಲೊಮಾಗೆ ಅರ್ಜಿ ಆಹ್ವಾನ

ಮೈಸೂರು,ಆ.23–ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವತಿಯಿಂದ 2022–23ನೇ ಸಾಲಿನಲ್ಲಿ ದ್ವಿತೀಯ ವರ್ಷದ ಡಿಪ್ಲೊಮಾಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಐ.ಟಿ.ಐ/ ದ್ವಿತೀಯ ಪಿ.ಯು.ಸಿ (ವಿಜ್ಞಾನ) ದ್ವಿತೀಯ ಪಿಯುಸಿ (ತಾಂತ್ರಿಕ ವಿಷಯ) ಗಳಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳು ಪ್ರವೇಶ ಅರ್ಜಿಗಳನ್ನು 2022ರ ಆ.22ರಿಂದ ಆ.30ರ ಸಂಜೆ 5.30ರವರೆಗೆ ಖುದ್ದಾಗಿ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ಮೈಸೂರು ಇಲ್ಲಿ ಸಲ್ಲಿಸಬಹುದು. ಮಾಹಿತಿಗಾಗಿ https://dtek.karnataka.gov. ಮತ್ತು dtetech.karnataka.gov.inನಲ್ಲಿ ಸಂಪರ್ಕಿಸಬಹುದು.

ದಸರಾ ಗಜಪಡೆಗೆ ಇನ್ನು ಮುಂದೆ ಸಂಜೆ ವೇಳೆ ಭಾರ ಹೊರುವ ತಾಲೀಮು

510 ಕೆಜಿ ಮರಳು ಮೂಟೆಯೊಂದಿಗೆ 760 ಕೆಜಿ ಭಾರ ಹೊತ್ತ ಅಭಿಮಾನದ ಅಭಿಮನ್ಯು; ಬೆಳಗ್ಗೆ ಜಸ್ಟ್ ವಾಕಿಂಗ್!

ಮೈಸೂರು, ಆ.23(ಎಂಟಿವೈ)– ನಾಡ ಹಬ್ಬ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಅಂಬಾರಿ ಆನೆ ಅಭಿಮನ್ಯು ನೇತೃತ್ವದ ಗಜಪಡೆಗೆ ಮಂಗಳವಾರದಿಂದ 2ನೇ ಹಂತದ ಭಾರ ಹೊರುವ ತಾಲೀಮು ಆರಂಭಿಸಲಾಗಿದೆ. ಸಂಜೆ ವೇಳೆ ಅಭಿಮನ್ಯುವಿಗೆ 760 ಕೆಜಿ ಭಾರ ಹೊರಿಸಿ, ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೆ ತಾಲೀಮು ನಡೆಸಲಾಯಿತು. ಮೊದಲ ದಿನವೇ ನಿರಾಳವಾಗಿ ಹೆಜ್ಜೆ ಹಾಕಿ, ಅಭಿಮನ್ಯು ಅರಣ್ಯಾಧಿಕಾರಿಗಳಲ್ಲಿ ವಿಶ್ವಾಸ ಮೂಡಿಸಿದ್ದಾನೆ.

ಆ.10ರಿಂದ ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ಗಜಪಡೆಗೆ ಆ.18ರಿಂದ ಪ್ರತಿದಿನ ಬೆಳಗ್ಗೆ ಭಾರ ಹೊರಿಸುವ ತಾಲೀಮು ಆರಂಭಿಸಲಾಗಿತ್ತು. ಗಜಪಡೆಯ ನಾಲ್ಕು ಆನೆಗಳಿಗೆ 300 ಕೆಜಿ ಮರಳಿನ ಮೂಟೆ, 200 ಕೆಜಿ ತೂಕದ ಗಾದಿ, ನಮ್ದಾ ಸೇರಿದಂತೆ 500ರಿಂದ 550 ಕೆಜಿ ಭಾರ ಹೊರಿಸಿ ತಾಲೀಮು ನಡೆಸಲಾಗಿತ್ತು. ಹಿರಿಯ ಸದಸ್ಯ ಅರ್ಜುನನ ಹೊರತುಪಡಿಸಿ ಉಳಿದ 5 ಗಂಡಾನೆಗಳಿಗೆ ರೊಟೇಷನ್ ಪದ್ಧತಿಯಲ್ಲಿ ಭಾರ ಹೊರಿಸಿ ಯಶಸ್ವಿಯಾಗಿ ತಾಲೀಮು ನಡೆಸಲಾಗಿತ್ತು.

ಸಂಜೆಗೆ ಶಿಫ್ಟ್: ಜಂಬೂಸವಾರಿಗೆ ಗಜಪಡೆಯನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ಇಂದಿನಿಂದ ಭಾರ ಹೊರಿಸುವ ತಾಲೀಮನ್ನು ಬೆಳಗ್ಗೆಯಿಂದ ಸಂಜೆಗೆ ಶಿಫ್ಟ್ ಮಾಡಲಾಗಿದೆ. ಇನ್ನು ಮುಂದೆ ಭಾರ ಹೊರಿಸುವ ತಾಲೀಮನ್ನು ಸಂಜೆ ವೇಳೆ ಮುಂದುವರೆಸಲಾಗುತ್ತದೆ. ಸಂಜೆ 4.15ಕ್ಕೆ ಅರಮನೆ ಆವರಣದಲ್ಲಿರುವ ಕೋಡಿ ಸೋಮೇಶ್ವರ ದೇವಾಲಯದ ಸಮೀಪ ಅಭಿಮನ್ಯು ಮೇಲೆ ಗಾದಿ, ನಮ್ದಾ ಕಟ್ಟಿ ಅದರ ಮೇಲೆ ತೊಟ್ಟಿಲು ಕಟ್ಟಿ 510 ಕೆಜಿ ಮರಳಿನ ಮೂಟೆ ಇರಿಸಲಾಯಿತು. ನಂತರ ಬಲರಾಮ ದ್ವಾರದಿಂದ ಕೆ.ಆರ್.ವೃತ್ತ, ಸಯ್ಯಾಜಿರಾವ್ ರಸ್ತೆ, ಬಂಬೂಬಜಾರ್ ವೃತ್ತ, ಹೈವೆ ವೃತ್ತದ ಮೂಲಕ ಬನ್ನಿಮಂಟಪದ ಪಂಜಿನ ಕವಾಯತು ಮೈದಾನ ತಲುಪಿತು. 5 ಕಿಮಿ ಅಂತರವನ್ನು 1.15 ನಿಮಿಷದಲ್ಲಿ ತಲುಪಿ, ಪ್ರಶಂಸೆಗೆ ಪಾತ್ರವಾಯಿತು. ಇಂದು ನಡೆದ ತಾಲೀಮಿನಲ್ಲಿ ಡಿಸಿಎಫ್ ಡಾ.ವಿ.ಕರಿಕಾಳನ್, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯ ಡಾ.ಮುಜೀಬ್, ಸಹಾಯಕರಾದ ರಂಗರಾಜು, ಅಕ್ರಮ್ ಇನ್ನಿತರರು ಪಾಲ್ಗೊಂಡು ಆನೆಗಳ ಸಾಮರ್ಥ್ಯ ಗಮನಿಸಿದರು.



“ ಮೊದಲ ಹಂತದಲ್ಲಿ ನಡೆದ ಭಾರ ಹೊರುವ ತಾಲೀಮು ಯಶಸ್ವಿಯಾಗಿ ಪೂರ್ಣಗೊಂಡಿದೆ. ಎಲ್ಲಾ ಐದು ಗಂಡಾನೆಗಳು ನಿರೀಕ್ಷೆಗೂ ಮೀರಿ ಸಾಮರ್ಥ್ಯ ಪ್ರದರ್ಶಿಸಿವೆ. ಇಂದಿನಿಂದ ಎರಡನೇ ಹಂತದ ತಾಲೀಮು ಆರಂಭಿಸಲಾಗಿದೆ. ಮೊದಲು 300 ಕೆಜಿ ಮರಳಿನ ಮೂಟೆ ಹೊರಿಸಲಾಗಿತ್ತು. ಇಂದಿನಿಂದ 510 ಕೆಜಿ ಮರಳಿನ ಮೂಟೆ ಹೊರಿಸಲಾಗಿದೆ. ಮೂರನೇ ಹಂತದಲ್ಲಿ 700 ಕೆಜಿ ಹೊರಿಸಲಾಗುತ್ತದೆ. ಸಂಜೆ ವೇಳೆ ಆನೆಗಳಿಗೆ ಭಾರ ಹೊರುವ ತಾಲೀಮು ನಡೆಸುವುದರಿಂದ ಜಂಬೂಸವಾರಿಯಲ್ಲಿ ಆನೆಗಳು ಸಹಜವಾಗಿ ಭಾರ ಹೊರಲು ಸಹಕಾರಿಯಾಗಲಿದೆ. ಅಲ್ಲದೆ, ಸಂಜೆ ವಾತಾವರಣದಲ್ಲಿ, ವಾಹನಗಳ ಲೈಟಿಂಗ್, ಬೀದಿ ದೀಪದ ಬೆಳಕಲ್ಲಿ ಆನೆಗಳಿಗೆ ತಾಲೀಮು ನಡೆಸುವುದು ಜಂಬೂಸವಾರಿ ದೃಷ್ಟಿಯಿಂದ ಅವಶ್ಯವಾಗಿದೆ. **–ಡಾ.ವಿ.ಕರಿಕಾಳನ್, ಡಿಸಿಎಫ್**

ಮೈಸೂರು ಮಿತ್ರ 43
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಸಿದ್ದರಾಮೋತ್ಸವ ಬಿಜೆಪಿಗರ ನಿದ್ದೆಗೆಡಿಸಿದೆ ಸಿದ್ದರಾಮಯ್ಯರ ತೇಜೋವಧೆ ಮೂಲಕ ಕೀಳು ಮಟ್ಟದ ರಾಜಕಾರಣ

ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಬಿ.ಪುಷ್ಪಾ ಅಮರನಾಥ್ ಕಿಡಿನುಡಿ



ಮೈಸೂರು,ಆ.23(ಪಿಎಂ)– ದಾವಣಗೆರೆಯಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ‘ಸಿದ್ದರಾಮೋತ್ಸವ’ ಬಿಜೆಪಿಗರ ನಿದ್ದೆಗೆಡಿಸಿದೆ. ಮುಂದಿನ ಚುನಾವಣೆಯಲ್ಲಿ ಬಿಜೆಪಿಗೆ ಜನಮನ್ನಣೆ ದೊರೆಯದ ಮುನ್ಸೂಚನೆ ಸಿಕ್ಕಿದೆ. ಅದಕ್ಕಾಗಿಯೇ ಸಿದ್ದರಾಮಯ್ಯನವರ ತೇಜೋವಧೆಗೆ ಕೀಳು ಮಟ್ಟದ ರಾಜಕಾರಣಕ್ಕೆ ಬಿಜೆಪಿ ನಾಯಕರು ಮುಂದಾಗಿದ್ದಾರೆ ಎಂದು ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಬಿ.ಪುಷ್ಪಾ ಅಮರನಾಥ್ ಕಿಡಿಕಾರಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು ಬಡವರು, ದೀನದಲಿತರ ಶಕ್ತಿ. ದಾವಣಗೆರೆಯಲ್ಲಿ ನಡೆದ ಸಿದ್ದರಾಮೋತ್ಸವ ಬಿಜೆಪಿಗರ ನಿದ್ದೆಗೆಡಿಸಿದೆ. ಅದಕ್ಕಾಗಿಯೇ ಅವರು ಸಿದ್ದರಾಮಯ್ಯನವರ ತೇಜೋವಧೆಗೆ ಮುಂದಾಗಿದ್ದಾರೆ. ನೆರೆ ಹಾನಿ ವೀಕ್ಷಣೆಗೆ ಸಿದ್ದರಾಮಯ್ಯನವರು ಮಡಿಕೇರಿಗೆ ಹೋದಾಗ ನಡೆದ ಪ್ರತಿರೋಧದ ಹಿಂದೆ ಸರ್ಕಾರದ ಕುಮ್ಮಕ್ಕು ಇದೆ. ಜೊತೆಗೆ ಇಲ್ಲಿ ನಡೆದ ಕಳಪೆ ಕಾಮಗಾರಿಗಳ ಬಣ್ಣಬಯಲು ಆಗುವ ಕಾರಣಕ್ಕೂ ಈ ರೀತಿ ಕೃತ್ಯ ನಡೆಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯನವರ ಹೆಸರು ಹೇಳಲೂ ಯೋಗ್ಯತೆ ಇಲ್ಲದ ಪ್ರತಾಪ್ ಸಿಂಹ ನಡವಳಿಕೆ ಮತ್ತು ಮಾತನಾಡುವ ರೀತಿ ಸಂಸದರ ಸ್ಥಾನಕ್ಕೆ ತಕ್ಕದ್ದಲ್ಲ. ಅವರಿಗೆ ಇನ್ನೊಂದು ಬಿರುದನ್ನು ಸದ್ಯದಲ್ಲೇ ಜನರೇ ಕೊಡಲಿದ್ದಾರೆ. ಇವರನ್ನು ಸಿಡಿ ಸಿಂಹ ಎಂತಲೇ ಕರೆಯಬೇಕು. ಕೊಡಗಿಗೆ ಇವರ ಕೊಡುಗೆ ಶೂನ್ಯ. ಅಭಿವೃದ್ಧಿ ವಿಚಾರವಾಗಿ ಚರ್ಚೆಗೆ ಆಹ್ವಾನಿಸಿದಾಗ ತಪ್ಪಿಸಿಕೊಂಡವರು ನೀವು ಎಂದು ಪ್ರತಾಪ್ ಸಿಂಹ ವಿರುದ್ಧ ಕಿಡಿಕಾರಿದರು.

ಒಂದೇ ಒಂದು ಕಪ್ಪುಚುಕ್ಕೆ ಇಲ್ಲದಂತೆ ಸಿದ್ದರಾಮಯ್ಯನವರು 5 ವರ್ಷ ಆಡಳಿತ ನಡೆಸಿದವರು. ಅವರ ವಿರುದ್ಧ ಈ ರೀತಿ ನಡೆದುಕೊಳ್ಳುವುದು ನಿಜಕ್ಕೂ ಸರಿಯಲ್ಲ. ನಿರುದ್ಯೋಗ, ಬೆಲೆ ಏರಿಕೆಯಿಂದ ಜನಸಾಮಾನ್ಯರು ತತ್ತರಿಸಿದ್ದಾರೆ. ಆದರೆ ಈ ಬಗ್ಗೆ ಚರ್ಚೆಯೇ ಆಗುತ್ತಿಲ್ಲ. ಮಾಂಸಾಹಾರ ಮುಂದಿಟ್ಟುಕೊಂಡು ಕೀಳು ಮಟ್ಟದ ರಾಜಕೀಯ ಮಾಡುತ್ತಿದ್ದಾರೆ ಎಂದರು.

ಸಾಮಾಜಿಕ ನ್ಯಾಯದ ಉಲ್ಲಂಘನೆ... ”
ಮೈಸೂರು ಪಾಲಿಕೆಯಲ್ಲಿ ಮೇಯರ್ ಅವಧಿ ಮುಗಿದಿದೆ. ವರ್ಷಕ್ಕೊಮ್ಮೆ ಮೇಯರ್ ಚುನಾವಣೆ ನಡೆಸಬೇಕು. ಆದರೆ ಬೇರೆಯವರಿಗೆ ಇವರು ಅವಕಾಶ ಮಾಡಿಕೊಟ್ಟಿಲ್ಲ. ಮೇಯರ್ ಚುನಾವಣೆ ಸಂಬಂಧ ಮೀಸಲಾತಿ ಪ್ರಕಟಿಸದೆ ಸಾಮಾಜಿಕ ನ್ಯಾಯ ಉಲ್ಲಂಘಿಸಲಾಗಿದೆ. ಬಿಜೆಪಿ ಸರ್ಕಾರ ಪ್ರಶ್ನಿಸುತ್ತೇನೆ. ಇದು ಮೋಸವಲ್ಲವೇ? ಇದು ಅನ್ಯಾಯವಲ್ಲವೇ? ಈ ಸರ್ಕಾರಕ್ಕೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲ. ಕೂಡಲೇ ಮೀಸಲಾತಿ ಪ್ರಕಟಿಸಬೇಕು. **–ಡಾ.ಬಿ.ಪುಷ್ಪಾ ಅಮರನಾಥ್**

ನಾವು ಮೊಟ್ಟೆ ಎಸೆದಿಲ್ಲ: ಇಂದು ಹಿರಿಯ ರಾಜಕಾರಣಿಗಳೂ ಆದ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪನವರು ಮೈಸೂರಿಗೆ ಬಂದಿದ್ದಾರೆ. ಅವರ ಬಗ್ಗೆ ನಮಗೆ ಅಪಾರವಾದ ಗೌರವವಿದೆ. ನಾವು ಕಾಂಗ್ರೆಸ್ಸಿಗರು ಅವರಿಗೆ ಕಪ್ಪು ಬಾವುಟ ಪ್ರದರ್ಶಿಸಿಲ್ಲ. ಮೊಟ್ಟೆಯನ್ನೂ ಹೊಡೆದಿಲ್ಲ. ಅದು ನಮ್ಮ ಸಂಸ್ಕೃತಿಯೂ ಅಲ್ಲ. ಹಿರಿಯರಿಗೆ ಗೌರವ ಕೊಡುವುದು ನಮ್ಮ ಸಂಸ್ಕೃತಿ. ಆದರೆ ಹಿಂದುತ್ವದ ಹೆಸರಿನಲ್ಲಿ ಸಮಾಜದ ಸ್ವಾಸ್ಥ್ಯ ಹಾಳು ಮಾಡುವುದು ಬಿಜೆಪಿಯವರ ಸಂಸ್ಕೃತಿ ಎಂದು ಕಿಡಿಕಾರಿದರು.

ಹಿಂದುಳಿದವರು, ಬಡವರ ಮಕ್ಕಳನ್ನು ಬಳಸಿಕೊಂಡು ಅವರಿಂದ ಗಲಭೆ ಸೃಷ್ಟಿ ಮಾಡಿಸುವುದು ಇವರ ಸಂಸ್ಕೃತಿ. ಆರ್‌ಎಸ್‌ಎಸ್ ಕೈಗೊಂಬೆಯಾದ ಬಿಜೆಪಿಯ ಕಚೇರಿ ಮೇಲೆ ಇಂದಿಗೂ ರಾಷ್ಟ್ರಧ್ವಜ ಹಾರಿಸಲು ಅವರಿಗೆ ಯೋಗ್ಯತೆ ಇಲ್ಲ. ರಾಜ್ಯ ಬಿಜೆಪಿ ಸರ್ಕಾರ 40 ಪರ್ಸೆಂಟ್ ಪಡೆಯುವ ಏಜೆನ್ಸಿಯಾಗಿದೆ. ರಾಜ್ಯದಲ್ಲಿ ಇಂದು ಸರ್ಕಾರ ಇಲ್ಲ ಎಂದು ದೂರಿದರು. ಮಾಜಿ ಮೇಯರ್‌ಗಳಾದ ಪುಷ್ಪಲತಾ ಚಿಕ್ಕಣ್ಣ, ಪುಷ್ಪಲತಾ ಜಗನ್ನಾಥ್, ಮಾಜಿ ಉಪಮೇಯರ್‌ಗಳಾದ ಶಾಂತಕುಮಾರಿ, ಪುಷ್ಪವಲ್ಲಿ ಮತ್ತಿತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಅವಧಿ ವಿಸ್ತರಣೆ

ಮೈಸೂರು,ಆ.23– ಮೈಸೂರು ಜಿಲ್ಲೆಯ ಹುಣಸೂರು ನಗರಸಭೆ ಕಾರ್ಯಾಲಯದಿಂದ ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ ಯೋಜನೆಯ ಹಂತ–4ರ ಅಡಿ ಶೇ.24.10 ಶೇ. 7.25 ಮತ್ತು ಶೇ.5ರಷ್ಟು ಹಾಗೂ ಪೌರ ಕಾರ್ಮಿಕ ಕಲ್ಯಾಣ ಕಾರ್ಮಿಕರ ಯೋಜನೆಯಡಿ ಸಹಾಯಧನ ಹಾಗೂ ಇತರೆ ಸೌಲಭ್ಯವನ್ನು ನೀಡಲು ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಅವಧಿಯನ್ನು ಸೆ.9ರವರೆಗೆ ವಿಸ್ತರಣೆ ಮಾಡಲಾಗಿದೆ.

ನಂದಿನಿಗೆ ಪಿಹೆಚ್.ಡಿ



ಮೈಸೂರು: ಡಾ.ಆರ್.ರಾಜಣ್ಣ ಅವರ ಮಾರ್ಗದರ್ಶನದಲ್ಲಿ ಎಲ್.ನಂದಿನಿ ಇತಿಹಾಸ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

IN THE COURT OF THE HON'BLE IV ADDL. SENIOR CIVIL JUDGE AND C.J.M., AT MYSURU
Execution No. 177 of 2021

Decree Holders :
Sri K.S.Ganapathi and another.
Vs
Judgment Debtors: Smt. Nagamma - Dead by LRs. and others

1(a) Smt. Shanthamma, Aged about 76 years, Wife of Sri Swamygowda, D/o Late H.T.Srinivas, Residing at Dasegowdana Koppalu, Halli Mysore Hobli, Holenarasipura Taluk, Hassan District.

1(c) Smt. Bhagya, Aged about 66 years, Wife of Sri. Gopal D/o late H.T.Srinivas, Residing at Gavi Mutta, Near Chamundi Betta, Mysore.

1(d) Smt. Kamala, Aged about 61 years, Wife fo Sri. M.R.Mohan Kumar, D/o Late H.T. Srinivas, Residing at No.: 905/5, 1st Cross, 4th Main, Opp. Subbanna Park, Vidyaranyapuram, Mysore.

Take notice, that the Decree Holder has preferred the above Petition against the Judgment Debtor seeking to execute the decree passed by this Hon'ble Court in O.S 1464 of 2006 wherein the suit preferred by us seeking for specific performance of contract came to be decreed on 09-04-2019. This notice is caused to intimate the Judgment Debtors 1(a), 1(c) and 1(d) that the above Petition is posted for appearance of the JDRs on 26-09-2022 at 11.00 A.M.

In the event of failure of the Judgment Debtors 1(a), 1(c) and 1(d) to appear on the said date, the matter will be heard in your absence.

By order of the Court
Sd/- Chief Ministerial Officer
Court of IV Addl. Senior Civil Judge at Mysore.
Sd/- J.M.Aiyanna
Adv for Plaintiff

IN THE COURT OF THE HON'BLE VI ADDITIONAL DISTRICT AND SESSIONS JUDGE AT MYSORE.

In the matter of:
R.A No: 108/2021

Appellants : Smt Sowbhagya and others Versus
Respondent : H.J.Amar and others
Respondent No:1:Mr.H.J. Amar S/o H.Y.Jeenaraju aged about 35 years, Residing at # 543 Rama chandra Agrahara, Mysore.

whereas, the above appeal has been filed as against you, the respondent No.1 by the appellants i.e.Smt. Sowbhagya and others. and you are the respondent no1 i.e .Mr .H.J.Amar is hereby directed to appear before this Court either in person or through your counsel on 09.09.2022 at 11A.M failure of which, You will be placed Ex-parte and the matter will be proceeded with and will be heard in your absence.

Given under my hand seal of the court in this the 20th day of August 2022 at Mysore.

By order of the Court
Sd/- Chief Administrative Officer, District and Sessions judge, Mysuru

Advocate for appellants
Sd/- H.S. Kumar. B.A.L.LL.B.
Advocate , KAR 1618/2000,
Law Lexicon Associates, No. 1411/1, 1st Floor, 6th Cross, Thyagaraja Road, Mysuru.
Mob:9448797546
Mysuru
Date: 20.08.2022

ಬೇಕಾಗಿದ್ದಾರೆ
ರಾಜಮ್ಮ ಲಿಂಗಯ್ಯ ಫೌಂಡೇಷನ್
ಪ್ರಗತಿ ವಿದ್ಯಾ ಸಂಸ್ಥೆಗಳು, ಸರಗೂರು, ಮೈಸೂರು ಜಿಲ್ಲೆ–571121
Mob: 9448063043

ಕ್ರಸಂ.	ಹುದ್ದೆ	ವಿದ್ಯಾರ್ಹತೆ
01	ಆಡಳಿತಾಧಿಕಾರಿಗಳು	MA.B.Ed/MSc.B.Ed or any Administration Related Qualification (ಅನುಭವವುಳ್ಳವರಿಗೆ ಮೊದಲ ಆದ್ಯತೆ)

ಅಭ್ಯರ್ಥಿಗಳು ತಮ್ಮ ಸ್ವವಿವರಗಳನ್ನು 30.08.2022ರೊಳಗೆ ಶಾಲಾ ಇ–ಮೇಲ್ ವಿಳಾಸ, pragathi.edu.in@gmail.com ಗೆ ಕಳುಹಿಸುವುದು.
ಕಾರ್ಯದರ್ಶಿಗಳು /- ಪ್ರಗತಿ ವಿದ್ಯಾಸಂಸ್ಥೆ

Vidyavardhaka Sangha (Regd), Mysore
VIDYAVARDHAKA COLLEGE OF ENGINEERING
Autonomous Institute, Accredited by NBA & by NAAC with "A" Grade
Gokulam, 3rd Stage, Mysuru-570 002
E-mail: career@vvce.ac.in | Website: www.vvce.ac.in

STAFF REQUIRED

MBA Dept.:
Assistant Professor Specialization in Banking & Finance, HR & Operational Research / Business Analytics, Preference will be given to Engineering Background.

ENGINEERING Dept.:
- **Associate Professor** in CS&E, IS&E: Ph.D is Compulsory
- **Assistant Professor** in CS&E, AI&ML, IS&E: First Class in BE & M.Tech, Preference will be given to PhDs.

NON-TEACHING : • **Instructor / Assistant Instructor** : Diploma in E&CE.
• **First Division Clerk :** Any Master's degree (Full time course) with minimum 10 years of experience in relevant field.

For further details and to apply, visit
https:/vvce.ac.in/life@vvce/careers

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು
ಹುಲ್ಲಹಳ್ಳಿ ರಸ್ತೆ, ನಂಜನಗೂಡು. ದೂ.ಸಂ.08221–226309
ಸಂ.ಕೃಉಮಾಸ/ನಂ/173/2022–23 ದಿನಾಂಕ: 23.08.2022

ಪ್ರಕಟಣೆ

ನಂಜನಗೂಡು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಮೆ// ಶ್ರೀಕಂಠೇಶ್ವರ ಟ್ರೇಡರ್ಸ್, ಮಾಲೀಕರು. ದಿವಂಗತ ಶ್ರೀ ಎಂ. ಶ್ರೀಕಂಠಶೆಟ್ಟಿ, #77, ಹೆಜ್ಜಿಗೆ ಗ್ರಾಮ, ನಂಜನಗೂಡು ಇವರ ಹೆಸರಿಗೆ ನಿವೇಶನ ಸಂಖ್ಯೆ: 06 ಅನ್ನು ಹಂಚಿಕೆ ಮಾಡಲಾಗಿರುತ್ತದೆ, ಸದರಿ ನಿವೇಶನದ ಮಾಲೀಕರಾದ ದಿವಂಗತ ಶ್ರೀ ಎಂ. ಶ್ರೀಕಂಠಶೆಟ್ಟಿ, ಇವರು ನಿಧನರಾದ ಪ್ರಯುಕ್ತ ಇವರ ಪತ್ನಿಯಾದ ಶ್ರೀಮತಿ ಚಂದ್ರಮ್ಮ, ಮಾಲೀಕರು. ಮೆ// ಶ್ರೀಕಂಠೇಶ್ವರ ಟ್ರೇಡರ್ಸ್, ಚಿಕ್ಕಯ್ಯನ ಛತ್ರ ಹೋಬಳಿ, ಕೆಂಪಿಸಿದ್ದನಹುಂಡಿ ಗ್ರಾಮ, ನಂಜನಗೂಡು ಇವರ ಹೆಸರಿಗೆ ವರ್ಗಾವಣೆ ಮಾಡಿಕೊಡವಂತೆ ಈ ಕಛೇರಿಗೆ ಮನವಿ ಸಲ್ಲಿಸಿರುತ್ತಾರೆ. ಪ್ರಯುಕ್ತ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿರುವ ನಿವೇಶನ ಸಂಖ್ಯೆ: 06 ಅನ್ನು ಇವರ ಪತ್ನಿಯಾದ ಶ್ರೀಮತಿ ಚಂದ್ರಮ್ಮ, ಮಾಲೀಕರು. ಮೆ// ಶ್ರೀಕಂಠೇಶ್ವರ ಟ್ರೇಡರ್ಸ್, ಚಿಕ್ಕಯ್ಯನ ಛತ್ರ ಹೋಬಳಿ, ಕೆಂಪಿಸಿದ್ದನಹುಂಡಿ ಗ್ರಾಮ, ನಂಜನಗೂಡು ಇವರ ಹೆಸರಿಗೆ ವರ್ಗಾವಣೆ ಮಾಡಿಕೊಡುವ ಸಂಬಂಧ ಸಾರ್ವಜನಿಕರು ಅಥವಾ ಪೇಟೆಕಾರ್ಯಕರ್ತರು ಅಥವಾ ಸಂಬಂಧಿಕರಿಂದ ಮತ್ತು ಯಾರಿಂದಲಾದರು ಏನಾದರು ಆಕ್ಷೇಪಣೆಗಳಿದ್ದಲ್ಲಿ ಈ ಪ್ರಕಟಣೆಯ ದಿನಾಂಕದಿಂದ 15 ದಿವಸದೊಳಗೆ ಈ ಕಛೇರಿಗೆ ಲಿಖಿತ ರೂಪದಲ್ಲಿ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ. ನಿವೇಶನದ ಚೆಕ್ಕುಬಂದಿ ವಿವರ ಈ ಕೆಳಕಂಡಂತಿದೆ.
ಪೂರ್ವಕ್ಕೆ: ಎ.ಪಿ.ಎಂ.ಸಿ ಕಾಂಪೌಂಡ್ ಗೋಡೆ, **ಪಶ್ಚಿಮಕ್ಕೆ:** ರಸ್ತೆ, **ಉತ್ತರಕ್ಕೆ:** ನಿವೇಶನ ಸಂಖ್ಯೆ 07, **ದಕ್ಷಿಣಕ್ಕೆ:** ನಿವೇಶನ ಸಂಖ್ಯೆ 05

ಸಹಿ/– ಕಾರ್ಯದರ್ಶಿ
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ
ನಂಜನಗೂಡು

ಸಹಿ/– ಆಡಳಿತಾಧಿಕಾರಿಗಳು
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ
ನಂಜನಗೂಡು

ನಕ್ಕರೆ ಅದೇ ಸ್ವರ್ಗ

ಹೆಂಡತಿ : ಪ್ರಿಯ, ನೀವು ಈ ಕಳೆದ ಹತ್ತು ದಿನಗಳಿಂದ ನನಗೆ ಮುತ್ತು ಕೊಟ್ಟಿಲ್ಲ ಗೊತ್ತೆ?

ಗಂಡ : ಅರೆ ! ನಾನು ಹಾಗಾದರೆ ಯಾರಿಗೆ ಕೊಡ್ತಾ ಇದ್ದೆ?

ಮೈಸೂರು ಮಿತ್ರ

ಬುಧವಾರ, 24 ಆಗಸ್ಟ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ *M.A.*

ಅಮೃತವಾಹಿನಿ

ಮದುವೆ ಎಂಬುದು ಬಿರುಗಾಳಿಯಲ್ಲಿ ಒಂದು ಬಂದರು ಇದ್ದಂತೆ. ಆದರೆ ಎಷ್ಟೋ ಸಲ ಬಂದರಿನಲ್ಲಿಯೇ ಬಿರುಗಾಳಿ ಏಳುತ್ತದೆ. – ಆಸ್ಕರ್‌ವೈಲ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ದಾಯಾದಿ ಇದ್ದ ಕಡೆ ಬೆಂಕಿ ಹುಡುಕಬೇಕಾಗಿಲ್ಲ

ನಿಮ್ಮ ಪತ್ರಗಳು

ಹೆಚ್ಚುತ್ತಿರುವ ಬಾರ್ ಅಂಡ್ ರೆಸ್ಟೋರೆಂಟ್‌ಗಳು

ಮಾನ್ಯರೆ,

ಮೈಸೂರು ಜಿಲ್ಲೆ ಪಿರಿಯಾಪಟ್ಟಣ ತಾಲೂಕಿನ ರಾವಂದೂರು ಮುಂದುವರೆಯುತ್ತಿರುವ ಹೋಬಳಿ ಕೇಂದ್ರವಾಗಿದೆ. ಯಾವುದರಲ್ಲಿ ಮುಂದುವರೆಯುತ್ತಿರುವುದೋ ಗೊತ್ತಿಲ್ಲ. ಆದರೆ ಬಾರ್‌ಗಳು ಮಾತ್ರ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದು ದುರಂತ ಹಾಗೂ ಕಳವಳಕಾರಿ ಸಂಗತಿ. ಈ ಮೊದಲು ಒಂದಿದ್ದರೆ ಈಗ ರಾವಂದೂರಿನಲ್ಲಿ ಎರಡು ಖಾಸಗಿ, ಒಂದು ಎಂಎಸ್‌ಐಎಲ್, ಜತೆಗೆ ಈಗ ಹೊಸದಾಗಿ ಭೋಗನಹಳ್ಳಿ ತಿರುವಿನಲ್ಲಿ ಒಂದು, ಹೀಗೆ ನಾಲ್ಕು ಬಾರ್‌ಗಳು ತೆರೆದಿವೆ. ಹೀಗಾದರೆ ಜನರ ಆರೋಗ್ಯ ಹಾಗೂ ಆರ್ಥಿಕ ಪರಿಸ್ಥಿತಿ ಹೇಗೆ ಸುಧಾರಿಸಬೇಕು ನೀವೇ ಯೋಚಿಸಿ. ದಿನದ ಸಂಪಾದನೆಯೆಲ್ಲವೂ ಬಾರ್ ಪಾಲಾದರೆ ಮನೆಯ ನಿರ್ವಹಣೆ ಹೇಗೆ? ಕುಡಿತದ ಚಟ ಬೆಳೆಸಿಕೊಂಡ ಎಷ್ಟೋ ಮಂದಿ ಯುವಕರು, ಮಧ್ಯಮ ವಯಸ್ಕರ ಜೀವನ ಹಾಗೂ ಅವರ ಮನೆಯವರ ಪಾಡು ದೇವರಿಗೆ ಪ್ರೀತಿ. ದಿನದ ದುಡಿಮೆಯ ಮುಕ್ಕಾಲು ಪಾಲು ಹಣವನ್ನು ಇಲ್ಲಿಗೆ ಹಾಕಿ ತಮ್ಮ ಜತೆಗೆ ಮನೆಯವರ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಹಾಳು ಮಾಡಿಕೊಳ್ಳುವುದಕ್ಕೆ ಇವೇ ಮುಖ್ಯ ಕಾರಣ. ಸಂತೋಷ ಮತ್ತು ದುಃಖ ಎರಡಕ್ಕೂ ನೆಪಮಾಡಿಕೊಂಡು ಕುಡಿತಕ್ಕೆ ಹೋಗುವ ಜನರಿಗೆ ಈ ಬಾರ್‌ಗಳು ತವರು ಮನೆಯಾಗಿವೆ. ಮುಂದಿನ ದಿನಗಳಲ್ಲಿ ಊರಿಗೆ ಎರಡೆರಡು ಬಾರ್‌ಗಳು ತಲೆಯೆತ್ತಿದರೂ ಅಚ್ಚರಿ ಇಲ್ಲ ಎಂಬಂತಾಗಿದೆ. ಈ ಬಗ್ಗೆ ಸರ್ಕಾರ, ಜಿಲ್ಲಾಡಳಿತ ಹಾಗೂ ಗ್ರಾಮಾಡಳಿತ ಒಂದಷ್ಟು ಯೋಚಿಸಿ ಯಾವ ಪ್ರಭಾವಕ್ಕೂ ಒಳಗಾಗದೇ ಇವುಗಳಿಗೆ ಕಡಿವಾಣ ಹಾಕುವುದು ಅನಿವಾರ್ಯ ಎನಿಸಿದೆ. ಇದು ಇಲ್ಲಿನ ಸುತ್ತಮುತ್ತ ವಾಸವಿರುವ ಎಷ್ಟೋ ನೊಂದ ಹೆಣ್ಣುಮಕ್ಕಳ ನೋವಿನ ಮನವಿ ಎಂದರೆ ಎಂದಿಗೂ ತಪ್ಪೆನಿಸದು...

ಮದ್ಯಪಾನ ಮಾನಹಾನಿ, ಮದ್ಯಪಾನ ಆರೋಗ್ಯಕ್ಕೆ ಹಾನಿಕರ ಅಲ್ಲವೇ?

–ಎ.ಎಸ್. ಗೋವಿಂದೇಗೌಡ, ಅರೇನಹಳ್ಳಿ ಗ್ರಾಮ, ಪಿರಿಯಾಪಟ್ಟಣ ತಾ.

ಹೆಚ್.ಡಿ.ದೇವೇಗೌಡರು ದಸರಾ ಉದ್ಘಾಟಿಸಲಿ



ಮಾನ್ಯರೆ,

ಈ ನಾಡಿನ ರಾಜಕೀಯ ಭೀಷ್ಮ ಹೆಚ್.ಡಿ.ದೇವೇಗೌಡರು ಈ ನಾಡಿನ ರಾಜಕೀಯದ ಸಂಕೇತ. ಕರ್ನಾಟಕ ರಾಜ್ಯದಿಂದ ಹೋದ ಏಕೈಕ ಮಾಜಿ ಪ್ರಧಾನಿ ದೇವೇಗೌಡರು. ರಾಜ್ಯದ ಮಂತ್ರಿ ಮಹನೀಯರು ನಾಡು, ನುಡಿ, ಜಲ ವಿಚಾರಗಳ ಸಮಸ್ಯೆಗಳು ಬಂದಾಗ ಹೆಚ್.ಡಿ. ದೇವೇಗೌಡರ ಮಾರ್ಗದರ್ಶನ ಪಡೆಯುತ್ತಾರೆ. ಜೀವನಪೂರ್ತಿ ರಾಜಕೀಯ ಹೋರಾಟ ಮಾಡಿದರೂ ವಿಶ್ರಾಂತಿ ಪಡೆಯದ ಈ ಜೀವ, ಇಳಿ ವಯಸ್ಸಿನಲ್ಲೂ ನಾಡಿನ ವಿಚಾರ ಬಂದಾಗ ಹೋರಾಟದ ಕೆಚ್ಚೆದೆ ಇದೆಯಲ್ಲಾ ಆ ಹೋರಾಟ ಯುವ ರಾಜಕಾರಣಿಗಳಿಗೆ ಮಾದರಿ. ಇಳಿ ವಯಸ್ಸಿನಲ್ಲಿ ಸಕ್ರಿಯವಾಗಿ ಜನರ ಮಧ್ಯೆ ಇದ್ದು ಜನಸೇವೆ ಮಾಡುತ್ತಿರುವ ರಾಜ್ಯದ ಹಿರಿಯ ರಾಜಕೀಯ ಮುತ್ಸದ್ದಿ ನಾಡಿನ ಮಣ್ಣಿನ ಮಗ ರೈತಾಪಿ ಕುಟುಂಬದ ಸಾಂಸ್ಕೃತಿಕ ನಾಯಕರಾದ ಹೆಚ್. ಡಿ. ದೇವೇಗೌಡರನ್ನು ಈ ಬಾರಿ ದಸರಾ ಮಹೋತ್ಸವ ಕಾರ್ಯಕ್ರಮ ಉದ್ಘಾಟನೆ ಮಾಡಲು ಆಹ್ವಾನಿಸಲು ಮನವಿ. **– ಕಂಗಾಣಿಸೋಮು ಪಿ ಸಿ, ಕ್ಯಾತಮಾರನಹಳ್ಳಿ, ಮೈಸೂರು**

ಓಲಾ ಆಟೋಗಳಿಗೂ ರೈಲ್ವೆ ನಿಲ್ದಾಣದಲ್ಲಿ ಅವಕಾಶ ಕಲ್ಪಿಸಿ

ಮಾನ್ಯರೆ,

ಕಳೆದ ವಾರ ಬೆಂಗಳೂರಿಂದ ಶತಾಬ್ದಿ ರೈಲಿಗೆ ಪತ್ನಿ ಸಮೇತ ಮೈಸೂರಿಗೆ ಬಂದೆ. ಕುವೆಂಪುನಗರಕ್ಕೆ ಹೋಗಬೇಕು ಅಂದೆ. ಸುಮಾರು ಆಟೋದವರು 100 ರಿಂದ 130 ರೂ. ಕೊಡಬೇಕೆಂದು ಕೇಳಿದರು. ಮೀಟರ್ ಹಾಕಿ ಸಾವಿರ ಆಗ್ಲಿ ಕೊಡ್ತೀನಿ ಅಂದ್ರೂ ಯಾರೂ ಒಪ್ಪಲಿಲ್ಲ. ಎಲ್ಲರೂ ಮೀಟರ್ ಕೆಟ್ಟು ಹೋಗಿದೆ ಅಂತ ಹೇಳಿದರು. ಓಲಾ ಉಬರ್ ಆಟೋಗಳನ್ನು ಬೇರೆ ಆಟೋದವರು ವೃತ್ತ ದಾಟಿ ಬರಲು ಬಿಡುತ್ತಿಲ್ವಂತೆ. ಹೀಗಾಗಿ ಜೀವಣ್ಣರಾಯನ ಕಟ್ಟೆವರೆಗೂ ಲಗೇಜ್ ಸಮೇತ ನಡೆಯುವ ಪ್ರಮೇಯ.

ಪೊಲೀಸ್ ಮುಖ್ಯಸ್ಥರು ನಗರದ ಎಲ್ಲಾ ಆಟೋಗಳ ಮೀಟರ್ ಅನ್ನು ಪರೀಕ್ಷೆಗೊಳಪಡಿಸಬೇಕು. ಅಲ್ಲದೇ ಓಲಾ ಉಬರ್ ಆಟೋಗಳು ನಿಲ್ದಾಣದ ಆವರಣಕ್ಕೆ ಬಂದು ಪ್ರಯಾಣಿಕರನ್ನು ಹತ್ತಿಸಿಕೊಳ್ಳಲು ಅವಕಾಶ ಕಲ್ಪಿಸಬೇಕು. ಓಲಾ ಉಬರ್ ಆಟೋ ದರಗಳಿಗೂ, ಉಳಿದ ಆಟೋದವರು ಕೇಳುವ ದರಕ್ಕೂ 20–30 ರೂ ವ್ಯತ್ಯಾಸವಿರುತ್ತದೆ. ಶೀಘ್ರ ಕ್ರಮ ಕೈಗೊಂಡು ವಯಸ್ಸಾದವರಿಗೆ, ಹೆಂಗಸರಿಗೆ ಲಗೇಜ್ ಇರುವವರಿಗೆ ಅನುಕೂಲ ಮಾಡಿಕೊಡಬೇಕು ಮನವಿ ಮಾಡುತ್ತೇನೆ.

–ಅಕ್ಕಿಹೆಬ್ಬಾಳು ವೆಂಕಟೇಶ್, ಮೈಸೂರು.

ಈ ರಸ್ತೆಯ ದುಃಸ್ಥಿತಿ ಕೇಳುವವರಿಲ್ಲವೇ?

ಮಾನ್ಯರೆ,

ವಾರ್ಡ್ ನಂ. 36, ಡಾ. ರಾಜಕುಮಾರ್ ರಸ್ತೆ, ಯರಗನಹಳ್ಳಿ ಹೊಸ ಬಡಾವಣೆ, 12ನೇ ಅಡ್ಡ ರಸ್ತೆಯು ಹದಗೆಟ್ಟಿದ್ದು, ಮಳೆ ನೀರು ಹರಿಯಲು ಮೋರಿಯು ಇಲ್ಲದೆ, ಬೀದಿ ದೀಪಗಳು ಇಲ್ಲದೆ ಜನರು ಕತ್ತಲೆಯಲ್ಲಿ ಪರದಾಡುವಂತಾಗಿದೆ. ಅಲ್ಲದೆ ಹಂದಿಗಳ ಹಾವಳಿಯಿಂದ ಬೇಸತ್ತಿದ್ದಾರೆ. ಸದರಿ ರಸ್ತೆಯ ಒಂದು ಬದಿಯಲ್ಲಿ ಮನೆಗಳಿದ್ದು, ಮತ್ತೊಂದು ಬದಿಯಲ್ಲಿರುವ ಸರ್ಕಾರಿ ಜಾಗವನ್ನು ಕಬಳಿಸಲು ಕಲ್ಲು ತಂತಿಬೇಲಿ ಸುತ್ತಿರುವ ವ್ಯಕ್ತಿಗಳು ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದಾರೆ. ಇನ್ನಾದರೂ ಸಂಬಂಧಪಟ್ಟ ಜನಪ್ರತಿನಿಧಿಗಳಾಗಲೀ ಅಥವಾ ಸರ್ಕಾರಿ ಅಧಿಕಾರಿಗಳಾಗಲೀ ಇತ್ತ ಗಮನಹರಿಸಿ ಸಮಸ್ಯೆ ಪರಿಹಾರಕ್ಕೆ ಶೀಘ್ರವಾಗಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ.

– ರಾಜುಗೌಡ, ಯರಗನಹಳ್ಳಿ ಹೊಸ ಬಡಾವಣೆ, ಮೈಸೂರು.

ಪ್ರಳಯ?

ಮಾನ್ಯರೆ,

ಈಗ ಜಗದ್ರಂಗ ಅಂತರಂಗ ಬಹಿರಂಗಗಳಲ್ಲಿ ಮುನ್ನಿನಂತೆ ಉಳಿದಿಲ್ಲ; ವಸುಂಧರೆಯ ಮುಖವೆ ಗುರುತು ಸಿಗದಂತೆ ಬದಲಾಗಿ ಹೋಗಿದೆ!

ಪರಿಸರ ಮಾಲಿನ್ಯ ಮತ್ತು ನಾಶ (ಸಾಲದ್ದಕ್ಕೆ 'ಬೆಳಕಿನ ಮಾಲಿನ್ಯ'), ಮೇಘ-ಜಲ ಸ್ಫೋಟ, ಮಳೆಯ ಘೋರಾರ್ಭಟ, ಮಹಾಪ್ರವಾಹ, ಕಾಳ್ಗಿಚ್ಚು, ಚಂಡಮಾರುತ, ವಾಸ್ತವ ಯುದ್ಧಗಳು ಮತ್ತು ಯುದ್ಧ ಸಾಧ್ಯತೆಯ ಕಾರ್ಮೋಡ, ಅಪೂರ್ವ ರೋಗ ರುಜಿನ–ಒಂದೇ ಎರಡೇ? (ಮಾನವಕೃತ ದುರಾಚಾರ ಪರಂಪರೆ ಬೇರೆ!) ಮಿನಿ–ಪ್ರಳಯವೆ ಜರುಗುತ್ತಿದೆ! ಸದ್ಯ ಸರ್ವ ಸಂಹಾರಕ ಮಹಾಪ್ರಳಯ ಘಟಿಸದಿರಲಿ ಎಂದು 'ಹಾ'ರೈಸೋಣ.

– ಸಿಪಿಕೆ, ಮೈಸೂರು.



ಪ್ರತಾಪ್ ಸಿಂಹ
ಸಂಸದ
ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ


ಪ್ರಸ್ತುತಿ

ಕಾಂಗ್ರೆಸ್ಸಿಗರ ಹೋರಾಟಕ್ಕೆ ಗದ್ದುಗೆ ಏರುವ ಗುರಿ ಇತ್ತು, ಆದರೆ ಸಾವರ್ಕರ್‌ಗೆ...?

“ ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಗಳಲ್ಲಿ ಈಗ 'ವೀರ್ ಸಾವರ್ಕರ್ ರಥಯಾತ್ರೆ' ಹಮ್ಮಿಕೊಳ್ಳಲಾಗಿದೆ. ಸ್ವಾತಂತ್ರ್ಯ ಸೇನಾನಿಯೂ ಆದ ವೀರ್ ಸಾವರ್ಕರ್ ಅವರ ಜೀವನ, ಹೋರಾಟ, ಸ್ವಾತಂತ್ರ್ಯ ಹೋರಾಟದಲ್ಲಿನ ಅವರ ತ್ಯಾಗ-ಬಲಿದಾನ ಕುರಿತಾದ ಸಂದೇಶ ಸಾರುವುದು ಯಾತ್ರೆಯ ಉದ್ದೇಶವಾಗಿದೆ. ಈ ಸಂದರ್ಭದಲ್ಲಿ ವೀರ್ ಸಾವರ್ಕರ್ ಅವರ ಅಪ್ರತಿಮ ವ್ಯಕ್ತಿತ್ವವನ್ನು ಪರಿಚಯಿಸುವ ಈ ವಿಶೇಷ ಲೇಖನ ನಮ್ಮ ಓದುಗರಿಗಾಗಿ....

ಆ ವೀರ ಕಲಿಯನ್ನು ನೆನಪಿಸಿಕೊಂಡಾಗಲೆಲ್ಲ ದಿವಂಗತ ವಿದ್ಯಾನಂದ ಶೆಣೈ ಕಣ್ಣಮುಂದೆ ಬರುತ್ತಾರೆ. ಅವರು ಮಾಡಿದ್ದ ಭಾಷಣದ ಝೇಂಕಾರ ಕಿವಿಯಲ್ಲಿ ಇನ್ನೂ ಹಸಿಯಾಗಿಯೇ ಇದೆ.

ಅವತ್ತು ಛಾಫೇಕರ್ ಸಹೋದರರು ಬ್ರಿಟಿಷ್ ಅಧಿಕಾರಿ ರಾಂಡ್‌ನನ್ನು ಹತ್ಯೆ ಮಾಡಿದರು. ಅದು ಬ್ರಿಟಿಷರಿಗೆ ತಿಳಿದುಹೋಯಿತು. ಬಂಧಿಸಿ ವಿಚಾರಣೆಗೆ ಗುರಿಪಡಿಸಿದ ಬ್ರಿಟಿಷರು ಛಾಫೇಕರ್ ಸಹೋದರರ ಮೇಲೆ 'ಕೊಲೆ' ಆರೋಪ ಹೊರಿಸಿದರು. ಕೊನೆಗೆ ಗಲ್ಲಿಗೂ ಏರಿಸಿದರು. ಇದನ್ನೆಲ್ಲಾ ನೋಡಿದ 14 ವರ್ಷದ ಬಾಲಕ ವಿನಾಯಕ ದಾಮೋದರ ಸಾವರ್ಕರ್ ಮನಸ್ಸಿಗೆ ಬಹಳ ನೋವಾಗುತ್ತದೆ. ಮನೆಗೆ ಓಡೋಡಿ ಬಂದ ಆತ ದೇವರ ಕೋಣೆಯ ಬಾಗಿಲು ತೆರೆದು ದೇವಿಯ ಮುಂದೆ ಕುಳಿತು ಕೇಳುತ್ತಾನೆ. “ಅಮ್ಮಾ'. ಛಾಫೇಕರ್ ಸಹೋದರರು ಮಾಡಿದ್ದು 'ಕೊಲೆ'ಯೋ, 'ಸಂಹಾರ'ವೋ...? ನಾವು ಸಾಮಾನ್ಯವಾಗಿ 'ದುರುಳರ ಸಂಹಾರ' ಎನ್ನುತ್ತೇವೆ. ಪುಣೆಗೆ ಪ್ಲೇಗ್ ಬಡಿದಾಗ ಉಸ್ತುವಾರಿ ವಹಿಸಿ ಬಂದ ರಾಂಡ್ ಮಾಡಿದ್ದೇನು? ಪ್ಲೇಗ್ ಪೀಡಿತರನ್ನು ಪತ್ತೆ ಹಚ್ಚುವ ಸಲುವಾಗಿ ಜನರನ್ನು ಬೀದಿಗೆಳೆದ. ಮಹಿಳೆಯರು ಮನೆ ಮುಂದೆ ಅರೆಬೆತ್ತಲಾಗಿ ನಿಲ್ಲುವಂತೆ ತಾಕೀತು ಮಾಡಿದ. ಆಗ ಕೆಲ ಮಹಿಳೆಯರ ಮೇಲೆ ಅತ್ಯಾಚಾರ ಕೂಡ ನಡೆಯಿತು. ಅಂತಹ ಪ್ರಜಾಪೀಡಕ ರಾಂಡ್‌ನನ್ನು ಕೊಂದರೆ ಅದು ಹೇಗೆ ಕೊಲೆಯಾಗುತ್ತದೆ? ಅದು ದುಷ್ಟ ಸಂಹಾರವಲ್ಲವೆ ದೇವಿ?”



ಒಂದು ಕಡೆ ವಿದ್ಯಾನಂದ ಶೆಣೈ ಅವರ ಭಾಷಣ ನಮ್ಮನ್ನು ಮಂತ್ರಮುಗ್ಧಗೊಳಿಸುತ್ತಿದ್ದರೆ ಮತ್ತೊಂದೆಡೆ ಸಾವರ್ಕರರು ಮನವನ್ನೆಲ್ಲ ಆವರಿಸಿಬಿಡುತ್ತಾರೆ. ವಿನಾಯಕ ದಾಮೋದರ ಸಾವರ್ಕರ್ ಎಂಬ ವ್ಯಕ್ತಿತ್ವವೇ ಅಂಥದ್ದು. ಅವರ ಪ್ರಭಾವಕ್ಕೆ ಒಳಗಾಗದವರು ಯಾರಿದ್ದಾರೆ?

ಇಂಡಿಯಾ ಹೌಸ್

ಆ ಕಾಲದಲ್ಲಿ ಉನ್ನತ ವ್ಯಾಸಂಗಕ್ಕೆಂದು ಬ್ರಿಟನ್‌ಗೆ ತೆರಳಿದ ಭಾರತೀಯ ವಿದ್ಯಾರ್ಥಿಗಳೆಲ್ಲ ತಂಗುತ್ತಿದ್ದುದೇ ಅಲ್ಲಿ. ಪುಣೆಯ ಫರ್ಗೂಸನ್ ಕಾಲೇಜಿನಲ್ಲಿ ಬಿಎ ಪದವಿ ಪೂರೈಸಿ ಲಾ ಓದಲು ಬ್ರಿಟನ್ನಿನ ಪ್ರತಿಷ್ಠಿತ Gray's Inn ಕಾಲೇಜಿಗೆ ಸೇರಿದಾಗ ಸಾವರ್ಕರ್ ಕೂಡ ಆಶ್ರಯ ಪಡೆದು ಕೊಂಡಿದ್ದು ಅದೇ ಇಂಡಿಯಾ ಹೌಸ್‌ನಲ್ಲಿ. ಅವರು ಕಾನೂನು ಪದವಿ ಕಲಿಯುವುದಕ್ಕೆಂದು ಬಂದಿದ್ದರೂ ಅದು ನೆಪಮಾತ್ರವಾಗಿತ್ತು. ಅಪ್ಪಟ ದೇಶಪ್ರೇಮಿ ಯಾದ ಅವರಿಗೆ ಬ್ರಿಟಿಷರಿಂದ ಪದವಿ ಪಡೆದುಕೊಳ್ಳುವುದ ಕ್ಕಿಂತ ಸ್ವಾತಂತ್ರ್ಯ ಗಳಿಸಿಕೊಳ್ಳು ವುದು ಮುಖ್ಯವಾಗಿತ್ತು. ಇಂಡಿಯಾ ಹೌಸ್‌ನಲ್ಲೇ ವಿದ್ಯಾರ್ಥಿಗಳನ್ನು ಕಲೆಹಾಕಿ ದಾಸ್ಯದಿಂದ ಬಳಲುತ್ತಿರುವ ದೇಶದ ಪರಿಸ್ಥಿತಿಯನ್ನು ವಿವರಿಸತೊಡಗಿದರು. ಅದು ನಿತ್ಯ ಕಾಯಕವಾಯಿತು. ಸಮ್ಮೋಹನಗೊಳಿಸುವಂಥ ಅವರ ಭಾಷಣವನ್ನು ಕೇಳಲು ಬರುವವರ ಸಂಖ್ಯೆಯೂ ಹೆಚ್ಚಾಗ ತೊಡಗಿತು. ಅದೊಂದು ದಿನ ಲಂಡನ್ನಿನಲ್ಲಿ ಅಲೆಯು ತ್ತಿದ್ದ ಶೋಕಿಲಾಲನೊಬ್ಬ ತನ್ನ ಮಾರ್ಗ ಮಧ್ಯದಲ್ಲಿ ಕಂಡ ಇಂಡಿಯಾ ಹೌಸ್‌ಗೆ ಆಗಮಿಸಿದ. ಅದೇ ವೇಳೆಗೆ ಸಾವರ್ಕರ್ ಭಾಷಣ ನಡೆಯುತಿತ್ತು. ಅವರು ತಾಯ್ನಾಡಿನ ಪರಿಸ್ಥಿತಿಯನ್ನು ವಿವರಿಸುತ್ತಿದ್ದರೆ ದೇಶಕ್ಕೆ ಎದುರಾಗಿರುವ ಹೀನಾತಿ ಹೀನ ಸ್ಥಿತಿಯನ್ನು ಕೇಳಿ ಆ ಶೋಕಿಲಾಲನ ರಕ್ತ ಕುದಿಯ ತೊಡಗಿತು. ಆ ದಿನದಿಂದ ಶೋಕಿಲಾಲ ಕೂಡ ಇಂಡಿಯಾ ಹೌಸ್‌ಗೆ ಖಾಯಂ ಬರಲಾರಂಭಿಸಿದ. ವಿನಾಯಕ ದಾಮೋದರ ಸಾವರ್ಕರ್ ಅವನನ್ನು ಆವಾಹನೆ ಮಾಡಿಬಿಟ್ಟರು. ಆತ ಅವರ ಭಕ್ತನಾಗಿಬಿಟ್ಟ ಆ ಶೋಕಿಲಾಲ ಮತ್ತಾರೂ ಅಲ್ಲ, ಮದನ್ ಲಾಲ್ ಧೀಂಗ್ರಾ!

1908ರಲ್ಲಿ ಸಾವರ್ಕರ್ ಲಂಡನ್‌ನಲ್ಲೊಂದು ಕಾರ್ಯಕ್ರಮವನ್ನು ಆಯೋಜಿಸಿದರು. ಅದು 1857ರಲ್ಲಿ ನಡೆದಿದ್ದ ಮೊದಲ ಭಾರತ ಸ್ವಾತಂತ್ರ್ಯ ಸಂಗ್ರಾಮದ ವಾರ್ಷಿಕ ದಿನ ಸ್ಮರಣೆಯಾಗಿತ್ತು. ಬಹುತೇಕ ಭಾರತೀಯ ವಿದ್ಯಾರ್ಥಿಗಳು ಆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸಾವರ್ಕರ್ ಭಾಷಣ ಅವರನ್ನು ಅದೆಷ್ಟು ಪ್ರಭಾವಿತಗೊಳಿಸಿತ್ತೆಂದರೆ ತಮ್ಮ ಕೋಟಿನ ಮೇಲೆ '1857ರ ಸ್ಮರಣೆ' ಎಂದು ಬರೆದಿರುವ ಬ್ಯಾಡ್ಜ್ ಹಾಕಿಕೊಂಡು ತಮ್ಮ ತಮ್ಮ ತರಗತಿಗಳಿಗೆ ಹೋಗಿದ್ದರು. ಬ್ರಿಟಿಷ್ ಅಧಿಪತ್ಯದ ಬಗ್ಗೆ ಅತಿಯಾದ ಹೆಮ್ಮೆ ಇಟ್ಟು ಕೊಂಡಿದ್ದ ಇಂಗ್ಲಿಷರಿಗೆ ಇದನ್ನು ಸಹಿಸಲಾಗಲಿಲ್ಲ. ಬ್ರಿಟನ್ನಿನಲ್ಲೇ ಬ್ರಿಟಿಷ್ ಚಕ್ರಾಧಿಪತ್ಯಕ್ಕೆ ಸಡ್ಡು ಹೊಡೆಯುವುದೇನು ಸಾಮಾನ್ಯ ಮಾತೆ? ಇದು ಇಂಗ್ಲಿಷರನ್ನು ಕುಪಿತಗೊಳಿಸಿತು. ಬಹಳ ಚಂದವಾಗಿ ಧಿರಿಸು ಮಾಡಿಕೊಂಡು, ಅದರ ಮೇಲೆ ಬ್ಯಾಡ್ಜ್ ಅಂಟಿಸಿಕೊಂಡು ಹೋಗು ತ್ತಿದ್ದ ಧೀಂಗ್ರಾನತ್ತ ಧಾವಿಸಿದ ಇಂಗ್ಲಿಷನೊಬ್ಬ ಬ್ಯಾಡ್ಜನ್ನು ಕಿತ್ತೊಗೆಯಲು ಕೈಚಾಚಿದ. ಅಷ್ಟರಲ್ಲಿ ಅವನ ಕೈ ತಡೆದು ಕಪಾಳಮೋಕ್ಷ ಮಾಡಿದ ಧೀಂಗ್ರಾ, ಆತನನ್ನು ನೆಲಕ್ಕುರುಳಿಸಿ ಎದೆ ಮೇಲೆ ಕುಳಿತು, “ನನ್ನ ದೇಶದ ಚಿಹ್ನೆ ಮೇಲೆ ಕೈಹಾಕಿದರೆ ಜೋಕೆ” ಎಂದು ಧಮ್ಕಿ ಹಾಕಿದ. ಭಾರತೀಯ ವಿದ್ಯಾರ್ಥಿಗಳಲ್ಲಿ ಅಂತಹ ತೀವ್ರ ದೇಶಪ್ರೇಮವನ್ನು ತುಂಬಿದ್ದರು ಸಾವರ್ಕರ್. ಮದನ್ ಲಾಲ್ ಧೀಂಗ್ರಾ 1909ರಲ್ಲಿ ಕರ್ಝನ್ ವೇಯ್ಲಿಯನ್ನು ಕೊಂದು ಹಾಕಿದ್ದು ಸಾವರ್ಕರ್ ಆದೇಶದಂತೆಯೇ. ಆತ ವಿದೇಶದಲ್ಲಿ ನೇಣಿಗೇರಿದ ಮೊದಲ ಭಾರತೀಯ ಕ್ರಾಂತಿಕಾರಿ. ಸಾವರ್ಕರ್ ಅಂದರೆ ಒಂದು ಪ್ರೇರಕ ಶಕ್ತಿಯಾಗಿತ್ತು. ಗೆರಿಲ್ಲಾ ಯುದ್ಧದ ಮೂಲಕ ಬ್ರಿಟಿಷರನ್ನು ಹೊಡೆದೋಡಿಸಬೇಕು ಎನ್ನುತ್ತಿದ್ದರು. ಅಭಿನವ ಭಾರತ, ಫ್ರೀ ಇಂಡಿಯಾ ಸೊಸೈಟಿಗಳನ್ನು ಸ್ಥಾಪಿಸಿದ್ದ ಸಾವರ್ಕರ್ ಒಬ್ಬ ಮಹಾನ್ ಚಿಂತಕ ಕೂಡ ಹೌದು. 1857ರಲ್ಲಿ ನಡೆದಿದ್ದ ಕ್ರಾಂತಿಯನ್ನು ಬ್ರಿಟಿಷರು 'ಸಿಪಾಯಿ ದಂಗೆ' ಎಂದು ಕರೆಯುತ್ತಿದ್ದರು. ಉಳಿದವರೂ ಹಾಗೆಂದೇ ಭಾವಿಸಿದ್ದರು. ಅದು ಸಿಪಾಯಿ ದಂಗೆಯಲ್ಲ, 'ಪ್ರಥಮ ಸ್ವಾತಂತ್ರ್ಯ ಸಂಗ್ರಾಮ' ಎಂದು ಮೊದಲು ಹೇಳಿದ್ದೇ ಸಾವರ್ಕರ್. The Indian War Of Independence ಎಂಬ ಪುಸ್ತಕವನ್ನೇ ಬರೆದರು. ಆ ಪುಸ್ತಕ ಬ್ರಿಟಿಷರನ್ನು ಯಾವ ರೀತಿ ಭೀತಿಗೊಳಿಸಿ ತೆಂದರೆ ಅದರ ಮಾರಾಟವನ್ನೇ ನಿಷೇಧ ಮಾಡಿದರು.

ಇಂತಹ ಸಾವರ್ಕರ್ ಅವರನ್ನು ಬ್ರಿಟನ್ ಆಡಳಿತ 1910ರಲ್ಲಿ ಇಂಡಿಯಾ ಹೌಸ್‌ನಲ್ಲೇ ಬಂಧಿಸಿತು.

ಅವರ ಬಗ್ಗೆ, ಅವರ ಚಟುವಟಿಕೆಯ ಬಗ್ಗೆ ಬ್ರಿಟಿಷರಿಗೆ ಎಂತಹ ಭಯವಿತ್ತೆಂದರೆ ಎರಡು ಜೀವಾವಧಿ ಶಿಕ್ಷೆ(50 ವರ್ಷ) ವಿಧಿಸಿ ಅಂಡಮಾನ್ ಜೈಲಿಗೆ ದಬ್ಬಿತು. ಸಾವರ್ಕರ್ ಅಲ್ಲೂ ಸುಮ್ಮನೆ ಕುಳಿತುಕೊಳ್ಳಲಿಲ್ಲ. ಧರ್ಮದ ಆಧಾರದ ಮೇಲೆ ದೇಶ ಒಡೆಯಲು ಹೊರಟ ಮುಸ್ಲಿಮರನ್ನು ಮಟ್ಟ ಹಾಕುವ ಸಲುವಾಗಿ ಭಾರತವನ್ನು ಹಿಂದುರಾಷ್ಟ್ರವನ್ನಾಗಿ ಮಾಡಬೇಕೆಂದು ಸಾರ್ವಜನಿಕವಾಗಿ ಪ್ರತಿಪಾದಿಸಿದರು. ಹಿಂದು ರಾಷ್ಟ್ರವಾದವನ್ನು ಪ್ರತಿಪಾದಿಸಿ ಜೈಲಿನಲ್ಲೇ 'Hindutva: Who is a hindu' ಎಂಬ ಪುಸ್ತಕ ಬರೆದರು. ಹಿಂದುಯಿಸಂ, ಜೈನಿಸಂ, ಬುದ್ಧಿಸಂ ಹಾಗೂ ಸಿಖ್ಖಿಸಂ ಇವೆಲ್ಲವೂ ಒಂದೇ ಎಂದು ಮೊದಲು ಪ್ರತಿಪಾದಿಸಿದ್ದು, 'ಅಖಂಡ ಭಾರತ'ದ ಕಲ್ಪನೆಯನ್ನು ಮೊದಲು ಕೊಟ್ಟಿದ್ದೂ ಇವರೇ.

1921ರಲ್ಲಿ ಷರತ್ತಿನ ಆಧಾರದ ಮೇಲೆ ಬಿಡುಗಡೆಯಾದ ಸಾವರ್ಕರ್, ಹಿಂದು ಮಹಾಸಭಾದ ಅಧ್ಯಕ್ಷರಾಗಿ ಸ್ವಧರ್ಮೀಯರನ್ನು ಒಗ್ಗೂಡಿಸಲು ಹೊರಟರು. ಕಾಂಗ್ರೆಸ್ ಮಾಡುತ್ತಿದ್ದ ಅಲ್ಪಸಂಖ್ಯಾತರ ಓಲೈಕೆ ಹಾಗೂ ವಿಭಜನಾವಾದಿ ಮನಸ್ಥಿತಿಯನ್ನು ಸಾವರ್ಕರ್ ಬಹಳ ಕಟುವಾಗಿ ವಿರೋಧಿಸಿದರು.

ನೀವು ಬಂದರೆ ನಿಮ್ಮ ಜತೆ
ಬರದಿದ್ದರೆ ನಿಮ್ಮನ್ನು ಬಿಟ್ಟು
ಅಡ್ಡವಾದರೆ ಮೊದಲು ನಿಮ್ಮನ್ನೇ ಮೆಟ್ಟಿ
ಸ್ವಾತಂತ್ರ್ಯ ಗಳಿಸುತ್ತೇವೆ...

ಎಂದು ಎಚ್ಚರಿಕೆಯನ್ನೇ ನೀಡಿದ್ದರು. ಅವರನ್ನು ನೀವು ಒಪ್ಪಿ–ಬಿಡಿ, ಆದರೆ ತಾವು ನಂಬಿದ್ದ ಸಿದ್ಧಾಂತಗಳಿಗೆ ಅವರು ನಿಷ್ಠರಾಗಿದ್ದರು. ಬಹುತೇಕ ಟೋಪಿಧಾರಿ ಕಾಂಗ್ರೆಸ್ಸಿಗರ ಸ್ವಾತಂತ್ರ್ಯ ಹೋರಾಟಕ್ಕೆ ರಾಜಕೀಯ ಅಧಿಕಾರದ ಗುರಿಯಿತ್ತು. ಆದರೆ ಸಾವರ್ಕರ್ ಅವರಿಗೆ ರಾಜಕೀಯ ಮಹತ್ವಾಕಾಂಕ್ಷೆ ಎಂದೂ ಇರಲಿಲ್ಲ. ಅವರಿಗಿದ್ದ ಜನಪ್ರಿಯತೆಯ ಅಲೆಯಲ್ಲಿ ಚುನಾವಣೆಯಲ್ಲಿ ಆರಿಸಿ ಬರಬಹುದಿತ್ತು. ಸಾವರ್ಕರ್ ಗುರಿ ಈ ದೇಶದ ಸ್ವಾತಂತ್ರ್ಯ, ಈ ನೆಲದ ನಂಬಿಕೆ, ಸಂಸ್ಕೃತಿಯ ರಕ್ಷಣೆಯಷ್ಟೇ ಆಗಿತ್ತು.

ಅಂಥ ಅಪ್ರತಿಮ ವ್ಯಕ್ತಿಗೆ ಮಣಿಶಂಕರ್ ಅಯ್ಯರ್ ಮತ್ತು ಸಿದ್ದರಾಮಯ್ಯನವರಂಥ ಅನುಕೂಲ ವಾದಿಗಳ ಸರ್ಟಿಫಿಕೇಟ್ ಬೇಕಾ, ನೀವೇ ಹೇಳಿ?

ಅಪ್ಪಟ ರೈತ ಹೋರಾಟಗಾರ ಎನ್.ಡಿ.ಸುಂದರೇಶ್

1958ರ ದಶಕದ ಕಾಲ ಘಟ್ಟವದು. ಬೆಂಗಳೂರಿನ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದ ಮಲೆನಾಡಿನ ವಿದ್ಯಾರ್ಥಿಗಳಿಗಾಗಿಯೇ ಬೆಂಗಳೂರಿನಲ್ಲಿ “ಮಲೆನಾಡ ಮೆಸ್” ಇತ್ತು. ಮಲೆನಾಡಿನ ಅನುಕೂಲಸ್ಥ ಮನೆತನದ ಮಗನೊಬ್ಬ ಇದರ ಪರ್ಮನೆಂಟ್ ಕಸ್ಟಮರ್ ಆಗಿದ್ದ. ಒಂದು ಹಿಂಡು ಸ್ನೇಹ ಬಳಗ ಹೊಂದಿದ್ದ ಆತನ ಅಡ್ಡ ಕೂಡ ಇದೇ ಮಲೆನಾಡ ಮೆಸ್ ಆಗಿತ್ತು. ಆತನ ಸ್ನೇಹ ಬಳಗದಲ್ಲಿ ಒಬ್ಬರಾಗಿ ಆತ್ಮೀಯರಾಗಿದ್ದ ಕೋಣಂದೂರು ಲಿಂಗಪ್ಪನವರು ಒಂದು ದಿನ ಕರ್ನಾಟಕದ ಮೊಟ್ಟಮೊದಲ ಸಮಾಜವಾದಿ ನಾಯಕರೆನಿಸಿದ್ದ ಶಾಂತವೇರಿ ಗೋಪಾಲಗೌಡರನ್ನು ಕರೆದುಕೊಂಡು ಆತನನ್ನು ಕಾಣಲು ಮಲೆನಾಡ ಮೆಸ್‌ಗೆ ಬಂದಿದ್ದರು. ಆಗ ಶಾಂತವೇರಿ ಗೋಪಾಲಗೌಡರು ಶಾಸಕರಾಗಿರಲಿಲ್ಲ. ಚುನಾವಣೆಯಲ್ಲಿ ಸೋತು ಚಿಕ್ಕ ಲಾಲ್‌ಬಾಗ್‌ನಲ್ಲಿದ್ದ ಅವರ ಸಣ್ಣ ಕಚೇರಿಯಲ್ಲೇ ನೆಲೆಸಿದ್ದರು. ಆ ದಿನ ಅವರು ಬಂದಿದ್ದ ಮುಖ್ಯ ಉದ್ದೇಶ; ಬೆಂಗಳೂರಿನಿಂದ ಶಿವಮೊಗ್ಗಕ್ಕೆ ಬಸ್ಸಿನಲ್ಲಿ ಪ್ರಯಾಣಿಸಲು ಶಾಂತವೇರಿ ಗೋಪಾಲಗೌಡರ ತಂಡಕ್ಕೆ ಹಣದ ಕೊರತೆ ಇತ್ತು. ಅದಕ್ಕಾಗಿ ಅವರು ಆತನಲ್ಲಿಗೆ ಬಂದಿದ್ದರು. ಅವರನ್ನು ನೋಡಿ ತುಂಬಾ ಸಂತಸಗೊಂಡ ಆತ ಅದೇ ಮಲೆನಾಡ ಮೆಸ್‌ನಲ್ಲಿ ಅವರಿಗೆ ಊಟೋಪಚಾರದ ವ್ಯವಸ್ಥೆ ಮಾಡಿ, ಗೆಳೆಯ ಕೋಣಂದೂರು ಲಿಂಗಪ್ಪ ಅವರಿಂದ ವಿಷಯ ತಿಳಿದು ಶಾಂತವೇರಿ ಗೋಪಾಲಗೌಡರಿಗೆ ಬೇಕಿದ್ದಕ್ಕಿಂತಲೂ ಸ್ವಲ್ಪ ಹೆಚ್ಚಿನ ಹಣವನ್ನೇ ಕೊಟ್ಟು ಗೌರವ ಪೂರ್ವಕವಾಗಿ ಅವರನ್ನು ಬೀಳ್ಕೊಟ್ಟ. ಅಪ್ಪಿತಪ್ಪಿಯೂ ತಾನು ಹಣ ಕೊಟ್ಟ ವಿಷಯವನ್ನು ಯಾರಿಗೂ ತಿಳಿಯದಂತೆ ಗೌಪ್ಯಗೊಳಿಸಿದ.

ಹೀಗೆ ವಿದ್ಯಾರ್ಥಿ ದೆಸೆಯಲ್ಲಿಯೇ ಮಾನವೀಯ ಉದಾತ್ತ ಧ್ಯೇಯಗಳ ಮೈಗೂಡಿಸಿಕೊಂಡಿದ್ದವರು ರೈತ ಪರ ಹೋರಾಟಗಾರ ಎನ್.ಡಿ. ಸುಂದರೇಶ್.

ಅಂದ ಹಾಗೆ “ರೈತ ಸಹ್ಯಾದ್ರಿ” ಎಂಬುದು ಸುಂದರೇಶ್ ಅವರ ಬಹು ಮೌಲ್ಯಯುತವಾದ ಸಂಸ್ಮರಣ ಗ್ರಂಥದ ಸುಂದರ ಶೀರ್ಷಿಕೆ. ಅವರ ಧರ್ಮಪತ್ನಿ ಶೋಭಾ ಸುಂದರೇಶ್ ಅವರು ಖ್ಯಾತ ಸಾಹಿತಿ ಪ್ರೊ.ಹಿ.ಶಿ.ರಾಮಚಂದ್ರೇಗೌಡರೊಡಗೂಡಿ ಸಂಪಾದಿಸಿರುವ ಬಹು ಮೌಲಿಕ ಗ್ರಂಥವಿದು. ಇದರಲ್ಲಿ ನಾಡಿನ ಖ್ಯಾತನಾಮರಾದ ಚೆನ್ನವೀರ ಕಣವಿ, ಪ್ರಭುಶಂಕರ, ಚಂದ್ರಶೇಖರ ಪಾಟೀಲ, ಎಚ್.ಎಸ್. ದೊರೆಸ್ವಾಮಿ, ರವಿವರ್ಮ ಕುಮಾರ್, ಬಾಬಾಗೌಡ ಪಾಟೀಲ, ಎ.ಜೆ. ಸದಾಶಿವ, ಶಿವಮೊಗ್ಗ ಸುಬ್ಬಣ್ಣ, ಡಿ.ಎಸ್.ನಾಗಭೂಷಣ, ಜಾಣಗೆರೆ ವೆಂಕಟರಾಮಯ್ಯ ಮುಂತಾದವರು ಸೇರಿದಂತೆ ಸುಮಾರು 60 ಮಂದಿ ಲೇಖಕರ ಮೌಲಿಕ ಬರಹಗಳುಂಟು.



ರೈತರಿಗಾಗಿ, ರೈತರಿಗೋಸ್ಕರ ತಮ್ಮಿಡೀ ಜೀವ-ಜೀವನವನ್ನು ಸಮರ್ಪಿಸಿಕೊಂಡಿದ್ದವರು ರೈತನಾಯಕ ಎನ್.ಡಿ.ಸುಂದರೇಶ್.

ಈ ಕ್ಷಣಕ್ಕೂ ರೈತ ಚಳುವಳಿಯೆಂದರೆ, ರೈತ ಹೋರಾಟವೆಂದರೆ, ರೈತ ಸಂಘವೆಂದರೆ ಬಹು ಮುಖ್ಯವಾಗಿ ಮೂರು ಹೆಸರುಗಳು ಕರ್ನಾಟಕದ ಜನಮಾನಸದಲ್ಲಿ ಎದ್ದು ಕಾಣುತ್ತವೆ **ಎನ್.ಡಿ.ಸುಂದರೇಶ್,** ಮತ್ತೊಂದು **ಎಚ್.ಎಸ್.ರುದ್ರಪ್ಪ,** ಇನ್ನೊಂದು **ಪ್ರೊ.ಎಂ.ಡಿ.ನಂಜುಂಡಸ್ವಾಮಿ.** ಒಂದು ರೀತಿ ಇವರು ರೈತ ಚಳುವಳಿಯ ಮಹಾ ಮಾರ್ಗದಲ್ಲಿ ಬ್ರಹ್ಮ, ವಿಷ್ಣು, ಮಹೇಶ್ವರರು. ಇವರ್‍ಯಾರು ಇಂದು ಭೌತಿಕವಾಗಿ ನಮ್ಮೊಡನೆ ಇಲ್ಲ. ಆದರೆ ಈ ಮೂವರು ಮಹನೀಯರ ಧೀಶಕ್ತಿಯ ಸಂಘಟಿತ ಪ್ರಯತ್ನದಿಂದ ರೈತರ ಉಸಿರಾಗಿ ಎಂಬತ್ತರ ದಶಕದಲ್ಲಿ ಉದಯಿಸಿದ ಕರ್ನಾಟಕ ರಾಜ್ಯ ರೈತ ಸಂಘದ ಅಭೂತಪೂರ್ವ ಸಾಧನೆಗಳು ಇವತ್ತಿಗೂ ಇತಿಹಾಸವಾಗಿ ನಾಡಿನಲ್ಲಿ ಉಳಿದಿವೆ.

ರೈತ ಸಂಘವೆಂದರೆ ಸಾಕು ಅಧಿಕಾರಿಗಳು, ಅಧಿಕಾರಸ್ಥರು ಎಲ್ಲಕ್ಕಿಂತ ಹೆಚ್ಚಾಗಿ ಭ್ರಷ್ಟ ರಾಜಕಾರಣಿಗಳು ತರತರನೆ ನಡುಗುತ್ತಿದ್ದರು. ಸುಂದರೇಶ್, ನಂಜುಂಡಸ್ವಾಮಿ, ರುದ್ರಪ್ಪನವರ ಸಾರಥ್ಯದಲ್ಲಿ ರೈತ ಸಂಘ ಚಳುವಳಿಗಿಳಿದರೆ ಇಡೀ ಕರ್ನಾಟಕ ಒಮ್ಮೆಗೇ ರೈತ ಧ್ವನಿಯಾಗಿ ಎದ್ದೇಳುತ್ತಿತ್ತು. ರೈತ ಸಂಘ ಎಷ್ಟರ ಮಟ್ಟಿಗೆ ಪ್ರಬಲವಾಗಿತ್ತೆಂದರೆ ಒಂದು ಸರ್ಕಾರವನ್ನೇ ಕಿತ್ತೊಗೆಯುವಷ್ಟು ಶಕ್ತಿಶಾಲಿ ಆಗಿತ್ತು. ಮಿತಿಮೀರಿದ ಭ್ರಷ್ಟಾಚಾರ, ಎಗ್ಗಿಲ್ಲದ ಅವ್ಯವಹಾರ, ದುರಾಡಳಿತ, ರೈತ ವಿರೋಧಿ ಧೋರಣೆ, ರೈತ ಚಳುವಳಿಯ ಕಾಲದಲ್ಲಿ ಅಮೂಲ್ಯ ರೈತರ ಸಾವಿಗೆ ಕಾರಣವಾಗಿದ್ದ ಗುಂಡೂರಾಯರ ಸರ್ಕಾರವನ್ನು 1983ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಇದೇ ರೈತ ಸಂಘ ತನ್ನ ಹೋರಾಟದ ಅಸ್ತ್ರದಿಂದ ಮಖಾಡೆ ಮಲಗಿಸಿತ್ತು. ನಂತರ 1983ರಲ್ಲಿ ಜನತಾ ಪಕ್ಷ ಅಧಿಕಾರಕ್ಕೆ ಬಂದಿತ್ತು. ಮೊಟ್ಟ ಮೊದಲ ಕಾಂಗ್ರೆಸ್ಸೇತರ ಸರ್ಕಾರದ ಮುಖ್ಯಮಂತ್ರಿಯಾಗಿ ರಾಮಕೃಷ್ಣ ಹೆಗಡೆ ಗದ್ದುಗೆ ಏರಿದ್ದರು. ರೈತ ಶಕ್ತಿ ಏನೆಂದು ಅವತ್ತು ಇಡೀ ನಾಡಿಗೆ ಜಗಜ್ಜಾಹೀರಾಗಿತ್ತು. ಈ ರೈತ ಶಕ್ತಿಯ ಹಿಂದಿನ ಧೀಶಕ್ತಿ ಸುಂದರೇಶರೇ ಆಗಿದ್ದರು. ರಾಮಕೃಷ್ಣ ಹೆಗಡೆ ಸರ್ಕಾರ ಸಹ ರೈತ ವಿರೋಧಿ ನೀತಿಗಳನ್ನೇ ಜಾರಿಗೊಳಿಸಿ, ರೈತರ ಬೆನ್ನಿಗೆ ಚೂರಿ ಹಾಕಿತು. ಆ ಸಂದರ್ಭದಲ್ಲಿ ಸುಂದರೇಶ್ ಅವರು ತೀವ್ರವಾಗಿ ನೊಂದರು. ತಾವೇ ಅಧಿಕಾರಕ್ಕೆ ತಂದ ಸರ್ಕಾರ ತಮ್ಮ ವಿರುದ್ಧ ಅರ್ಥಾತ್ ರೈತರ ವಿರುದ್ಧ ತಿರುಗಿ ಬಿದ್ದಿದ್ದನ್ನು ಕಂಡು ಕೆರಳಿ ಕೆಂಡವಾಗಿದ್ದ ಸುಂದರೇಶ್ ಅವರು ರಾಮಕೃಷ್ಣ ಹೆಗಡೆ ಸರ್ಕಾರದ ವಿರುದ್ಧ ವಿಧಾನಸೌಧ ಮುತ್ತಿಗೆ ಚಳವಳಿ ನಡೆಸಿದ್ದರು.ಈ ಹೋರಾಟದಲ್ಲಿ ರಾಜ್ಯದ ವಿವಿಧ ಕಡೆಗಳಿಂದ ಬಂದಿದ್ದ ಲಕ್ಷಾಂತರ ಮಂದಿ ರೈತರ ಪೈಕಿ ಸುಮಾರು 50 ಸಾವಿರಕ್ಕೂ ಹೆಚ್ಚು ರೈತರು ಜೈಲು ಸೇರಿದ್ದರು.ಆ ದಿನಗಳಲ್ಲಿ ಇದೊಂದು ದಾಖಲೆಯ ಹೋರಾಟವಾಗಿತ್ತು.ಇಂತಹ ದಾಖಲೆಗೆ ಸುಂದರೇಶರು ಕ್ರಿಯಾಶೀಲ ಸಂಘಟನಾ ಶಕ್ತಿಯೇ ಸಾಕ್ಷಿಯಾಗಿತ್ತು.

ಆಗಸ್ಟ್ 24 ರೈತನಾಯಕ ಎನ್.ಡಿ. ಸುಂದರೇಶ್ ಅವರ ಜನ್ಮದಿನ. ತನ್ನಿಮಿತ್ತ ಈ ಲೇಖನ.

ಇಂಥಾ ರೈತನಾಯಕ ಎನ್.ಡಿ. ಸುಂದರೇಶ್ ಅವರು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಮುತ್ತೂರು ಹೋಬಳಿಯ ಮೇಳಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ “ನಂಬಳ” ಎಂಬ ಪುಟ್ಟ ಗ್ರಾಮದಲ್ಲಿ 1938 ಆಗಸ್ಟ್ 24ರಂದು ಜನಿಸಿದರು. ತಂದೆ ದುಗ್ಗಪ್ಪಗೌಡ, ತಾಯಿ ಸಿದ್ದಮ್ಮ. ಇವರಿಗೆ ಏಳು ಗಂಡು ಮಕ್ಕಳು ಮತ್ತು ನಾಲ್ಕು ಹೆಣ್ಣು ಮಕ್ಕಳು ಸೇರಿದಂತೆ ಒಟ್ಟು 11 ಮಕ್ಕಳು.ಇವರ ಪೈಕಿ ಆರನೆಯ ಮಗನೇ ಎನ್.ಡಿ.ಸುಂದರೇಶ್. ಮಲೆನಾಡ ಸಿರಿ ಸೀಮೆಯ ತೊಟ್ಟಿಲಲ್ಲಿ ಸ್ವರ್ಗದೋಪಾದಿ ಬಾಲ್ಯ ಜೀವನ ಅನುಭವಿಸಿದ ಸುಂದರೇಶ್ ಅವರು ಹುಟ್ಟಿದ ಊರು ನಂಬಳ ಗ್ರಾಮದ ಕೂಗಳತೆಯಲ್ಲೇ ಇದ್ದ ಮೇಳಿಗೆ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಕಲಿತರು.ನಂತರ ತಮ್ಮೂರಿಗೆ ಹತ್ತು ಕಿಲೋಮೀಟರ್ ದೂರದಲ್ಲಿದ್ದ ತೀರ್ಥಹಳ್ಳಿಯಲ್ಲಿ ಮಾಧ್ಯಮಿಕ ಶಿಕ್ಷಣವನ್ನು ಓದಿ, ಆನಂತರ ಪ್ರೌಢ ಶಿಕ್ಷಣವನ್ನು ನ್ಯಾಯವಾದಿಗಳಾಗಿದ್ದ ಅವರ ಅಣ್ಣ ಎನ್.ಡಿ.ವೆಂಕಟೇಶ್ ಅವರ ಶಿವಮೊಗ್ಗದ ಮನೆಯಲ್ಲಿದ್ದುಕೊಂಡು ಮುಗಿಸಿದರು. ಆಮೇಲೆ ಶಿವಮೊಗ್ಗದ ಸಹ್ಯಾದ್ರಿ ಕಾಲೇಜು ಸೇರಿದ ಅವರು ಅಲ್ಲಿ ಇಂಟರ್ ಮೀಡಿಯೆಟ್ ಕಲಿಯುವಾಗಲೇ ನಾಯಕತ್ವವನ್ನು ಮೈಗೂಡಿಸಿಕೊಂಡಿದ್ದರು. ಮೈಸೂರಿನ ಪ್ರತಿಷ್ಠಿತ ಮಹಾರಾಜ ಕಾಲೇಜಿನಲ್ಲಿ ಪ್ರವೇಶ ಪಡೆದ ಅವರು ಅಲ್ಲಿ ವಿದ್ಯಾಭ್ಯಾಸ ಮಾಡುವಾಗ ತಮ್ಮ ಜನಾನುರಾಗಿ ಗುಣದಿಂದ ಕಾಲೇಜು ವಿದ್ಯಾರ್ಥಿ ಸಂಘಕ್ಕೆ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದರು. ಆಗಲೇ ಅವರು ವಿದ್ಯಾರ್ಥಿ ನಾಯಕರಾಗಿ ಅನೇಕ ಹೋರಾಟಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು.

ಅದೇ ಕಾಲೇಜಿನಲ್ಲಿ 1966ರಲ್ಲಿ ಬಿಎ ಪದವಿ ಪಡೆದ ಅವರು, ನೇರವಾಗಿ ಭದ್ರಾವತಿ ತಾಲೂಕಿನ ಶಿವಮೊಗ್ಗ–ಚೆನ್ನಗಿರಿ ರಸ್ತೆಯಲ್ಲಿರುವ ಅಶೋಕ ನಗರದಲ್ಲಿ ಜಮೀನು ಖರೀದಿಸಿ ಉಳುಮೆಗೆ ನಿಂತರು. ಭವಿಷ್ಯದಲ್ಲಿ ಇದೇ ಅವರ ಕರ್ಮ ಭೂಮಿಯಾಯಿತು. ಸ್ವತಃ ರೈತರಾಗಿ ಉತ್ತು ಬಿತ್ತುವ ಕಾಯಕದ ಜೊತೆ ಜೊತೆಗೆ ರೈತರ ಸಮಸ್ಯೆಗಳತ್ತ ಕಣ್ಣು ಹಾಯಿಸಿ ಅವರ ಕಣ್ಣೀರು ಒರೆಸಲು ಕೈ ಚಾಚಿದರು. ಅಲ್ಲಿಂದಲೇ ರೈತನಾಯಕರಾಗಿ ಅವರು ಜನ್ಮ ತಾಳಿದ್ದು ಈಗ ಇತಿಹಾಸ.

ಮಹಾರಾಜ ಕಾಲೇಜಿನಲ್ಲಿ ಕಲಿಯುತ್ತಿದ್ದ ಸುಂದರೇಶ್, ಮಹಾರಾಣಿ ಕಾಲೇಜಿನಲ್ಲಿ ಕಲಿಯುತ್ತಿದ್ದ ಚಿಕ್ಕಮಗಳೂರು ಬೆಟ್ಟಗೆರೆ ರಾಮೇಗೌಡರ ಪುತ್ರಿ ಶೋಭಾ, ಕುವೆಂಪು ಅವರ ಮಂತ್ರ ಮಾಂಗಲ್ಯದ ರೀತಿಯಲ್ಲಿ ಸಮಾನ ಮನಸ್ಕ ಈ ಯುವ ಜೋಡಿಗಳು 1970ರಲ್ಲಿ ವೈವಾಹಿಕ ಜೀವನಕ್ಕೆ ಹೆಜ್ಜೆಯಿರಿಸಿದರು. ಇದಕ್ಕೆ ಸಾಕ್ಷಿಯಾಗಿ ಶಾಮಾವನಿ ಎಂಬ ಮಗಳು ಮತ್ತು ಸುಧಾಂಶು ಎಂಬ ಮಗ ಇವರ ಮಡಿಲು ತುಂಬಿದರು. ಓರ್ವ ಯಶಸ್ವೀ ಪುರುಷನ ಹಿಂದೆ ಓರ್ವ ಯಶಸ್ವೀ ಮಹಿಳೆ ಇರುತ್ತಾಳೆ ಎಂಬ ಮಾತಿಗೆ ಶೋಭಾ ಅವರು ಅನ್ವರ್ಥವಾದರು. ಆಗ ಸುಂದರೇಶ್ ಅವರು ರೈತ ಚಳುವಳಿಯ ಭಾರವನ್ನು ಹೆಗಲೇರಿಸಿಕೊಂಡು ಮುನ್ನಡೆದರು. ಹೀಗೆ ಸಾಗುತ್ತಿದ್ದ ಈ ಸುಂದರ ರೈತ ಹೋರಾಟದ ಸಂಸಾರಕ್ಕೆ ಆಘಾತ ಕಾದಿತ್ತು. ಸುಂದರೇಶ್ ಅಕಾಲಿಕವಾಗಿ 1992ರ ಡಿಸೆಂಬರ್ 22ರಂದು ಅಶೋಕನಗರದ ತೋಟದ ಮನೆಯಲ್ಲಿ ನಿಧನರಾದರು. ಹೋರಾಟಗಳಲ್ಲಿ ಮಾತ್ರವಲ್ಲದೆ, ಚಳವಳಿಗಳಲ್ಲಿ ಮಾತ್ರವಲ್ಲದೆ ಸಾವಿನಲ್ಲೂ ಸುಂದರೇಶ್ ದಾಖಲೆ ಬರೆದಿದ್ದರು. ಅವರ ಪಾರ್ಥಿವ ಶರೀರ ದರ್ಶನಕ್ಕೆ ಸುಮಾರು ಒಂದೂವರೆ ಲಕ್ಷಕ್ಕೂ ಅಧಿಕ ಮಂದಿ ಸೇರಿದ್ದರೆಂದರೆ ಸುಂದರೇಶ್ ರೈತ ಪರ ಹೋರಾಟ ಹೇಗಿತ್ತು ಎಂಬುದನ್ನು ಸಾರಿ ಸಾರಿ ಹೇಳಿತು.



ಬನ್ನೂರು ಕೆ.ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಮೈಸೂರು ಗಣೇಶ ಉತ್ಸವ ಸಮಿತಿಯಿಂದ ಐದು ದಿನ ಗಣೇಶೋತ್ಸವ

ಮೈಸೂರು, ಆ.23(ಆರ್‌ಕೆಬಿ)– ಗಣೇಶ ಹಬ್ಬದ ಅಂಗವಾಗಿ ಮೈಸೂರು ಗಣೇಶ ಉತ್ಸವ ಸಮಿತಿಯು ಆ.31 ರಿಂದ ಸೆ.4 ರವರೆಗೆ ಮೈಸೂರಿನ ಲಕ್ಷ್ಮೀಪುರಂನ ಜೆಎಲ್‌ಬಿ ರಸ್ತೆಯಲ್ಲಿರುವ ಮಾಧವಕೃಪಾ ಆವರಣದಲ್ಲಿ 'ಮೈಸೂರು ಗಣೇಶ ಉತ್ಸವ' ಆಯೋಜಿಸಿದೆ. ಸೆ.4ರಂದು ಸಂಜೆ ಗಣೇಶಮೂರ್ತಿಗಳ ಬೃಹತ್ ಸಾಂಸ್ಕೃತಿಕ ಮೆರವಣಿಗೆಯೊಂದಿಗೆ ವಿಸರ್ಜನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸಮಿತಿ ಸದಸ್ಯ ಎನ್.ಆರ್.ಮಂಜುನಾಥ್ ಅವರು ಮಂಗಳವಾರ ಮಾಧವ ಕೃಪಾ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು. ಸಮಿತಿಯು ಇದೇ ಪ್ರಥಮ ಬಾರಿಗೆ ವಿಶಿಷ್ಟ ರೀತಿಯಲ್ಲಿ ಉತ್ಸವವನ್ನು ಆಚರಿಸಲಿದೆ. ಇದರ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಗಣೇಶ ಉತ್ಸವ ಮೂರ್ತಿಯನ್ನು ದೇಶದ 21 ಮಣ್ಣು ಕ್ಷೇತ್ರಗಳಿಂದ ಸಂಗ್ರಹಿಸಿದ ಮಣ್ಣು ಮತ್ತು ಪವಿತ್ರ ಗಂಗಾ, ಯಮುನಾ, ಗೋದಾವರಿ, ಸರಸ್ವತಿ, ನರ್ಮದಾ, ಸಿಂಧು ಮತ್ತು ಕಾವೇರಿ ಸಪ್ತ ನದಿಗಳ ನೀರಿನಿಂದ ತಯಾರಿಸಲಾಗುವುದು. ಅಲ್ಲದೆ 108 ಮನೆಗಳಿಂದ ಸಂಗ್ರಹಿಸಿದ ವಸ್ತುಗಳಿಂದ ವಿಗ್ರಹವನ್ನು ಅಲಂಕರಿಸಲಾಗುವುದು ಎಂದು ಹೇಳಿದರು.

ಪರಿಸರ ಸ್ನೇಹಿ ಗಣೇಶ ಮೂರ್ತಿ ತಯಾರಿಕೆ ಕಾರ್ಯಾಗಾರ

ಆ.28ರಂದು ಮಧ್ಯಾಹ್ನ 3ರಿಂದ ಸಂಜೆ 7ರವರೆಗೆ ಸಾರ್ವಜನಿಕರಿಗೆ ಸಾಮೂಹಿಕ ಪರಿಸರ ಸ್ನೇಹಿ ಗಣೇಶ ಮೂರ್ತಿ ತಯಾರಿಕೆ ಕಾರ್ಯಾಗಾರ ಆಯೋಜಿಸಿದ್ದು, ಮಕ್ಕಳೇ ಸೀಡ್‌ಬಾಲ್ ಗಣೇಶನನ್ನು ಮಾಡಿ, ತಮ್ಮ ಮನೆಗಳಿಗೆ ಅದನ್ನು ಒಯ್ಯುತ್ತಾರೆ. ತಾವೇ ತಯಾರಿಸಿದ ಈ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ವಿವಿಧ ಸ್ಥಳಗಳಲ್ಲಿ ಕುಂಡಗಳಲ್ಲಿ ವಿಸರ್ಜಿಸಲು ತಿಳಿಸಲಾಗುವುದು. ಈ ಬೀಜದ ಚೆಂಡುಗಳಿಂದ ಸಸ್ಯಗಳ ಬೆಳವಣಿಗೆ ಸಾಧ್ಯ. ಹೀಗೆ ರಾಸಾಯನಿಕ ರಹಿತ ಮಣ್ಣಿನ ಗಣೇಶನಿಂದ ಬೆಳೆಯುವ ಸಸಿ ಕಾಣುವುದರಿಂದ ಮಕ್ಕಳಲ್ಲಿ ಪರಿಸರ ಜಾಗೃತಿ ಮೂಡಿಸುವುದು ಇದರ ಉದ್ದೇಶ.

–ಎನ್.ಆರ್.ಮಂಜುನಾಥ್

ಸೆ.4ರಂದು ಸಂಜೆ ಗಣೇಶಮೂರ್ತಿಗಳ ಬೃಹತ್ ಸಾಂಸ್ಕೃತಿಕ ಮೆರವಣಿಗೆ



ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಅವರಿಂದ ಗಣೇಶ ಉತ್ಸವ ವಿಸರ್ಜನಾ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ

ಪುರಾಣದ ವೈಭವ ಮತ್ತು ಪ್ರಾಮುಖ್ಯತೆಯ ಸಂಕೇತವಾದ ಗಣೇಶನನ್ನು ಚಿತ್ರಿಸಲು ಮತ್ತು ಅಲಂಕರಿಸಲು ನೈಸರ್ಗಿಕ ಬಣ್ಣಗಳನ್ನು ಬಳಸಲಾಗುತ್ತದೆ. 'ಸೌಹಾರ್ದತೆಯ ಸಮಾಜ– ಭಾರತ' ಎಂಬ ಘೋಷವಾಕ್ಯವನ್ನು ಈ ಮೂರ್ತಿಯು ಪ್ರತಿನಿಧಿಸಲಿದೆ ಎಂದು ಹೇಳಿದರು.

ಗಣೇಶ ತಯಾರಿಕೆ ಕಾರ್ಯಕ್ಕೆ ಸ್ವಾಮೀಜಿ ಚಾಲನೆ: ಸುದ್ದಿಗೋಷ್ಠಿ ನಂತರ ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿ ಅವರು 21 ಮಣ್ಣುಕ್ಷೇತ್ರಗಳ ಮಣ್ಣು ಮತ್ತು ಪವಿತ್ರ ಸಪ್ತ ನದಿಗಳ ನೀರಿನಿಂದ ಗಣೇಶ ಮೂರ್ತಿ ತಯಾರಿಸುವ ಕಾರ್ಯಕ್ಕೆ ಚಾಲನೆ ನೀಡಿದರು. ಬಳಿಕ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಿದರು. ನಂತರ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಸ್ವಾಮೀಜಿ, ಸಾರ್ವಜನಿಕರು ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಸಿದ್ಧಪಡಿಸಿ ಪೂಜಿಸುವುದರಿಂದ ಗಣೇಶನನ್ನು ಸುಲಭವಾಗಿ ಒಲಿಸಿಕೊಳ್ಳಬಹುದು. ಅದರ ಬದಲು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ನಿಂದ ತಯಾರಿಸಿ, ರಾಸಾಯನಿಕ ಬಣ್ಣಗಳಿಂದ ಮಾಡಿದ ಗಣೇಶ ಮೂರ್ತಿಗಳನ್ನು ಖರೀದಿಸಿ ತಂದು ಪೂಜಿಸಿದರೆ ಗಣೇಶ ಒಲಿಯುವುದಿಲ್ಲ. ಜೊತೆಗೆ ಅದರಿಂದ ಪರಿಸರಕ್ಕೂ ಹೆಚ್ಚು ಹಾನಿಯಾಗಲಿದೆ. ಇದರ ಬಗ್ಗೆ ಅರಿವು ಮೂಡಿಸುವ ರೀತಿಯಲ್ಲಿ ಪರಿಸರ ಸ್ನೇಹಿ ಮಣ್ಣಿನ ಗಣಪತಿಯನ್ನು ಸ್ವಯಂ ಸಿದ್ಧಪಡಿಸಿ, ಗಣೇಶ ಹಬ್ಬ ಆಚರಿಸುತ್ತಿರುವ ಸಮಿತಿಯ ಕಾರ್ಯಕ್ರಮವನ್ನು ಶ್ಲಾಘಿಸಿದರು. ಗೋಷ್ಠಿಯಲ್ಲಿ ಕಾವೇರಿ ಆಸ್ಪತ್ರೆಯ ಡಾ.ಚಂದ್ರಶೇಖರ್, ಹಿಂದೂ ಜಾಗರಣ ವೇದಿಕೆಯ ಲೋಹಿತ್ ಇನ್ನಿತರರು ಉಪಸ್ಥಿತರಿದ್ದರು.

ಗಣೇಶ ಉತ್ಸವ ಕಾರ್ಯಕ್ರಮಗಳು

- ಆ.31ರಂದು ಸಂಜೆ 6ಕ್ಕೆ ವಿದುಷಿ ಟಿ.ಎಸ್.ಶ್ರೀಲಕ್ಷ್ಮಿಕುಮಾರ್ ಮತ್ತು ಶಿಷ್ಯ ವೃಂದದಿಂದ ಶ್ರೀ ಉಮಾಮಹೇಶ್ವರ ನೃತ್ಯ ಕಲಾ ಕ್ಷೇತ್ರದಿಂದ ಭರತನಾಟ್ಯ. ಸಂಜೆ 7ಕ್ಕೆ ಮೈಸೂರಿನ ಚಂಪಕ ಅಕಾಡೆಮಿಯ ವಿದುಷಿ ನಾಗಲಕ್ಷ್ಮೀ ನಾಗಾರ್ಜುನ್ ಮತ್ತು ಶಿಷ್ಯವೃಂದದಿಂದ ಗಣೇಶ ವಂದನ, ರಾತ್ರಿ 8ಕ್ಕೆ ಆರ್.ಗುರುರಾಜುಲು ನಾಯ್ಡು ಅವರ ಶಿಷ್ಯೆ ಡಾ.ವಿ.ಮಾಲಿನಿ ಅವರಿಂದ 'ವಿನಾಯಕ ವಿಜಯ' ಹರಿಕಥೆ.
- ಸೆ.1ರಂದು ಸಂಜೆ 6.15ಕ್ಕೆ ಕರ್ನಾಟಕ ಪೊಲೀಸ್ ಬ್ಯಾಂಡ್‌ನಿಂದ ಸಂಗೀತ ಸಂಜೆ, ಸಂಜೆ 7.30ರಿಂದ ಕರ್ನಾಟಕ ಕಲಾಶ್ರೀ ಗುರು ಶ್ರೀ ಸತ್ಯನಾರಾಯಣರಾಜು ಅವರಿಂದ ನೃತ್ಯ.
- ಸೆ.2ರಂದು ಸಂಜೆ 5.30ಕ್ಕೆ ಮೈಸೂರಿನ ಕಲಾ ತಂಡಗಳಿಂದ ಸಂಗೀತ ಮತ್ತು ನೃತ್ಯ, ಸಂಜೆ 7ಕ್ಕೆ ವಿಲಾಸ್ ನಾಯಕ್‌ರಿಂದ ಲೈವ್ ಚಿತ್ರಕಲೆ, ರಾತ್ರಿ 8ಕ್ಕೆ ಕಳರಿ ಗುರು ಕೃಷ್ಣಪ್ರತಾಪ್ ಮತ್ತು ಬಳಗದಿಂದ ಕಳರಿಪಯಟ್ಟು.
- ಸೆ.3ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 12ರವರೆಗೆ ಸಾಮೂಹಿಕ ಗಣಹೋಮ, ಸಂಜೆ 6ಕ್ಕೆ ಪ್ರಾಣೇಶ್ ಮತ್ತು ಬಳಗದಿಂದ ಹಾಸ್ಯಸಂಜೆ, ಸಂಜೆ 7.30ಕ್ಕೆ ವಾರಿಜಾಶ್ರೀ ವೇಣುಗೋಪಾಲ್ ಮತ್ತು ಲಯತರಂಗ ತಂಡದವರಿಂದ ಸಂಗೀತ ಸಂಜೆ.
- ಸೆ.4ರಂದು ಸಂಜೆ 4 ಗಂಟೆಗೆ ಬೃಹತ್ ಸಾರ್ವಜನಿಕ ಗಣೇಶ ವಿಸರ್ಜನೆ.

ಮೈಸೂರು ಕೊಡವ ಸಮಾಜದಲ್ಲಿ ಸೆ.11ರಂದು ಕೈಲ್ ಪೋಲ್ದ್ ಫೆಸ್ಟಿವಲ್

ಮೈಸೂರು,ಆ.23–ಮೈಸೂರಿನ ಕೊಡವ ಸಮಾಜದ ವತಿಯಿಂದ ಸೆ.11ರಂದು ವಿಜಯನಗರ 1ನೇ ಹಂತದಲ್ಲಿರುವ ಕೊಡವ ಸಮಾಜದಲ್ಲಿ ಕೈಲ್ ಪೋಲ್ದ್ ಫೆಸ್ಟಿವಲ್ (ವಾರ್ಷಿಕ ಡಿಠಣಕೂಟ) ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆವರೆಗೆ ನಡೆಯುವ ಕಾರ್ಯಕ್ರಮದಲ್ಲಿ ಆಯುಧ ಪೂಜೆ, ಕ್ರೀಡಾಕೂಟ, ಲಕ್ಕಿ ಡ್ರಾ, ಹಿರಿಯ ಕೊಡವರಿಗೆ ಸನ್ಮಾನ ಮತ್ತು ವಿದ್ಯಾರ್ಥಿ ವೇತನ ವಿತರಣೆ ಒಳಗೊಂಡಿದೆ.

ವಿದ್ಯಾರ್ಥಿವೇತನ: ಮೈಸೂರಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಹಾಗೂ ಆಯಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಅತೀ ಹೆಚ್ಚು ಅಂಕ ಗಳಿಸಿದ 42 ಮಂದಿ ಪ್ರತಿಭಾನ್ವಿತ ಕೊಡವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುವುದು. ಕೊಡವ ಸಮಾಜದ ಸದಸ್ಯರ ಮಕ್ಕಳು ಮತ್ತು ಮೈಸೂರಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಕೊಡವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ವಿವರ: 7ನೇ ತರಗತಿ, ಎಸ್‌ಎಸ್‌ಎಲ್‌ಸಿ, ಎಸ್‌ಎಸ್‌ಎಲ್‌ಸಿ (ಇಂಗ್ಲಿಷ್), ಎಸ್‌ಎಸ್‌ಎಲ್‌ಸಿ (ಸಿಬಿಎಸ್‌ಇ), ಎಸ್‌ಎಸ್‌ಎಲ್‌ಸಿ (ಆರ್ಥಿಕವಾಗಿ ಹಿಂದುಳಿದ ವರ್ಗ), ಪಿಯುಸಿ, ಬಿ.ಎ., ಬಿ.ಕಾಂ., ಬಿ.ಎಸ್ಸಿ (ಕಂಪ್ಯೂಟರ್ ಸೈನ್ಸ್/ಮ್ಯಾಥ್ಸ್), ಬಿಬಿಎಂ., ಎಂಬಿಎ, ಕಾನೂನು, ಎಂ.ಎ., ಎಂ.ಕಾಂ., ಎಂ.ಎಸ್ಸಿ (ಪಿಸಿಎಂ/ಸಿಜಿಜಡ್), ಬಿ.ಇ., ಬಿ.ಇ (ಮೆಕ್ಯಾನಿಕಲ್), ಬಿ.ಇ. (ಆರ್ಕಿಟೆಕ್ಚರ್), ಬಿ.ಇ. (ಕಂಪ್ಯೂಟರ್ ಸೈನ್ಸ್), ಬಿಡಿಎಸ್, ಎಂಬಿಬಿಎಸ್, ಬಿ.ಎಸ್ಸಿ ಎಂ.ಎಸ್ಸಿ (ಅಗ್ರಿ), ಡಿಪ್ಲೊಮಾ ಇನ್ ಕಮರ್ಷಿಯಲ್ (ಸೆಕ್ರೆಟೇರಿಯಲ್) ಪ್ರಾಕ್ಟೀಸ್, ಪ್ರಥಮ ಮತ್ತು ದ್ವಿತೀಯ ಪಿಯುಸಿಯಲ್ಲಿ ಉತ್ತಮ ಕ್ರೀಡಾ ವಿದ್ಯಾರ್ಥಿ, ಐಸಿಎಸ್‌ಇ XI & XII ಮತ್ತು ಐಸಿಎಸ್‌ಇ I ಮತ್ತು ಎಸ್‌ಎಸ್‌ಎಲ್‌ಸಿ (ಸಿಬಿಎಸ್‌ಇ) ವಿಜ್ಞಾನ ವಿಭಾಗದಲ್ಲಿ ಅತೀ ಹೆಚ್ಚು ಅಂಕ, ಸ್ನಾತಕೋತ್ತರ ಮೆಡಿಸಿನ್, ಎಂಡಿ ಮತ್ತು ಎಂ.ಎಸ್. ರಾಜ್ಯ ಮಟ್ಟದ ಕ್ರೀಡೆಯಲ್ಲಿ ಸಾಧನೆ, ಗೃಹ ವಿಜ್ಞಾನ ಅಥವಾ ಹೋಟೆಲ್ ಮ್ಯಾನೇಜ್‌ಮೆಂಟ್‌ನಲ್ಲಿ ಪದವಿ. ಎಸ್‌ಎಸ್‌ಎಲ್‌ಸಿಯಲ್ಲಿ ಮೈಸೂರು ವಿವಿಯನ್ನು ಪ್ರತಿನಿಧಿಸಿರುವ ಕೊಡವ ಪೊಲೀಸ್ ಕುಟುಂಬ ಮತ್ತು ಕೊಡವ ಸಮಾಜದ ಸದಸ್ಯರು. ಶಿಷ್ಯವೇತನಕ್ಕೆ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಕೊಡವ ಸಮಾಜದ ಸದಸ್ಯರು ಅರ್ಜಿಯ ಜೊತೆ ಅಂಕಪಟ್ಟಿ, ಅಗತ್ಯ ಪ್ರಮಾಣ ಪತ್ರಗಳನ್ನು, ಕಾರ್ಯದರ್ಶಿಗಳು, ಕೊಡವ ಸಮಾಜ, ಮೈಸೂರು ಇವರಿಗೆ ಸೆ.2ರೊಳಗೆ ತಲುಪಿಸುವಂತೆ ಕೋರಲಾಗಿದೆ. ಶಿಷ್ಯ ವೇತನಕ್ಕೆ ಅರ್ಜಿಯಲ್ಲಿ ಕುಟುಂಬದ ಹೆಸರು, ದೂರವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ಉಲ್ಲೇಖಿಸಬೇಕು.

ವೀರಶೈವ ಲಿಂಗಾಯಿತ ವಧು-ವರರ ಸಮಾವೇಶ

ಮೈಸೂರು,ಆ.23–ಮೈಸೂರಿನ ಶ್ರೀ ಬಸವೇಶ್ವರ ವಧು-ವರರ ವಿವಾಹ ವೇದಿಕೆ ವತಿಯಿಂದ ಗನ್‌ಹೌಸ್ ಹತ್ತಿರವಿರುವ ಉತ್ತರಾದಿ ಮಠದ ರಸ್ತೆಯ ಶ್ರೀ ವಿದ್ಯಾಭಾರತಿ ಕಲ್ಯಾಣ ಮಂಟಪದಲ್ಲಿ ಸೆ.9ರಂದು ಮಧ್ಯಾಹ್ನ 20ರಂದು ಸಂಜೆ 6ರವರೆಗೆ ವೀರಶೈವ ಲಿಂಗಾಯತ ವಧು-ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಎಲ್ಲಾ ತಾಲೂಕಿನವರು ಸೆ.3ರೊಳಗೆ ನೋಂದಣಿ ಮಾಡಿಕೊಳ್ಳಲು ಕೋರಲಾಗಿದೆ. ಮಾಹಿತಿಗೆ ಮೊ. 96862 05346, 9972703737 ಸಂಪರ್ಕಿಸಿ.

ವಿನಯಗೆ ಪಿಹೆಚ್.ಡಿ



ಮೈಸೂರು: ಡಾ.ಸಿ. ನಾಗಣ್ಣ ಮಾರ್ಗದರ್ಶನದಲ್ಲಿ **ವೈ.ವಿ.ವಿನಯ** ಇಂಗ್ಲಿಷ್ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್-2022'ರ ಸ್ಪರ್ಧೆ

ಆಗಸ್ಟ್ 25ರಿಂದ 27ರವರೆಗೆ ಜೆಎಸ್‌ಎಸ್ ವಿಜ್ಞಾನ, ತಂತ್ರಜ್ಞಾನ ವಿವಿಯಲ್ಲಿ ಅಂತಿಮ ಸುತ್ತು



ಪ್ರಧಾನಿ ಮೋದಿಯವರು ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಪ್ರಾರಂಭಿಸಿ ಪ್ರವರ್ತಕ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುತ್ತಿದ್ದಾರೆ. ಅದರಂತೆ ಈ ಬಾರಿ ಆ.25ರಂದು ಸಂಜೆ ವೇಳೆಗೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವ ನಿರೀಕ್ಷೆ ಇದೆ. –ಪ್ರೊ.ಎಸ್.ಎ.ಧನರಾಜ್, ವಿವಿ ಕುಲಸಚಿವ

ಮೈಸೂರು,ಆ.23(ಪಿಎಂ)– ದೇಶಾದ್ಯಂತ ಇಂಜಿನಿಯರಿಂಗ್ ವಿದ್ಯಾರ್ಥಿಗಳಲ್ಲಿ ಹೊಸತನದ ಚಿಂತನೆಗೆ ಉತ್ತೇಜನ ನೀಡುವ 'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್–2022'ರ (ಎಸ್‌ಐಹೆಚ್) ಸ್ಪರ್ಧೆಯ ಅಂತಿಮ ಸುತ್ತು (ಗ್ರಾಂಡ್ ಫಿನಾಲೆ) ನಡೆಸಲು ಆಯ್ಕೆಯಾದ ನೋಡಲ್ ಕೇಂದ್ರಗಳಲ್ಲಿ ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯವೂ ಒಂದಾಗಿದ್ದು, ಆ.25ರಿಂದ 27ರವರೆಗೆ ವಿವಿಯಲ್ಲಿ ಗ್ರಾಂಡ್ ಫಿನಾಲೆ ನಡೆಯಲಿದೆ ಎಂದು ವಿವಿ ಕುಲಸಚಿವ ಪ್ರೊ.ಎಸ್.ಎ.ಧನರಾಜ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಂತ್ರಜ್ಞಾನ ಮತ್ತು ತಾಂತ್ರಿಕತೆ ಬಳಸಿಕೊಂಡು ವಿವಿಧ ಕ್ಷೇತ್ರಗಳಲ್ಲಿ ಎದುರಾಗಿರುವ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯುವುದು ಇದರ ಸ್ವರೂಪ. ಎಸ್‌ಐಹೆಚ್ ಎಂಬುದು ಕೇಂದ್ರದ ಶಿಕ್ಷಣ ಸಚಿವಾಲಯದ ಆವಿಷ್ಕಾರ ಕೋಶದ ರಾಷ್ಟ್ರವ್ಯಾಪಿ ಕಾರ್ಯಕ್ರಮವಾಗಿದೆ. 2017ರಿಂದ ಇದು ಪ್ರಾರಂಭವಾಗಿದ್ದು, ಪ್ರತಿವರ್ಷ ಸಾಫ್ಟ್‌ವೇರ್ ಮತ್ತು ಹಾರ್ಡ್‌ವೇರ್ ವಿಭಾಗಗಳಲ್ಲಿ ದೇಶಾದ್ಯಂತ ಸ್ಪರ್ಧೆ ನಡೆಯಲಿದೆ ಎಂದು ಹೇಳಿದರು.

ಪ್ರಸಕ್ತ ಸಾಲಿನ ಹ್ಯಾಕಥಾನ್ ಸ್ಪರ್ಧೆಯಲ್ಲಿ ಕ್ಯಾಂಪಸ್ ಮಟ್ಟದಿಂದ 2,033 ತಂಡಗಳು (ದೇಶಾದ್ಯಂತ) ಅಂತಿಮ ಸುತ್ತು ಎದುರಿಸಲು ಆಯ್ಕೆಗೊಂಡಿವೆ. ಈ ತಂಡಗಳು ನಿಯೋಜಿತ ನೋಡಲ್ ಕೇಂದ್ರದಲ್ಲಿ ನಿಗದಿತ ದಿನಗಳಂದು ಅಂತಿಮ ಸುತ್ತಿನ ಸ್ಪರ್ಧೆ ಎದುರಿಸಲಿವೆ. ಪ್ರತಿ ನೋಡಲ್ ಕೇಂದ್ರದಲ್ಲಿ ಕೇಂದ್ರ ಶಿಕ್ಷಣ ಸಚಿವಾಲಯದ ಆವಿಷ್ಕಾರ ಕೋಶದಿಂದ ನಿಯೋಜಿಸಿದ ಅಧಿಕಾರಿಯೊಬ್ಬರು ಅಂತಿಮ ಸುತ್ತಿನ ಸ್ಪರ್ಧೆಯ ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದರು.

ರಾಜ್ಯಕ್ಕೆ ಸಂಬಂಧಿಸಿದಂತೆ ಆಯ್ಕೆಯಾದ 7 ನೋಡಲ್ ಕೇಂದ್ರಗಳಲ್ಲಿ ಈ ಸ್ಪರ್ಧೆ ನಡೆಯಲಿದೆ. ನಮ್ಮ ಕೇಂದ್ರದಲ್ಲಿ 6 ವಿಷಯಗಳಿಗೆ ಸಂಬಂಧಿಸಿದಂತೆ ಸ್ಪರ್ಧೆ ನಡೆಯಲಿದೆ. ಶಿಕ್ಷಣ ಸಚಿವಾಲಯ ಸ್ಪರ್ಧೆಗೆ ವಿಷಯಗಳನ್ನು ನೀಡಿದೆ. ಮೈಸೂರಿನ ಎಸ್‌ಜೆಸಿಇ ಕಾಲೇಜು ಆವರಣದ ವಿವಿ ಕ್ಯಾಂಪಸ್‌ನಲ್ಲಿ ಆ.25ರಂದು ಬೆಳಗ್ಗೆ 9ಕ್ಕೆ ಸ್ಪರ್ಧೆಗೆ ಚಾಲನೆ ದೊರೆಯಲಿದೆ. ನಮ್ಮ ನೋಡಲ್ ಕೇಂದ್ರದಲ್ಲಿ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಒಟ್ಟು 178 ಅಭ್ಯರ್ಥಿಗಳನ್ನು ಒಳಗೊಂಡ ಒಟ್ಟು 26 ತಂಡಗಳು ಆಗಮಿಸಲಿವೆ. ಈ ಪೈಕಿ ಆಯ್ಕೆಯಾಗುವ 6 ತಂಡಗಳಿಗೆ ತಲಾ ಲಕ್ಷ ರೂ. ನಗದು ಬಹುಮಾನ ದೊರೆಯಲಿದೆ ಎಂದರು. ಎಸ್‌ಜೆಸಿಇ ಕಾಲೇಜು ಪ್ರಾಂಶುಪಾಲ ಡಾ.ಎಸ್.ಬಿ.ಕಿವಾಡೆ, ಪ್ರಾಧ್ಯಾಪಕರಾದ ಡಾ.ಎಂ.ಪಿ.ಪುಷ್ಪಲತಾ, ಯಶವಂತ್ ಗೋಷ್ಠಿಯಲ್ಲಿದ್ದರು.

ರಸ್ತೆ ಅಭಿವೃದ್ಧಿ, ಮಳೆ ನೀರು ಚರಂಡಿ ಕಾಮಗಾರಿಗೆ ಚಾಲನೆ



ಮೈಸೂರು, ಆ. 23(ಆರ್‌ಕೆ)– ಮುಡಾ ವತಿಯಿಂದ ಮೈಸೂರಿನ ಮೇಟಗಳ್ಳಿ ಬಳಿ ಕೆಆರ್‌ಎಸ್ ರಸ್ತೆಯ ರೈಲ್ವೆ ಲೆವೆಲ್ ಕ್ರಾಸಿಂಗ್‌ನಿಂದ ರಿಂಗ್ ರಸ್ತೆಯ ರಾಯಲ್ ಇನ್ ಜಂಕ್ಷನ್‌ವರೆಗೆ ಕೈಗೊಂಡಿರುವ ರಸ್ತೆ ಅಭಿವೃದ್ಧಿ ಮತ್ತು ಮಳೆನೀರು ಚರಂಡಿ ನಿರ್ಮಾಣ ಕಾಮಗಾರಿಗೆ ಶಾಸಕ ಎಲ್.ನಾಗೇಂದ್ರ ಚಾಲನೆ ನೀಡಿದರು.

ರೈಲ್ವೇ ಮಾರ್ಗಕ್ಕೆ ಸಮಾನಾಂತರ ಅಭಿವೃದ್ಧಿ ಮತ್ತು ಮಳೆ ನೀರು ಚರಂಡಿ ಕಾಮಗಾರಿಯನ್ನು 1.11 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ವಾರ್ಡ್ ನಂ.7ರ ವ್ಯಾಪ್ತಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಕೆಲಸ ಆರಂಭವಾಗಿದೆ. ಗುದ್ದಲಿ ಪೂಜೆ ನೆರವೇರಿಸಿದ ನಂತರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ನಾಗೇಂದ್ರ, ಚಾಮರಾಜ ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಕಳೆದ ಮೂರೂವರೆ ವರ್ಷದಲ್ಲಿ ತಾವು ಸರ್ಕಾರದಿಂದ ಕೋಟ್ಯಾಂತರ ರೂ. ಅನುದಾನ ತಂದು ಕಾಮಗಾರಿ ಮಾಡಿಸಿದ್ದೇನೆ. ರಸ್ತೆ, ಚರಂಡಿ, ಕುಡಿಯುವ ನೀರು, ಉದ್ಯಾನವನದಂತಹ ಸೌಲಭ್ಯಗಳನ್ನು ಅಭಿವೃದ್ಧಿಗೊಳಿಸಿರುವುದಾಗಿ ತಿಳಿಸಿದರು. ತಮ್ಮ ಕ್ಷೇತ್ರಾಭಿವೃದ್ಧಿ ಅನುದಾನದ ಜೊತೆಗೆ ಪಾಲಿಕೆ, ಮುಡಾ ಹಣವನ್ನು ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯ ಒದಗಿಸಲು ಸಮರ್ಪಕವಾಗಿ ಬಳಸಿದ್ದೇನೆ. ಇನ್ನೂ ಹಲವು ಬೃಹತ್ ಕಾಮಗಾರಿಗಳನ್ನು ಸದ್ಯದಲ್ಲೇ ಆರಂಭಿಸಲಾಗುವುದು ಎಂದರು. ಮುಡಾ ಅಸಿಸ್ಟೆಂಟ್ ಇಂಜಿನಿಯರ್ ರವೀಂದ್ರ ಕಾರ್ಪೊರೇಟರ್ ರಮೇಶ್, ಮಾಜಿ ಕಾರ್ಪೊರೇಟರ್ ಆರ್.ದೇವರಾಜು, ಚಾಮರಾಜ ಕ್ಷೇತ್ರದ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪುನೀತ್, ನರಸಿಂಹಮೂರ್ತಿ, ರವೀಂದ್ರ, ರುಕ್ಮಿಣಿ ಇತರರು ಈ ಸಂದರ್ಭ ಉಪಸ್ಥಿತರಿದ್ದರು.

ಸೆ.11ರಂದು ಸೆಲಬ್ರೇಷನ್ ಮೈಸೂರು ಮ್ಯಾರಥಾನ್



ಮೈಸೂರು,ಆ.23(ಆರ್‌ಕೆಬಿ)–ಲೈಫ್ ಈಸ್ ಕಾಲಿಂಗ್ ಸಂಸ್ಥೆಯು ಇತರೆ ಸಂಘಟನೆಗಳ ಸಹಯೋಗದಲ್ಲಿ ಸೆ.11ರಂದು ಮೈಸೂರು ಅರಮನೆ ಆವರಣದ ಬಲರಾಮ ದ್ವಾರದಿಂದ 12ನೇ ಆವೃತ್ತಿಯ 'ಸೆಲಬ್ರೇಷನ್ ಮೈಸೂರು' ಹಾಫ್ ಮ್ಯಾರಥಾನ್ ಮತ್ತು 10ಕೆ ಮ್ಯಾರಥಾನ್ ಏರ್ಪಡಿಸಿದೆ. ಲೈಫ್ ಈಸ್ ಕಾಲಿಂಗ್ ಕ್ರೀಡಾ ನಿರ್ವಹಣಾ ಸಂಸ್ಥೆಯ ಕಾರ್ಯಕ್ರಮ ನಿರ್ದೇಶಕ ಪಿ.ವಿ.ಸುನೀಲ್ ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮದ ವಿವರ ನೀಡಿದರು. ಅಂದು ಬೆಳಗ್ಗೆ 5.30 ಗಂಟೆಗೆ ಮ್ಯಾರಥಾನ್‌ಗೆ ಚಾಲನೆ ನೀಡಲಾಗುವುದು. 16 ವರ್ಷ ಮೇಲ್ಪಟ್ಟವರಿಗೆ 30 ಕಿಮೀ ಓಟ, 21 ಕಿಮೀ ಹಾಫ್ ಮ್ಯಾರಥಾನ್, 10 ಕಿಮೀ ಓಟ ಇರುತ್ತದೆ. 11 ವರ್ಷ ಮತ್ತು ಮೇಲ್ಪಟ್ಟವರಿಗೆ 5 ಕಿಮೀ. ಓಟ ಮತ್ತು ನಡಿಗೆ ಕಾರ್ಯಕ್ರಮ ಇರುತ್ತದೆ ಎಂದರು. ಈ ವರ್ಷದ ವಿಶೇಷವೆಂದರೆ, 10 ಅಂಧ ಓಟಗಾರರು ಮತ್ತು ಅವರ ಮಾರ್ಗದರ್ಶಕರನ್ನು ಓಡಿಸುತ್ತೇವೆ ಎಂದು ಹೇಳಿದರು.

30 ಕಿ.ಮೀ ಓಟ, 21 ಕಿ.ಮೀ. ಹಾಫ್ ಮ್ಯಾರಥಾನ್ ಮತ್ತು 10 ಕಿ.ಮೀ. ಓಟಗಳು ಸ್ಪರ್ಧಾತ್ಮಕ ವಿಭಾಗಗಳಾಗಿದ್ದು, ದೇಶಾದ್ಯಂತ ಸ್ಪರ್ಧಿಗಳು ಭಾಗವಹಿಸುವ ನಿರೀಕ್ಷೆಯಿದೆ. 5 ಕಿ.ಮೀ. ಸಂಭ್ರಮದ ಓಟ ಮತ್ತು ನಡಿಗೆಯು ಕರ್ನಾಟಕದಾದ್ಯಂತ ಭಾಗವಹಿಸುವವರನ್ನು ಪ್ರೋತ್ಸಾಹಿಸಲು ಸ್ಪರ್ಧಾತ್ಮಕವಲ್ಲದ ವರ್ಗವಾಗಿದೆ. ಅಲ್ಲದೆ ದೇಹದಾರ್ಢ್ಯ ಹಾಗೂ ಆರೋಗ್ಯಯುತ ಜೀವನಕ್ಕೆ ಉತ್ತೇಜನ ನೀಡುತ್ತದೆ ಎಂದರು.

ಮೈಸೂರಿನ ಪ್ರತಿಷ್ಠಿತ ಐಟಿ ಕಂಪನಿಗಳು ಮತ್ತು ರಿಯಲ್ ಎಸ್ಟೇಟ್ ಸಂಸ್ಥೆಗಳು ಕಾರ್ಯಕ್ರಮವನ್ನು ಪ್ರಾಯೋಜಿಸುತ್ತಿವೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಆಸಕ್ತರು www.eventzalley.comಗೆ ಲಾಗ್ ಇನ್ ಆಗಿ ಹೆಸರು ನೋಂದಾಯಿಸಿಕೊಳ್ಳಬಹುದು. ಮಾಹಿತಿಗೆ ಮೊ: 9606622006. contact@lifeiscall-ing-sports.com ಇಮೇಲ್ ಮೂಲಕ ಸಂಪರ್ಕಿಸಬಹುದು ಎಂದರು. ಈ ವೇಳೆ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮದ ರಾಯಭಾರಿ ಡಾ.ಎಂ.ಎಸ್.ಉಷಾ ಹೆಗ್ಡೆ, ಹರ್ಷ, ಎಂ.ರವಿಚಂದ್ರ ಬೇಕಲ್, ಚಿರಾಗ್ ವಿವೇಕ್ ಉಪಸ್ಥಿತರಿದ್ದರು.

ವಿದ್ಯುತ್ ಪೂರೈಕೆ ಖಾಸಗಿಯವರಿಗೆ ವಹಿಸಿದರೆ ಗ್ರಾಮೀಣ ಭಾರತ ಕಗ್ಗತ್ತಲು

ರಾಜ್ಯ ಕಬ್ಬು ಬೆಳೆಗಾರರ ಸಂಘ ಆತಂಕ

ಮೈಸೂರು, ಆ.23(ಎಸ್‌ಪಿಎನ್)– ವಿದ್ಯುತ್ ಪೂರೈಕೆ ನಿರ್ವಹಣೆಯನ್ನು ಖಾಸಗಿಯವರಿಗೆ ವಹಿಸಿದರೆ ಗ್ರಾಮೀಣ ಭಾರತ ಕಗ್ಗತ್ತಲಲ್ಲಿ ಮುಳುಗಲಿದೆ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್ ಆತಂಕ ವ್ಯಕ್ತಪಡಿಸಿದ್ದಾರೆ.

ದೇಶಾದ್ಯಂತ ವಿದ್ಯುತ್ ಪೂರೈಕೆ ಖಾಸಗೀಕರಣಗೊಂಡರೆ ರೈತರು ಕೃಷಿ ಚಟುವಟಿಕೆ ನಡೆಸುವುದು ಅಸಾಧ್ಯ. ಕೃಷಿ ಚಟುವಟಿಕೆ ಕುಂಠಿತವಾಗುತ್ತದೆ. ಉಚಿತ ವಿದ್ಯುತ್ ಬಳಕೆ ಮಾಡಿಯೂ ಲಾಭವಿಲ್ಲದೆ, ರೈತರು ಕೃಷಿಯಿಂದ ಶಾಶ್ವತ ದೂರುವಾಗುತ್ತಾರೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಆತಂಕ ವ್ಯಕ್ತಪಡಿಸಿದ್ದಾರೆ. ಗ್ರಾಮೀಣ ಜನರಿಗಾಗಿ ರೂಪಿಸಿರುವ ಭಾಗ್ಯಜ್ಯೋತಿ, ಕುಟೀರ ಜ್ಯೋತಿ, ಇತರೆ ಯೋಜನೆಗಳ ಮೂಲಕ ವಿದ್ಯುತ್ ಸಂಪರ್ಕ ಪಡೆದಿರುವ ಬಡವರು ಉಚಿತ ವಿದ್ಯುತ್ ಪೂರೈಕೆಯಿಂದ ವಂಚಿತರಾಗುತ್ತಾರೆ. ಮುಂದಿನ ದಿನಗಳಲ್ಲಿ ಖಾಸಗೀಕರಣದಿಂದ ಮೊಬೈಲ್ ಬಿಲ್, ಟಿವಿ ಚಾನಲ್‌ಗಳಿಗೆ ಮುಂಗಡವಾಗಿ ಕರೆನ್ಸಿ ಹಾಕಿಸುವ ರೀತಿಯಲ್ಲಿ ರೈತರು ಕೃಷಿ ಚಟುವಟಿಕೆಯಲ್ಲಿ ಬಳಸುವ ಪಂಪ್‌ಸೆಟ್, ಗೃಹ ಬಳಕೆಗೆ ದುಪ್ಪಟ್ಟು ಮುಂಗಡ ಹಣ ನೀಡಿ ವಿದ್ಯುತ್ ಬಳಕೆ ಮಾಡಬೇಕು. ಸರ್ಕಾರ ಈ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಮುಂದಿನ ದಿನಗಳಲ್ಲಿ ರೈತರು ಹಾಗೂ ರೈತಪರ ಸಂಘಟನೆಗಳಿಂದ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ನಾಳೆ ಸರ್ಪ ಸಂಸ್ಕಾರ, ಆ.26, ಆಶ್ಲೇಷಾ ಬಲಿ

ಮೈಸೂರು, ಆ.23– ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಆ.25ರಂದು ಗುರುವಾರ ಬೆಳಗ್ಗೆ 7.30ಕ್ಕೆ ಸರ್ಪ ಸಂಸ್ಕಾರ ಹಾಗೂ ಆ.26ರಂದು ಶುಕ್ರವಾರ ಬೆಳಗ್ಗೆ 7.30ಕ್ಕೆ ಸರ್ಪ ಸಂಸ್ಕಾರರಾಂಗ ಹೋಮ ಮತ್ತು ಆಶ್ಲೇಷಾ ಬಲಿ ಪೂಜೆ ಏರ್ಪಡಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಮೈ ಕುಮಾರ್ (ಜಾತಕ ವಿಮರ್ಶಕ)ರನ್ನು ಮೊ.ಸಂ. 9845183392 9845183399 ಮೂಲಕ ಸಂಪರ್ಕಿಸಬಹುದು.

ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ್ ಲಿಂಕ್ ಮಾಡಿ



ಮೈಸೂರು,ಆ.23–ಭಾರತ ಚುನಾವಣಾ ಆಯೋಗ ಮೈಸೂರು ಮಹಾನಗರ ಪಾಲಿಕೆ, 216–ಕೃಷ್ಣರಾಜ ವಿಧಾನಸಭಾ ಕ್ಷೇತ್ರ, 217–ಚಾಮರಾಜ ವಿಧಾನಸಭಾ ಕ್ಷೇತ್ರ, 218–ನರಸಿಂಹರಾಜ ವಿಧಾನಸಭಾ ಕ್ಷೇತ್ರದ ವತಿಯಿಂದ ಎಲ್ಲಾ ಮತದಾರರು ತಮ್ಮ ಕುಟುಂಬದ ಎಲ್ಲಾ ಮತದಾರರ ಗುರುತಿನ ಚೀಟಿಗೆ voter helpline App ಮುಖಾಂತರ ಮನೆಯಲ್ಲಿ ಕುಳಿತು ಮತದಾರ ಗುರುತಿನ ಚೀಟಿಗೆ ಆಧಾರ್ ಕಾರ್ಡ್ ನಂಬರ್ ಲಿಂಕ್ ಮಾಡಬಹುದು.

ಲಿಂಕ್ ಮಾಡುವ ವಿಧಾನ: 1. Play Store ಹೋಗಿ Voter Helpline App ಅನ್ನು Install ಮಾಡಿಕೊಳ್ಳಬೇಕು. 2) App ಅನ್ನು install ಮಾಡುವಾಗ, Permission ಎಲ್ಲವು Allow ಅಂತಾ ಮಾಡಬೇಕು. 3) App install ಮಾಡಿಕೊಂಡು, App ಕೆಳಗಡೆ, ಎಡಬದಿಯಲ್ಲಿ ಇರುವ EXPLORE Option ಮೇಲೆ, click ಮಾಡಬೇಕು. 4) Electroral Authentication Form- 6B Select ಮಾಡಿಕೊಳ್ಳಬೇಕು. 5. Mobile Number ಹಾಕಬೇಕು 6) ನಿಮ್ಮ ಮೊಬೈಲ್ ನಂಬರ್‌ಗೆ ಒಂದು OTP ಬರುವುದು. ಬಂದ OTP ನಮೂದಿಸಬೇಕು. Verify ಅಂತಾ ಮಾಡಬೇಕು. 7) ನಿಮ್ಮ Epic number (ಚುನಾವಣಾ ಗುರುತಿನ ಚೀಟಿ ನಂಬರ್) ನಮೂದಿಸಬೇಕು ಮತ್ತು ಸ್ಟೇಟ್ ಸೆಲೆಕ್ಟ್ ಮಾಡಬೇಕು. 8) ನಿಮ್ಮ ಆಧಾರ್ ನಂಬರ್ ನಮೂದಿಸಬೇಕು. 9) ನಿಮ್ಮ ಮೊಬೈಲ್ ನಂಬರ್ ನಮೂದಿಸಬೇಕು. 10) Email ID ಇದ್ದರೆ, ನಮೂದಿಸಿ, ಇರದಿದ್ದರೆ, ಹಾಗೆ ಖಾಲಿ ಬಿಡಿ, 11) ನಿಮ್ಮ ನಗರದ ಹೆಸರನ್ನು ನಮೂದಿಸಿ. 12) Email ID 13) Proceed Option ಒತ್ತಿ 14) Confirm button ಅಂತಾ ಒಂದು Successfully ಬರುತ್ತದೆ. ಮಾಹಿತಿಗೆ 1ರಿಂದ 9 ವಲಯ ಕಚೇರಿ ಅಧಿಕಾರಿಗಳನ್ನು ಸಂಪರ್ಕಿಸಿ ಎಂದು ಮೈಸೂರು ನಗರ ಪಾಲಿಕೆ ಉಪ ಆಯುಕ್ತರು(ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.7ರಿಂದ ಕಾಂಗ್ರೆಸ್ ಭಾರತ್ ಜೋಡೋ ಯಾತ್ರೆ

ನವದೆಹಲಿ: ಸೆಪ್ಟೆಂಬರ್ 7ರಿಂದ ಆರಂಭವಾಗಲಿರುವ 'ಭಾರತ್ ಜೋಡೋ ಯಾತ್ರೆ'ಯ ಲೋಗೋ, ಘೋಷಣೆ ಹಾಗೂ ಭಿತ್ತಿಪತ್ರವನ್ನು ಕಾಂಗ್ರೆಸ್ ಬಿಡುಗಡೆ ಮಾಡಿದೆ. ಪಕ್ಷದ ಕೇಂದ್ರ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಜೈರಾಮ್ ರಮೇಶ್, ಮಧ್ಯಪ್ರದೇಶದ ಮಾಜಿ ಸಿಎಂ ದಿಗ್ವಿಜಯ್ ಸಿಂಗ್ ಸೇರಿದಂತೆ ಹಲವು ಮುಖಂಡರು ಪಾಲ್ಗೊಂಡರು.

ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಜೈ ರಾಮ್ ರಮೇಶ್, ಈ ಸಂಬಂಧ ವೆಬ್‌ಸೈಟ್ ಬಿಡುಗಡೆಗೊಳಿಸಲಾಗಿದ್ದು, ಯಾತ್ರೆಯ ಲೈವ್ ಸ್ಟ್ರೀಮಿಂಗ್ ದೊರೆಯಲಿದೆ. ಭಾರತ್ ಜೋಡೋ ಯಾತ್ರೆಯಲ್ಲಿ ಮುಖಂಡರು ಪಕ್ಷದ ಧ್ವಜವನ್ನು ಬಳಸುವುದಿಲ್ಲ, ಬದಲಿಗೆ ತ್ರಿವರ್ಣ ಧ್ವಜ ಬಳಸಲಿದ್ದಾರೆ ಎಂದರು. ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಶ್ಮೀರದಿಂದ ಕನ್ಯಾಕುಮಾರಿವರೆಗೂ ಯಾತ್ರೆ ನಡೆಯಲಿದೆ. 12 ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳ ಮೂಲಕ ಈ ಯಾತ್ರೆ ನಡೆಯಲಿದ್ದು, ನಾಗರಿಕ ಸಮಾಜ ಸಂಸ್ಥೆಗಳು ಮತ್ತು ಸಮಾನ ಮನಸ್ಕರು ಈ ಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

DBT ನೇರ ಹಣ ಸಂದಾಯ ಯೋಜನೆ: ಪಿಂಚಣಿ ವಿತರಿಸಲು ಅರ್ಜಿ ಆಹ್ವಾನ

ಮೈಸೂರು, ಆ.23– ಜಿಲ್ಲಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಜಿಲ್ಲೆಯಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆ ಅಡಿ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳಿಗೆ DBT ನೇರಹಣ ಸಂದಾಯ ಯೋಜನೆಯ ಮೂಲಕ ಪಿಂಚಣಿ ವಿತರಿಸಲಾಗುತ್ತಿದ್ದು, ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ. ಆದ್ದರಿಂದ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳು ಅಂಚೆ ಅಥವಾ ಬ್ಯಾಂಕ್ ಉಳಿತಾಯ ಖಾತೆ ಕಡ್ಡಾಯವಾಗಿ ತೆರೆದು, ಬ್ಯಾಂಕ್ ಅಥವಾ ಅಂಚೆ ಉಳಿತಾಯ ಖಾತೆ ಪುಸ್ತಕದ ಪ್ರತಿ, ಆಧಾರ್ ಪ್ರತಿ ಮಂಜೂರಾತಿ ಪತ್ರದ ಪ್ರತಿ, ಇಎಂಒ ಚೀಟಿಯ ಪ್ರತಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ವ್ಯಾಪ್ತಿಯ ನಾಡಕಚೇರಿಗಳಿಗೆ ಹಾಗೂ ಮೈಸೂರು ಪಾಲಿಕೆ ವ್ಯಾಪ್ತಿಗೆ ಸೇರಿದ ಫಲಾನುಭವಿಗಳು ಮೈಸೂರು ತಾಲೂಕು ಕಚೇರಿಯ ಸಾಮಾಜಿಕ ಭದ್ರತಾ ಯೋಜನಾ ಶಾಖೆಗೆ ಅರ್ಜಿ ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅ.19, 20ರಂದು ಮೈಸೂರಲ್ಲಿ 'ಬಿಯಾಂಡ್ ಬೆಂಗಳೂರು' ಟೆಕ್ ಸಮಾವೇಶ



ಬೆಂಗಳೂರು,ಆ.23(ಕೆಎಂಶಿ)–ಹುಬ್ಬಳ್ಳಿ, ಮೈಸೂರು ಹಾಗೂ ಮಂಗಳೂರಿನಲ್ಲಿ ನಡೆಯಲಿರುವ 'ಬಿಯಾಂಡ್ ಬೆಂಗಳೂರು' ಸಮಾವೇಶಗಳಿಗೆ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ ಮತ್ತು ರಾಜೀವ್ ಚಂದ್ರಶೇಖರ್ ಅವರನ್ನು ಐಟಿ–ಬಿಟಿ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ, ರಾಜ್ಯ ಸರ್ಕಾರದ ಪರವಾಗಿ ಆಹ್ವಾನಿಸಿದರು.

ಸೆ.26ರಂದು ಹುಬ್ಬಳ್ಳಿಯಲ್ಲಿ ಮತ್ತು ಅಕ್ಟೋಬರ್ 19 & 20ರಂದು ಮೈಸೂರಿನಲ್ಲಿ 'ಬಿಯಾಂಡ್ ಬೆಂಗಳೂರು' ಟೆಕ್ ಸಮಾವೇಶ ನಡೆಯಲಿದೆ. ಇವುಗಳನ್ನು ಕ್ರಮವಾಗಿ ಪ್ರಹ್ಲಾದ್ ಜೋಶಿ ಮತ್ತು ರಾಜೀವ್ ಚಂದ್ರಶೇಖರ್ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಆಹ್ವಾನವನ್ನು ಸ್ವೀಕರಿಸಿದ ಕೇಂದ್ರ ಸಚಿವರು ಸಮಾವೇಶಕ್ಕೆ ಬರುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ತೋಟಗಾರಿಕೆ ಸಚಿವ ಮುನಿರತ್ನ ಕೂಡ ಇದ್ದರು. ಬೆಂಗಳೂರು ನಗರದ ಆಚೆಗೂ ರಾಜ್ಯದ ವಿವಿಧ ಭಾಗಗಳಲ್ಲಿ ಕೈಗಾರಿಕೆಗಳು ನೆಲೆಯೂರುವಂತೆ ಮಾಡಲು ಸರಕಾರ ನಿರ್ಧರಿಸಿದೆ. ಇದರ ಭಾಗವಾಗಿ, ನವೆಂಬರ್‌ನಲ್ಲಿ ನಡೆಯಲಿರುವ ಬೆಂಗಳೂರು ತಂತ್ರ ಜ್ಞಾನ ಸಮಾವೇಶಕ್ಕೂ (ಬಿಟಿಎಸ್) ಮುನ್ನ ಹುಬ್ಬಳ್ಳಿ, ಮೈಸೂರು ಮತ್ತು ಮಂಗಳೂರಿನಲ್ಲಿ 'ಬಿಯಾಂಡ್ ಬೆಂಗಳೂರು' ಸಮಾವೇಶಗಳನ್ನು ನಡೆಸಲಾಗುವುದು ಎಂದು ಮಾಹಿತಿ ನೀಡಿದರು. ಸಮಾವೇಶಗಳಲ್ಲಿ ಉದ್ಯಮಗಳ ಸ್ಥಾಪನೆ ಮತ್ತು ಹೂಡಿಕೆಗೆ ಇರುವ ಅವಕಾಶಗಳ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಗುವುದು. ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯ ಉದ್ಯಮಿಗಳು, ಹೂಡಿಕೆದಾರರು ಭಾಗವಹಿಸಲಿದ್ದಾರೆ ಎಂದರು.

ಮೈಸೂರು ವಿವಿಯಲ್ಲಿ ಹಣ ದುರುಪಯೋಗ ಆರೋಪ

ಲೆಕ್ಕ ಪರಿಶೋಧನಾ ಇಲಾಖೆಯಿಂದ ತನಿಖೆ ಆರಂಭ



ಮೈಸೂರು, ಆ.23(ಆರ್‌ಕೆ)–ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಕೈಗೊಂಡಿರುವ ನಾನಾ ಕಾಮಗಾರಿಗಳಲ್ಲಿ 55 ಕೋಟಿ ರೂ. ಹಣ ದುರುಪಯೋಗವಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧಕ ಮತ್ತು ಲೆಕ್ಕ ಪತ್ರ ಇಲಾಖೆ ತನಿಖೆ ಆರಂಭಿಸಿದೆ.

ಈ ಸಂಬಂಧ ಆಗಸ್ಟ್ 12ರಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಿಗೆ ಪತ್ರ ಬರೆದಿರುವ ಇಲಾಖೆ ಪ್ರಧಾನ ನಿರ್ದೇಶಕರು, ಬೆಂಗಳೂರಿನ ಜಾಗೃತ ಕೋಶದ ಮುಖ್ಯಸ್ಥ ಎ.ಆರ್.ಪರಮೇಶ್ವರಪ್ಪ ಹಾಗೂ ಲೆಕ್ಕಾಧೀಕ್ಷಕಿ ಎ.ಜೆ.ಪವಿತ್ರ ಅವರನ್ನು ದಾಖಲೆ ಪತ್ರ ಪರಿಶೀಲಿಸಿ ವರದಿ ಸಲ್ಲಿಸಲು ನೇಮಿಸಲಾಗಿದ್ದು, ಸಹಕರಿಸುವಂತೆ ತಿಳಿಸಿದ್ದಾರೆ.

ರಾಜ್ಯ ಒಕ್ಕಲಿಗರ ಸಂಘದ ಮಾಜಿ ಪ್ರಧಾನ ಕಾರ್ಯದರ್ಶಿ ಡಾ.ಕೆ.ಮಹದೇವ ದೂರು ನೀಡಿದ್ದ ಹಿನ್ನೆಲೆಯಲ್ಲಿ ಸರ್ಕಾರದ ನಿರ್ದೇಶನದಂತೆ ಆಗಸ್ಟ್ 22ರಿಂದ 25ರವರೆಗೆ ದಾಖಲಾತಿ ಪರಿಶೀಲಿಸಿ, ವಿವರವಾದ ವರದಿ ಸಲ್ಲಿಸಲು ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ. ರಾಜ್ಯ ಒಕ್ಕಲಿಗರ ಸಂಘದ ಮಾಜಿ ಪ್ರಧಾನ ಕಾರ್ಯದರ್ಶಿ ಡಾ.ಕೆ.ಮಹದೇವ ದೂರು ನೀಡಿದ್ದ ಹಿನ್ನೆಲೆಯಲ್ಲಿ ಸರ್ಕಾರದ ನಿರ್ದೇಶನದಂತೆ ಆಗಸ್ಟ್ 22 ರಿಂದ 25ರವರೆಗೆ ದಾಖಲಾತಿ ಪರಿಶೀಲಿಸಿ ವಿವರವಾದ ವರದಿ ಸಲ್ಲಿಸಲು ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಗಳು, ಕುಲಸಚಿವರು ಹಾಗೂ ಕುಲಪತಿಗಳ ವಿಶೇಷಾಧಿಕಾರಿಗಳು ಸಿವಿಲ್, ಎಲೆಕ್ಟ್ರಿಕಲ್ ಕಾಮಗಾರಿಗಳಿಗೆ ಎಸ್.ಆರ್. ದರಕ್ಕಿಂತ ಹೆಚ್ಚಿನ ದರದ ಅಂದಾಜು ಪಟ್ಟಿ ತರಿಸಿಕೊಂಡು ಕಾಮಗಾರಿ ನಡೆಸಿದ್ದಲ್ಲದೆ, ಕೆಲ ಪರಿಕರಗಳನ್ನು ಖರೀದಿಸಿ ವಿಶ್ವವಿದ್ಯಾನಿಲಯಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದ್ದಾರೆಂದು ಡಾ.ಮಹದೇವು ತಮ್ಮ ದೂರಿನಲ್ಲಿ ತಿಳಿಸಿದ್ದಾರೆಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಉದ್ಯೋಗಿಗಳ ಪಿಂಚಣಿ ಹಣ ದುರುಪಯೋಗ ಹಾಗೂ ಉಪಾಹಾರ ಖರೀದಿ ಟೆಂಡರ್‌ನಲ್ಲೂ ಸಹ ಅಕ್ರಮವಾಗಿದೆ ಎಂದು ದೂರು ಸಲ್ಲಿಸಿದ್ದ ಹಿನ್ನೆಲೆಯಲ್ಲಿ ತನಿಖೆ ಆರಂಭಿಸಲಾಗಿದೆ ಎಂದು ಲೆಕ್ಕ ಪತ್ರ ಇಲಾಖೆ ಪ್ರಧಾನ ನಿರ್ದೇಶಕರು ತಿಳಿಸಿದ್ದಾರೆ.

ಮಂಡ್ಯದಲ್ಲಿ ಅಪರಾಧ ಪ್ರಕರಣ ಹೆಚ್ಚಳ ಹಿನ್ನಲೆ

ಪೊಲೀಸರ ಕ್ಷಿಪ್ರ ಕಾರ್ಯಾಚರಣೆ: 80ಕ್ಕೂ ಹೆಚ್ಚು ಮಂದಿ ವಶಕ್ಕೆ

ಮಂಡ್ಯ, ಆ.23– ಜಿಲ್ಲೆಯಲ್ಲಿ ಇತ್ತೀಚೆಗೆ ಅಪರಾಧ ಪ್ರಕರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮಂಡ್ಯ ಪೊಲೀಸರು ಮಂಗಳವಾರ ಸಂಜೆ ಕ್ಷಿಪ್ರ ಕಾರ್ಯಾಚರಣೆ ನಡೆಸಿ, ಸಂಶಯಾಸ್ಪದ 80ಕ್ಕೂ ಹೆಚ್ಚು ಮಂದಿಯನ್ನು ವಶಕ್ಕೆ ಪಡೆದು, ಅಪರಾಧ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಎಚ್ಚರಿಕೆ ನೀಡಿ ಬಿಡುಗಡೆಗೊಳಿಸಿದ್ದಾರೆ.

ರಾಮನಗರ ಬಿಡದಿ ಬಳಿ ನಡೆದಿದ್ದ 13 ಲಕ್ಷ ರೂ. ದರೋಡೆ ಪ್ರಕರಣ, ಗುತ್ತಲು ರಸ್ತೆಯ ಅಂಗಡಿಗಳಲ್ಲಿ 6 ಲಕ್ಷ ರೂ. ಕಳವು, ಕೊಲೆ ಪ್ರಕರಣ, ಹಳೇ ಬೂದನೂರು ಹಾಗೂ ಸ್ವರ್ಣಸಂದ್ರದ ಮನೆ ಕಳ್ಳತನ ಪ್ರಕರಣ ಸೇರಿದಂತೆ ಗಾಂಜಾ ಸೇವನೆ ಪ್ರಕರಣಗಳು ಜಿಲ್ಲೆಯಲ್ಲಿ ಹೆಚ್ಚಾದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ನಿರ್ದೇಶನದಂತೆ ಪೊಲೀಸರು ದಿಢೀರ್ ಕಾರ್ಯಾಚರಣೆ ನಡೆಸಿದರು.

ನಗರದ ಗುತ್ತಲು ಫ್ಯಾಕ್ಟರಿ ಸರ್ಕಲ್‌ನಿಂದ ಶುರುವಾದ ಕಾರ್ಯಾಚರಣೆ ಜಯಲಕ್ಷ್ಮೀ ಚಿತ್ರಮಂದಿರದವರೆಗೂ ನಡೆಯಿತು. ಗುತ್ತಲು ರಸ್ತೆ ಟೀ ಅಂಗಡಿಗಳು, ಬಾರ್ ಮುಂದೆ, ಸರ್ಕಲ್‌ಗಳು ಸೇರಿದಂತೆ ವಿವಿಧೆಡೆ ಅನುಮಾನಾಸ್ಪದವಾಗಿ ಓಡಾಡುತ್ತಿದ್ದವರು, ಗುಂಪು ಗುಂಪಾಗಿ ನಿಂತು ಹರಟೆ ಹೊಡೆಯುತ್ತಿದ್ದ ಯುವಕರು ಸೇರಿದಂತೆ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದವರು, ಅಪರಿಚಿತ ವ್ಯಕ್ತಿಗಳನ್ನು ಪೊಲೀಸರು ವಶಕ್ಕೆ ಪಡೆದರು. ಜಯಲಕ್ಷ್ಮೀ ಚಿತ್ರಮಂದಿರದ ಪಕ್ಕದ ಮೈದಾನದಲ್ಲಿ ಕುಳಿತ್ತಿದ್ದ ಯುವಕರನ್ನು ಪೊಲೀಸರು ಅಟ್ಟಾಡಿಸಿ ಹಿಡಿದರು. ಈ ವೇಳೆ ಕೆಲವರು ತಪ್ಪಿಸಿಕೊಂಡು ಓಡಲು ಪ್ರಯತ್ನಿಸಿದರಾದರೂ ಪೊಲೀಸರು ಎಲ್ಲರನ್ನು ವಶಕ್ಕೆ ಪಡೆದರು.





ನಂತರ ಅವರನ್ನು ಠಾಣೆಗೆ ಕರೆತಂದು ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಾರೋ ಇಲ್ಲವೋ? ಎಂಬ ಬಗ್ಗೆ ವಿಚಾರಣೆ ನಡೆಸಿದ ಪೊಲೀಸರು, ಸಣ್ಣಪುಟ್ಟ ಪ್ರಕರಣಗಳಲ್ಲಿ ಭಾಗಿಯಾಗಿದ್ದವರ ಮೇಲೆ ಪ್ರಕರಣ ದಾಖಲಿಸಿ, ಇನ್ನು ಮುಂದೆ ಯಾವುದೇ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಬಾರದು. ಎಲ್ಲೆಂದರಲ್ಲಿ ನಿಲ್ಲಬಾರದು. ಗುಂಪು ಸೇರಬಾರದು ಎಂದು ಎಚ್ಚರಿಕೆ ನೀಡಿ ಬಿಡುಗಡೆಗೊಳಿಸಿದರು.

ಇನ್ನೂ ಗುತ್ತಲು ರಸ್ತೆಯಲ್ಲಿ ಪೊಲೀಸರು ಕೆಲವರನ್ನು ವಶಕ್ಕೆ ಪಡೆಯುತ್ತಿದ್ದಾರೆ ಎಂಬ ವಿಚಾರ ಕಾಡ್ಗಿಚ್ಚಿನಂತೆ ಹಬ್ಬಿದಾಗ ಗುತ್ತಲು, ಸ್ವರ್ಣಸಂದ್ರ ಸೇರಿದಂತೆ ಅನೇಕ ಬಡಾವಣೆ ಯುವಕರು, ಮನೆಯಿಂದ ಹೊರಬಾರದೇ ಮನೆಯಲ್ಲೇ ಅವಿತು ಕುಳಿತ ಪ್ರಸಂಗವೂ ನಡೆದಿರುವ ಬಗ್ಗೆ ವರದಿಯಾಗಿದೆ.

6 ರಾಮನಗರ ಬಿಡದಿ ಬಳಿ 13 ಲಕ್ಷ ರೂ. ದರೋಡೆ ಪ್ರಕರಣ, ಗುತ್ತಲು ರಸ್ತೆಯ ಅಂಗಡಿಗಳಲ್ಲಿ 6 ಲಕ್ಷ ರೂ. ಕಳವು, ಕೊಲೆ ಪ್ರಕರಣ, ಹಳೇ ಬೂದನೂರು ಹಾಗೂ ಸ್ವರ್ಣಸಂದ್ರದಲ್ಲಿ ಮನೆ ಕಳ್ಳತನ ಪ್ರಕರಣ ಸೇರಿದಂತೆ ಜಿಲ್ಲೆಯಲ್ಲಿ ಗಾಂಜಾ ಸೇವನೆ ಪ್ರಕರಣಗಳು ಹೆಚ್ಚಾದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ನಿರ್ದೇಶನದಂತೆ ದಿಢೀರ್ ಕಾರ್ಯಾಚರಣೆ ನಡೆಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಬೆಂಬಲಿತ ಗ್ರಾಪಂಗಳಲ್ಲಿ ಪಿಡಿಓ, ಸಿಬ್ಬಂದಿಗಳ ನಿರ್ಲಕ್ಷ್ಯ ಆರೋಪ

ಜಿಪಂ ಕಚೇರಿ ಮುಂಭಾಗ ಕಾಂಗ್ರೆಸ್ ಪ್ರತಿಭಟನೆ

ಮಂಡ್ಯ, ಆ.23– ಕಾಂಗ್ರೆಸ್ ಬೆಂಬಲಿತ ಗ್ರಾಮ ಪಂಚಾಯಿತಿಗಳಲ್ಲಿ ಪಿಡಿಓ ಹಾಗೂ ಸಿಬ್ಬಂದಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸದೆ ನಿರ್ಲಕ್ಷ್ಯವಹಿಸುತ್ತಿದ್ದಾರೆ ಎಂದು ಆರೋಪಿಸಿ ನಗರದಲ್ಲಿ ಮಂಗಳವಾರ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಸರ್‌ಎಂವಿ ಪ್ರತಿಮೆ ಮುಂಭಾಗ ಮಾಜಿ ಶಾಸಕ ರಮೇಶ್‌ಬಂಡಿಸಿದ್ದೇಗೌಡ ನೇತೃತ್ವದಲ್ಲಿ ಸಮಾವೇಶಗೊಂಡ ತಡಗವಾಡಿ ಗ್ರಾಮಸ್ಥರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಅಲ್ಲಿಂದ ಮೆರವಣಿಗೆ ಮೂಲಕ ಜಿಪಂ ಕಚೇರಿ ಬಂದು ಕೆಲಕಾಲ ಪ್ರತಿಭಟನೆ ನಡೆಸಿದರು. ಈ ವೇಳೆ ಜಿಪಂ ಸಿಇಓ, ಡಿಎಸ್ 1 ಹಾಗೂ ಪಿಡಿಓಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ರಮೇಶ್ ಬಂಡಿಸಿದ್ದೇಗೌಡ ಮಾತನಾಡಿ, ತಡಗವಾಡಿ ಸೇರಿದಂತೆ ಕಾಂಗ್ರೆಸ್ ಬೆಂಬಲಿತ ಆಡಳಿತವಿರುವ ಗ್ರಾಪಂಗಳಲ್ಲಿ ಅಧಿಕಾರಿಗಳು ಕರ್ತವ್ಯ ಲೋಪ ಎಸಗುತ್ತಿದ್ದಾರೆ. ಸರಿಯಾಗಿ ಸಾರ್ವಜನಿಕರ ಕೆಲಸ ಮಾಡುತ್ತಿಲ್ಲ. ಖಾತೆ ಮಾಡಲು ಹಣ ಕೇಳುತ್ತಾರೆ. ಪಂಚಾಯಿತಿಗಳಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ ಎಂದು ಆರೋಪಿಸಿದರು.



ಶ್ರೀರಂಗಪಟ್ಟಣ ಕ್ಷೇತ್ರದಲ್ಲಿ ಜನರಿಗೆ ಹಕ್ಕು ಪತ್ರ ನೀಡಲು ಸರ್ಕಾರ ಮುಂದಾಗಿದೆ. ಆದರೆ, ಕ್ಷೇತ್ರದ ಶಾಸಕರು ಹಕ್ಕು ಪತ್ರ ವಿತರಿಸಲು ತಾರತಮ್ಯ ಮಾಡುತ್ತಿದ್ದಾರೆ. ಜೆಡಿಎಸ್ ಪಕ್ಷಕ್ಕೆ ಬೆಂಬಲಿಸಿದರೆ ಮಾತ್ರ ಹಕ್ಕುಪತ್ರ ಕೊಡಿಸುವುದಾಗಿ ಜನರಿಗೆ ಬೆದರಿಕೆ ಹಾಕುತ್ತಿದ್ದಾರೆ. ಪಂಚಾಯಿತಿ ಅಧಿಕಾರಿಗಳನ್ನು ಬೆದರಿಸಿ ತಮ್ಮ ತಾಳಕ್ಕೆ ತಕ್ಕಂತೆ ಕುಣಿಸಿಕೊಳ್ಳುತ್ತಿದ್ದಾರೆ. ಈ ಕೂಡಲೇ ಸರ್ಕಾರದಿಂದಲೇ ಕ್ಷೇತ್ರದ ಎಲ್ಲರಿಗೂ ಹಕ್ಕು ಪತ್ರ ಕೊಡಿಸಬೇಕು. ಪಕ್ಷಪಾತ ಮಾಡುತ್ತಿರುವ ಸ್ಥಳೀಯ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕು. ಇಲ್ಲದಿದ್ದರೆ ಮುಂದಿನ ದಿನದಲ್ಲಿ ಹೆಚ್ಚಿನ ಜನರೊಂದಿಗೆ ಜಿಪಂ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿದರು.

ಗ್ರಾಮಸ್ಥರಿಂದ ಮನವಿ ಸ್ವೀಕರಿಸಿದ ಸಿಇಓ ಶಾಂತ ಹುಲ್ಮನಿ ಮಾತನಾಡಿ, ಸಾರ್ವಜನಿಕರ ಸಮಸ್ಯೆ ಬಗೆಹರಿಸದ ಪಿಡಿಓಗಳ ವಿರುದ್ಧ ಕ್ರಮ ಜರುಗಿಸುವುದಾಗಿ ಭರವಸೆ ನೀಡಿದರು. ಸಮಸ್ಯೆಗಳ ಬಗ್ಗೆ ಕೂಡಲೇ ಇಓ ಹಾಗೂ ಪಿಡಿಓಗಳ ಜೊತೆ ಚರ್ಚಿಸುತ್ತೇನೆ. ನಿಯಮಾನುಸಾರ ನಿರ್ದೇಶನ ನೀಡಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಾರ್ವಜನಿಕರಿಂದ ಪ್ರತಿನಿತ್ಯ ನೂರಾರು ಕರೆಗಳು ಬಂದಿವೆ. ಕಚೇರಿಗೂ ಕೂಡ ಭೇಟಿ ನೀಡಿ ಸಮಸ್ಯೆಗಳನ್ನು ತಿಳಿಸಿದ್ದಾರೆ. ಪಿಡಿಓಗಳಿಗೆ ಆನ್‌ಲೈನ್ ಹಾಜರಾತಿ ಕಡ್ಡಾಯ ಮಾಡಿದ್ದೇವೆ. ಕೆಲವರು ಸರಿಯಾಗಿ ಕೆಲಸ ಮಾಡುತ್ತಿಲ್ಲ. ಅಂತವರಿಗೆ ನೋಟಿಸ್ ನೀಡಲಾಗಿದೆ. ಇಓ ಹಾಗೂ ನೋಡಲ್ ಅಧಿಕಾರಿಗಳಿಗೆ ಸೂಚನೆ ನೀಡಿ ಕ್ರಮ ವಹಿಸಲು ತಿಳಿಸಿದ್ದೇನೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ತಡಗವಾಡಿ ಗ್ರಾಪಂ ಅಧ್ಯಕ್ಷ ಜಿ.ಎನ್.ಮಧು, ಕಾಂಗ್ರೆಸ್ ಮುಖಂಡ ಯತೀಶ್, ತಗ್ಗಹಳ್ಳಿ ಕೃಷ್ಣ, ಮಂಜುನಾಥ್, ಪುಟ್ಟು ಗವಿಗೌಡ, ಚೇತನ್, ರವಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಸಾರ್ವಜನಿಕರು ಹಾಜರಿದ್ದರು.

ಪ್ರಾಮಾಣಿಕತೆ, ದಕ್ಷತೆಯಿಂದ ಪಂಚಾಯತ್‌ರಾಜ್ ಬಲವರ್ಧನೆ ಸಾಧ್ಯ

ಭಾರತೀನಗರ, ಆ.23– ಪಂಚಾಯಿತಿಗಳು ಪ್ರಾಮಾಣಿಕ ಹಾಗೂ ದಕ್ಷತೆಯಿಂದ ಕೆಲಸ ನಿರ್ವಹಿಸಿದರೆ ಮಾತ್ರ ಪಂಚಾಯತ್‌ರಾಜ್ ಸಂಸ್ಥೆಗಳು ಬಲವರ್ಧನೆಗೊಳ್ಳಲು ಸಾಧ್ಯ ಎಂದು ಶಾಸಕ ಡಿ.ಸಿ.ತಮ್ಮಣ್ಣ ಹೇಳಿದರು.

ಸಮೀಪದ ಕಾಡುಕೊತ್ತನಹಳ್ಳಿ ಗ್ರಾಪಂ ನವೀಕರಣ ಕಾಮಗಾರಿ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಪಂ ಸದಸ್ಯರು ಪಂಚಾಯತ್‌ರಾಜ್ ವ್ಯವಸ್ಥೆ ಅರಿತು ಜಾಗೃತವಾಗಿ ತಿಳಿಸುವ ಕೆಲಸ ಮಾಡಬೇಕು. ಗ್ರಾಮೀಣರು ಸ್ವಾವಲಂಬಿ ಮತ್ತು ಸುಸ್ಥಿರ ಬದುಕನ್ನು ಕಟ್ಟಿಕೊಡುವ ಹಿನ್ನೆಲೆಯಲ್ಲಿ ಗ್ರಾಮ ಪಂಯಿತಿಗಳು ಕರ್ತವ್ಯ ನಿರ್ವಹಿಸಬೇಕು ಎಂದರು.

ಗ್ರಾಮ ಪಂಚಾಯಿತಿಗಳಿಗೆ ಸಾಕಷ್ಟು ಅನುದಾನಗಳು ನೇರವಾಗಿ ಬರುವುದರಿಂದ ಅವುಗಳಿಗೆ ಸಂಬಂಧಿಸಿದಂತೆ ಗ್ರಾಮ ಸಭೆ ಶಿಫಾರಸ್ಸಿನಂತೆ ಕ್ರಿಯಾ ಯೋಜನೆ ತಯಾರು ಮಾಡಿ ಗುಣಮಟ್ಟದ ಕಾಮಗಾರಿ ಅನುಷ್ಠಾನ ಮಾಡುವಲ್ಲಿ ಗ್ರಾಮ ಪಂಚಾಯಿತಿ ಅವರು ಕೆಲಸ ನಿರ್ವಹಿಸಬೇಕು ಎಂದರು.



ಮಹಾತ್ಮ ಗಾಂಧೀಜಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ವೈಯುಕ್ತಿಕ ಮತ್ತು ಸಮುದಾಯ ಕಾಮಗಾರಿಗಳನ್ನು ತಮ್ಮ ಹಂತದಲ್ಲೇ ತೀರ್ಮಾನ ಗ್ರಾಮವನ್ನು ಅಭಿವೃದ್ಧಿಪಡಿಸಬಹುದು. ಶಾಸಕರ ಅನುದಾನವನ್ನೇ ಕಾಯುವ ಅವಶ್ಯಕತೆ ಇಲ್ಲ ಎಂದರು.

ಇದೇ ವೇಳೆ ಶಾಸಕ ಡಿ.ಸಿ.ತಮ್ಮಣ್ಣ ಮತ್ತು ಗ್ರಾಪಂ ಸದಸ್ಯರನ್ನು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎನ್.ಲವ, ಗ್ರಾಪಂ ಅಧ್ಯಕ್ಷ ಕೆ.ಎಸ್.ದಯಾನಂದ್, ಉಪಾಧ್ಯಕ್ಷೆ ಜಯಲಕ್ಷ್ಮೀ, ಸದಸ್ಯರಾದ ಕೆಂಪರಾಜು, ಜಯರಾಜು, ಹೆಚ್.ಮಂಗಳಾ, ಕೆ.ಸಿ. ಸುನಂದಾ, ಶಾರದಮ್ಮ, ನವೀನ, ಸಿಂಧು, ರಾಜು, ರುದ್ರಯ್ಯ, ವೀರಭದ್ರಯ್ಯ, ಚಂದ್ರಕಲಾ, ಮಂಜುಳಾ, ಲೋಕೇಶ್, ಕಾವೇರಮ್ಮ, ಮುಖಂಡರಾದ ಚಿನ್ನಿಂಗಸ್ವಾಮಿ, ಮಹೇಂದ್ರ, ಸಿದ್ದರಾಜು, ಕಪರೇಕೊಪ್ಪಲು ಪುಟ್ಟಸ್ವಾಮಿ, ಸ್ವಾಮಿ ಸೇರಿದಂತೆ ಇತರರಿದ್ದರು.

ಅಪರಿಚಿತ ವ್ಯಕ್ತಿ ಶವ ಪತ್ತೆ

ನಾಗಮಂಗಲ, ಆ.23– ಪಟ್ಟಣದ ಶ್ರೀಸೌಮ್ಯ ಕೇಶವಸ್ವಾಮಿ ದೇವಸ್ಥಾನದ ಸಮೀಪದ ಮಾದರಿ ಉನ್ನತ ಪ್ರಾಥಮಿಕ ಶಾಲೆಯ ಹೊಸ ಕಟ್ಟಡದ ಮುಂಭಾಗ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದ್ದು, ಸ್ಥಳಕ್ಕೆ ಪಟ್ಟಣದ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಅಂದಾಜು 45–50 ವರ್ಷದ ಪ್ರಾಯದವನಾಗಿದ್ದು, ಎದೆಯ ಮಧ್ಯದಲ್ಲಿ ಕೆಂಪೇಗೌಡ ಎಂದು ಹಸಿರು ಹಚ್ಚೆ ಇರುತ್ತದೆ. ಶವವನ್ನು ತಾಲೂಕಿನ ಬೆಳ್ಳೂರು ಹೋಬಳಿಯ ಬಿಜಿಎಸ್ ಆಸ್ಪತ್ರೆಯ ಶೈತಲೀಕರಣ ಶವಾಗಾರದಲ್ಲಿ ಇರಿಸಲಾಗಿದ್ದು, ವಾರಸುದಾರರು ಪತ್ತೆಯಾದಲ್ಲಿ ನಾಗಮಂಗಲ ಪಟ್ಟಣದ ಪೊಲೀಸ್ ಠಾಣೆ ದೂ: 082342–86040, ಮೊ: 94808 04852 ಸಂಪರ್ಕಿಸಲು ಕೋರಲಾಗಿದೆ.

ಹನಿಟ್ರ್ಯಾಪ್ ಪ್ರಕರಣ: ಮೂವರ ಬಂಧನ

ಮಂಡ್ಯ, ಆ.23– ಉದ್ಯಮಿಯೊಬ್ಬರ ಹನಿಟ್ರ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ತಿಳಿಸಿದರು.

ನಗರದ ಎಸ್‌ಪಿ ಕಚೇರಿಯಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯದ ಸುಭಾಷ್ ನಗರದ ಸಲ್ಮಾಭಾನು, ಚನ್ನಪಟ್ಟಣ ನಗರಸಭೆ ಗುತ್ತಿಗೆ ನೌಕರ ಜಿ.ಜಯಂತ್ ಹಾಗೂ ಕನಕಪುರ ತಾಲೂಕಿನ ಚೌಕಸಂದ್ರ ಗ್ರಾಮದ ಸಿ.ಎನ್.ಮೋಹನ್‌ಕುಮಾರ್ ನಾಯ್ಕ್ ಬಂಧಿತ ಆರೋಪಿಗಳು.

ಉದ್ಯಮಿ ಜಗನ್ನಾಥ್ ಎಸ್.ಶೆಟ್ಟಿ ನೀಡಿದ ದೂರಿನ ಮೇರೆಗೆ ಮಹಿಳೆ ಹಾಗೂ ಇಬ್ಬರು ಪುರುಷರನ್ನು ಬಂಧಿಸಲಾಗಿದೆ. ಇನ್ನಿಬ್ಬರು ಯುವತಿಯರು ಹಾಗೂ ಯುವಕನ ಬಂಧನಕ್ಕೆ ಕ್ರಮ ವಹಿಸಲಾಗಿದೆ ಎಂದು ವಿವರಿಸಿದರು.

ಉದ್ಯಮಿ ಜಗನ್ನಾಥ್‌ಶೆಟ್ಟಿ ಅವರಿಗೆ ಕೊಲೆ ಬೆದರಿಕೆ ಹಾಕಿದ್ದರಿಂದ ಇಷ್ಟು ದಿನ ದೂರು ನೀಡಿಲ್ಲ ಎಂದು ವಿಚಾರಣೆಯಲ್ಲಿ ತಿಳಿಸಿದ್ದಾರೆ. ಈ ಆಧಾರದಡಿ ಆರೋಪಿಗಳ ವಿಚಾರಣೆ ನಡೆಸಲಾಗುತ್ತಿದೆ. ಮೇಲ್ನೋಟಕ್ಕೆ ಹನಿಟ್ರ್ಯಾಪ್ ಆಗಿರಬಹುದು ಎಂದು ತಿಳಿಸಿದರು. ಆರೋಪಿಗಳು ಹಿಂದೆ ಇದೇ ರೀತಿಯ ಪ್ರಕರಣಗಳಲ್ಲಿ ಭಾಗಿಯಾಗಿರುವ ಬಗ್ಗೆಯೂ ತನಿಖೆ ನಡೆಯುತ್ತಿದೆ. ಆದರೆ ಇದುವರೆಗೂ ಯಾವುದೇ ಮಾಹಿತಿ ಸಿಕ್ಕಿಲ್ಲ. ಅವರಿಂದ ಮೋಸ ಹೋಗಿರುವವರು ದೂರು ನೀಡಿದರೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಗೌರಮ್ಮ ನಿಧನ



ಕೆ.ಆರ್.ಪೇಟೆ, ಆ.23– ತಾಲೂಕಿನ ಮೂಲೆಪೆಟ್ಲು ಗ್ರಾಮದ ನಿವಾಸಿ ಗೌರಮ್ಮ(80) ಮಂಗಳವಾರ ನಿಧನ ರಾದರು. ಮೃತರು ಕೃಷ್ಣಾಪುರ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಈರಯ್ಯಸ್ವಾಮಿ ಸೇರಿದಂತೆ ಮೂವರು ಪುತ್ರರು, ಅಪಾರ ಬಂಧು–ಬಳಗ ಅಗಲಿದ್ದಾರೆ ಅಂತ್ಯಕ್ರಿಯೆ ಸ್ವ ಗ್ರಾಮದ ಮೂಲೆಪೆಟ್ಲು ಗ್ರಾಮದಲ್ಲಿ ನಡೆಯಿತು.

ಶಿವೇಗೌಡ



ಕೆ.ಆರ್.ಪೇಟೆ: ತಾಲೂಕಿನ ಸೊಳ್ಳೇಪುರ ಗ್ರಾಮದ ಹಿರಿಯ ಮುಖಂಡ ಹಾಗೂ ಬೆಲ್ಲದ ವ್ಯಾಪಾರಿ ಶಿವೇಗೌಡ(85) ಮಂಗಳವಾರ ನಿಧನರಾದರು. ಪತ್ನಿ ಶಾಂತಮ್ಮ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೊಳ್ಳೇಪುರ ಗ್ರಾಮದಲ್ಲಿ ಮಧ್ಯಾಹ್ನ ನಡೆಯಿತು.

ಮನೆ ಬೀಗ ಮುರಿದು, 2 ಲಕ್ಷ ನಗದು, ಚಿನ್ನಾಭರಣ ಕಳವು

ಮಂಡ್ಯ, ಆ.23– ಮನೆ ಬೀಗ ಮುರಿದು ಒಳ ನುಗ್ಗಿರುವ ಖದೀಮರು 2 ಲಕ್ಷ ರೂ. ನಗದು ಹಾಗೂ ಅಪಾರ ಪ್ರಮಾಣದ ಚಿನ್ನಾಭರಣ ಕಳವು ಮಾಡಿರುವ ಘಟನೆ ನಗರದ ಸ್ವರ್ಣಸಂದ್ರದಲ್ಲಿ ಸೋಮವಾರ ಮಧ್ಯರಾತ್ರಿ ನಡೆದಿದೆ.



ಇಲ್ಲಿನ ನಿವಾಸಿ ವಸಂತಮ್ಮ ಅವರ ಮನೆಯಲ್ಲಿ ಕಳ್ಳತನವಾಗಿದೆ. ಇವರ ಅಳಿಯ ರೇವಣ್ಣ ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯಲ್ಲಿ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವಸಂತಮ್ಮ ಸೋಮವಾರ ರಾತ್ರಿ ತನ್ನ ಮಗನೊಂದಿಗೆ ಅಳಿಯ ರೇವಣ್ಣ ಮನೆಗೆ ಊಟಕ್ಕೆಂದು ಹೋಗಿ ರಾತ್ರಿ ಅಲ್ಲಿಯೇ ತಂಗಿದ್ದಾರೆ. ಈ ವೇಳೆ ಮನೆಯಲ್ಲಿ ಯಾರೂ ಇಲ್ಲದ್ದನ್ನು ಗಮನಿಸಿರುವ ಕಳ್ಳರು ಬೀಗ ಮುರಿದು ಒಳ ನುಗ್ಗಿ ಚಿನ್ನಾಭರಣ, ನಗದು ದೋಚಿ ಪರಾರಿಯಾಗಿದ್ದಾರೆ. ಈ ಸಂಬಂಧ ನಗರದ ಪೂರ್ವ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾವು ಹೋರಾಟ ಮಾಡುವಾಗಲೆಲ್ಲಾ ನಿಷೇಧಾಜ್ಞೆ

ಬೆಂಗಳೂರು: ವಿಪಕ್ಷ ನಾಯಕ ಸಿದ್ದರಾಮಯ್ಯ ಕಾರಿನ ಮೇಲೆ ಮೊಟ್ಟೆ ಎಸೆತ ಖಂಡಿಸಿ ಆಗಸ್ಟ್ 26 ರಂದು ಕಾಂಗ್ರೆಸ್ ಮಡಿಕೇರಿ ಚಲೋ ಹಮ್ಮಿಕೊಂಡಿದ್ದು ಈ ಮಧ್ಯೆ ಸರ್ಕಾರ ನಾಳೆಯಿಂದ ನಾಲ್ಕು ದಿನಗಳ ಕಾಲ ಕೊಡಗು ಜಿಲ್ಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದೆ.



ಸರ್ಕಾರದ ಈ ನಡೆಯನ್ನ ಟೀಕಿಸಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ನಾವು ಹೋರಾಟ ಮಾಡುವಾಗ ಯಾವಾಗಲೂ ನಿಷೇಧಾಜ್ಞೆ ಹಾಕ್ತಾರೆ. ನಮ್ಮ ಮೇಲೆ ಕೇಸ್ ಹಾಕುವುದು ಸರ್ಕಾರದ ಒಂದು ಚಾಳಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಮ್ಮ ಶಾಸಕಾಂಗ ಪಕ್ಷದ ನಾಯಕರ ಜೊತೆ ಮಾತನಾಡುತ್ತೇವೆ. ಒಂದು ಗಂಟೆಯೊಳಗಾಗಿ ನಮ್ಮ ನಿರ್ಧಾರ ತಿಳಿಸುತ್ತೇವೆ. ಬಿಜೆಪಿಯತವರು ಏನುಬೇಕಾದರೂ ಮಾಡಬಹುದು ಎಂದರು.

ಒಂದನೇ ಪುಟದಿಂದ

ಬಸವಣ್ಣ, ಕೆಂಪೇಗೌಡರ ಪ್ರತಿಮೆ ಸ್ಥಾಪನೆ

ಬಂದಿರಲಿಲ್ಲ ಇತ್ತೀಚೆಗಷ್ಟೇ ಕೆಂಪೇಗೌಡ ಜಯಂತಿ ವೇಳೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಕೆಂಪೇಗೌಡ ಪ್ರತಿಮೆ ಸ್ಥಾಪಿಸುವುದಾಗಿ ಘೋಷಿಸಿದ್ದರು.

ಇದೀಗ ಎರಡೂ ಪ್ರತಿಮೆ ಸ್ಥಾಪಿಸಲು ಸರ್ಕಾರ ಆದೇಶ ಹೊರಡಿಸಿದೆ. ನವೆಂಬರ್ 1 ರಂದು ಪ್ರತಿಮೆಗಳನ್ನು ಅನಾವರಣಗೊಳಿಸಲಾಗುವುದು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ, ಪಿಡಬ್ಲ್ಯೂಡಿಯ ಮುಖ್ಯ ವಾಸ್ತುಶಿಲ್ಪಿ ಪ್ರತಿಮೆಗಳನ್ನು ವಿನ್ಯಾಸಗೊಳಿಸುತ್ತಿದ್ದಾರೆ. ವಿಧಾನಸೌಧದಲ್ಲಿರುವ ಬಹುತೇಕ ಪ್ರತಿಮೆಗಳು 14 ಅಡಿ ಎತ್ತರವಿದ್ದು, ಎರಡು ಹೊಸ ಪ್ರತಿಮೆಗಳು ಒಂದೇ ಗಾತ್ರದ್ದಾಗಿರುತ್ತವೆ. ಇವುಗಳನ್ನು ಹಿತ್ತಾಳೆಯಿಂದ ಮಾಡಲಾಗುತ್ತದೆ. ನವೆಂಬರ್ 1 ರೊಳಗೆ ಪ್ರತಿಮೆ ವಿನ್ಯಾಸಗೊಳಿಸಲು ಸೂಚಿಸಲಾಗಿದೆ, ಪ್ರತಿಮೆ ಸ್ಥಾಪನೆಗೆ ನಮಗೆ ಕಡಿಮೆ ಸಮಯವಿದೆ, ಹೀಗಾಗಿ ನಾವು ಕೆಲಸ ಆರಂಭಿಸಿದ್ದೇವೆ ಎಂದು ಹೇಳಿದ್ದಾರೆ.

ಚುನಾವಣೆಗೆ ಕೆಲವೇ ತಿಂಗಳುಗಳಿರುವಾಗ ಪ್ರತಿಮೆಗಳನ್ನು ಸ್ಥಾಪಿಸುತ್ತಿರುವುದು ಮತದಾರರ ಸೆಳೆಯುವ ಗುರಿಯನ್ನು ಹೊಂದಿರುವಂತಿದೆ. ಬಸವಣ್ಣ ಮತ್ತು ಕೆಂಪೇಗೌಡರು ಜಾತಿ, ಧರ್ಮ ಮೀರಿದವರು. ಆದರೆ ಲಿಂಗಾಯತರು ಮತ್ತು ಒಕ್ಕಲಿಗರು ಇಬ್ಬರು ಶ್ರೇಷ್ಠರೊಂದಿಗೆ ಭಾವನಾತ್ಮಕ ಸಂಪರ್ಕವನ್ನು ಹೊಂದಿದ್ದಾರೆ. ಹಲವೆಡೆ ಈ ಇಬ್ಬರು ವ್ಯಕ್ತಿಗಳ ಪ್ರತಿಮೆಗಳಿವೆ, ಆದರೆ ವಿಧಾನಸೌಧದಲ್ಲಿ ಅವುಗಳನ್ನು ಸ್ಥಾಪಿಸುವುದು ಬಹಳ ವ್ಯತ್ಯಾಸ ಹೊಂದಲಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.

ಈ ಹಿಂದೆ ರಾಮನಗರದಲ್ಲಿ, ಲಿಂಗಾಯತ ಮಠಾಧೀಶರಾದ ಸಿದ್ದಗಂಗಾ ಮಠದ ಶಿವಕುಮಾರ ಸ್ವಾಮೀಜಿ ಹಾಗೂ ಒಕ್ಕಲಿಗ ಮಠಾಧೀಶ ಬಾಲಗಂಗಾಧರನಾಥ ಸ್ವಾಮೀಜಿ ಅವರ 111 ಅಡಿ ಎತ್ತರದ ಕಂಚಿನ ಪ್ರತಿಮೆ ಸ್ಥಾಪಿಸಲು ಸರ್ಕಾರ ಅನುಮೋದನೆ ನೀಡಿದ್ದು, ಎರಡು ಸಮುದಾಯಗಳನ್ನು ಓಲೈಸಲು ಪ್ರತಿಮೆ ರಾಜಕಾರಣ ಮಾಡಲು ಯತ್ನಿಸಿತ್ತು. ಅಂದಿನ ಸಿಎಂ ಯಡಿಯೂರಪ್ಪ ಪ್ರತಿಮೆಗೆ ತಲಾ 25 ಕೋಟಿ ಮಂಜೂರು ಮಾಡಿದ್ದು, ಕಾಮಗಾರಿ ನಡೆಯುತ್ತಿದೆ. ಜ್ಞಾನ ಭಾರತಿ ಆವರಣದಲ್ಲಿರುವ ಕಲಾಗ್ರಾಮದಲ್ಲಿ 30 ಅಡಿ ಎತ್ತರದ ಭುವನೇಶ್ವರಿ ದೇವಿಯ ಪ್ರತಿಮೆ ಸ್ಥಾಪಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮುಂದಾಗಿದೆ. ಇದು ಭಾಷಾ ಭಾವನೆಯ ಮೇಲೆ ಮತದಾರರನ್ನು ಸೆಳೆಯುವ ಪ್ರಯತ್ನ ಎನ್ನಲಾಗಿದೆ.

ಕಾಂಗ್ರೆಸ್‌ನ ಮಡಿಕೇರಿ ಚಲೋ ಮುಂದೂಡಿಕೆ

ನಮ್ಮ ಪಕ್ಷದ ಕಾರ್ಯಕರ್ತರು, ಮುಖಂಡರು ಸರ್ಕಾರದ ನಡೆಯನ್ನು ಖಂಡಿಸಿ ಎಲ್ಲ ಕಡೆ ಪ್ರತಿಭಟನೆ ಮಾಡಿದ್ದಾರೆ. ಕೆಲವೆಡೆ ಕಪ್ಪು ಬಾವುಟ ತೋರಿದ್ದಾರೆ. ಸಂವಿಧಾನಾತ್ಮಕ ಹುದ್ದೆಯಲ್ಲಿ ಕುಳಿತು ಕಾನೂನು ಉಲ್ಲಂಘಿಸಿ, ಹೋರಾಟ ಮಾಡು ವುದು ಸರಿಯಲ್ಲ ಎಂಬ ನಿಲುವು ತೆಗೆದು ಕೊಂಡು ತಾತ್ಕಾಲಿಕವಾಗಿ ಕೊಡಗು ಚಲೋ ಕೈಬಿಟ್ಟಿದ್ದೇವೆ ಎಂದರು.

ಕೊಡಗು ಜಿಲ್ಲೆಯಲ್ಲಿ ಮಳೆಯಿಂದ ಆದ ಹಾನಿ ವೀಕ್ಷಿಸಲು ಆಗಸ್ಟ್ 18ರಂದು ಭೇಟಿ ನೀಡಿದ್ದೆ. ಅದಕ್ಕೂ ಮೊದಲು ನಿರಂತರ ಮಳೆ ಬೀಳುತ್ತಾ ಇದ್ದುದ್ದರಿಂದ ಭೇಟಿ ನೀಡಲು ಆಗಿರಲಿಲ್ಲ. ಈ ವರ್ಷ ಅನೇಕ ಕಡೆಗಳಲ್ಲಿ ಜೂನ್ ತಿಂಗಳಿಂದ ಆಗಸ್ಟ್ ತಿಂಗಳಿನವರೆಗೆ ವಾಡಿಕೆಗಿಂತ ಎರಡು, ಮೂರು ಪಟ್ಟು ಹೆಚ್ಚು ಮಳೆಯಾಗಿದೆ.

ಹೀಗಾಗಿ ಕೊಡಗಿನಲ್ಲಿ ಅನೇಕ ಕಡೆಗಳಲ್ಲಿ ಭೂಮಿ ಕುಸಿದಿದೆ. ಮನೆಗಳ ಮೇಲೆ ಮಣ್ಣು ಕುಸಿದಿರುವುದರಿಂದ ಜನ ತಮ್ಮ ಮನೆಗಳನ್ನು ತೊರೆದು ಬೇರೆ ಕಡೆ ವಾಸ ಮಾಡುತ್ತಿದ್ದಾರೆ, ರಸ್ತೆಗಳ ಮೇಲೆ ಮಣ್ಣು ಬಿದ್ದು ರಸ್ತೆಗಳು ಮುಚ್ಚಿಹೋಗಿ ಸಾರಿಗೆ ವ್ಯವಸ್ಥೆಗೆ ತೊಂದರೆಯಾಗಿದೆ. ಈ ಸಮಸ್ಯೆಗಳನ್ನು ನೋಡಲು ಹೊರಟಾಗ ತಿತಿಮತಿಯಲ್ಲಿ ನನಗೆ ಕಪ್ಪು ಬಾವುಟ ಪ್ರದರ್ಶನ ಮಾಡಿದರು, ಪೊಲೀಸರು ಅಲ್ಲಿ ನಿಷ್ಕ್ರಿಯರಾಗಿ ನಿಂತಿದ್ದರು, ಯಾರೋ ಒಬ್ಬ ವ್ಯಕ್ತಿ ಬಂದು ನನ್ನ ಕಾರಿನೊಳಗೆ ಕರಪತ್ರ ಹಾಕಿದ, ಆಗಲೂ ಪೊಲೀಸರು ಅವರನ್ನು ತಡೆಯುವ ಅಥವಾ ಬಂಧಿಸುವ ಕೆಲಸ ಮಾಡಿಲ್ಲ. ಅತಿವೃಷ್ಟಿಯಾದ ಸಂದರ್ಭದಲ್ಲಿ ಪರಿಹಾರ ಕಾಮಗಾರಿ ಕೈಗೊಳ್ಳಲು ರಾಜ್ಯ ಸರ್ಕಾರ ದೊಡ್ಡ ಪ್ರಮಾಣದಲ್ಲಿ ಹಣ ಬಿಡುಗಡೆ ಮಾಡಿದೆ. ಆದರೆ ಎಲ್ಲಾ ಕಾಮಗಾರಿಗಳು ಕಳಪೆಯಿಂದ ಕೂಡಿರುವುದರಿಂದಲೇ ಭೂ ಕುಸಿತ ಮತ್ತಿತರ ಹಾನಿಗಳು ಸಂಭವಿಸಿವೆ ಎಂದರು. ಇದನ್ನು ನೋಡಲು ತಾವು ಹೋಗುತ್ತೇವೆ ಎಂಬುದನ್ನು ಮನಗಂಡ ಸ್ಥಳೀಯ ಶಾಸಕರು, ನನ್ನ ವಿರುದ್ಧ ಉದ್ದೇಶಪೂರಕವಾಗಿ ಮಸಿ ಬಳಿಯುವ ಕೆಲಸ ಮಾಡಿದ್ದಾರೆ ಎಂದು ದೂರಿದರು.

ನೈಸರ್ಗಿಕ ಅನಿಲ ಕ್ಷೇತ್ರದಲ್ಲಿ ಕ್ರಾಂತಿಕಾರಿ ಸುಧಾರಣೆ

● ಕೇಂದ್ರ ಪೆಟ್ರೋಲಿಯಂ, ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ವಿವರಣೆ ● ಮೈಸೂರಿನ ಹೆಬ್ಬಾಳ್‌ನಲ್ಲಿ ಎಜಿ ಅಂಡ್ ಪಿ ಪ್ರಥಮ್ ಸಂಸ್ಥೆ 201ನೇ ಸಿಎನ್‌ಜಿ, 4ನೇ ಎಲ್‌ಸಿಎನ್‌ಜಿ ಸ್ಟೇಷನ್ ವರ್ಚುವಲ್ ಮೂಲಕ ಉದ್ಘಾಟನೆ

ಮೈಸೂರು, ಆ.23(ಎಂಕೆ)– ಮೈಸೂರಿನ ಹೆಬ್ಬಾಳ ಕೈಗಾರಿಕಾ ಪ್ರದೇಶದಲ್ಲಿ ಎಜಿ ಅಂಡ್ ಪಿ(AG&P) ಪ್ರಥಮ್ ಸಂಸ್ಥೆಯ 201ನೇ ಸಿಎನ್‌ಜಿ(ಸಂಕುಚಿತ ನೈಸರ್ಗಿಕ ಅನಿಲ) ಹಾಗೂ 4ನೇ ಎಲ್‌ಸಿಎನ್‌ಜಿ ಸ್ಟೇಷನ್ ಅನ್ನು ಕೇಂದ್ರ ಪೆಟ್ರೋಲಿಯಂ, ನೈಸರ್ಗಿಕ ಅನಿಲ ಮತ್ತು ವಸತಿ ಹಾಗೂ ನಗರ ವ್ಯವಹಾರಗಳ ಸಚಿವ ಹರ್ದೀಪ್ ಸಿಂಗ್ ಪುರಿ ವರ್ಚುವಲ್ ಮೂಲಕ ಮಂಗಳವಾರ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ನೈಸರ್ಗಿಕ ಅನಿಲ ಸದ್ಬಳಕೆಯಲ್ಲಿ ದೇಶ ಮಾದರಿಯಾಗಲಿದೆ. ಗ್ಯಾಸ್ ಉದ್ಯಮಕ್ಕೆ ಪ್ರಪಂಚದಾದ್ಯಂತ ಮಧ್ಯಸ್ಥಗಾರರು ಸೇರ್ಪಡೆಯಾಗುತ್ತಿದ್ದು, ಇದೊಂದು ಬೃಹತ್ ಇಂಧನ ಉದ್ಯಮವಾಗಿದೆ. ಮುಂದಿನ ದಿನಗಳಲ್ಲಿ ನಾವು ಹೇಗೆ ಸಾಗಬೇಕು, ಯಾವ ರೀತಿ ಮನೆ–ಮನೆಗೂ ನೈಸರ್ಗಿಕ ಅನಿಲ ವಿತರಣೆ ಮಾಡಬೇಕು ಎಂಬುದು ಮುಖ್ಯವಾಗಿದೆ. ಜನಸಂಖ್ಯೆ ಹೆಚ್ಚಳ ಪ್ರಮಾಣ ಗಮನಿಸಿದರೆ ಚೀನಾ ದೇಶವನ್ನು ಹಿಂದೆ ಹಾಕುವ ಚಿತ್ರಣವಿದ್ದು, ಇಂಧನ ಉಳಿತಾಯ ಅತ್ಯಂತ ಅವಶ್ಯವಾಗಿದೆ ಎಂದು ತಿಳಿಸಿದರು.





2014ರಲ್ಲಿ ನಗರ ಪ್ರದೇಶಗಳಿಗೆ ನೈಸರ್ಗಿಕ ಅನಿಲ ವಿತರಣೆ ಸ್ಟೇಷನ್‌ಗಳು ಕೇವಲ 66 ಇದ್ದದ್ದು, ಈಗ 630 ಸ್ಟೇಷನ್‌ಗಳಾಗಿವೆ. ಹಾಗೆಯೇ ದೇಶದಲ್ಲಿ 938 ಇದ್ದ ಸಿಎನ್‌ಜಿ ಸ್ಟೇಷನ್‌ಗಳಿಂದು 4629ಕ್ಕೆ ಏರಿಕೆಯಾಗಿದೆ. ಅಂಕಿ–ಅಂಶಗಳನ್ನು ಗಮನಿಸಿದರೆ ದೇಶದಲ್ಲಿ ನೈಸರ್ಗಿಕ ಅನಿಲಕ್ಕಿರುವ ಬೇಡಿಕೆಯ ಅರಿವಾಗುತ್ತದೆ. ಮೋದಿ ನೇತೃತ್ವದ ಕೇಂದ್ರ ಸರ್ಕಾರ ನೈಸರ್ಗಿಕ ಅನಿಲ ಪೂರೈಕೆಯಲ್ಲಿ ನೀಡುತ್ತಿರುವ ಗೊಂದಲವಿಲ್ಲದ ಮಾರ್ಗದರ್ಶನ. ಅಭಿವೃದ್ಧಿ ಹಿನ್ನೆಲೆಯಲ್ಲಿ ಕೈಗೊಳ್ಳುತ್ತಿರುವ ನಿರ್ಧಾರಗಳು ಇತರೆ ದೇಶಗಳಿಗೂ ಮಾದರಿಯಾಗಿದೆ ಎಂದರು.

ಮನೆಯಲ್ಲಿ ಸಿಲಿಂಡರ್ ಬಳಕೆ ಮಾಡುತ್ತಿದ್ದರೆ ಯಾವಾಗಬೇಕಾದರೂ ಮುಗಿಯಬಹುದೆಂಬ ಆತಂಕದಿಂದ ಹೆಚ್ಚುವರಿಯಾಗಿ ಮತ್ತೊಂದನ್ನು ತುಂಬಿಸಿಕೊಂಡಿರುತ್ತೇವೆ. ಆದರೆ ಸಿಎನ್‌ಜಿ ಕನೆಕ್ಷನ್ ಮಾಡಿದರೆ ಸಿಲಿಂಡರ್‌ಗಳ ಅಗತ್ಯವೇ ಇರುವುದಿಲ್ಲ. ಕೇವಲ ಆನ್ ಅಂಡ್ ಆಫ್ ಅಷ್ಟೇ. ನೈಸರ್ಗಿಕ ಅನಿಲ ಬಳಕೆಯಿಂದ ಪರಿಸರ ಮಾಲಿನ್ಯ ಕಡಿಮೆಯಾಗುವುದರ ಜೊತೆಗೆ ಖರ್ಚು ಕೂಡ ಕಡಿಮೆಯಾಗುತ್ತದೆ ಎಂದರು.

ಆಟೋರಿಕ್ಷಾಗೆ ನೈಸರ್ಗಿಕ ಅನಿಲ ತುಂಬಿಸುವ ಮೂಲಕ ಚಾಲನೆ ನೀಡಿದ ಸಹಾಯಕ ಆಯುಕ್ತೆ ಕಮಲಾಬಾಯಿ ಮಾತನಾಡಿ, ದೇಶದ ಜನಸಂಖ್ಯೆಗೆ ಅನುಗುಣವಾಗಿ ನೈಸರ್ಗಿಕ ಬಳಕೆ ಅಗತ್ಯವಾಗಿದೆ. ಖರ್ಚು ಕಡಿಮೆ. ಹೋಟೆಲ್ ಸೇರಿದಂತೆ ಎಲ್ಲದಕ್ಕೂ ಅನುಕೂಲವಾಗಲಿದೆ. ಡೀಸೆಲ್, ಪೆಟ್ರೋಲ್, ಎಲ್‌ಪಿಜಿ ಗ್ಯಾಸ್ ಗಿಂತಲೂ ನೈಸರ್ಗಿಕ ಅನಿಲಕ್ಕೆ ಕಡಿಮೆ ಖರ್ಚಾಗಲಿದೆ ಎಂದು ಹೇಳಿದರು.

AG&P ಪ್ರಥಮ್ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಿರದೀಪ್ ದತ್ತ ಮಾತನಾಡಿ, AG&P ಪ್ರಥಮ್ ಸಂಸ್ಥೆಯು 5 ರಾಜ್ಯಗಳ 34 ಜಿಲ್ಲಾದ್ಯಂತ 12 ಭೌಗೋಳಿಕ ಪ್ರದೇಶಗಳಲ್ಲಿ (GAs) CGD (ಸಿಟಿ ಗ್ಯಾಸ್ ಡಿಸ್ಟ್ರಿಬ್ಯೂಷನ್) ನೆಟ್‌ವರ್ಕ್‌ಗಳನ್ನು ಸ್ಥಾಪಿಸುವ ಮೂಲಕ ದೇಶದಲ್ಲಿ ಮಹತ್ವದ ಅಸ್ತಿತ್ವವನ್ನು ಹೊಂದಿದೆ. ಪ್ರಸ್ತುತ ಕಂಪನಿಯು 1,85,000 ನೋಂದಾಯಿತ ದೇಶೀಯ ಸಂಪರ್ಕಗಳು, 95 ನೋಂದಾಯಿತ ವಾಣಿಜ್ಯ ಗ್ರಾಹಕರು ಮತ್ತು 70 ನೋಂದಾಯಿತ ಕೈಗಾರಿಕಾ ಗ್ರಾಹಕರಿಗೆ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಿದೆ. AG&P ಪ್ರಥಮ್ ಸಂಸ್ಥೆ ಪ್ರಸಕ್ತ ಹಣಕಾಸು ವರ್ಷದಲ್ಲಿ 3.36 ಲಕ್ಷ ಮನೆಗಳಿಗೆ ನೈಸರ್ಗಿಕ ಅನಿಲ ಸಂಪರ್ಕ ಒದಗಿಸಿದೆ ಎಂದು ಮಾಹಿತಿ ನೀಡಿದರು.

ಹಿಂದುಳಿದವರು, ತಳ ಸಮುದಾಯದವರ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಮಹಾಪುರುಷ ಡಿ.ದೇವರಾಜ ಅರಸು

ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಸ್ಮರಣೆ

ಮೈಸೂರು, ಆ.23(ಪಿಎಂ)– ಹಿಂದುಳಿದವರು, ತಳ ಸಮುದಾಯದವರ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಮಹಾಪುರುಷ ಡಿ.ದೇವರಾಜ ಅರಸು. ಅವರು ಈ ಸಮುದಾಯಗಳ ಏಳಿಗೆಗಾಗಿ ಯೋಜನೆ ರೂಪಿಸಿ ಜಾರಿಗೊಳಿಸಿದರು ಎಂದು ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಸ್ಮರಿಸಿದರು.

ಮೈಸೂರಿನ ಕಲಾಮಂದಿರದ ಕಿರುರಂಗಮಂದಿರದಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 107ನೇ ಜನ್ಮ ದಿನಾಚರಣೆಯ ಸಮಾರೋಪ ಸಮಾರಂಭದಲ್ಲಿ ದೇವರಾಜ ಅರಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ದೇವರಾಜ ಅರಸು ಅವರು ಈ ರಾಜ್ಯ ಕಂಡ ಅಪರೂಪದ ನಾಯಕರು. ತಳ ಸಮುದಾಯದವರ ಬಗ್ಗೆ ಅವರಿಗಿದ್ದ ಕಾಳಜಿಯಿಂದ ಉಳುವವನೇ ಹೊಲದೊಡೆಯ ಎಂದು ಭೂಸುಧಾರಣಾ ಕಾಯ್ದೆ ಜಾರಿಗೆ ಬಂದಿತು. ಮಲವನ್ನು ತಲೆಯ ಮೇಲೆ ಹೊರುವ ಅನಿಷ್ಟ ಪದ್ಧತಿ ರದ್ದುಗೊಳಿಸಿದರು. ಜೀತವಿಮುಕ್ತಿ ನಿರುದ್ಯೋಗಿಗಳಿಗೆ ಸ್ಟೈಫಂಡ್‌ನಂತಹ ಹಲವಾರು ಯೋಜನೆಗಳನ್ನು ರೂಪಿಸಿ, ಬಡವರ ಪಾಲಿಗೆ ದೇವರಾದರು ಎಂದು ತಿಳಿಸಿದರು.



ಮೈಸೂರಿನ ಕಲಾಮಂದಿರದ ಕಿರುರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 107ನೇ ಜನ್ಮ ದಿನಾಚರಣೆಯ ಸಮಾರೋಪ ಸಮಾರಂಭದಲ್ಲಿ ದೇವರಾಜ ಅರಸು ಅವರ ಭಾವಚಿತ್ರಕ್ಕೆ ಎಂಎಲ್‌ಸಿ ಸಿ.ಎನ್.ಮಂಜೇಗೌಡ ಪುಷ್ಪ ನಮನ ಸಲ್ಲಿಸಿದರು.

ದೇವರಾಜ ಅರಸುರವರು ಕೊಟ್ಟಿರುವ ಕೊಡುಗೆಗಳು ಮುಂದಿನ ಪೀಳಿಗೆಗೆ ಮಾದರಿಯಾಗಬೇಕು. ವಿದ್ಯಾರ್ಥಿಗಳು ಸರ್ಕಾರದ ಸವಲತ್ತುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಅನಗತ್ಯವಾಗಿ ಮೊಬೈಲ್ ಬಳಸುವುದನ್ನು ಬಿಟ್ಟು ಹೆಚ್ಚು ಪುಸ್ತಕಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಆ ಮೂಲಕ ವಿದ್ಯಾರ್ಥಿಗಳು ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಧಾನಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಮಾತನಾಡಿ, ದೇವರಾಜ ಅರಸು ರವರು ಮುಖ್ಯಮಂತ್ರಿಯಾಗಿದ್ದರೂ ಸಾಮಾನ್ಯ ರೈತನಂತೆ ಬದುಕಿ ತೋರಿಸಿಕೊಟ್ಟವರು. ಇಂತಹ ಮಹಾ ನಾಯಕನ ಸ್ಮರಣೆ ನಿರಂತರವಾಗಿ ನಡೆಯಬೇಕು. ಅವರ ಆದರ್ಶಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು. ಮನುಷ್ಯರನ್ನು ಮನುಷ್ಯರನ್ನಾಗಿ ಕಂಡು ಒಳ್ಳೆಯದನ್ನು ಅನುಸರಿಸಬೇಕು ಎಂದರು.

ಮುಖಂಡ ಡಾ.ಎಂ.ಜಿ.ಆರ್.ಅರಸ್ ಮಾತನಾಡಿ, ದೇವರಾಜ ಅರಸು ಅವರು ನೊಂದವರ ಧ್ವನಿಯಾಗಿದ್ದರು. ಸಾಮಾಜಿಕ ಸುಧಾರಣೆಯ ಹರಿಕಾರರಾಗಿ ಕೆಳವರ್ಗದವರ ಏಳಿಗೆಗಾಗಿ ದುಡಿದರು. ನಿರಾಶ್ರಿತರಿಗೆ ಆಶ್ರಯ ನೀಡಿದರು. ಬೆಂಗಳೂರಿನಲ್ಲಿ ಬಹುಮಹಡಿ ಕಟ್ಟಡಗಳ ನಿರ್ಮಾಣಕ್ಕೆ ಚಾಲನೆ ನೀಡಿದರು ಎಂದು ನುಡಿದರು. ಇದೇ ವೇಳೆ ವಿದ್ಯಾರ್ಥಿಗಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮ ಮನಸೂರೆಗೊಂಡಿತು.

ದೇವರಾಜ ಅರಸುರವರ ಜೀವನ ಕುರಿತ ನೃತ್ಯರೂಪಕ ನೆರೆದಿದ್ದವರ ಮನಗೆದ್ದಿತು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಹೆಚ್.ಎಸ್. ಬಿಂದ್ಯಾ, ಗ್ರಂಥಾಲಯ ಇಲಾಖೆಯ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಮಾಲಿನಿ, ಎಲ್‌ಐಸಿ ಅಭಿವೃದ್ಧಿ ಅಧಿಕಾರಿ ಸ್ವಾಮಿ, ತಾಲೂಕು ಕಲ್ಯಾಣಾಧಿಕಾರಿ ಚಂದ್ರಕಲಾ, ಮುಖಂಡರಾದ ವಿಶ್ವನಾಥ್, ಸುಜೇಂದ್ರಕುಮಾರ್, ಸ್ವರ್ಣಲತಾ, ಶಶಿಕಲಾ, ಮಹೇಶ್, ಪ್ರೇಮ್ ಕುಮಾರ್ ಮತ್ತಿತರರು ಹಾಜರಿದ್ದರು.

ಕೊಡಗಲ್ಲಿ ಪ್ರತಿಭಟನೆಗೆ ಅವಕಾಶ ಕೊಟ್ಟಿದ್ದರೆ ಹೆಣ ಬೀಳುತಿತ್ತು

ತುಮಕೂರು: ಕೊಡಗಿನಲ್ಲಿ ಕಾಂಗ್ರೆಸ್‌ನವರಿಗೆ ಪ್ರತಿಭಟನೆ ಮಾಡಲು ಅವಕಾಶ ನೀಡಿದ್ದರೆ ಅಲ್ಲಿ ಹೆಣ ಬೀಳುತಿತ್ತು. ಅದಕ್ಕೆ ಅವಕಾಶ ಮಾಡಿಕೊಟ್ಟಿಲ್ಲ ಎಂದು ರಾಜ್ಯಸಭಾ ಸದಸ್ಯ ಜಗ್ಗೇಶ್ ಹೇಳಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಕೊಡಗಿನಲ್ಲಿ ಈವರೆಗೆ ಎಷ್ಟೊ ಕೊಲೆಗಳು ನಡೆದಿವೆ. ಕೇರಳ ಗಡಿದಾಟಿ ಬಂದು ಕೊಲೆ ಮಾಡುತ್ತಾರೆ. ಅಹಿತಕರ ಘಟನೆಗಳು ನಡೆಯಲು ಸಾಕಷ್ಟು ಅವಕಾಶಗಳಿವೆ. ಅದಕ್ಕಾಗಿ ಕಾಂಗ್ರೆಸಿಗರ ಪ್ರತಿಭಟನೆಗೆ ಅವಕಾಶ ನೀಡಿಲ್ಲ ಎಂದು ಸಮರ್ಥಿಸಿಕೊಂಡರು.

ಸಿದ್ದರಾಮಯ್ಯ ಕಾರಿನ ಮೇಲೆ ಕಾಂಗ್ರೆಸ್ ಕಾರ್ಯಕರ್ತನೇ ಮೊಟ್ಟೆ ಎಸೆದಿದ್ದಾನೆ. ಯಾವುದೋ ವಿಚಾರಕ್ಕೆ ಬೇಸರಗೊಂಡು ಮೊಟ್ಟೆ ಎಸೆದಿರಬಹುದು. ಈ ವಿಚಾರ ಜಗಜ್ಜಾಹೀರಾಗಿದೆ. ಆತನ ಸಂದೇಶಗಳನ್ನು ನೋಡಿದ್ದು, ಮೊದಲು ಜೆಡಿಎಸ್‌ನಲ್ಲಿ ಇದ್ದು, ನಂತರ ಕಾಂಗ್ರೆಸ್‌ಗೆ ಬಂದಿದ್ದಾನೆ. ಈಗ ಬಂಧನವೂ ಆಗಿದೆ. ಆದರೂ ಕಾಂಗ್ರೆಸ್‌ನವರು ಹೋರಾಟ ಮಾಡಬೇಕು ಎನ್ನುತ್ತಿದ್ದಾರೆ ಎಂದರು. ಕಾಂಗ್ರೆಸ್‌ನವರ ಹೋರಾಟ ಮುಂದಿನ ಜೂನ್‌ವರೆಗೂ (ವಿಧಾನಸಭೆ ಚುನಾವಣೆ) ಇರಬಹುದು. ಆ ಮೇಲೆ ಅವರೇ ತಣ್ಣಗಾಗುತ್ತಾರೆ ಎಂದರು.

ಮೈಸೂರು ಮಿತ್ರ ಬುಧವಾರ 24 ಆಗಸ್ಟ್ 2022

ಇಂದಿನಿಂದ ಜಿಲ್ಲೆಯಾದ್ಯಂತ ಆ.27ರವರೆಗೆ ನಿಷೇಧಾಜ್ಞೆ



ಪ್ರತಿಭಟನೆ, ರಾಜಕೀಯ ಸಮಾವೇಶಗಳು ನಿಷೇಧ: ಐಜಿಪಿ ಪ್ರವೀಣ್ ಮಧುಕರ್

ಮಡಿಕೇರಿ, ಆ.23– ಕೊಡಗು ಜಿಲ್ಲೆಯಾದ್ಯಂತ ಆ.24ರಿಂದ 27ರ ಸಂಜೆವರೆಗೆ ಸೆಕ್ಷನ್ 144ರ ಅಡಿ ನಿಷೇಧಾಜ್ಞೆ ಜಾರಿಯಲ್ಲಿದ್ದು, ಯಾವುದೇ ರೀತಿಯ ಪ್ರತಿಭಟನೆ, ರಾಜಕೀಯ ಸಮಾವೇಶಗಳಿಗೆ ಅವಕಾಶ ಇಲ್ಲ ಎಂದು ದಕ್ಷಿಣ ವಲಯ ಪೊಲೀಸ್ ಮಹಾ ನಿರ್ದೇಶಕ ಪ್ರವೀಣ್ ಮಧುಕರ್ ಪವಾರ್ ಸ್ಪಷ್ಟಪಡಿಸಿದ್ದಾರೆ.

ನಿಷೇಧಾಜ್ಞೆ ಜಾರಿಯಾಗುತ್ತಿರುವ ಹಿನ್ನೆಲೆಯಲ್ಲಿ ನಗರದ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಎಸ್.ಪಿ. ಸೇರಿದಂತೆ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದ ಐಜಿಪಿ ಪ್ರವೀಣ್ ಮಧುಕರ್ ಪವಾರ್, ಮಾಜಿ ಸಿಎಂ ಸಿದ್ದರಾಮಯ್ಯ ಅವರು ಕೊಡಗಿಗೆ ಬಂದ ಸಂದರ್ಭ ಕೈಗೊಳ್ಳಲಾಗಿದ್ದ ಭದ್ರತಾ ವ್ಯವಸ್ಥೆಗಳ ಕುರಿತು ಮಾಹಿತಿ ಪಡೆದುಕೊಂಡರು.

ತಿತಿಮತಿಯಲ್ಲಿ ಕಪ್ಪು ಬಾವುಟ ಹಾಗೂ ಸಾವರ್ಕರ್ ಫೋಟೋ ಪ್ರದರ್ಶನ, ಮಡಿಕೇರಿಯಲ್ಲಿ ಪ್ರತಿಭಟನೆ ಮತ್ತು ಮೊಟ್ಟೆ ಎಸೆತ, ಗುಡ್ಡೆಹೊಸೂರು ಮೊಟ್ಟೆ ಎಸೆತ ಪ್ರಕರಣಗಳ ಪೂರ್ವಪರಗಳನ್ನು ವಿಚಾರಿಸಿದರು. ಘಟನೆಯಲ್ಲಿ ಪಾಲ್ಗೊಂಡವರ ಮಾಹಿತಿ ಸಹಿತ ಆ ಸಂದರ್ಭ ದಾಖಲಾದ ಕೇಸ್‌ಗಳ ವಿವರ ಪಡೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಐಜಿಪಿ ಪ್ರವೀಣ್ ಮಧುಕರ್ ಪವಾರ್, ಸೆಕ್ಷನ್ 144 ಆ.24ರಿಂದ ಜಾರಿಯಾಗುವ ಹಿನ್ನೆಲೆ ಜಿಲ್ಲೆಯಲ್ಲಿ ಯಾವುದೇ ಪ್ರತಿಭಟನೆಗಳಿಗೆ ಅವಕಾಶವಿಲ್ಲ. ಜಿಲ್ಲೆಯ ಗಡಿ ಭಾಗದ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಸೂಕ್ತ ತಪಾಸಣೆ ಹಾಗೂ ಭದ್ರತೆ ನೀಡುತ್ತೇವೆ ಎಂದು ಹೇಳಿದರು. ಕೊಡಗು, ಮೈಸೂರು, ಹಾಸನ, ಮಂಡ್ಯ, ಚಾಮರಾಜನಗರ, ದಕ್ಷಿಣ ಕನ್ನಡ ಕಡೆಗಳಿಂದ ಸೂಕ್ತ ಪೊಲೀಸ್ ಸಿಬ್ಬಂದಿಗಳನ್ನು ಜಿಲ್ಲೆಗೆ ಕರೆಸಿಕೊಂಡು ಭದ್ರತಾ ವ್ಯವಸ್ಥೆ ಮಾಡಲಾಗುತ್ತದೆ. ಕಾನೂನು ಉಲ್ಲಂಘಿಸುವವರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಮಾಹಿತಿ ನೀಡಿದರು. ಕೊಡಗಿನಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಜನಪ್ರತಿನಿಧಿಗಳು, ಧಾರ್ಮಿಕ ಸಮುದಾಯಗಳ ಮುಖಂಡರು ನೆರವಾಗಬೇಕು ಎಂದು ಮನವಿ ಮಾಡಿದರು.

ಅಡಿಷನಲ್ ಎಸ್‌ಪಿ ತನಿಖೆ: ಮಾಜಿ ಸಿಎಂ ಸಿದ್ದರಾಮಯ್ಯ ಅವರ ಕೊಡಗು ಭೇಟಿಯ ಸಂದರ್ಭ ಪೊಲೀಸ್ ಭದ್ರತಾ ವೈಫಲ್ಯ ಹಾಗೂ ಗುಪ್ತಚರ ಇಲಾಖೆ ಕಾರ್ಯವೈಖರಿಯ ಬಗ್ಗೆ ವಿಪಕ್ಷಗಳು ಆರೋಪಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಐಜಿಪಿ ಪ್ರವೀಣ್ ಮಧುಕರ್ ಪವಾರ್, ಮೊಟ್ಟೆ ಎಸೆತ ಪ್ರಕರಣ ಹಾಗೂ ಭದ್ರತಾ ವೈಫಲ್ಯದ ಕುರಿತು 'ಅಡಿಷನಲ್ ಎಸ್.ಪಿ.' ಮಟ್ಟದ ಅಧಿಕಾರಿಗೆ ತನಿಖೆ ನಡೆಸಲು ಆದೇಶ ನೀಡಲಾಗಿದೆ. ಆ ತನಿಖಾ ವರದಿ ಆಧರಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲು ಸಾಧ್ಯ ಎಂದು ಹೇಳಿದರು.

ನಿಷೇಧಾಜ್ಞೆ ಸ್ವಾಗತಿಸಿದ ಕೊಡವ ಸಂಘಟನೆಗಳು

ಮಡಿಕೇರಿ, ಆ.23– ಕೊಡಗು ಜಿಲ್ಲೆ ಮತ್ತೊಮ್ಮೆ ರಣರಂಗವಾಗಲು ಅವಕಾಶ ಮಾಡಿಕೊಡದೆ ಆ.24ರಿಂದ 27ರ ವರೆಗೆ ಜಿಲ್ಲೆಯಾದ್ಯಂತ 144 ಸೆಕ್ಷನ್ ಜಾರಿಗೊಳಿಸಿರುವ ಜಿಲ್ಲಾಡಳಿತ ಕ್ರಮವನ್ನು ಅಖಿಲ ಕೊಡವ ಸಮಾಜ ಹಾಗೂ ಅಖಿಲ ಕೊಡವ ಸಮಾಜ ಯೂತ್ ವಿಂಗ್ ಸ್ವಾಗತಿಸಿದೆ.

ಈ ಕುರಿತು ಜಂಟಿ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅಖಿಲ ಕೊಡವ ಸಮಾಜ ಅಧ್ಯಕ್ಷ ಮಾತಂಡ ಮೊಣ್ಣಪ್ಪ ಹಾಗೂ ಅಖಿಲ ಕೊಡವ ಸಮಾಜ ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ ಇತ್ತೀಚಿನ ದಿನಗಳಲ್ಲಿ ರಾಜಕೀಯ ತಿಕ್ಕಾಟಕ್ಕೆ ಜಿಲ್ಲೆಯ ಜನರ ನೆಮ್ಮದಿ ಹಾಳಾಗುತ್ತಿದೆ. ಜನಾಂಗದ ನಡುವಿನ ಸಾಮರಸ್ಯ ಕದಡಿದೆ, ಜಿಲ್ಲೆಯಲ್ಲಿ ಭಯಭೀತ ವಾತಾವರಣ ಸೃಷ್ಟಿಯಾಗಿದೆ, ನೆಮ್ಮದಿಯಿಂದ ಸಹಬಾಳ್ವೆ ನಡೆಸುತ್ತಿದ್ದ ಕೊಡಗು ಇದೀಗ ಬೂದಿಮುಚ್ಚಿದ ಕೆಂಡದಂತಿದೆ ಎಂದರು.

ಈಗಾಗಲೇ ಕೊಡಗಿನ ಪ್ರಮುಖ ಹಬ್ಬಗಳಲ್ಲಿ ಒಂದಾದ "ಕೈಲ್ ಪೊಳ್ದ್" ಸಮೀಪಿಸುತ್ತಿದ್ದು, ಕೊಡವ ಜನಾಂಗದ ಪಾಲಿಗೆ ಇದು ಪ್ರಮುಖ ಹಬ್ಬವಾಗಿದೆ ಮಾತ್ರವಲ್ಲ ಕೊಡಗು ಜಿಲ್ಲೆಯಲ್ಲಿ ನೆಲೆಕಂಡುಕೊಂಡಿರುವ ಬಹುತೇಕ ಎಲ್ಲಾ ಜಾತಿ ಜನಾಂಗ ಈ ಹಬ್ಬವನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸುತ್ತಿದ್ದು, ಇದರ ಜೊತೆಜೊತೆಗೆ ಹಿಂದುಗಳ ಭಾವನಾತ್ಮಕ ಹಬ್ಬಗಳಲ್ಲಿ ಒಂದಾದ ಗಣೇಶ ಚತುರ್ಥಿ ಕೂಡ ಸಮೀಪಿಸುತ್ತಿದೆ. ಇದೇ ಸಮಯದಲ್ಲಿ ಕಾಂಗ್ರೆಸ್ ಪಕ್ಷ ಕೊಡಗು ಚಲೋ ಕಾರ್ಯಕ್ರಮದ ಮೂಲಕ ತನ್ನ ಶಕ್ತಿ ಪ್ರದರ್ಶನಕ್ಕೆ ಮುಂದಾದರೆ, ಬಿಜೆಪಿ ಕೂಡ ಜನ ಜಾಗೃತಿ ಸಮಾವೇಶ ಮಾಡಲು ಹೊರಟಿತ್ತು, ಇದೆಲ್ಲಾವನ್ನು ಸೂಕ್ಷ್ಮವಾಗಿ ನೋಡಿದಾಗ ಕೊಡಗು ಜಿಲ್ಲೆ ಮತ್ತೊಮ್ಮೆ ಟಿಪ್ಪು ಜಯಂತಿಯ ಕರಾಳ ದಿನವನ್ನು ನೆನಪಿಸುತ್ತಿತ್ತು ಮಾತ್ರವಲ್ಲ ಅಪಾಯದ ಮುನ್ಸೂಚನೆ ಕಾಣುತ್ತಿತ್ತು. ಈ ಹಿನ್ನೆಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿರುವುದು ಒಳ್ಳೆಯ ನಿರ್ಧಾರ ಎಂದು ತಿಳಿಸಿದ್ದಾರೆ.

ನಿಷೇಧಾಜ್ಞೆ ತೆರವಿನ ಬಳಿಕ ಕಾಂಗ್ರೆಸ್ಸಿನಿಂದ 'ಮಡಿಕೇರಿ ಚಲೋ'

26ರಂದು ನಡೆಯಬೇಕಾಗಿದ್ದ ಚಲೋ ಮುಂದೂಡಿಕೆ: ಡಾ.ಹೆಚ್.ಸಿ. ಮಹದೇವಪ್ಪ



ಮಡಿಕೇರಿ, ಆ.23– ಕೊಡಗು ಜಿಲ್ಲಾಡಳಿತದ ನಿಷೇಧಾಜ್ಞೆ ಮತ್ತು ಕಾನೂನಿಗೆ ಗೌರವ ಸೂಚಿಸಿ ಆ.26ರಂದು ನಡೆಸಲು ಉದ್ದೇಶಿಸಿದ್ದ 'ಮಡಿಕೇರಿ ಚಲೋ' ಪ್ರತಿಭಟನೆಯನ್ನು ಹಿಂಪಡೆಯಲಾಗಿದೆ ಎಂದು ಮಾಜಿ ಸಚಿವರಾದ ಹೆಚ್.ಸಿ. ಮಹದೇವಪ್ಪ ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ನಿಷೇಧಾಜ್ಞೆ ತೆರವಿನ ಬಳಿಕ ಮತ್ತೆ ಪ್ರತಿಭಟನೆ ಹಮ್ಮಿಕೊಂಡು ಸರ್ಕಾರದ ಲೋಪಗಳನ್ನು ಜನರ ಮುಂದೆ ತೆರೆದಿಡಲಾಗುವುದು ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ವಿರೋಧ ಪಕ್ಷದ ನಾಯಕ ಎನ್ನುವುದು ಸಾಂವಿಧಾನಿಕ ಹುದ್ದೆ. ಇಂತಹ ಹುದ್ದೆಯಲ್ಲಿರುವ ಸಿದ್ದರಾಮಯ್ಯ ಅವರು ಕೊಡಗಿಗೆ ಭೇಟಿ ನೀಡುತ್ತಿರುವ ಬಗ್ಗೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ಟಿಪ್ಪಣಿ ನೀಡಲಾಗಿತ್ತು. ಆದರೆ ಪೂರ್ಣ ತಿಳುವಳಿಕೆ ಇದ್ದರೂ ಅಹಿತಕರ ಘಟನೆ ನಡೆದಿದ್ದು, ಇದಕ್ಕೆ ಜಿಲ್ಲಾಡಳಿತ ಸೇರಿದಂತೆ ಸರ್ಕಾರದ ಪೂರ್ಣ ವೈಫಲ್ಯವೇ ಕಾರಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪೊಲೀಸ್ ವೈಫಲ್ಯ: ಕೊಡಗಿನಲ್ಲಿ ಸುರಿದ ಭಾರೀ ಮಳೆಯಿಂದ ಆಗಿರುವ ಹಾನಿ, ಸಂಕಷ್ಟದಲ್ಲಿರುವವರಿಗೆ ಬೇಕಿರುವ ಸೌಲಭ್ಯ ಮತ್ತು ಸಂಕಷ್ಟಗಳನ್ನು ತಿಳಿದುಕೊಂಡು ಹೆಚ್ಚಿನ ನೆರವು ಬೇಕಿದ್ದಲ್ಲಿ ದೊರಕಿಸುವ ಚಿಂತನೆಗಳನ್ನಿಟ್ಟು ಸಿದ್ದರಾಮಯ್ಯ ಕೊಡಗಿಗೆ ಆ.18 ರಂದು ಭೇಟಿ ನೀಡಿದ್ದರು. ಸಿದ್ದರಾಮಯ್ಯ ಅವರು ಸಂಪಾಜೆ ಕಡೆಯಿಂದ ಜಿಲ್ಲಾಡಳಿತ ಭವನದ ತಡೆಗೋಡೆ ಬಳಿಗೆ ಬರುವ ಸಂದರ್ಭ ಏನಾಗಬಹುದೆಂದು ತಿಳಿಯಬೇಕಿದ್ದ ಪೊಲೀಸ್ ಗುಪ್ತಚರ ಇಲಾಖೆಯ ವೈಫಲ್ಯದಿಂದ ಸಿದ್ದರಾಮಯ್ಯ ಅವರ ವಿರುದ್ಧ ಮೊಟ್ಟೆ ಎಸೆದ ಘಟನೆ ನಡೆದಿದೆ ಎಂದು ಅವರು ಹೇಳಿದರು.

ಪೊಲೀಸ್ ಇಲಾಖೆ ಭದ್ರತೆಯನ್ನು ನೀಡಿಲ್ಲ. ಹೀಗಾಗಿಯೇ ಕೋಮು ಶಕ್ತಿಗಳು ಮತ್ತು ಪಟ್ಟಭದ್ರ ಹಿತಾಸಕ್ತಿಗಳು ಸುಂದರ ಕೊಡಗಿನ ಶ್ರೀಮಂತ ಸಂಸ್ಕೃತಿಗೆ 'ಮಸಿ' ಬಳಿದಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಅಹಿತಕರ ಘಟನೆಗಳ ಅವಧಿಯಲ್ಲಿ ಕೊಡಗು ಜಿಲ್ಲಾಡಳಿತ ಸಂಪೂರ್ಣ ನಿಷ್ಕ್ರೀಯವಾಗಿತ್ತೆಂದು ಟೀಕಿಸಿದ ಮಹದೇವಪ್ಪ ಪ್ರಸ್ತುತ ಜಿಲ್ಲಾಡಳಿತ ಎನ್ನುವುದು ಪಟ್ಟಭದ್ರರ ಕೈಯಲ್ಲಿ ಸೇರಿಕೊಂಡಿದೆ ಎಂದು ಗಂಭೀರ ಆರೋಪ ಮಾಡಿದರು.

ಜಿಲ್ಲಾಡಳಿತದ ತಪ್ಪು: ಸಿದ್ದರಾಮಯ್ಯ ಕೊಡಗು ಭೇಟಿಯ ಸಂದರ್ಭ ಸೂಕ್ತ ಭದ್ರತೆ ಒದಗಿಸದೆ ಜಿಲ್ಲಾಡಳಿತ ಮೊದಲ ತಪ್ಪನ್ನೆಸಗಿದೆ. ಇದೀಗ ಕಾಂಗ್ರೆಸ್ ಪ್ರತಿಭಟನೆಯ ಸಂದರ್ಭವೇ ಮತ್ತೊಂದು ಪಕ್ಷ ಜನ ಜಾಗೃತಿ ಸಮಾವೇಶ ನಡೆಸುತ್ತಿರುವ ಕಾರಣ ನೀಡಿ ಜಿಲ್ಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸುವ ಮೂಲಕ, ಪ್ರತಿಭಟನೆ ನಡೆಯದಂತೆ ಮಾಡುವ ಮೂಲಕ 2ನೇ ತಪ್ಪೆಸಗಿದೆ. ಯಾವುದೇ ಸಕಾರಣಗಳಿಲ್ಲದೆ ಜಿಲ್ಲಾಡಳಿತ ಸೆಕ್ಷನ್ 144 ಜಾರಿಗೊಳಿಸುವ ನಿರ್ಧಾರ ತೆಗೆದುಕೊಂಡಿದೆ ಎಂದು ಆರೋಪಿಸಿದರು. ಬಿಜೆಪಿ ಮತ್ತು ಜಿಲ್ಲಾಡಳಿತ ಸೇರಿಯೇ ಇಂತಹ ಪ್ರತಿಬಂಧಕಾಜ್ಞೆ ಹೊರಬಿದ್ದಿದೆ. ಹೀಗಿದ್ದರೂ ಕಾಂಗ್ರೆಸ್ ಕಾನೂನನ್ನು ಗೌರವಿಸುತ್ತದೆ. ನಿಷೇಧಾಜ್ಞೆ ತೆರವುಗೊಂಡ ಬಳಿಕ ಮತ್ತೆ ಕಾಂಗ್ರೆಸ್ ಪ್ರತಿಭಟನೆ ನಡೆಸಲಿದೆ ಎಂದು ಸ್ಪಷ್ಟಪಡಿಸಿದರು.

ಎಲ್ಲರನ್ನೂ ಬಂಧಿಸಿ: ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಚಂದ್ರಮೌಳಿ ಮಾತನಾಡಿ, ಎಸ್.ಪಿ ಕಚೇರಿಗೆ ಮುತ್ತಿಗೆ ಹಾಕಿದ್ದ ಸಂದರ್ಭ ಸಿದ್ದರಾಮಯ್ಯ ಅವರ ಮೇಲೆ ಮೊಟ್ಟೆ ಎಸೆದ ಪ್ರಕರಣದಲ್ಲಿ ಪಾಲ್ಗೊಂಡಿರುವ ಎಲ್ಲರನ್ನು ಬಂಧಿಸುವುದಾಗಿ ಪೊಲೀಸ್ ವರಿಷ್ಠಾಧಿಕಾರಿಗಳು ಭರವಸೆ ನೀಡಿದ್ದರು. ನಂತರ ನಡೆದದ್ದೇ ಬೇರೆ ಎಂದು ಹೇಳಿದ ಚಂದ್ರಮೌಳಿ, ದುಷ್ಕೃತ್ಯದಲ್ಲಿ ಪಾಲ್ಗೊಂಡ ನಾಮನಿರ್ದೇಶಿತ ಸದಸ್ಯರೊಬ್ಬರನ್ನು 'ನೀವು ಬಂಧಿಸುತ್ತೀರೋ ಅಥವಾ ನಾವೇ ನಿಮ್ಮ ಮುಂದೆ ತಂದು ನಿಲ್ಲಿಸಬೇಕೋ' ಎಂದು ಪ್ರಶ್ನಿಸಿದರು. ಎಲ್ಲಾ ಘಟನೆಗಳು ಪೂರ್ವ ಯೋಜಿತವಾಗಿದೆ. ಜನರ ಭಾವನೆಗಳನ್ನು ಕೆರಳಿಸುವ ಇಂತಹ ಪ್ರಯತ್ನಗಳು ಹೆಚ್ಚು ದಿನ ನಡೆಯುವುದಿಲ್ಲ ಎಂದು ದೃಢವಾಗಿ ನುಡಿದರು.

ಸುದ್ದಿಗೋಷ್ಠಿಯಲ್ಲಿ ಕೊಡಗು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ, ಮಾಜಿ ಸಚಿವ ಬಿ.ಎ. ಜೀವಿಜಯ, ಪಿರಿಯಾಪಟ್ಟಣ ಮಾಜಿ ಶಾಸಕ ವೆಂಕಟೇಶ್, ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ವಿನಯ ಕುಮಾರ್ ಸೊರಕೆ ಉಪಸ್ಥಿತರಿದ್ದರು.

ತೋಟದ ಮನೆಯ ಫೋಟೋ

ಮಾಜಿ ಸಚಿವ ಬಿ.ಎ. ಜೀವಿಜಯ ಮಾತನಾಡಿ, ಸಿದ್ದರಾಮಯ್ಯ ಕಾರಿನ ಮೇಲೆ ಮೊಟ್ಟೆ ಎಸೆದ ಆರೋಪಿ ಸಂಪತ್ ಕಾಂಗ್ರೆಸ್ ಶಾಲು ಹೊದ್ದಿರುವ ಫೋಟೋವನ್ನು, ಶಾಸಕ ಅಪ್ಪಚ್ಚು ರಂಜನ್ ಅವರ ತೋಟದ ಆವರಣದಲ್ಲೇ ತೆಗೆಯಲಾಗಿದೆ ಎಂದು ಆರೋಪಿಸಿದರು.

ವಿವಾಹ ಸಮಾರಂಭವೊಂದರಲ್ಲಿ ಸಂಪತ್ ಇರುವ ಫೋಟೋದಲ್ಲಿ ನಾನು ಇರುವುದನ್ನು ಬಿಜೆಪಿ ತಪ್ಪಾಗಿ ಬಿಂಬಿಸುತ್ತಿದೆ. ವಿವಾಹ ಸಮಾರಂಭಕ್ಕೆ ತೆರಳಿದ ಸಂದರ್ಭದ ಫೋಟೋವೇ ಹೊರತು ಮತ್ತೇನು ಅಲ್ಲವೆಂದು ಸ್ಪಷ್ಟಪಡಿಸಿದರು. ಮೊಟ್ಟೆ ಎಸೆದ ಆರೋಪಿ ಸಂಪತ್‌ಗೆ ಜೆಡಿಎಸ್‌ನ ವ್ಯಕ್ತಿಯೊಬ್ಬರು ಜಾಮೀನು ನೀಡಿದ್ದಾಗಿ ತಮಗೆ ಮಾಹಿತಿ ಇರುವುದಾಗಿ ಜೀವಿಜಯ ಹೇಳಿದರು. ಆರೋಪಿ ಸಂಪತ್‌ಗೆ 70 ಲಕ್ಷ ರೂ.ಗಳ ಗುತ್ತಿಗೆ ನೀಡಲಾಗಿದೆ. ಈ ಗುತ್ತಿಗೆಯನ್ನು ಮುಂದಿಟ್ಟುಕೊಂಡು ಬಿಜೆಪಿ ಮಂದಿ ಸಂಪತ್‌ಗೆ ಬೆದರಿಕೆ ಹಾಕುವ ಮೂಲಕ ಕಾಂಗ್ರೆಸ್ ವಿರುದ್ಧವಾದ ಹೇಳಿಕೆಗಳನ್ನು ಕೊಡಿಸಿರುವುದಾಗಿ ಜೀವಿಜಯ ಆರೋಪಿಸಿದರು.

ಮೊಟ್ಟೆ ಎಸೆತ ಪ್ರಕರಣ: ಕೊಡಗಿಗೆ ಕಪ್ಪು ಚುಕ್ಕೆ

ವಿರಾಜಪೇಟೆ, ಆ.23– ಕೊಡಗಿನಲ್ಲಿ ಎಲ್ಲಾ ರಸ್ತೆಗಳು ದುಸ್ಥಿತಿಯಲ್ಲಿದ್ದು, ಮಾಡಬೇಕಾಗಿರುವ ಸಾಕಷ್ಟು ಅಭಿವೃದ್ಧಿ ಕೆಲಸಗಳು ಬಾಕಿ ಇದೆಯಾದರೂ ಅದನ್ನು ಬಿಟ್ಟು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೊಡಗಿಗೆ ಬಂದ ಸಂದರ್ಭದಲ್ಲಿ ಬಿಜೆಪಿಯವರು ಮೊಟ್ಟೆ ಎಸೆದಿರುವುದು ಕೊಡಗಿಗೆ ಕಪ್ಪುಚುಕ್ಕೆಯಾಗಿದೆ ಎಂದು ವಿರಾಜಪೇಟೆ ನಗರ ಕಾಂಗ್ರೆಸ್ ಅಧ್ಯಕ್ಷ ಮಾದಂಡ ಪಿ.ತಿಮ್ಮಯ್ಯ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಪ್ರತಿಯೊಬ್ಬರಿಗೂ ಪ್ರತಿಭಟನೆ ಮಾಡುವ ಹಕ್ಕಿದೆ. ಆದರೆ ಒಬ್ಬ ಮಾಜಿ ಮುಖ್ಯಮಂತ್ರಿ ಬಂದಾಗ ಅವರಿಗೆ ಗೌರವ ನೀಡುವುದನ್ನು ಬಿಟ್ಟು ಬಿಜೆಪಿ ಮುಖಂಡರು ಕಾರ್ಯಕರ್ತರನ್ನು ಸಂಘಟಿಸಿ ಕಪ್ಪು ಬಾವುಟ ಪ್ರದರ್ಶಿಸಿ ಅವಹೇಳನ ಮಾಡಿ ಕಾರಿನ ಮೇಲೆ ಮೊಟ್ಟೆ ಎಸೆದಿರುವುದು ಖಂಡನೀಯ ಎಂದು ಅವರು ಸುದ್ದಿಗೋಷ್ಠಿಯಲ್ಲಿ ವಾಗ್ದಾಳಿ ನಡೆಸಿದರು.

ಕೇಂದ್ರ ಮತ್ತು ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದರೂ ಕೂಡ ಜಿಲ್ಲೆಯಲ್ಲಿ ಸಮಸ್ಯೆಗಳೇ ಹೆಚ್ಚಾಗಿವೆ. ಅದನ್ನು ಬಗೆಹರಿಸಿಲ್ಲ. ಅಭಿವೃದ್ಧಿ ಕಾಮಗಾರಿ ನಡೆಸಲು ಇವರಿಗೆ ಸಮಯವಿಲ್ಲ ಎಂದು ಟೀಕಿಸಿದ ಅವರು, ಕೊಡಗಿನಲ್ಲಿ ಇಂತಹ ಘಟನೆ ಮತ್ತೆ ಮರುಕಳಿಸಬಾರದು ಎಂದರು. ಆ.26ರಂದು ಕಾಂಗ್ರೆಸ್ ಪಕ್ಷದಿಂದ ಮಡಿಕೇರಿಯಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಇದಕ್ಕೆ ಹೆದರಿದ ಬಿಜೆಪಿಯವರು ಅದೇ ದಿನ ಸಮಾವೇಶ ಹಮ್ಮಿಕೊಂಡಿದ್ದು ಸರಿಯಲ್ಲ ಎಂದರು.

ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಶಿಧರನ್ ಮಾತನಾಡಿ, ಕಾಂಗ್ರೆಸ್ ಪಕ್ಷ ಎಂದಿಗೂ ಅಶಾಂತಿ ಬಯಸುವುದಿಲ್ಲ, ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ರಾಜ್ಯದ ಇತರೆ ಭಾಗದಲ್ಲಿ ಬಿಜೆಪಿ ಕಾರ್ಯಕರ್ತರ ಹತ್ಯೆಯಾಗಿರುವ ಘಟನೆಗೆ ಪುಷ್ಟೀಕರಣ ನೀಡುತ್ತದೆ. ಈಗ ಬಿಜೆಪಿ ಕಾರ್ಯಕರ್ತರನ್ನು ಓಲೈಕೆ ಮಾಡುವ ನಿಟ್ಟಿನಲ್ಲಿ ಸಮಾವೇಶ ಹಮ್ಮಿಕೊಂಡಿದೆ ಎಂದು ದೂರಿದರಲ್ಲದೆ, ಅದೇ ದಿನ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಎದುರು ಕಾಂಗ್ರೆಸ್ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಆದರೆ ಕೊಡಗು ಜಿಲ್ಲೆಯಲ್ಲಿ ಶಾಂತಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿನ್ನೆಲೆ ಜಿಲ್ಲಾಧಿಕಾರಿಗಳು ನಿಷೇಧಾಜ್ಞೆ ಜಾರಿ ಹಿನ್ನೆಲೆಯಲ್ಲಿ ಮುಂದೂಡಲಾಗಿದೆ ಎಂದರು.

ಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷರಾದ ಶಾಹುಲ್ ಹಮೀದ್ ಮತ್ತು ಸಿ.ಎಂ. ದಿನೇಶ್ ನಂಬಿಯರ್ ಉಪಸ್ಥಿತರಿದ್ದರು.

ಉದ್ಯೋಗ ಮೇಳ ಮುಂದೂಡಿಕೆ

ಮಡಿಕೇರಿ, ಆ.23– ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಆ.25 ರಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನಡೆಯಬೇಕಿದ್ದ ಮಿನಿ ಉದ್ಯೋಗ ಮೇಳವನ್ನು ಜಿಲ್ಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿರುವುದರಿಂದ ಮುಂದೂಡಲಾಗಿದೆ. ಈ ಉದ್ಯೋಗ ಮೇಳವು ಆ.29 ರಂದು ಬೆಳಗ್ಗೆ 10.30 ಗಂಟೆಯಿಂದ 2 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08272–225851 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ವಿಮಾ ಅವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ಥೈಲ್ಯಾಂಡ್ ಮುಕ್ತ ವಿಶ್ವ ಕರಾಟೆ ಚಾಂಪಿಯನ್ ಶಿಪ್‌ನಲ್ಲಿ ಕೊಡಗಿನ ಕರಾಟೆ ಪಟುವಿಗೆ ಕಂಚಿನ ಪದಕ



ಮಡಿಕೇರಿ, ಆ.23– ಥೈಲ್ಯಾಂಡ್ ದೇಶದ ಪುಕೆಟ್‌ನಲ್ಲಿ ನಡೆದ ಥೈಲ್ಯಾಂಡ್ ಮುಕ್ತ ವಿಶ್ವ ಕರಾಟೆ ಚಾಂಪಿಯನ್ ಶಿಪ್‌ನಲ್ಲಿ ಕೊಡಗು ಮೂಲದ ಬಬ್ಬೀರ ಅಂಕಿತಾ ತಿಮ್ಮಯ್ಯ ಕಂಚಿನ ಪದಕ ಜಯಿಸಿದ್ದಾರೆ.

ಆ.19ರಿಂದ 23ರವರೆಗೆ ನಡೆದ ಈ ಕ್ರೀಡಾಕೂಟದಲ್ಲಿ ವಿಶ್ವದ ವಿವಿಧ ದೇಶಗಳ ಸ್ಪರ್ಧಿಗಳು ಪಾಲ್ಗೊಂಡಿದ್ದರು. ಮಹಿಳೆಯರ ಕುಮಿಟೆ 68 ಕೆಜಿ ವಿಭಾಗದಲ್ಲಿ ಭಾರತವನ್ನು ಪ್ರತಿನಿಧಿಸಿದ ಅಂಕಿತಾ ಅರ್ಹತಾ ಸುತ್ತಿನ ಪಂದ್ಯಗಳಲ್ಲಿ ಎದುರಾಳಿಗಳ ವಿರುದ್ಧ ಸುಲಭ ಜಯ ಸಾಧಿಸಿದರು. ಬಳಿಕ ಪದಕ ಸುತ್ತಿನ ಪಂದ್ಯದಲ್ಲಿ ಮಲೇಷ್ಯಾ ಎದುರು 1–3 ಅಂಕಗಳಿಂದ ಜಯಭೇರಿ ಬಾರಿಸಿದರು. ಅಂತಿಮ ಹಂತದಲ್ಲಿ ಹಾಂಕಾಂಗ್ ವಿರುದ್ಧ 1–4 ಅಂಗಳಿಂದ ಸೋಲು ಅನುಭವಿಸಿ ಕಂಚಿನ ಪದಕಕ್ಕೆ ತೃಪ್ತಿಪಟ್ಟರು.

ಭಾರತದಿಂದ ಒಟ್ಟು 94 ಮಂದಿ ಕರಾಟೆಪಟುಗಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದು, ವೈಯಕ್ತಿಕ ಮತ್ತು ತಂಡ ವಿಭಾಗದಲ್ಲಿ ಒಟ್ಟು 80 ಪದಕ ಜಯಿಸಿದ್ದಾರೆ. ಕರ್ನಾಟಕದಿಂದ 12 ಕರಾಟೆಪಟುಗಳು ಭಾಗವಹಿಸಿದ್ದು ಅಂಕಿತಾ ಸೇರಿ ಒಟ್ಟು ನಾಲ್ಕು ಕರಾಟೆಪಟುಗಳು ಪದಕ ಜಯಿಸಿದ್ದಾರೆ. ವಿಶ್ವ ಕರಾಟೆ ಫೆಡರೇಷನ್ ತರಬೇತುದಾರ ಕುಂದಾಪುರದ ಕೀರ್ತಿ ಜಿ.ಕೆ ಅವರ ಗರಡಿಯಲ್ಲಿ ಈ ಕರಾಟೆ ಪಟುಗಳು ತರಬೇತಿ ಪಡೆದಿದ್ದರು. ಅಂಕಿತಾ ಮೂಲತಃ ಚೇರಂಬಾಣೆ ಗ್ರಾಮದ ಬಬ್ಬೀರ ತಿಮ್ಮಯ್ಯ ಮತ್ತು ಮಿನ್ನು ದಂಪತಿಯ ಪುತ್ರಿಯಾಗಿದ್ದಾರೆ.

ಗುಂಡ್ಲುಪೇಟೆಗೆ ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಭೇಟಿ

ತಾಲೂಕು ಕಚೇರಿ ಸೇರಿ ವಿವಿಧೆಡೆ ಪರಿಶೀಲನೆ



ಚಾಮರಾಜನಗರ, ಆ.23–ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಅವರಿಂದು ಗುಂಡ್ಲುಪೇಟೆಯ ತಾಲೂಕು ಕಚೇರಿ, ರೈತ ಸಂಪರ್ಕ ಕೇಂದ್ರ ಇಂದಿರಾ ಕ್ಯಾಂಟೀನ್ ಸೇರಿದಂತೆ ವಿವಿಧೆಡೆ ಭೇಟಿ ನೀಡಿ ಪರಿಶೀಲಿಸಿದರು.

ಮೊದಲು ತಾಲೂಕು ಕಚೇರಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ, ವ್ಯಾಪಕ ಪರಿಶೀಲನೆ ನಡೆಸಿದರಲ್ಲದೆ, ಕಡತಗಳ ನಿರ್ವಹಣೆ ವೀಕ್ಷಿಸಿದರು. ಕಣ್ಣೇಗಾಲದಲ್ಲಿ ಕೆಪಿಟಿಸಿಎಲ್‌ಗೆ ಜಮೀನು ನೀಡುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು. ಅಲ್ಲದೆ ಕಚೇರಿಯ ಕಡತಗಳನ್ನು ಪರಿಶೀಲಿಸಿ, ಸಾರ್ವಜನಿಕರ ಅಹವಾಲು ಆಲಿಸಿದರು. ಈ ವೇಳೆ ರಸ್ತೆ ದುರಸ್ತಿ, ಬೀದಿದೀಪ, ಸ್ವಚ್ಛತೆ ಇನ್ನಿತರ ಸಮಸ್ಯೆಗಳನ್ನು ಪರಿಹರಿಸುವಂತೆ ಜನತೆ ಜಿಲ್ಲಾಧಿಕಾರಿ ಗಮನಕ್ಕೆ ಸೆಳೆದರು.

ನಂತರ ಪಟ್ಟಣದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ, ಅಲ್ಲಿ ಒದಗಿಸಲಾಗುತ್ತಿರುವ ಸೌಲಭ್ಯಗಳನ್ನು ವೀಕ್ಷಿಸಿದರು. ಕೃಷಿ ಪರಿಕರ ವಿತರಣೆ ಪ್ರಕ್ರಿಯೆ ಪರಿಶೀಲಿಸಿದರು. ಇದೇ ಸಂದರ್ಭದಲ್ಲಿ ಹಾಜರಿದ್ದ ರೈತರೊಂದಿಗೆ ಸಮಾಲೋಚಿಸಿ, ರೈತ ಸಂಪರ್ಕ ಕೇಂದ್ರದ ಸೇವೆಗಳು ಹೇಗಿವೆ ಎಂದು ತಿಳಿದುಕೊಂಡರಲ್ಲದೆ, ಯಾವ ಪರಿಕರಗಳು ತಮಗೆ ಹೆಚ್ಚು ಅಗತ್ಯವಿದೆ. ಇಲ್ಲಿ ನಿಮಗೆ ಕಡಿಮೆ ವೆಚ್ಚದಲ್ಲಿ ಕೃಷಿ ಪೂರಕ ಸಾಮಗ್ರಿ ಲಭ್ಯವಾಗುತ್ತಿದೆಯೇ ಎಂದು ರೈತರಿಂದಲೇ ಮಾಹಿತಿ ಪಡೆದರು.

ಬಳಿಕ ಪಟ್ಟಣದ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿದ ಜಿಲ್ಲಾಧಿಕಾರಿ, ಮಧ್ಯಾಹ್ನದ ಊಟ ಸೇವಿಸುತ್ತಿದ್ದವರೊಂದಿಗೆ ಮಾತನಾಡಿ, ಆಹಾರದ ಗುಣಮಟ್ಟ ಹೇಗಿದೆ? ಊಟ ಉಪಾಹಾರಕ್ಕಾಗಿ ಎಷ್ಟು ಹಣ ಪಡೆಯಲಾಗುತ್ತಿದೆ ಎಂದು ನೇರವಾಗಿ ತಿಳಿದುಕೊಂಡರು. ಅಡುಗೆ ಮನೆ, ಆಹಾರ ಸಾಮಗ್ರಿ ದಾಸ್ತಾನು ಕೊಠಡಿ ವೀಕ್ಷಿಸಿ, ಕ್ಯಾಂಟೀನ್‌ನಲ್ಲಿ ಇನ್ನಷ್ಟು ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಊಟ ಉಪಾಹಾರಕ್ಕಾಗಿ ನೀಡಲಾಗುವ ಟೋಕನ್‌ಗಳನ್ನು ಸ್ಥಳದಲ್ಲಿಯೇ ಮುದ್ರಿಸುವ ಯಂತ್ರದ ಮೂಲಕ ಗ್ರಾಹಕರಿಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಪಟ್ಟಣದಲ್ಲಿರುವ ಮದರಸಾಗೆ ಭೇಟಿ ನೀಡಿ ಆಧುನಿಕ ಶಿಕ್ಷಣ ಅಳವಡಿಸಿಕೊಳ್ಳಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅನುದಾನ ಬಿಡುಗಡೆ ಮಾಡುವ ಸಂಬಂಧ ಪರಿಶೀಲಿಸಿದರಲ್ಲದೆ, ಹೆದ್ದಾರಿಯಲ್ಲಿ ಚರಂಡಿಯ ಡೆಕ್‌ಗಳು ಕೆಲವೆಡೆ ಹಾನಿಯಾಗಿರುವ ಬಗ್ಗೆ ವೀಕ್ಷಿಸಿ, ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಕೂಡಲೇ ದುರಸ್ತಿಗೆ ಸೂಚಿಸುವುದಾಗಿ ತಿಳಿಸಿದರು.

ತಹಸೀಲ್ದಾರ್ ರವಿಶಂಕರ್, ಪುರಸಭೆ ಮುಖ್ಯಾಧಿಕಾರಿ ಹೇಮಂತ್ ಕುಮಾರ್, ಅಲ್ಪಸಂಖ್ಯಾತ ಕಲ್ಯಾಣಾಧಿಕಾರಿ ಪಿ.ಮಧು ಕುಮಾರ್, ಜಂಟಿ ಕೃಷಿ ನಿರ್ದೇಶಕ ಮಧುಸೂದನ್, ಕೃಷಿ ಉಪನಿರ್ದೇಶಕ ಸೋಮಶೇಖರ್ ಸೇರದಿಂತೆ ಇನ್ನಿತರೆ ಅಧಿಕಾರಿಗಳು ಈ ಸಂದರ್ಭದಲ್ಲಿದ್ದರು.

ಯಳಂದೂರಲ್ಲಿ ಕಾಂಗ್ರೆಸ್ ಸ್ವಾತಂತ್ರ್ಯ ನಡಿಗೆ



ಯಳಂದೂರು, ಆ.23– ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ಕಾಂಗ್ರೆಸ್‌ನಿಂದ ಯಳಂದೂರು ವಿಧಾನಸಭಾ ಕ್ಷೇತ್ರದಿಂದ ಏರ್ಪಡಿಸಿದ್ದ ಸ್ವಾತಂತ್ರ್ಯ ನಡಿಗೆ ಪಾದಯಾತ್ರೆಗೆ ತಾಲೂಕಿನ ಸಂತೇಮರಳ್ಳಿಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಕಾಂಗ್ರೆಸ್‌ನಿಂದ ಭಾರತಕ್ಕೆ ಸ್ವಾತಂತ್ರ್ಯ ಲಭಿಸಿ 75 ವರ್ಷಗಳು ಸಂದ ಸಂತೋಷಕ್ಕೆ ಸ್ವಾತಂತ್ರ್ಯ ನಡಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಹುಲ್ ಗಾಂಧಿ ಅವರ ಸೂಚನೆ ಮೇರೆಗೆ ಪ್ರತಿ ಜಿಲ್ಲೆಯಲ್ಲೂ ಕಾರ್ಯಕರ್ತರನ್ನು ಒಗ್ಗೂಡಿಸಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದರು.

ಸಂತೆಮರಹಳ್ಳಿಯಿಂದ ಆರಂಭಗೊಂಡ ಪಾದಯಾತ್ರೆ, ಮೆಳ್ಳಹಳ್ಳಿ ಗೇಟ್, ಕಂದಹಳ್ಳಿ, ಯಳಂದೂರು ಪಟ್ಟಣ, ಯರಿಯೂರು, ಮದ್ದೂರು, ಎಳೆಪಿಳ್ಳಾರಿ, ಅಗರ, ಮಾಂಬಳ್ಳಿ ಗ್ರಾಮಗಳ ಮೂಲಕ ಸಾಗಿ ಉತ್ತಂಬಳ್ಳಿ ಗ್ರಾಮದಲ್ಲಿ ಅಂತ್ಯಗೊಂಡಿತು. ಪಟ್ಟಣದ ರಾಷ್ಟ್ರೀಯ ಹೆದ್ದಾರಿ–209ರಲ್ಲಿ ಸಾಗಿ ಬಂದ ಕಾಂಗ್ರೆಸ್ ನಡಿಗೆಗೆ ಪಕ್ಷದ ಕಾರ್ಯಕರ್ತರು ಅಭೂತಪೂರ್ವ ಸ್ವಾಗತ ಕೋರಿದರು. ಹಲವೆಡೆ ಹಣ್ಣು, ಹಂಪಲು, ಮಜ್ಜಿಗೆ, ಲಸ್ಸಿ, ಸಿಹಿ ತಿನಿಸು ವಿತರಿಸಲಾಯಿತು.

ಹಾಲಿ ಶಾಸಕ ಆರ್.ನರೇಂದ್ರ, ಮಾಜಿ ಸಂಸದ ಶಿವಣ್ಣ ಮಾಜಿ ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಸ್.ಜಯಣ್ಣ, ಎಸ್. ಬಾಲರಾಜು, ಜಿಪಂ ಮಾಜಿ ಉಪಾಧ್ಯಕ್ಷ ಜೆ.ಯೋಗೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ವಿ.ಚಂದ್ರು, ಪಪಂ ಅಧ್ಯಕ್ಷೆ ಪ್ರಭಾವತಿ ಸದಸ್ಯರಾದ ಮಹೇಶ್, ವೈ.ಜಿ. ರಂಗನಾಥ, ಮಹದೇವನಾಯಕ, ಮಂಜು, ರವಿ, ತಾಪಂ ಮಾಜಿ ಸದಸ್ಯರಾದ ಗಂಗಾ ಮಣಿರೇವಣ್ಣ, ವಿಜಯಲಕ್ಷ್ಮಿ ನಂಜುಂಡ, ದೊರೆಸ್ವಾಮಿ, ನಿರಂಜನ್, ಮಲ್ಲಾಜಮ್ಮ ಮುಖಂಡರಾದ ಮಧು, ಸಿದ್ದರಾಜು, ಮಲ್ಲು, ನಿಂಗರಾಜು, ಸೋಮಶೇಖರ್ ಸೇರಿದಂತೆ ಹಲವರಿದ್ದರು.

ಕೊಳ್ಳೇಗಾಲ ಬಸ್ ನಿಲ್ದಾಣಕ್ಕೆ ಶಾಸಕ ಮಹೇಶ್ ದಿಢೀರ್ ಭೇಟಿ



ಮೂರು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲು ತಾಕೀತು

ಕೊಳ್ಳೇಗಾಲ, ಆ.23– ಕೊಳ್ಳೇಗಾಲ ಹೈಟೆಕ್ ಬಸ್ ನಿಲ್ದಾಣ ಕಾಮಗಾರಿ ಸ್ಥಗಿತಗೊಂಡಿದ್ದು, ಸ್ಥಳಕ್ಕೆ ಶಾಸಕ ಮಹೇಶ್ ದಿಢೀರ್ ಭೇಟಿ ಪರಿಶೀಲಿಸಿದರಲ್ಲದೆ, ಇನ್ನು ಮೂರು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಬಳಿಕ ಮಾತನಾಡಿದ ಅವರು, ನಗರಸಭೆ, ಸಾರಿಗೆ ಹಾಗೂ ಲೋಕೋಪಯೋಗಿ ಅಧಿಕಾರಿಗಳು ಎಚ್ಚರಿಕೆ ಹಾಗೂ ಚುರುಕಿನಿಂದ ಕೆಲಸ ಮಾಡಬೇಕು. ನೀವು ಇದೇ ರೀತಿ ಮುಂದುವರೆದರೆ ಅರೆಬರೆ ಕಾಮಗಾರಿ ಉದ್ಘಾಟನೆಗೆ ಮುಖ್ಯಮಂತ್ರಿಗಳನ್ನೇ ಕರೆಸಬೇಕಾಗುತ್ತದೆ. ಅದಕ್ಕೆ ಅವಕಾಶ ಕಲ್ಪಿಸದಿರಿ. ಇನ್ನು 3 ತಿಂಗಳಲ್ಲಿ ಹೈಟೆಕ್ ಬಸ್ ನಿಲ್ದಾಣದ ಕಾಮಗಾರಿ ಪೂರ್ಣಗೊಂಡು ನವೆಂಬರ್‌ನಲ್ಲಿ ಉದ್ಘಾಟನೆಗೆ ಸಿದ್ಧವಾಗಬೇಕು ಎಂದು ಸೂಚಿಸಿದರು.

ಗುತ್ತಿಗೆದಾರರಿಗೆ 4.5 ಕೋಟಿ ರೂ. ಬಾಕಿ ನೀಡಬೇಕಿದ್ದು, ಈ ಕುರಿತು ಅಗತ್ಯ ಕ್ರಮ ವಹಿಸಲಾಗುವುದು. ನಗರೋತ್ಥಾನದ 10.69 ಕೋಟಿ ರೂ. ಅನುದಾನದಲ್ಲಿ ಬಸ್ ನಿಲ್ದಾಣಕ್ಕೆ ಹೆಚ್ಚಿನ ಹಣ ಬಳಕೆ ಮಾಡಿಕೊಳ್ಳಲಾಗುವುದು. ಈ ಅನುದಾನ ಹಸ್ತಾಂತರಕ್ಕೂ ಜಿಲ್ಲಾಧಿಕಾರಿಗಳ ಸಮ್ಮುಖದ ಸಭೆ ನಡೆಸಿ ತೀರ್ಮಾನಿಸಲಾಗುವುದು. ಐಡಿಎಸ್‌ಎಂಟಿ ಮಳಿಗೆಗಳು ಶಿಥಿಲಾವಸ್ಥೆ ತಲುಪಿರುವ ಕಾರಣ ಅದನ್ನು ಕೆಡವಿ, ಖಾಸಗಿ ಬಸ್ ನಿಲುಗಡೆಗೆ ಅವಕಾಶ ಕಲ್ಪಿಸಲಾಗುವುದು. ಕೆಎಸ್‌ಆರ್‌ಟಿ ಹೈಟೆಕ್ ಬಸ್ ನಿಲ್ದಾಣಕ್ಕೆ ಕಾಂಪೌಂಡ್ ನಿರ್ಮಾಣಕ್ಕೂ ಕ್ರಮ ವಹಿಸಲಾಗುವುದು ಎಂದರು.

ಬಸ್ ನಿಲ್ದಾಣದ ಮುಂಭಾಗದಲ್ಲಿನ 2 ಮಳಿಗೆಗಳ ಮಾಲೀಕರು ನ್ಯಾಯಾಲಯ ಮೆಟ್ಟಿಲಿರುವುದರಿಂದ ಅವರ ಜೊತೆ ಮಾತುಕತೆ ನಡೆಸಿ ಮುಂದಿನ ಕ್ರಮ ವಹಿಸ ಲಾಗುವುದು. ಈ ಸಂಬಂಧ ಹಿರಿಯ ಅಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವ ಜೊತೆ ಚರ್ಚಿಸುವೆ. ನವೆಂಬರ್‌ನಲ್ಲಿ ಮುಖ್ಯಮಂತ್ರಿಗಳು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಹಾಗಾಗಿ ಕಾಮಗಾರಿ ವೇಗದಿಂದ ಸಾಗಲು ಸಂಬಂಧಪಟ್ಟವರು ಕ್ರಮ ವಹಿಸುವಂತೆ ಸೂಚಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ನಗರಸಭೆ ಆಯುಕ್ತ ನಂಜುಂಡಸ್ವಾಮಿ ಲೋಕೋಪಯೋಗಿ ಇಂಜಿನಿಯರ್ ಮುನ್ನಿ, ಎಇಇ ಅಲ್ತಾಫ್, ಇಂಜಿನಿಯರ್ ನಾಗೇಂದ್ರ, ಸಾರಿಗೆ ವಿಭಾಗದ ಅಧಿಕಾರಿ ಮಹೇಶ್, ಇಂಜಿನಿಯರ್ ಮಹೇಶ್, ನಗರಸಭೆ ಸದಸ್ಯ ಸೋಮು, ಮುಖಂಡರಾದ ಶಂಕನಪುರ ಜಗದೀಶ್, ಮೂರ್ತಿ, ಆಪ್ತ ಸಹಾಯಕ ಮಹದೇವಸ್ವಾಮಿ, ಶಿವಣ್ಣ ಇನ್ನಿತರರಿದ್ದರು.

> 6 ಈಗಾಗಲೇ ಸಮಾಜ ಕಲ್ಯಾಣ ಇಲಾಖೆಯಿಂದ ಸಮುದಾಯ ಭವನಗಳ ಅಭಿವೃದ್ಧಿಗೆ 5.90 ಕೋಟಿ ಬಿಡುಗಡೆಯಾಗಿದ್ದು, ಈ ಸಂಬಂಧ ನಾಳೆ ಮಂಜೂರಾತಿ ಆದೇಶ ಪತ್ರ ಪಡೆಯುವೆ. ಈ ಅನುದಾನದಲ್ಲಿ ಕೊಳ್ಳೇಗಾಲ ಅಂಬೇಡ್ಕರ್ ಭವನ ನಿರ್ಮಾಣಕ್ಕೆ 3 ಕೋಟಿ ಹಾಗೂ ಉಳಿದ ಅನುದಾನವನ್ನು ನಾಯಕರ ಸಮುದಾಯ ಭವನಗಳಿಗೆ ಹಂಚಿಕೆ ಮಾಡಲಾಗುವುದು.
> – ಎನ್.ಮಹೇಶ್, ಶಾಸಕ.

ಆ.27ರಂದು ಉಚಿತ ಆರೋಗ್ಯ ತಪಾಸಣೆ, ಸೇವಾ ಶಿಬಿರ



ಚಾಮರಾಜನಗರ, ಆ.23– 75ನೇ ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ನಗರದಲ್ಲಿ ಆ.27 ರಂದು ಉಚಿತ ಆರೋಗ್ಯ ತಪಾಸಣಾ ಶಿಬಿರ ಸೇರಿದಂತೆ ವಿವಿಧ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಕಾಡಾ ಅಧ್ಯಕ್ಷ ಜಿ. ನಿಜಗುಣರಾಜು ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ನಗರದ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸೇವಾ ಕಾರ್ಯಕ್ರಮಗಳು ನಡೆಯಲಿದೆ. ಬೃಹತ್ ಆರೋಗ್ಯ ತಪಾಸಣಾ ಶಿಬಿರ, ಉಚಿತವಾಗಿ ಔಷಧಿ ವಿತರಣೆ. ರಕ್ತದಾನ ಶಿಬಿರ, ಬಡ ಮಹಿಳೆಯರಿಗೆ ಉಚಿತ ಹೊಲಿಗೆ ಯಂತ್ರ ವಿತರಣೆ, ಗಿಡಗಳ ವಿತರಣಾ ಕಾರ್ಯಕ್ರಮಗಳು ನಡೆಯಲಿದ್ದು, ಬೆಳಗ್ಗೆ 9.30ರಿಂದ ಮಧ್ಯಾಹ್ನ 3 ಗಂಟೆವರೆಗೆ ಆರೋಗ್ಯ ತಪಾಸಣಾ ಶಿಬಿರ ಇರಲಿದೆ ಎಂದರು.

ಈ ಮೊದಲು ನಮೋ ಚೇತನ ಟ್ರಸ್ಟ್ ವತಿಯಿಂದ ಸೇವಾ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿತ್ತು. ಈ ಬಾರಿ ಹಿತೈಷಿಗಳ ಒತ್ತಾಯದ ಮೇರೆಗೆ, ನನ್ನ ಹೆಸರಿನಲ್ಲಿಯೇ ಸೇವಾ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದರಲ್ಲದೆ, ಪಕ್ಷ ನನ್ನನ್ನು ಕಾಡಾ ಅಧ್ಯಕ್ಷನಾಗಿ ನೇಮಿಸಿದ್ದು, ಇದಕ್ಕೆ ಕೃತಜ್ಞತೆ ಸಲ್ಲಿಸುವ ಸಲುವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಆರೋಗ್ಯ ಶಿಬಿರದಲ್ಲಿ ಭಾಗವಹಿಸುವವರು ಆ.25 ಮತ್ತು 26ರಂದು ತಮ್ಮ ಹೆಸರು ನೋಂದಣಿ ಮಾಡಿಕೊಳ್ಳಬೇಕು. ಹೊಲಿಗೆಯಂತ್ರ ಪಡೆಯಲು ಇಚ್ಛಿಸುವವರು ಆಧಾರ್ ಹಾಗೂ ಹೊಲಿಗೆ ತರಬೇತಿ ಪತ್ರ ಕಳುಹಿಸಬೇಕು. ಹೆಚ್ಚಿನ ಮಾಹಿತಿ ಮೊ.9880766235, 9448786976 ಸಂಪರ್ಕಿಸಬಹುದು.

ಜಿಪಂ ಮಾಜಿ ಸದಸ್ಯ ಸಿ.ಎನ್.ಬಾಲರಾಜು, ಚಾಮುಲ್ ಮಾಜಿ ನಿರ್ದೇಶಕ ಕಿಲಗೆರೆ ಬಸವರಾಜು, ಬಿಜೆಪಿ ಎಸ್ಟಿ ಮೋರ್ಚಾ ಜಿಲ್ಲಾಧ್ಯಕ್ಷ ಜಯಸುಂದರ್ ಸುದ್ದಿಗೋಷ್ಠಿಯಲ್ಲಿದ್ದರು.

ಚಿರತೆ ದಾಳಿಗೆ ಕರು ಬಲಿ

ಬೇಗೂರು, ಆ.23– ಚಿರತೆ ದಾಳಿ ನಡೆಸಿ ಕರು ಬಲಿಯಾಗಿರುವ ಘಟನೆ ಗುಂಡ್ಲುಪೇಟೆ ತಾಲೂಕಿನ ಬೇಗೂರು ಗ್ರಾಮದಲ್ಲಿ ನಡೆದಿದೆ. ಗ್ರಾಮದ ಗೆಜ್ಜಾರ್ ಬೆಳ್ಳಶೆಟ್ಟಿ ಅವರ ಜಮೀನಿನ ಕೊಟ್ಟಿಗೆಯಲ್ಲಿದ್ದ ಹಸುವಿನ ಕರು ಮೇಲೆ ಚಿರತೆ ದಾಳಿ ನಡೆಸಿ ಕೊಂದು ಹಾಕಿದೆ. ಕರುವಿನ ಚೀರಾಟ ಕೇಳಿ ಜಮೀನಿನ ಮನೆಯಲ್ಲಿ ಮಲಗಿದ್ದ ಕುಟುಂಬಸ್ಥರು ಕೊಟ್ಟಿಗೆಗೆ ತೆರಳುವಷ್ಟರಲ್ಲಿ ಚಿರತೆ ಪರಾರಿ ಆಗಿದೆ. ಚಿರತೆ ಹೆಜ್ಜೆ ಗುರುತುಗಳನ್ನು ಕಂಡು ಕುಟುಂಬಸ್ಥರು ಭಯಭೀತರಾಗಿದ್ದಾರೆ. ಬೇಗೂರು ಸುತ್ತಮುತ್ತಲ ಜಮೀನುಗಳಲ್ಲಿ ಚಿರತೆ ಕಾಣಿಸಿಕೊಳ್ಳುತ್ತಿದ್ದು, ಈ ಭಾಗದ ರೈತರು ಜಮೀನುಗಳಿಗೆ ತೆರಳಲು ಆತಂಕ ಪಡುವಂತಾಗಿದೆ.

ಮಠಾಧೀಶರು ಸಿದ್ದರಾಮಯ್ಯರಿಂದ ದೂರವಿರಬೇಕು

ಬಿಜೆಪಿ ಮುಖಂಡ ಅಮ್ಮನಪುರ ಮಲ್ಲೇಶ್



ಚಾಮರಾಜನಗರ, ಆ.23– ಸುಳ್ಳು ಹೇಳುವುದರಲ್ಲಿ ನಿಪುಣರಾಗಿರುವ ವಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಂದ ವೀರಶೈವ ಲಿಂಗಾಯತ ಮಠಗಳು, ಸ್ವಾಮೀಜಿಗಳು ಹಾಗೂ ಸಮಾಜ ದೂರ ಇರಬೇಕು ಎಂದು ಬಿಜೆಪಿ ಮುಖಂಡ ಅಮ್ಮನಪುರ ಮಲ್ಲೇಶ್ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ರಂಭಾಪುರ ಮಠಕ್ಕೆ ಭೇಟಿ ನೀಡಿದ್ದ ಸಿದ್ದರಾಮಯ್ಯ ಅವರು, ಲಿಂಗಾಯತ, ವೀರಶೈವ ಪ್ರತ್ಯೇಕ ಧರ್ಮ ರಚನೆ ಮಾಡಲು ಹೊರಟಿದ್ದ ಬಗ್ಗೆ ತಮ್ಮ ಬಳಿ ಪಶ್ಚಾತಾಪ ವ್ಯಕ್ತಪಡಿಸಿದರು ಎಂದು ರಂಭಾಪುರಿ ಶ್ರೀ ಮಾಧ್ಯಮಗಳಿಗೆ ತಿಳಿಸಿದ್ದರು. ಆದರೆ ಸಿದ್ದರಾಮಯ್ಯನವರು ನಾನು ಹಾಗೇ ಹೇಳಿಲ್ಲ ಎಂದು ಸಮರ್ಥಿಸಿಕೊಳ್ಳುತ್ತಿದ್ದಾರೆ. ಸಿದ್ದರಾಮಯ್ಯನವರು ಅನೇಕ ಬಾರಿ ಸುಳ್ಳು ಹೇಳಿದ್ದಾರೆ. ಸ್ವಾಮೀಜಿಗಳು ಸಿದ್ದರಾಮಯ್ಯನವರ ಜೊತೆ ಮಾತಾಡುವಾಗ ವೀಡಿಯೋ ರೆಕಾರ್ಡ್ ಮಾಡಿಕೊಳ್ಳುವುದು ಉತ್ತಮ ಎಂದರು.

ಸಿದ್ದರಾಮಯ್ಯನವರು ತಾವು ಮುಖ್ಯಮಂತ್ರಿ ಆಗಲು ಸ್ವ ಹಿತಾಸಕ್ತಿಗಾಗಿ ಏನು ಬೇಕಾದರೂ ಮಾಡಬಲ್ಲರು. ಅವರು ಸಮಾಜವಾದಿ ಎಂಬುದು ಸುಳ್ಳು ಲಿಂಗಾಯತರ ವಿರೋಧಿಯಾಗಿದ್ದಾರೆ. ಅವರು ಸಿಎಂ ಆಗಿದ್ದಾಗ ಅವರ ಸಂಪುಟದಲ್ಲಿ ಸಮುದಾಯದ ಇಬ್ಬರೇ ಸಚಿವರಿದ್ದರು. ಈಗ ಬಿಜೆಪಿ ಸರ್ಕಾರದಲ್ಲಿ 8 ಮಂದಿ ಸಚಿವರಾಗಿದ್ದಾರೆ. ಆದ್ದರಿಂದ ಲಿಂಗಾಯತ ಮಠ–ಮಾನ್ಯಗಳು ಸಿದ್ದರಾಮಯ್ಯರನ್ನು ನಂಬಬಾರದು ಎಂದು ಮನವಿ ಮಾಡಿದರು. ಬಿಜೆಪಿ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ನಟರಾಜು, ಗ್ರಾಮಾಂತರ ಮಂಡಲ ಅಧ್ಯಕ್ಷ ಬಸವಣ್ಣ, ಎಪಿಎಂಸಿ ಮಾಜಿ ನಿರ್ದೇಶಕ ವಿಶ್ವನಾಥ್, ಅರಕಲವಾಡಿ ಮಹೇಶ್, ವೀರನಪುರ ಮಹಾಲಿಂಗಪ್ಪ, ಗಜೇಂದ್ರ ಸುದ್ದಿಗೋಷ್ಠಿಯಲ್ಲಿ ಇದ್ದರು.

ಮಾದಪ್ಪನ ಹುಂಡಿಯಲ್ಲಿ 2 ಕೋಟಿ ಕಾಣಿಕೆ ಸಂಗ್ರಹ

ಚಾಮರಾಜನಗರ, ಆ.23–ಜಿಲ್ಲೆಯ ಪ್ರಸಿದ್ಧ ಯಾತ್ರಾ ಸ್ಥಳ ಮಹದೇಶ್ವರಬೆಟ್ಟದ ಮಲೆ ಮಹದೇಶ್ವರಸ್ವಾಮಿ ದೇವಾಲಯದ ಹುಂಡಿ ಕಾಣಿಕೆ ಎಣಿಕೆ ಮಂಗಳವಾರ ನಡೆದಿದ್ದು, 40 ದಿನಗಳಲ್ಲಿ 2 ಕೋಟಿ ಕಾಣಿಕೆ ಸಂಗ್ರಹವಾಗಿದೆ.

ಕಳೆದ ಬಾರಿ ಜು.14ರಂದು ಹುಂಡಿ ಕಾಣಿಕೆ ಎಣಿಕೆ ನಡೆದಿತ್ತು. ಮಂಗಳವಾರ ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಸಂಕೀರ್ಣದಲ್ಲಿ ಬಿಗಿ ಭದ್ರತೆಯಲ್ಲಿ ನಡೆದ ಎಣಿಕೆ ಕಾರ್ಯದಲ್ಲಿ 2.342 ಕೆಜಿಗಳಷ್ಟು ಬೆಳ್ಳಿ ಹಾಗೂ 50 ಗ್ರಾಂ ಚಿನ್ನವನ್ನು ಭಕ್ತರು ಕಾಣಿಕೆ ರೂಪದಲ್ಲಿ ಮಾದಪ್ಪನ ಹುಂಡಿಗಳಿಗೆ ಹಾಕಿದ್ದಾರೆ. ನೋಟಿನ ರೂಪದಲ್ಲಿ 1,89,31,758 ರೂ., ನಾಣ್ಯದ ರೂಪದಲ್ಲಿ 10,84,582 ರೂ. ಸೇರಿದಂತೆ ಒಟ್ಟು 2,00,16,340 ಸಂಗ್ರಹವಾಗಿದೆ ಎಂದು ಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ. ಹುಂಡಿ ಎಣಿಕೆ ವೇಳೆ ಪ್ರಾಧಿಕಾರದ ಕಾರ್ಯದರ್ಶಿ ಎಸ್.ಕಾತ್ಯಾಯಿನಿ ದೇವಿ, ಉಪ ಕಾರ್ಯದರ್ಶಿ ಬಸವರಾಜು, ಇತರ ಅಧಿಕಾರಿ, ಸಿಬ್ಬಂದಿ ಇದ್ದರು.

ಕಾಂಗ್ರೆಸ್ ನಿಲುವಿಗೆ ಬಿಎಸ್‌ವೈ ಸ್ವಾಗತ



ಮೈಸೂರು,ಆ.23(ಆರ್‌ಕೆ)–ಮಡಿಕೇರಿ ಚಲೋ ಮುಂದೂಡಿರುವ ಕಾಂಗ್ರೆಸ್ ನಿಲುವನ್ನು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸ್ವಾಗತಿಸಿದ್ದಾರೆ.

ಮೊಟ್ಟೆ ಎಸೆತ ಪ್ರಕರಣ ಖಂಡಿಸಿ ಹಮ್ಮಿಕೊಂಡಿದ್ದ ಮಡಿಕೇರಿ ಚಲೋ ಪಾದಯಾತ್ರೆ ಮುಂದೂಡಿರುವುದಾಗಿ ಬೆಂಗಳೂರಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ ಹಿನ್ನೆಲೆಯಲ್ಲಿ ಮೈಸೂರಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಯಡಿಯೂರಪ್ಪ, ಕಾಂಗ್ರೆಸ್ ನಿಲುವನ್ನು ಸ್ವಾಗತಿಸುತ್ತೇನೆ ಎಂದರು. ಶಾಂತಿ ಕಾಪಾಡಲು ಕಾಂಗ್ರೆಸ್‌ನವರು ಚಳುವಳಿ ಮುಂದೂಡಿರುವುದಕ್ಕೆ ನಾನು ಧನ್ಯವಾದ ತಿಳಿಸುತ್ತೇನೆ. ಇಂತಹ ಸಂದರ್ಭದಲ್ಲಿ ಸಹನೆಯಿಂದಿರುವುದು ಒಳ್ಳೆಯದು. ಅದೇ ರೀತಿ ನಮ್ಮ ಪಕ್ಷದಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಕೈಬಿಡಬೇಕು ಎಂದು ಅವರು ಸ್ವಪಕ್ಷೀಯರಿಗೆ ಸಲಹೆ ನೀಡಿದರು.

ಒಂದನೇ ಪುಟದಿಂದ

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಚಾಲನೆ

ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಕಾ.ಪು. ಸಿದ್ದಲಿಂಗಸ್ವಾಮಿ ಹಾಗೂ ಇತರರು ಉಪಸ್ಥಿತರಿದ್ದರು.

ರಥಯಾತ್ರೆ ಸಾಗುವ ಮಾರ್ಗದಲ್ಲಿ ಆಯಾ ಠಾಣಾ ವ್ಯಾಪ್ತಿಯ ಇನ್ಸ್‌ಪೆಕ್ಟರ್ ನೇತೃತ್ವದಲ್ಲಿ ಭಾರೀ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು, ಮೊಬೈಲ್ ಕಮಾಂಡ್ ಸೆಂಟರ್ ವಾಹನದೊಂದಿಗೆ ಸಿಸಿ ಕ್ಯಾಮರಾ ಕಣ್ಗಾವಲು ಮೂಲಕ ಕಟ್ಟೆಚ್ಚರ ವಹಿಸಲಾಗಿತ್ತು.

ರಥಯಾತ್ರೆ ಆರಂಭಕ್ಕೂ ಮುನ್ನ ನೂರಾರು ಮಂದಿ ಆರ್‌ಎಸ್‌ಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಜಮಾಯಿಸಿ 'ವೀರ್ ಸಾವರ್ಕರ್–ನಾನು ಸಾವರ್ಕರ್' ಜಯ ಘೋಷಣೆಗಳನ್ನು ಕೂಗಿದರು. ಪ್ರತಿಭಟನೆ ಬೆದರಿಕೆ ಹಿನ್ನೆಲೆಯಲ್ಲಿ ರಥಯಾತ್ರೆಗೆ ಚಾಲನೆ ಸಂದರ್ಭ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಯೋಜಿಸಿ, ಭಾರೀ ಭದ್ರತೆ ಒದಗಿಸಲಾಗಿತ್ತು. ಸಂಸದ ಪ್ರತಾಪ್ ಸಿಂಹ, ಶಾಸಕರಾದ ಎಸ್.ಎ. ರಾಮದಾಸ್, ಎಲ್. ನಾಗೇಂದ್ರ, ಮಾಜಿ ಸಚಿವ ಸಿ.ಹೆಚ್. ವಿಜಯಶಂಕರ್, ಮೈಲ್ಯಾಕ್ ಅಧ್ಯಕ್ಷ ಕೌಟಿಲ್ಯ ರಘು, ಬಿಜೆಪಿ ನಗರಾಧ್ಯಕ್ಷ ಶ್ರೀವತ್ಸ, ಮಾಜಿ ಶಾಸಕ ಇ. ಮಾರುತಿರಾವ್ ಪವಾರ್, ಮುಖಂಡರಾದ ಅರುಣ್‌ಕುಮಾರ್‌ಗೌಡ, ಪ್ರಭಾಕರರಾವ್ ಸಿಂಧೆ, ಶಿವಕುಮಾರ್, ಪಾಲಿಕೆ ಬಿಜೆಪಿ ಸದಸ್ಯರು, ವಿವಿಧ ಬ್ಲಾಕ್ ಪದಾಧಿಕಾರಿಗಳು ರಥಯಾತ್ರೆಗೆ ಚಾಲನೆ ನೀಡುವ ವೇಳೆ ಉಪಸ್ಥಿತರಿದ್ದರು.

ಸಾವರ್ಕರ್ ಬಗ್ಗೆ ಅಪಪ್ರಚಾರ ಅಕ್ಷಮ್ಯ ಅಪರಾಧ

ಮಹತ್ವದ ಕಾಲಘಟ್ಟದಲ್ಲಿದ್ದೇವೆ. ಭಾರತ ದೇಶ ವಿಶ್ವಗುರು ಆಗಲು ದಾಪುಗಾಲು ಹಾಕುತ್ತಿದೆ.

ಹಾಗೆಯೇ ನಮ್ಮ ಮುಂದೆ ಅನೇಕ ಸವಾಲುಗಳೂ ಇವೆ. ಸಾವರ್ಕರ್ ವಿರುದ್ಧ ಅಪಪ್ರಚಾರ ಮಾಡುತ್ತಿರುವವರಿಗೆ ಅವರ ಮೌಲ್ಯಯುತ ಸಂದೇಶಗಳನ್ನು ತಲುಪಿಸುವ ಮೂಲಕ ಮನೆ–ಮನಗಳಿಗೆ ಅವರ ಆದರ್ಶವನ್ನು ತಿಳಿಸಬೇಕಾಗಿದೆ ಎಂದರು. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಸಾವರ್ಕರ್‌ರ ವಿಚಾರ ಧಾರೆಗಳನ್ನು ಪ್ರಚಾರ ಮಾಡಬೇಕೆಂದಿದ್ದರು. ಮಾಜಿ ಮಹಿಳಾ ಪ್ರಧಾನಿ ಇಂದಿರಾ ಗಾಂಧಿ ಅವರು ಸ್ವಾತಂತ್ರ್ಯ ಯೋಧ ಎಂಬ ಬಿರುದು ನೀಡಿದ್ದರು. ಅವರನ್ನು ಸ್ವಾತಂತ್ರ್ಯ ವೀರ ಎಂದು ಕರೆಯಲು ವಿರೋಧ ವ್ಯಕ್ತಪಡಿಸುತ್ತಿರುವವರು ಬಸವಣ್ಣನವರ ವಚನ "ಇವನಾರವ–ಇವನಾರವ ಎನ್ನದಿರಯ್ಯ, ಇವ ನಮ್ಮವ–ಇವ ನಮ್ಮವ ಎನ್ನಿರಯ್ಯಾ" ತಿಳಿದುಕೊಳ್ಳಬೇಕು ಎಂದು ಯಡಿಯೂರಪ್ಪ ನುಡಿದರು.

ಸಾವರ್ಕರ್ ಶ್ರೇಷ್ಠ ನಾಯಕ ಎಂದು ಜಾಕೀರ್ ಹುಸೇನ್ ಹೇಳಿದ್ದರೆ, ದೇಶದ ಹೆಮ್ಮೆಯ ಪುತ್ರ ಎಂದು ರಾಮ್ ಮನೋಹರ್ ಲೋಹಿಯಾ ಬಣ್ಣಿಸಿದರು. ಅವರ ಅಂತಿಮ ಯಾತ್ರೆಯಲ್ಲಿ ಎಲ್ಲಾ ಪಕ್ಷಗಳ ನಾಯಕರು ಭಾಗಿಯಾಗಿದ್ದರು. ಇಡೀ ಮುಂಬೈ ನಗರವೇ ಅಲ್ಲಿ ಸೇರಿತ್ತು. ಅಂತಹ ಭಾರತ ಮಾತೆಯ ಹೆಮ್ಮೆಯ ಪುತ್ರ ಸಾವರ್ಕರ್ ದೇಶಕ್ಕಾಗಿ ಪದವಿಯನ್ನೇ ತ್ಯಾಗ ಮಾಡಿ ವಿದೇಶ ವಸ್ತ್ರ ತ್ಯಜಿಸಿದ್ದರು ಎಂದು ಮಾಜಿ ಮುಖ್ಯಮಂತ್ರಿಗಳು ನುಡಿದರು. ಬ್ರಿಟಿಷರ ವಿರುದ್ಧ ಹೋರಾಡಿ ಅದರೊಟ್ಟಿಗೆ ಹಿಂದೂ ಧರ್ಮದ ಸುಧಾರಣೆ, ರಕ್ಷಣೆ, ಆರ್‌ಎಸ್‌ಎಸ್‌ನಂತಹ ಸಂಘಟನೆಗಳ ಮೂಲಕ ದೇಶ ಕಟ್ಟಿದ ಸಾಧಕ ಸಾವರ್ಕರ್‌ರಂತಹ ಮತ್ತೊಬ್ಬ ಹೋರಾಟಗಾರರನ್ನು ನೋಡಲು ಸಾಧ್ಯವಿಲ್ಲ. ಅಂತಹ ಶ್ರೇಷ್ಠ ನಾಯಕರ ಮೌಲ್ಯ, ಚಿಂತನೆಗಳನ್ನು ಎಲ್ಲೆಡೆ ತಲುಪಿಸುವ ಈ ರಥಯಾತ್ರೆಯು ಯುವ ಶಕ್ತಿಗಳಿಗೆ ಪ್ರೇರೇಪಣೆಯಾಗಲಿ, ಸ್ವಾಭಿಮಾನದ ಕಿಚ್ಚು ಮೂಡಿಸಲಿ ಎಂದು ಬಿ.ಎಸ್.ಯಡಿಯೂರಪ್ಪ ಇದೇ ಸಂದರ್ಭ ನುಡಿದರು. ಎಲ್ಲೆಡೆ ರಥಯಾತ್ರೆಯನ್ನು ಸ್ವಾಗತಿಸಿ, ಯಾವುದೇ ಗೊಂದಲಕ್ಕೆ ಆಸ್ಪದ ನೀಡದೇ ಸಾವರ್ಕರ್ ಅವರ ಚಿಂತನೆಗಳನ್ನು ಜನರ ಮನಸುಗಳಲ್ಲಿ ಮೂಡಿಸಿ ಎಂದು ಅವರು ಕಾರ್ಯಕರ್ತರಿಗೆ ಕರೆ ನೀಡಿದರು.

ನಾನಾ ಖಾದ್ಯ ಮಳಿಗೆ ತೆರೆಯಲು ಚಿಂತನೆ

ಆಹಾರ ಮೇಳ ಉಪಸಮಿತಿ ಮೂಲಕವೇ ಕೆಲ ಆಹಾರ ಮಳಿಗೆ ತೆರೆಯುವ ಸಂಬಂಧ ಚರ್ಚೆ ನಡೆಸಲಾಗಿದೆ. ನವರಾತ್ರಿಯಲ್ಲಿ ಸಾಂಸ್ಕೃತಿಕ ನಗರಿಯನ್ನು ಆವರಿಸುವ ಬಣ್ಣ ಬಣ್ಣದ ಅತ್ಯಾಕರ್ಷಕ ವಿದ್ಯುತ್ ದೀಪಾಲಂಕಾರ ಸವಿಯುವುದೇ ಒಂದು ಸೊಬಗು. ಇದರ ನಡುವೆ ಅರಮನೆ ಆವರಣ ಸೇರಿದಂತೆ ವಿವಿಧ ವೇದಿಕೆಗಳಲ್ಲಿನ ಸಾಂಸ್ಕೃತಿಕ ಕಾರ್ಯಕ್ರಮ, ಫಲಪುಷ್ಪ ಪ್ರದರ್ಶನ, ಯುವ ದಸರಾ, ಕೃಷಿ ಮೇಳ ಇನ್ನಿತರೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಸಂಭ್ರಮಿಸುವ ಜನ ಕೊನೆಯಲ್ಲಿ ಆಹಾರ ಮೇಳದತ್ತ ಹೆಜ್ಜೆ ಹಾಕುತ್ತಾರೆ. ಆದರೆ ವಾಹನ ದಟ್ಟಣೆ, ಜನದಟ್ಟಣೆ ಇನ್ನಿತರ ಕಾರಣಗಳಿಂದ ಹಲವರಿಗೆ ಆಹಾರ ಮೇಳಕ್ಕೆ ತೆರಳಲು ಸಾಧ್ಯವಾಗುವುದೇ ಇಲ್ಲ. ಕೆಲ ಸಂದರ್ಭಗಳಲ್ಲಿ ಹೊರಗಡೆಯೂ ಆಹಾರ ಸಿಗದೆ ಹಸಿದುಕೊಂಡೇ ಮನೆಗೆ ವಾಪಸ್ಸಾಗಬೇಕಾಗುತ್ತದೆ.

ಇನ್ನು ಸ್ಥಳೀಯರು ಒಂದೇ ದಿನ ಎಲ್ಲಾ ಸ್ಥಳಗಳಿಗೂ ಭೇಟಿ ನೀಡುವುದು ಕಡಿಮೆ. ಸಮಯಾವಕಾಶ ಹೊಂದಿಸಿಕೊಂಡು ಒಂದೊಂದು ದಿನ ಒಂದೊಂದು ಕಾರ್ಯಕ್ರಮ ವೀಕ್ಷಿಸುತ್ತಾರೆ. ಅಂತಹವರು ಪ್ರತಿದಿನ ಆಹಾರ ಮೇಳಕ್ಕೆ ಭೇಟಿ ನೀಡುವುದು ಕಷ್ಟ. ವಿನಾಯಿತಿ ತಿನ್ನಬೇಕು ಎನ್ನಿಸಿದರೂ ದೂರ ಹೋಗಬೇಕು ಎನ್ನುವ ಕಾರಣಕ್ಕೆ ಸುಮ್ಮನಾಗುವುದಿದೆ. ಇದರಿಂದ ಹಿರಿಯರು ಹಾಗೂ ಮಕ್ಕಳು ಹಸಿವಿನಿಂದ ಬಳಲಬಹುದು. ಹಾಗಾಗಿ ಎಲ್ಲಾ ಕಾರ್ಯಕ್ರಮಗಳ ಸ್ಥಳದಲ್ಲೂ ಒಂದೆರಡು ಆಹಾರ ಮಳಿಗೆಗಳಿದ್ದರೆ ಜನರಿಗೆ ಅನುಕೂಲವಾಗಲಿದೆ. ಜೊತೆಗೆ ದಸರಾ ಸಂದರ್ಭದಲ್ಲಿ ಹೆಚ್ಚು ವ್ಯಾಪಾರಿಗಳಿಗೆ ಅವಕಾಶ ಮಾಡಿಕೊಟ್ಟು ನೆರವಾದಂತಾಗುತ್ತದೆ.

'ಸಾರ್ವಜನಿಕರ ಅನುಕೂಲದ ದೃಷ್ಟಿಯಿಂದ ಯುವ ದಸರಾ, ಕೃಷಿ ಮೇಳ ಇನ್ನಿತರ ದಸರಾ ಕಾರ್ಯಕ್ರಮಗಳನ್ನು ಆಯೋಜಿಸುವ ಸ್ಥಳದಲ್ಲೂ ಆಹಾರ ಮಳಿಗೆ ತೆರೆಯುವ ಬಗ್ಗೆ ಚರ್ಚೆ ನಡೆಸಲಾಗಿದ್ದು, ಈ ಸಂಬಂಧ ವಿವಿಧ ಉಪ ಸಮಿತಿಗಳಿಗೆ ಪತ್ರ ಬರೆಯಲಾಗುತ್ತಿದೆ. ಅಲ್ಲಿನ ಸ್ಥಳಾವಕಾಶ ಹಾಗೂ ಬೇಡಿಕೆ ಅನುಸಾರ ಯಾವ ರೀತಿಯ ತಿನಿಸುಗಳು ಬೇಕು, ಎಷ್ಟು ಮಳಿಗೆ ಅವಶ್ಯಕತೆ ಇದೆ ಎಂದು ತಿಳಿಸಿದರೆ ಆಹಾರ ಮೇಳ ಉಪ ಸಮಿತಿ ವತಿಯಿಂದ ವ್ಯವಸ್ಥೆ ಮಾಡಲಾಗುತ್ತದೆ. ನಮ್ಮಲ್ಲಿ ನೋಂದಾಯಿಸಿಕೊಳ್ಳುವ ವ್ಯಾಪಾರಿಗಳಿಗೆ ಅಲ್ಲಿ ಅವಕಾಶ ಕಲ್ಪಿಸಲಾಗುವುದು' ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ಕುಮುದಾ ಶರತ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಪ್ರತ್ಯೇಕ ಆಲೋಚನೆ: ಈ ಬಾರಿ ಕಾಡಾ ಕಚೇರಿ ಆವರಣದಲ್ಲಿ ಆಹಾರ ಮೇಳ ಆಯೋಜಿಸಬೇಕೆಂದಿತ್ತು. ಆದರೆ ಮಳೆ ಬಂದರೆ ಕಷ್ಟವಾಗುತ್ತದೆ ಎಂಬ ಕಾರಣಕ್ಕೆ ಲಲಿತಮಹಲ್ ಹೋಟೆಲ್ ಸಮೀಪ ಹಾಗೂ ಸ್ಕೌಟ್ ಅಂಡ್ ಗೈಡ್ಸ್ ಮೈದಾನದಲ್ಲೇ ಏರ್ಪಡಿಸಲು ನಿರ್ಧರಿಸಲಾಗಿದೆ. ಈ ಸಂಬಂಧ ದಸರಾ ವಿಶೇಷಾಧಿಕಾರಿಗಳೂ ಆದ ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಬೇಕಿದೆ. ಇದರ ನಡುವೆ ಕರಾವಳಿ, ಉತ್ತರ ಕರ್ನಾಟಕ, ಕೊಡಗು ಸೇರಿದಂತೆ ಎಲ್ಲಾ ಜಿಲ್ಲೆಗಳ ಅಧಿಕಾರಿಗಳಿಗೆ ಪತ್ರ ಬರೆದು ಅಲ್ಲಿನ ಪ್ರಾಂತೀಯ ವಿಶೇಷ ಖಾದ್ಯದ ಮಾರಾಟಕ್ಕೆ ಆಹ್ವಾನಿಸಲಾಗಿದೆ. ಅಲ್ಲದೆ ಮಹಾರಾಷ್ಟ್ರ ಸೇರಿದಂತೆ ಹೊರರಾಜ್ಯಗಳ ವಿಶೇಷ ತಿನಿಸುಗಳ ಮಾರಾಟ ಮಾಡಲು ವ್ಯಾಪಾರಿಗಳು ಉತ್ಸುಕರಾಗಿದ್ದಾರೆ. ಎಂದಿನಂತೆ ಬುಡಕಟ್ಟು ಸಮುದಾಯದವರ ಬಂಬೂ ಬಿರಿಯಾನಿ ಇನ್ನಿತರ ಖಾದ್ಯಗಳು ಲಭ್ಯವಾಗಲಿವೆ ಎಂದರು.

ಮನರಂಜನೆ-ಸ್ಪರ್ಧೆ: ದಸರಾ ವೈಭವದ ನಡುವೆ ಆಹಾರ ಮೇಳದಲ್ಲಿ ತಮ್ಮಿಷ್ಟದ ಹಾಗೂ ಹೊಸ ತಿನಿಸುಗಳನ್ನು ಆಸ್ವಾದಿಸುವುದೇ ಸಂಭ್ರಮ ಇಮ್ಮಡಿಗೊಳಿಸುತ್ತದೆ. ಇದರೊಂದಿಗೆ ಎಂದಿನಂತೆ ನಿತ್ಯ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಅಡುಗೆ ತಯಾರಿ ಹಾಗೂ ತಿನ್ನುವ ಸ್ಪರ್ಧೆಗಳನ್ನೂ ಆಯೋಜಿಸಿ ವಿಜೇತರಿಗೆ ಬಹುಮಾನ ನೀಡಲಾಗುವುದು ಎಂದು ತಿಳಿಸಿದರು.

ಗ್ರಾಹಕರು-ವ್ಯಾಪಾರಿಗಳಿಗೆ ತೊಂದರೆಯಾಗದಿರಲಿ: ದಸರಾ ಆಹಾರ ಮೇಳದಲ್ಲಿ ಜನಸಾಮಾನ್ಯರು ಸಾಮಾನ್ಯ, ಇತರೆ ಕಾರ್ಯಕ್ರಮಗಳಿಗೆ ಹೋಗಿದ್ದವರೆಲ್ಲಾ ಕಡೆಗೆ ಆಹಾರ ಮೇಳಕ್ಕೆ ಬಂದು ವಿವಿಧ ಖಾದ್ಯಗಳನ್ನು ಸವಿದು ಮನೆಯತ್ತ ಹೆಜ್ಜೆ ಹಾಕುವುದು ಸಹಜ ಸಂಗತಿ. ಆದರೆ ಪ್ರತಿ ವರ್ಷ ಒಂದಿಲ್ಲೊಂದು ಅವ್ಯವಸ್ಥೆಯಿಂದ ತೊಂದರೆ ಉಂಟಾಗುತ್ತದೆ. ಮಳೆ, ವಿದ್ಯುತ್, ಕುಡಿಯುವ ನೀರು ಇನ್ನಿತರ ಕನಿಷ್ಠ ಸೌಲಭ್ಯಗಳು ಸಮರ್ಪಕವಾಗಿರದೆ ವ್ಯಾಪಾರಿಗಳು ತೊಂದರೆ ಅನುಭವಿಸಿದ್ದಿದೆ. ಮಳೆ ಬಂದಾಗ ಗ್ರಾಹಕರೂ ಹೈರಾಣಾಗುತ್ತಾರೆ. ಈ ಬಾರಿಯಾದರೂ ಯಾವ ಸಮಸ್ಯೆಯೂ ಉಂಟಾಗದಂತೆ ವ್ಯವಸ್ಥಿತವಾಗಿ ಆಹಾರ ಮೇಳ ಆಯೋಜಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಸರ್ಕಾರದ ಸುತ್ತೋಲೆಯಲ್ಲಿ ಏನಿದೆ?

ಸಂಬಂಧಿಸಿದ ಇಲಾಖೆಗಳು ಜಂಟಿ ತಪಾಸಣೆ ಮಾಡಿ 3 ದಿನಗಳ ಒಳಗೆ ಪರವಾನಗಿ ನೀಡಲು ಕ್ರಮ ವಹಿಸುವುದು.

- ಪರವಾನಗಿ ನೀಡುವ ಮುನ್ನ ಆಯೋಜಕರಿಂದ ಸರ್ಕಾರ ಹಾಗೂ ನ್ಯಾಯಾಲಯದ ಆದೇಶಗಳನ್ನು ಪಾಲಿಸುವ ಬಗ್ಗೆ ಮುಚ್ಚಳಿಕೆ ಪಡೆಯುವುದು.
- ಸಾರ್ವಜನಿಕ ಸುರಕ್ಷತೆ ಹಾಗೂ ಪರಿಸರ ಮಾಲಿನ್ಯ ಉಂಟಾಗದ ರೀತಿ ಕಾರ್ಯಕ್ರಮ ವಹಿಸುವಂತೆ ಆಯೋಜಕರಿಗೆ ಸೂಚಿಸುವುದು.
- ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸುವಂತೆ ಆಯೋಜಕರಿಗೆ ಸೂಚಿಸುವುದು.
- ವಿಶೇಷವಾಗಿ ಹೈ-ಟೆನ್ಷನ್ ತಂತಿ ಹಾದು ಹೋಗಿರುವ ಪ್ರದೇಶಗಳಲ್ಲಿ ಯಾವುದೇ ಕಾರಣಕ್ಕೂ ಗಣೇಶ ಮೂರ್ತಿಯನ್ನು ಸ್ಥಾಪಿಸಲು ಅನುಮತಿ ಕೊಡುವಂತಿಲ್ಲ.
- ಉತ್ಸವಕ್ಕೆ ಮುಂಚಿತವಾಗಿ ನಾಗರಿಕ ಸಮಿತಿ, ಮೊಹಲ್ಲಾ ಸಮಿತಿ, ಶಾಂತಿ ಸಮಿತಿ ಮತ್ತಿತರ ಎಲ್ಲಾ ಸಂಘಸಂಸ್ಥೆಗಳ ಮುಖ್ಯಸ್ಥರನ್ನು ಒಳಗೊಂಡಂತೆ ಕೋಮು ಸೌಹಾರ್ದ ಸಭೆಗಳನ್ನು ಆಯೋಜಿಸಲು ಕ್ರಮ ವಹಿಸುವುದು.

ದಸರಾ ಫಲಪುಷ್ಪ ಪ್ರದರ್ಶನದಲ್ಲಿ ಮೇಳೈಸಲಿವೆ ಊಟಿ, ಕೋಲ್ಕತ್ತಾ, ಪುಣೆಯ ಅಲಂಕಾರಿಕ ಹೂವಿನ ಗಿಡಗಳು

● 40 ಸಾವಿರ ಪಾಟ್‌ಗಳಲ್ಲಿ ಬೆಳೆಯುತ್ತಿರುವ ಸಸ್ಯ ರಾಶಿ ● 28 ತಳಿಯ ಬಣ್ಣ ಬಣ್ಣದ ಹೂವುಗಳ ಗಿಡಗಳ ಬಳಸುವ ಉದ್ದೇಶ ● ಗಾಜಿನ ಮನೆಯಲ್ಲಿ ದೆಹಲಿಯ ಕೆಂಪುಕೋಟೆ ಅರಳುವ ಸಾಧ್ಯತೆ





ಎಂ.ಟಿ.ಯೋಗೇಶ್ ಕುಮಾರ್

ಮೈಸೂರು, ಆ.23–ಈ ಬಾರಿ ದಸರಾ ಫಲಪುಷ್ಪ ಪ್ರದರ್ಶನವನ್ನು ಅದ್ಧೂರಿಯಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಅದಕ್ಕಾಗಿ ಈಗಾಗಲೇ 28ಕ್ಕೂ ಹೆಚ್ಚು ಬಗೆಯ ಹೂವಿನ ಗಿಡಗಳನ್ನು 40 ಸಾವಿರ ಪಾಟ್‌ಗಳಲ್ಲಿ ಬೆಳೆಸಲಾಗಿದೆ. ಊಟಿ, ಕೊಲ್ಕತ್ತಾ, ಪುಣೆ ಸೇರಿದಂತೆ ವಿವಿಧೆಡೆಯಿಂದ ನಾನಾ ಅಲಂಕಾರಿಕ ಹೂವಿನ ಗಿಡಗಳನ್ನು ತರಿಸಲಾಗಿದೆ.

ಕೊರೊನಾ ಹಿನ್ನೆಲೆಯಲ್ಲಿ ಕಳೆದ ಎರಡು ವರ್ಷಗಳಿಂದಲೂ ದಸರಾ ಫಲಪುಷ್ಪ ಪ್ರದರ್ಶನ ಇರಲಿಲ್ಲ. ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಲ್ಲಿ ಫಲಪುಷ್ಪ ಪ್ರದರ್ಶನವೂ ಪ್ರಮುಖವಾದುದು. ಪ್ರತಿದಿನ 40 ಸಾವಿರಕ್ಕೂ ಹೆಚ್ಚು ಮಂದಿ ಭೇಟಿ ನೀಡುತ್ತಿದ್ದರು. ಅಲ್ಲದೆ ವಾರಾಂತ್ಯದ ದಿನ, ಆಯುಧ ಪೂಜೆ ಹಾಗೂ ಜಂಬೂಸವಾರಿ ದಿನ 80ರಿಂದ 90 ಸಾವಿರ ಜನರು ಸಸ್ಯಕಾಶಿಯನ್ನು ಕಣ್ತುಂಬಿಕೊಳ್ಳುತ್ತಾರೆ.

ಆದರೆ ಎರಡು ವರ್ಷದಿಂದ ಸರಳ ಹಾಗೂ ಸಾಂಪ್ರದಾಯಿಕ ಆಚರಣೆಗಷ್ಟೇ ದಸರಾ ಮಹೋತ್ಸವ ಸೀಮಿತವಾಗಿದ್ದರಿಂದ ಫಲಪುಷ್ಪ ಪ್ರದರ್ಶನ ಈ ಬಾರಿ ದಸರಾ ಫಲಪುಷ್ಪ ಪ್ರದರ್ಶನವನ್ನು ವರ್ಣರಂಜಿತವಾಗಿ ನಡೆಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.

ಪ್ರಸಕ್ತ ಸಾಲಿನ ದಸರಾ ಮಹೋತ್ಸವ ಸೆ.26ರಿಂದ ಅ.5ರವರೆಗೆ ಜರುಗಲಿದೆ. ಫಲಪುಷ್ಪ ಪ್ರದರ್ಶನವನ್ನು 12ರಿಂದ 14 ದಿನ ನಡೆಸುವ ಆಲೋಚನೆಯೂ ಜಿಲ್ಲಾಡಳಿತಕ್ಕಿದೆ. ಎರಡು ವರ್ಷದ ನಂತರ ನಡೆಯುತ್ತಿರುವ ಫಲಪುಷ್ಪ ಪ್ರದರ್ಶನವನ್ನು ಆಕರ್ಷಣೀಯಗೊಳಿಸಲು ಉದ್ದೇಶಿಸಲಾಗಿದೆ.

40 ಸಾವಿರ ಹೂವಿನ ಕುಂಡ: ಕುಪ್ಪಣ್ಣ ಪಾರ್ಕ್‌ನಲ್ಲಿ ನಡೆಯಲಿರುವ ದಸರಾ ಫಲಪುಷ್ಪ ಪ್ರದರ್ಶನದಲ್ಲಿ ಈ ಬಾರಿ 40 ಸಾವಿರಕ್ಕೂ ಹೆಚ್ಚು ಹೂವಿನ ಕುಂಡಗಳಲ್ಲಿ ಬಗೆ ಬಗೆಯ ಹೂವಿನ ಗಿಡಗಳನ್ನು ಬೆಳೆಸಲಾಗುತ್ತಿದೆ. ದಸರಾ ಮಹೋತ್ಸವದ

ಗಾಜಿನ ಮನೆಯಲ್ಲಿ ಅರಳಲಿದೆ ದೆಹಲಿ ಕೆಂಪು ಕೋಟೆ

ಕುಪ್ಪಣ್ಣ ಪಾರ್ಕ್‌ನಲ್ಲಿರುವ ಗಾಜಿನ ಮನೆಯಲ್ಲಿ ಈ ಬಾರಿ ದೆಹಲಿಯ ಕೆಂಪುಕೋಟೆ ವಿವಿಧ ಬಣ್ಣದ ಲಕ್ಷಾಂತರ ಗುಲಾಬಿ ಹೂವಿನಿಂದ ಮೂಡುವುದು ಎಂದು ಹೇಳಲಾಗುತ್ತಿದೆ. ಪ್ರತಿ ವರ್ಷ ಒಂದೊಂದು ಆಕೃತಿ ಹೂವುಗಳಿಂದಲೇ ನಿರ್ಮಿಸಲಾಗುತ್ತದೆ. ಹಾಗಾಗಿ ಈ ಬಾರಿ ಕೆಂಪುಕೋಟೆ ಹಾಗೂ ಹರ್ ಘರ್ ತಿರಂಗಾ ಪರಿಕಲ್ಪನೆ ಸಸ್ಯಕಾಶಿಯಲ್ಲಿ ಮೇಳೈಸಲಿದೆ.

ಆರಂಭಕ್ಕೂ ಒಂದು ವಾರ ಮುನ್ನವೇ ಹೂವು ಅರಳುವಂತೆ ಯೋಜಿಸಿ, ಗಿಡಗಳನ್ನು ಪೋಷಿಸಲಾಗುತ್ತಿದೆ. ಫಲಪುಷ್ಪ ಪ್ರದರ್ಶನಕ್ಕೆ ಬಳಸುವ ಹೂವಿನ ಗಿಡಗಳುಳ್ಳ ಕುಂಡಗಳನ್ನು ಕೇಂದ್ರ ಸಸ್ಯಾಗಾರ, ಕುಪ್ಪಣ್ಣ ಪಾರ್ಕ್, ಸರ್ಕಾರಿ ಅತಿಥಿ ಗೃಹ, ಜಲದರ್ಶಿನಿ ವಿಭಾಗ, ಕರ್ಜನ್ ಪಾರ್ಕ್, ವಸ್ತುಪ್ರದರ್ಶನದಲ್ಲಿರುವ ತೋಟಗಾರಿಕೆ ವಿಭಾಗಗಳಲ್ಲಿ ಅಣಿಗೊಳಿಸಲಾಗುತ್ತಿದೆ. ಗಿಡಗಳಿಗೆ ಗೊಬ್ಬರ ಹಾಕಿ ಸಕಾಲಕ್ಕೆ ನೀರುಣಿಸುವ ಮೂಲಕ ಹೂವಿನ ಗಿಡದ ಸತ್ವವನ್ನು ಕಾಪಾಡಿಕೊಳ್ಳಲಾಗುತ್ತಿದೆ.


ತರಾವರಿ ಗಿಡಗಳು: ದಸರಾ ಫಲಪುಷ್ಪ ಪ್ರದರ್ಶನದ ಹೊಣೆ ಹೊತ್ತಿರುವ ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕ ರುದ್ರೇಶ್ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಫಲಪುಷ್ಪ ಪ್ರದರ್ಶನಕ್ಕೆ ಅಗತ್ಯವಾದ ಹೂವಿನ ಗಿಡಗಳನ್ನು ಐದು ಸ್ಥಳದಲ್ಲಿ ಸುಮಾರು 40 ಸಾವಿರಕ್ಕೂ ಹೆಚ್ಚು ಕುಂಡಗಳಲ್ಲಿ ಬೆಳೆಸಲಾಗುತ್ತಿದೆ. ಇದರಲ್ಲಿ ಫ್ರೆಂಚ್ ಮೇರಿ ಗೋಲ್ಡ್, ಡಯಾಂತರ್ಸ್, ಪರ್ಣಸ, ಬಿಗೋನಿಯಾ, ದಾಲಿಯಾ, ಫೈರ್ ಬುಷ್, ಆರ್ನಮೆಂಟಲ್ ಕೇಲಾ, ಜೀನಿಯಾ, ವಿಂಕಾ, ಸಾಲ್ವಿಯಾ, ಮಾರಿ ಗೋಲ್ಡ್, ಸ್ವೀಟ್ ವಿಲಿಯಮ್, ಸೆಲೋಶಿಯಾ ಸೇರಿದಂತೆ 28ಕ್ಕೂ ಹೆಚ್ಚು ತಳಿಯ ಗಿಡಗಳನ್ನು ಬೆಳೆಸಲಾಗಿದೆ. ಕ್ರೋಟ್ ಗಿಡದ ಮಾದರಿಯ ವಿವಿಧ ಅಲಂಕಾರಿಕಾ ಗಿಡಗಳನ್ನು 5 ಸಾವಿರ ಪಾಟ್‌ಗಳಲ್ಲಿ ಬೆಳೆಸಲಾಗುತ್ತಿದೆ. ಇದರೊಂದಿಗೆ ಊಟಿ, ಪುಣೆ, ಕೊಲ್ಕತ್ತಾ ಸೇರಿದಂತೆ ವಿವಿಧೆಡೆಗಳಿಂದಲೂ ಬಗೆ ಬಗೆಯ ಹೂವಿನ ಗಿಡಗಳು, ಅಲಂಕಾರಿಕಾ ಗಿಡಗಳನ್ನು ತರಲು ಕ್ರಮ ಕೈಗೊಳ್ಳಲಾಗಿದೆ.

ಎಕ್ಸಾಟಿಕ್ ಸ್ಪೀಶಿಯಸ್ ಹೂವಿನ ಗಿಡಗಳಾದ ಲಿಲ್ಲೀಸ್, ಕುರ್ಕುಮಾ, ಚೆಲಾಂಚೋಸ್ ಹಾಗೂ ಇನ್ನಿತರ ಹೂವಿನ ಗಿಡಗಳನ್ನು ಪ್ರದರ್ಶಿಸಲಾಗುತ್ತದೆ. ಪ್ರದರ್ಶನದಲ್ಲಿ ಬಳಸಲಾಗುವ ಹೂವಿನ ಗಿಡಗಳು ಹಂತ ಹಂತವಾಗಿ ಹೂವು ಬಿಡುವುದರಿಂದ ಈಗಾಗಲೇ ಸಿದ್ಧತೆ ಮಾಡಿಕೊಳ್ಳಲಾಗಿದೆ. 150 ದಿನದ ನಂತರ ಹೂವು ಬಿಡುವ ಗಿಡಗಳನ್ನು ಏಪ್ರಿಲ್ ಹಾಗೂ ಮೇ ತಿಂಗಳಿಂದಲೇ ಬೆಳೆಸಲಾಗುತ್ತಿದೆ. ಅಲ್ಲದೆ, 90 ದಿನ, 80 ದಿನ, 60 ದಿನ, 50 ದಿನ ಹಾಗೂ 30 ದಿನದ ಬಳಿಕ ಹೂವು ಬಿಡುವ ಗಿಡಗಳನ್ನು ಈಗಾಗಲೇ ಬೆಳೆಸಲಾಗುತ್ತಿದ್ದು, ಫಲಪುಷ್ಪ ಪ್ರದರ್ಶನ ಆರಂಭದ ವೇಳೆಗೆ ಎಲ್ಲಾ ಗಿಡಗಳು ಹೂವುಗಳಿಂದ ಕಂಗೊಳಿಸಲಿದೆ ಎಂದು ವಿವರಿಸಿದರು.

ಟೆಂಡರ್ ಪ್ರಕ್ರಿಯೆ

ಫಲಪುಷ್ಪ ಪ್ರದರ್ಶನಕ್ಕೆ ಈ ಬಾರಿ ಭಾರೀ ಬೇಡಿಕೆ ಖಚಿತ. ಹೀಗಾಗಿ ಟೆಂಡರ್ ಪಡೆಯಲು ಕೆಲ ಸಂಸ್ಥೆಗಳು ಉತ್ಸುಕವಾಗಿವೆ. ಟೆಂಡರ್ ಅರ್ಜಿ ಸಲ್ಲಿಸಲು ಸೆ.3 ಕೊನೆ ದಿನವಾಗಿದ್ದು, ಸೆ.6ರಂದು ಟೆಂಡರ್ ಬಿಡ್ ತೆರೆದು ಹೆಚ್ಚಿನ ಮೊತ್ತ ಉಲ್ಲೇಖಿಸಿರುವವರಿಗೆ ಟೆಂಡರ್ ಲಭಿಸಲಿದೆ. ಅಂದು ಸಂಜೆಯೇ ಜಿಪಂ ಸಿಇಓ ಪೂರ್ಣಿಮಾ ನೇತೃತ್ವದಲ್ಲಿ ಸಭೆ ನಡೆಯಲಿದ್ದು, ಆ ಸಭೆಯಲ್ಲಿ ತೋಟಗಾರಿಕಾ ಇಲಾಖೆಯ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ. ಫಲಪುಷ್ಪ ಪ್ರದರ್ಶನಕ್ಕೆ ಸರ್ಕಾರ ಯಾವುದೇ ಅನುದಾನ ನೀಡದ ಕಾರಣ ಟೆಂಡರ್ ಮೊತ್ತವನ್ನೇ ಅವಲಂಭಿಸಲಾಗಿದೆ.

ಮೈಸೂರಲ್ಲಿ ಮಾಜಿ ಸಿಎಂ ಗುಂಡೂರಾವ್ ಸ್ಮರಣೆ



ಮೈಸೂರು, ಆ.23(ಆರ್‌ಕೆಬಿ)– ಮಾಜಿ ಮುಖ್ಯಮಂತ್ರಿ ಆರ್.ಗುಂಡೂರಾವ್ ಅವರ ಪುಣ್ಯ ಸ್ಮರಣೆ ಅಂಗವಾಗಿ ಅವರ ಅಭಿಮಾನಿಗಳು ಮಂಗಳವಾರ ಮೈಸೂರಿನ ಕಲಾಮಂದಿರದ ಆವರಣದಲ್ಲಿ ಗುಂಡೂರಾವ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗುಂಡೂರಾವ್ ಅವರನ್ನು ಸ್ಮರಿಸಿದರು.

ಗುಂಡೂರಾವ್ ಅಭಿಮಾನಿಗಳ ಬಳಗ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪುಷ್ಪನಮನ ಸಲ್ಲಿಸಿ ಮಾತನಾಡಿದ ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಕರ್ನಾಟಕ ರಾಜ್ಯಕ್ಕೆ ಗುಂಡೂ ರಾಯರು ಅಪಾರ ಕೊಡುಗೆ ನೀಡಿದ್ದಾರೆ. ಬಡ ವರ್ಗದವರಿಗೆ ಕೆಲಸ ನೀಡುವ ಮೂಲಕ ಅವರ ಜೀವನದ ಆರ್ಥಿಕ ಪರಿಸ್ಥಿತಿ ಸುಧಾರಿಸಿ, ಸ್ವಾಭಿಮಾನಿಯಾಗಿ ದುಡಿಯಲು ಪ್ರೇರೇಪಿಸಿದರು. ಪೇ ಕಮಿಷನ್ ಜಾರಿಗೊಳಿಸಿದರು. ಬಡವರಿಗೆ ಉಚಿತ ವಿದ್ಯುತ್, ಬೆಂಗಳೂರಿಗೆ ಕಾವೇರಿ ನೀರು ಸಮರ್ಪಕ ಪೂರೈಕೆ ಸೇರಿದಂತೆ ಅನೇಕ ಜನಪರ ಯೋಜನೆಗಳನ್ನು ಅನುಷ್ಠಾನಗೊಳಿಸಿದವರು ಎಂದು ಸ್ಮರಿಸಿದರು.

ಹಿರಿಯ ಚಿಂತಕ ಕೆ.ರಘುರಾಂ ವಾಜಪೇಯಿ ಮಾತನಾಡಿ, ಮೈಸೂರಿನಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನೆರವೇರಿತು. ಮೈಸೂರಿನಲ್ಲಿ ಬ್ರಿಟಿಷ್ ಆಳ್ವಿಕೆ ರಾಜಾಶ್ರಯವಿದ್ದಾಗ ಬಹಳಷ್ಟು ಕಟ್ಟಡಗಳು ನಿರ್ಮಾಣವಾದವು. ಆದರೆ ಪ್ರಜಾಪ್ರಭುತ್ವ ಬಂದ ನಂತರ ಕಲಾಮಂದಿರವೇ ಮೊದಲ ಕಟ್ಟಡ ಕನ್ನಡಕ್ಕಾಗಿ ಸ್ಥಾಪನೆಯಾಯಿತು. ಎಷ್ಟೇ ವಿರೋಧ ಬಂದರೂ ಲೆಕ್ಕಿಸದೆ ಸಾಂಸ್ಕೃತಿಕ ರಾಜಧಾನಿಯಲ್ಲಿ ಕನ್ನಡ ಭಾಷೆ, ಕಲೆ, ಸಾಹಿತ್ಯ, ಜನಪದದ ಅಸ್ತಿತ್ವ ಉಳಿಸಲು ಗುಂಡೂರಾಯರ ದಿಟ್ಟ ನಡೆಯನ್ನು ಮರೆಯಲು ಸಾಧ್ಯವಿಲ್ಲ ಎಂದರು.

ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್ ಮಾತನಾಡಿ, ಕುಶಾಲನಗರದಲ್ಲಿ 24ನೇ ವಯಸ್ಸಿನಲ್ಲಿಯೇ ಪುರಸಭೆಯ ಅಧ್ಯಕ್ಷರಾಗಿ ಗೆದ್ದು, ರಾಜ್ಯದ ಮುಖ್ಯ ಮಂತ್ರಿಯಾಗಿ ವಿಧಾನಸಭೆಯುದ್ದಕ್ಕೂ ಬೆಳೆದ ಗುಂಡೂರಾಯರು ತಾವು ಬೆಳೆದು ತಮ್ಮ ಜೊತೆ ಇರುವವರನ್ನು ವಿವಿಧ ಕ್ಷೇತ್ರಗಳಲ್ಲಿ ಮುಖ್ಯವಾಹಿನಿಗೆ ತಂದರು. ಅವರು ಪುತ್ರ ದಿನೇಶ್ ಗುಂಡೂರಾವ್ ಸಹ ರಾಜ್ಯದ ಪ್ರಮುಖ ಮುಖಂಡರಲ್ಲಿ ಒಬ್ಬರಾಗಿದ್ದಾರೆ ಎಂದು ತಿಳಿಸಿದರು.

ನಗರ ಕಾಂಗ್ರೆಸ್ ಉಪಾಧ್ಯಕ್ಷ ರಾಜಾರಾಂ ಮಾತನಾಡಿ, ಮೈಸೂರಿನ ಕಲಾಮಂದಿರ ರಾಜ್ಯದ ದೊಡ್ಡ ಕಲಾ ಸಭಾಂಗಣ ಎಂಬ ಹಿರಿಮೆ ಪಡೆದಿದೆ. ದೇವಸ್ಥಾನದ ಅರ್ಚಕರಿಗೆ, ಪುರೋಹಿತರಿಗೆ ತಸ್ಥಿಕ್ ಯೋಜನೆ ಜಾರಿಗೊಳಿಸಿದರು. ಇಂಜಿನಿಯರಿಂಗ್ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿ, ಶ್ರೀರಂಗಪಟ್ಟಣದ ಪಶ್ಚಿಮ ವಾಹಿನಿ ಧಾರ್ಮಿಕ ಕ್ಷೇತ್ರವಾಗಿ ಪರಿವರ್ತನೆಯಂತಹ ಅನೇಕ ಜನಮೆಚ್ಚುವ ಕಾರ್ಯ ಮಾಡಿದರು. ಆದರೆ ಮೈಸೂರಿನ ಕಲಾಮಂದಿರದ ಆವರಣದಲ್ಲಿ ಗುಂಡೂರಾಯರ ಪ್ರತಿಮೆ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯೆ ವೀಣಾ, ಗುಂಡೂರಾವ್ ಅಭಿಮಾನಿ ಬಳಗದ ಅಧ್ಯಕ್ಷ ವಿನಯ್ ಕಣಗಾಲ್, ಮುಖಂಡರಾದ ಅಜಯ್‌ಶಾಸ್ತ್ರಿ, ವಿದ್ಯಾ, ಕೆಪಿಸಿಸಿ ಅಸಂಘಟಿತ ಕಾರ್ಮಿಕ ವಿಭಾಗದ ಅಧ್ಯಕ್ಷ ಸುನಿಲ್ ನಾರಾಯಣ್, ರವಿನಾಯಕ್, ಚಂದ್ರ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರಿನ ಕಲಾ ಶಿಕ್ಷಕಿಗೆ ಲಲಿತ ಕಲಾ ಅಕಾಡೆಮಿ ವಾರ್ಷಿಕ ಬಹುಮಾನ



ಮೈಸೂರು, ಆ.23(ಆರ್‌ಕೆಬಿ)– ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ ಕರ್ನಾಟಕ ಲಲಿತಕಲಾ ಅಕಾಡೆಮಿ ಆಯೋಜಿಸಿದ್ದ ಸುವರ್ಣ ವಾರ್ಷಿಕ ಕಲಾ ಪ್ರದರ್ಶನದ ಗೌರವ ಪ್ರಶಸ್ತಿ ಹಾಗೂ ವಾರ್ಷಿಕ ಬಹುಮಾನ ಸಮಾರಂಭದಲ್ಲಿ ಮೈಸೂರು ಜಿಲ್ಲೆಯ ಸರಗೂರಿನ ಸರ್ಕಾರಿ ಶಾಲಾ ಶಿಕ್ಷಕಿ ಮೈಸೂರಿನ ಕೆ.ಸಂಗೀತಾ ಅವರ ಕಲಾಕೃತಿಗೆ ಬಹುಮಾನ ಲಭಿಸಿದೆ. ಈ ಸಂಬಂಧ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೆ.ಸಂಗೀತಾ ಅವರಿಗೆ ಹಿರಿಯ ಬರಹಗಾರ ಹಾಗೂ ವಿಮರ್ಶಕ ಎಸ್.ದಿವಾಕರ್ ಅವರು ಬಹುಮಾನ ವಿತರಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷ ಡಿ.ಮಹೇಂದ್ರ, ಮಾಜಿ ಅಧ್ಯಕ್ಷ ಆರ್.ಬಿ.ಭಾಸ್ಕರನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಬಲವಂತರಾವ್, ಅಕಾಡೆಮಿ ರಿಜಿಸ್ಟ್ರಾರ್ ಆರ್.ಚಂದ್ರಶೇಖರ್ ಉಪಸ್ಥಿತರಿದ್ದರು.

ಬಿಎಸ್‌ವೈ ಬೆಂಬಲಿಗರ ಇನ್ನೋವಾ ಕಾರುಗಳ ನಡುವೆ ಅಪಘಾತ

ಮೈಸೂರು, ಆ.23(ಆರ್‌ಕೆ)–ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಮೈಸೂರಿಗೆ ಆಗಮಿಸುವ ವೇಳೆ ಹಿಂದೆ ಬರುತ್ತಿದ್ದ ಬೆಂಬಲಿಗರ ಎರಡು ಇನ್ನೋವಾ ಕಾರುಗಳ ನಡುವೆ ಡಿಕ್ಕಿ ಸಂಭವಿಸಿದೆ. ಇಂದು ಬೆಳಗ್ಗೆ ಮೈಸೂರು–ಬೆಂಗಳೂರು ಹೆದ್ದಾರಿಯ ಏಟ್ರಿಯಾ ಹೋಟೆಲ್ ಸಮೀಪ ಈ ಘಟನೆ ನಡೆದಿದೆ.



ಶಾಸಕ ಎಲ್.ನಾಗೇಂದ್ರ ಆಪ್ತ ಬದರಿನಾಥ ಹಾಗೂ ಬಿಎಸ್‌ವೈ ಸಂಬಂಧಿ ಮಹದೇವಸ್ವಾಮಿ ಎಂಬುವರಿದ್ದ ಕಾರುಗಳು ಡಿಕ್ಕಿಯಾಗಿ ಜಖಂಗೊಂಡಿದ್ದು, ಯಾರಿಗೂ ಗಾಯವಾಗಿಲ್ಲ ಎಂದು ಎನ್.ಆರ್.ಸಂಚಾರ ಠಾಣೆ ಪೊಲೀಸರು ತಿಳಿಸಿದ್ದಾರೆ. ಸಾವರ್ಕರ್ ರಥಯಾತ್ರೆಗೆ ಚಾಲನೆ ನೀಡಲೆಂದು ಯಡಿಯೂರಪ್ಪ ಅವರು ಬೆಂಗಳೂರಿನಿಂದ ಮೈಸೂರಿಗೆ ಬಂದಿದ್ದರು. ಇಲ್ಲಿನ ಏಟ್ರಿಯಾ ಹೋಟೆಲ್ ಸಮೀಪ ಅವರನ್ನು ಬರಮಾಡಿಕೊಂಡ ವೇಳೆ ಬದರಿನಾಥ ಅವರು ಮುಂದೆ ಸಾಗುತ್ತಿದ್ದಾಗ ಅವರ ಇನ್ನೋವಾಗೆ ಹಿಂದೆ ಬರುತ್ತಿದ್ದ ಮಹದೇವಸ್ವಾಮಿ ಅವರ ಕಾರು ಡಿಕ್ಕಿ ಹೊಡೆದಿದೆ. ತಕ್ಷಣ ಇಬ್ಬರೂ ಕಾರು ನಿಲ್ಲಿಸಿ ವಾಗ್ವಾದಕ್ಕಿಳಿದಾಗ ಟ್ರಾಫಿಕ್ ಜಾಮ್ ಆದ ಕಾರಣ ಎನ್.ಆರ್.ಸಂಚಾರ ಠಾಣೆ ಪೊಲೀಸರು ಅವರನ್ನು ಸಮಾಧಾನಪಡಿಸಿ ವಾಹನಗಳನ್ನು ತೆರವುಗೊಳಿಸಿದರು. ಈ ಸಂಬಂಧ ಎನ್.ಆರ್. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳಬೇಕು: ಜಿಟಿಡಿ

ಮೈಸೂರು, ಆ.23(ಎಂಕೆ)– ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯ ಅಭಿವ್ಯಕ್ತಿಗೆ ಪ್ರತಿಭಾನ್ವೇಷಣಾ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಶಾಸಕ ಜಿ.ಟಿ.ದೇವೇಗೌಡ ಸಲಹೆ ನೀಡಿದರು.



ಮೈಸೂರಿನ ವಿಜಯನಗರದಲ್ಲಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ, ಕ್ರೀಡೆ, ಎನ್‌ಎಸ್‌ಎಸ್, ಎನ್‌ಸಿಸಿ, ಸ್ಕೌಟ್ಸ್ ಅಂಡ್ ಗೈಡ್ಸ್, ರೆಡ್‌ಕ್ರಾಸ್ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿನಿಯರು ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಪಾಲ್ಗೊಂಡಾಗ ಕ್ರಿಯಾಶೀಲರಾಗುತ್ತಾರೆ ಎಂದರು.

ವಿದ್ಯಾರ್ಥಿನಿಯರ ಅನುಕೂಲಕ್ಕಾಗಿ ಬಸ್ ಸೌಲಭ್ಯವನ್ನು ಕಲ್ಪಿಸಿಕೊಡುವಂತೆ ಸಭೆಯಲ್ಲಿ ಹಾಜರಿದ್ದ ಕೆ.ಎಸ್.ಆರ್.ಟಿ.ಸಿ. ವಿಭಾಗೀಯ ನಿಯಂತ್ರಣಾಧಿಕಾರಿ ಅಶೋಕ್ ಹಾಗೂ ಕಾಲೇಜಿನಲ್ಲಿ ಅವಶ್ಯವಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಹೂಟಗಳ್ಳಿ ನಗರಸಭೆ ಆಯುಕ್ತ ಟಿ.ಎನ್. ನರಸಿಂಹಮೂರ್ತಿ ಅವರಿಗೆ ಸೂಚಿಸಿದರು.


ಮಹಾರಾಣಿ ಕಾಲೇಜಿನ ಮೈಸೂರು ಕೃಷ್ಣಮೂರ್ತಿ, ರಾಷ್ಟ್ರೀಯ ಕ್ರೀಡಾಪಟು ನವ್ಯಶ್ರೀ, ಕಾಲೇಜಿನ ಅಭಿವೃದ್ಧಿ ಸಮಿತಿಯ ಸದಸ್ಯೆ ಶಾರದಮ್ಮ, ಮಲ್ಲಿಕಾರ್ಜುನ ಸ್ವಾಮಿ, ಹೂಟಗಳ್ಳಿ ಸುರೇಶ್, ನಂಜುಂಡೇಗೌಡ, ಹೂಟಗಳ್ಳಿ ಮಂಚೇಗೌಡ, ನೇತ್ರಾವತಿ ವೆಂಕಟೇಶ್, ಪ್ರಾಂಶುಪಾಲ ಡಾ.ಮಹದೇವಸ್ವಾಮಿ ಮತ್ತಿತರರಿದ್ದರು.

ವಿಪಕ್ಷ ನಾಯಕ ಸಿದ್ದರಾಮಯ್ಯನವರ ಕಾರಿಗೆ ಮೊಟ್ಟೆ ಎಸೆದ ಸಂಪತ್‌ಗೆ ಬಂಪರ್!?

50 ಲಕ್ಷದ ಟೆಂಡರ್ ಮಂಜೂರು

● ಶೋಷಿತ ಸಮುದಾಯಗಳ ಮುಖಂಡರ ಆರೋಪ
● ಘಟನೆಗೆ ಪೊಲೀಸ್ ಭದ್ರತಾ ವೈಫಲ್ಯವೂ ಕಾರಣ

ಮೈಸೂರು,ಆ.23(ಪಿಎಂ)– ವಿಪಕ್ಷ ನಾಯಕ ಸಿದ್ದರಾಮಯ್ಯನವರ ಕಾರಿಗೆ ಕುಶಾಲನಗರದ ಗುಡ್ಡೆಹೊಸೂರು ಬಳಿ ಮೊಟ್ಟೆ ಎಸೆದ ಸಂಪತ್‌ಗೆ ಈಗ 50 ಲಕ್ಷ ರೂ. ಮೊತ್ತದ ಕಾಮಗಾರಿಯ ಟೆಂಡರ್ ಅನ್ನು ಸರ್ಕಾರದಿಂದ ಮಂಜೂರು ಮಾಡಿಸಲಾಗಿದೆ. ಹಾಗಾಗಿ ಇದೆಲ್ಲಾ ಪೂರ್ವನಿಯೋಜಿತ ಪಿತೂರಿ. ಜೊತೆಗೆ ಪೊಲೀಸ್ ಭದ್ರತೆಯ ವೈಫಲ್ಯವೂ ಎದ್ದು ಕಾಣುತ್ತಿದೆ ಎಂದು ಶೋಷಿತ ಸಮುದಾಯಗಳ ಒಕ್ಕೂಟದ ಮುಖಂಡರು ಆರೋಪಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಮುಖಂಡ ಹಾಗೂ ನಗರ ಪಾಲಿಕೆ ಮಾಜಿ ಸದಸ್ಯ ಎಂ.ಶಿವಣ್ಣ, ಶೋಷಿತ ಸಮುದಾಯಗಳ ಅಗ್ರಗಣ್ಯ ನಾಯಕರೂ ಆದ ವಿಪಕ್ಷ ನಾಯಕ ಸಿದ್ದರಾಮಯ್ಯನವರ ವಿರುದ್ಧ ಮಡಿಕೇರಿಯಲ್ಲಿ ನಡೆದ ದಾಳಿ ನೋಡಿದರೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಇದೆಯೇ? ಎಂಬ ಪ್ರಶ್ನೆ ಮೂಡುತ್ತದೆ. ಇನ್ನು ಬಿಜೆಪಿಗರಿಗೆ ಅದರಲ್ಲೂ ಸಂಸದ ಪ್ರತಾಪ್ ಸಿಂಹ ಅವರಿಗೆ ಸಿದ್ದರಾಮಯ್ಯನವರ ಆಹಾರ ಕ್ರಮದ್ದೇ ಚಿಂತೆಯಾಗಿದೆ ಎಂದು ಕಿಡಿಕಾರಿದರು.

ಸಿದ್ದರಾಮಯ್ಯನವರ ಬಗ್ಗೆ ಪದೇ ಪದೆ ಪ್ರತಾಪ್ ಸಿಂಹ ಮಾತನಾಡುತ್ತಿದ್ದು, ಅವರ ವೈಯಕ್ತಿಕ ವಿಚಾರಗಳ ಬಗ್ಗೆ ಮಾತನಾಡಲು ಇವರ್ಯಾರು? ವಿನಾಕಾರಣ ಸಿದ್ದರಾಮಯ್ಯನವರ ಪತ್ನಿಯವರ ಬಗ್ಗೆ ಪ್ರಸ್ತಾಪಿಸಿದ್ದಾರೆ. ಇದು ಒಳ್ಳೆಯದಲ್ಲ ಎಂದರು. 2019ರ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಕೋರ್ಟ್‌ನಿಂದ ತಂದಿರುವ ತಡೆಯಾಜ್ಞೆ ಹಿಂಪಡೆಯಿರಿ ನೋಡೋಣ ಎಂದು ಸವಾಲು ಹಾಕಿದರು.

ಹಾಲಿ ನ್ಯಾಯಾಧೀಶರಿಂದ ತನಿಖೆಯಾಗಲಿ: ಸಿದ್ದರಾಮಯ್ಯನವರ ಕಾರಿಗೆ ಮಾತ್ರವಲ್ಲದೆ, ಜೊತೆಯಲ್ಲಿದ್ದ ನಮ್ಮ ಕಾರುಗಳ ಮೇಲೂ ಮೊಟ್ಟೆ ದಾಳಿ ನಡೆಸಲಾಗಿದೆ. ಸಿದ್ದರಾಮಯ್ಯನವರು ಮಡಿಕೇರಿಯ ಜಿಲ್ಲಾ ಕಚೇರಿಯ ತಡೆಗೋಡೆ ವೀಕ್ಷಣೆ ಮಾಡಿದ ಬಳಿಕ ಕಪ್ಪು ಬಾವುಟ ಪ್ರದರ್ಶನ ಸೇರಿದಂತೆ ಪ್ರತಿರೋಧ ವ್ಯಕ್ತವಾಯಿತು. ಈ ತಡೆಗೋಡೆ ನಿರ್ಮಾಣ ಕಾಮಗಾರಿಯಲ್ಲಿ ಅಕ್ರಮ ನಡೆದಿದೆ ಎಂದು ಸ್ಥಳೀಯರಿಂದ ಆರೋಪವಿದೆ. ಇದರ ವೀಕ್ಷಣೆ ಬಳಿಕ 10ರಿಂದ 15 ಮಂದಿ ಕಪ್ಪು ಬಾವುಟ ಪ್ರದರ್ಶನ ಮಾಡಿದರು ಎಂದರು.

6ರಿಂದ 7 ಕಡೆಗಳಲ್ಲಿ ಕಪ್ಪು ಬಾವುಟ ಪ್ರದರ್ಶಿಸಲಾಗಿದೆ. ಪೊಲೀಸರು ಮುನ್ನೆಚ್ಚರಿಕಾ ಕ್ರಮವಾಗಿ ಪ್ರತಿಭಟನಾಕಾರರನ್ನು ವಶಕ್ಕೆ ಪಡೆಯಬಹುದಿತ್ತು. ಆದರೆ ಅವರು ಹಾಗೆ ಮಾಡಲಿಲ್ಲ. ಇಲ್ಲಿ ಪೊಲೀಸ್ ವೈಫಲ್ಯವೂ ಎದ್ದು ಕಾಣುತ್ತಿದೆ. ಹಾಗಾಗಿ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ಈ ಸಂಬಂಧ ತನಿಖೆಗೆ ಆದೇಶಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಕೊಡಗು ಜಿಲ್ಲಾ ಪ್ರವಾಸದಲ್ಲಿದ್ದ ಸಿದ್ದರಾಮಯ್ಯನವರು ದೇವಸ್ಥಾನಕ್ಕೆ ಮಾಂಸಾಹಾರ ಸೇವಿಸಿ ಭೇಟಿ ನೀಡಿಲ್ಲ. ಅಲ್ಲದೆ, ಅವರು ಮುಖ್ಯಮಂತ್ರಿ ಆಗಿದ್ದಾಗಲೂ ಐದು ವರ್ಷಗಳ ಕಾಲವೂ ದಸರಾ ಜಂಬೂ ಸವಾರಿ ಪುಷ್ಪಾರ್ಚನೆಗೆ ಬರುವ ಮುನ್ನ ಮಾಂಸಹಾರ ಸೇವನೆ ಮಾಡಿಲ್ಲ ಎಂದು ಪ್ರತಿಪಾದಿಸಿದರು.

ಮಾಜಿ ಮೇಯರ್ ಅನಂತು ಮಾತನಾಡಿ, ಪ್ರತಾಪ್ ಸಿಂಹ ಪದೇ ಪದೆ ಸಿದ್ದರಾಮಯ್ಯನವರ ವಿರುದ್ಧ ಮಾತನಾಡುತ್ತಿದ್ದಾರೆ. ಆ ಮೂಲಕ ಸಿದ್ದರಾಮಯ್ಯನವರಿಗೆ ಭಾರೀ ಪ್ರಚಾರ ಕೊಡಿಸುತ್ತಿದ್ದಾರೆ. ಇದಕ್ಕಾಗಿ ಪ್ರತಾಪ್ ಸಿಂಹ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ವ್ಯಂಗ್ಯವಾಡಿದರಲ್ಲದೆ, ನಾನು 30 ವರ್ಷಗಳ ಕಾಲ ಆರ್‌ಎಸ್‌ಎಸ್‌ನಲ್ಲಿದ್ದೆ. ಇಲ್ಲಿ ನಮ್ಮಂತಹವರಿಗೆ ಕೋಮು ಗಲಾಟೆಗೆ ಪ್ರಚೋದನೆ ನೀಡಲಾಗುತ್ತಿತ್ತು ಎಂದು ದೂರಿದರು.

ಮಾಜಿ ಮೇಯರ್ ನಾರಾಯಣ್ ಮಾತನಾಡಿ, ರಾಜ್ಯ ಮತ್ತು ದೇಶದಲ್ಲಿ ಅಭಿವೃದ್ಧಿ ಬಗ್ಗೆ ಚರ್ಚೆ ಆಗುತ್ತಿಲ್ಲ. ಬೆಲೆ ಏರಿಕೆ ನಡುವೆ ಜನಸಾಮಾನ್ಯರು ತತ್ತರಿಸಿರುವ ಬಗ್ಗೆ ಯಾರೂ ಮಾತನಾಡುತ್ತಿಲ್ಲ. ಸಂಸದರಾದ ಬಳಿಕ ಪ್ರತಾಪ್ ಸಿಂಹ ಮೈಸೂರು ಮತ್ತು ಕೊಡಗು ಜಿಲ್ಲೆಯಲ್ಲಿ ಕೋಮು ಭಾವನೆ ಕೆರಳಿಸಿ ಸೌಹಾರ್ದತೆಗೆ ಧಕ್ಕೆ ಉಂಟು ಮಾಡುವಲ್ಲಿ ನಿರತರಾಗಿದ್ದಾರೆ ಎಂದು ದೂರಿದರು.

ಮಾಂಸಾಹಾರ ಸೇವಿಸಿದವರಿಗೆ ದೇವಸ್ಥಾನಕ್ಕೆ ಪ್ರವೇಶವಿಲ್ಲ ಎಂದು ಸರ್ಕಾರ ಆದೇಶ ಹೊರಡಿಸಿ ಬೋರ್ಡ್ ಹಾಕಿಸಲಿ. ಜೊತೆಗೆ ಮಾಂಸಾಹಾರಿಗಳ ಓಟು ನಮಗೆ ಬೇಡವೆಂದು ಬಿಜೆಪಿಯವರು ಘೋಷಣೆ ಮಾಡಲಿ ಎಂದು ನಾರಾಯಣ್ ಛೇಡಿಸಿದರು. ನಗರ ಪಾಲಿಕೆ ಸದಸ್ಯ ಗೋಪಿ, ಮಾಜಿ ಸದಸ್ಯ ಸುನೀಲ್, ಮುಖಂಡರಾದ ರವಿ, ಶಂಕರ್ ಗೋಷ್ಠಿಯಲ್ಲಿದ್ದರು.

ಹೊಸ ಯೋಜನೆ ತರುವಲ್ಲಿ ಶಾಸಕ ಬಿ.ಹರ್ಷವರ್ಧನ್ ವಿಫಲ

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಆರೋಪ



ಮಲ್ಕುಂಡಿ, ಆ.23– ಕ್ಷೇತ್ರಕ್ಕೆ ಹೊಸ ಯೋಜನೆ ತರುವಲ್ಲಿ ಶಾಸಕ ಬಿ.ಹರ್ಷವರ್ಧನ್ ವಿಫಲರಾಗಿದ್ದಾರೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವ ನಾರಾಯಣ್ ಆರೋಪಿಸಿದರು. ತಾಲೂಕಿನ ಹರದನ ಹಳ್ಳಿ ಗ್ರಾಮದಲ್ಲಿ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿರುವ ಸ್ವಾತಂತ್ರ್ಯ ನಡಿಗೆ 7ನೇ ದಿನದ ಪಾದಯಾತ್ರೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ನಾನು ಸಂಸದನಾಗಿದ್ದ ವೇಳೆ ಕೌಲಂದೆ ಭಾಗದ 56 ಹಳ್ಳಿಗಳಿಗೆ ಶಾಶ್ವತ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾರ್ಯಗತಗೊಳಿಸಿದೆ. ಜೊತೆಗೆ ಹುಲ್ಲಹಳ್ಳಿ ಭಾಗದ 102 ಹಳ್ಳಿಗಳ ಬಹುಗ್ರಾಮ ಕುಡಿಯುವ ಯೋಜನೆ ಜಾರಿಗೆ ತರಲಾಗಿದೆ. ನಂಜನಗೂಡು–ಮೈಸೂರು ರಾಷ್ಟ್ರೀಯ ಹೆದ್ದಾರಿಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲಾಗಿದೆ. ಕೇಂದ್ರದಿಂದ ಅನುದಾನ ತಂದು ಹುಲ್ಲಹಳ್ಳಿ ಮುಖ್ಯರಸ್ತೆಯನ್ನು ಅಭಿವೃದ್ಧಿ ಪಡಿಸಿದ್ದೇನೆ. ಅಲ್ಲದೆ ನಗರದಲ್ಲಿ ಸುಸಜ್ಜಿತ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಇಎಸ್ಐ ಆಸ್ಪತ್ರೆ ಸ್ಥಾಪಿಸಲಾಯಿತು. ಸಿದ್ದರಾಮಯ್ಯನವರ ಅಧಿಕಾರಾವಧಿಯಲ್ಲಿ ಹುರಾ ಭಾಗದ 26 ಹಳ್ಳಿಗಳಿಗೆ ಕೆರೆ ತುಂಬಿಸುವ ಯೋಜನೆಗೆ ಅನುದಾನ ಬಿಡುಗಡೆಯಾಗಿದ್ದರೂ ಸಹ ಇನ್ನೂ ಯೋಜನೆ ಕಾರ್ಯಗತವಾಗಿಲ್ಲ. ಹೊಸ ಯೋಜನೆಗಳನ್ನು ತರುವುದರಲ್ಲಿ ಶಾಸಕರು ವಿಫಲರಾಗಿದ್ದಾರೆ. ಆದ್ದರಿಂದ ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಶ್ರಮಿಸಬೇಕು ಎಂದು ಮನವಿ ಮಾಡಿದರು.

ಸ್ವಾತಂತ್ರ್ಯ ಪೂರ್ವ, ಸ್ವಾತಂತ್ರ್ಯ ನಂತರ ಕಾಂಗ್ರೆಸ್ ಪಕ್ಷ ಅನೇಕ ಕೊಡುಗೆ ನೀಡಿದ್ದರೂ, ಪಕ್ಷಕ್ಕೆ ಹಿನ್ನಡೆಯಾಗುತ್ತಿದೆ. ಆದ್ದರಿಂದ ಕಾಂಗ್ರೆಸ್ ಪಕ್ಷದ ಕೊಡುಗೆಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸುವ ಕೆಲಸ ಮಾಡಬೇಕಿದೆ. ಕೇಂದ್ರ ಮತ್ತು ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸಿ ಜಾಗೃತಿಗೊಳಿಸುವ ಮೂಲಕ ಪಕ್ಷದ ಬಲವರ್ಧನೆಗೊಳಿಸಬೇಕು ಎಂದು ಕಾರ್ಯಕರ್ತರಿಗೆ ಕರೆ ನೀಡಿದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿ, ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಂಡಿರುವ ಪಾದಯಾತ್ರೆ ಸತತ 7 ದಿನ ಪೂರೈಸಿದ್ದು, ನಾಳೆ ನಂಜನಗೂಡಲ್ಲಿ ಸಮಾರೋಪ ಸಮಾರಂಭದ ಮೂಲಕ ಅಂತ್ಯವಾಗಲಿದೆ. ಈ ದಿನ ಹರದನಹಳ್ಳಿ, ನಲ್ಲಿತಾಳಪುರ, ತರಗನಹಳ್ಳಿ ಮೂಲಕ ಸಾಗಿ ಕುರಿಹುಂಡಿ ಗ್ರಾಪಂನಲ್ಲಿ ಪಾದಯಾತ್ರೆ ಅಂತ್ಯವಾಗಲಿದೆ ಎಂದರು.

> ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಸರ್ಕಾರಿ ಸ್ವಾಮ್ಯದ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಲಕ್ಷಾಂತರ ಜನರಿಗೆ ಉದ್ಯೋಗಾವಕಾಶ ಕಲ್ಪಿಸಲಾಯಿತು. ಪ್ರಸ್ತುತ ಬಿಜೆಪಿ ಸರ್ಕಾರ ಅವುಗಳನ್ನು ಖಾಸಗೀಕರಣಗೊಳಿಸುವ ಮೂಲಕ ಉದ್ಯೋಗಕ್ಕೆ ಕತ್ತರಿ ಹಾಕಿದೆ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಹಾಗೂ ರೈತರ ಆದಾಯ ದ್ವಿಗುಣಗೊಳಿಸುವುದಾಗಿ ಭರವಸೆ ನೀಡಿದ್ದರು. ಆದರೆ ಜಿಎಸ್‌ಟಿ ಜಾರಿಗೆ ತಂದು ಇರುವ ಉದ್ಯೋಗ ಕಡಿತಗೊಳಿಸಿದ್ದಾರೆ. ಬೆಲೆ ಏರಿಕೆ ಮಾಡಿದ್ದೇ ಮೋದಿ ಸರ್ಕಾರದ ಕೊಡುಗೆ.
> - ಆರ್.ಧ್ರುವನಾರಾಯಣ್.
> ಕೆಪಿಸಿಸಿ ಕಾರ್ಯಾಧ್ಯಕ್ಷ.

ಪಾದಯಾತ್ರೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠನಾಯಕ, ವಿಧಾನಸಭಾ ಉಸ್ತುವಾರಿ ಹಿರೇಹಳ್ಳಿ ಸೋಮೇಶ್, ಜಿಪಂ ಮಾಜಿ ಸದಸ್ಯರಾದ ಕೆ.ಮಾರುತಿ, ಲತಾಸಿದ್ದಶೆಟ್ಟಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ಜಿಪಂ ಮಾಜಿ ಅಧ್ಯಕ್ಷ ಮಡುವಿನಹಳ್ಳಿ ಶಂಕರಪ್ಪ, ಮುಖಂಡರಾದ ಹರದನಹಳ್ಳಿ ಸೋಮೇಶ್, ಕುರಿಹುಂಡಿ ರಾಜು, ಅಭಿನಂದನ್ ಪಾಟೀಲ್, ಎಂ.ಮಾದಪ್ಪ ಇದ್ದರು.



ಮೈಸೂರು ತಾಲೂಕಿನ ನಾಗವಾಲ ಗ್ರಾಪಂನಲ್ಲಿ ಆಯೋಜಿಸಿದ್ದ ಸ್ಯಾನಿಟರಿ ಪ್ಯಾಡ್ ಮುಕ್ತ ಗ್ರಾಮ ಪಂಚಾಯಿತಿ ಕಾರ್ಯಕ್ರಮವನ್ನು ಶಾಸಕ ಜಿ.ಟಿ.ದೇವೇಗೌಡ ಉದ್ಘಾಟಿಸಿದರು. ಗ್ರಾಪಂ ಅಧ್ಯಕ್ಷ ನರೇಂದ್ರ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಸಂಸದ ಪ್ರತಾಪ್ ಸಿಂಹ ಅವರ ಪತ್ನಿ ಅರ್ಪಿತ ಪ್ರತಾಪ್ ಸಿಂಹ, ನಗರಪಾಲಿಕೆ ಸದಸ್ಯೆ ವೇದಾವತಿ, ಜಿಪಂ ಸಿಇಓ ಪೂರ್ಣಿಮಾ ಬಿ.ಆರ್, ಜಿಪಂ ಉಪ ಕಾರ್ಯ ನಿರ್ವಾಹಕ ಅಧಿಕಾರಿ ಪ್ರೇಮ್ ಕುಮಾರ್, ತಾಪಂ ಇಓ ಗಿರೀಶ್ ಎಚ್.ಡಿ, ಎಸ್ಐಆರ್‌ಡಿ ಮುಖ್ಯಸ್ಥ ಮನೋಜ್ ಕುಮಾರ್, ಪಿಡಿಓ ಶೋಭಾರಾಣಿ, ಗ್ರಾಪಂ ಸದಸ್ಯರಾದ ಬಿ.ಕೆ.ಈಶ್ವರ್, ಕುಮಾರ್, ಬಸವನಾಯ್ಕ ಮಾಜಿ ಅಧ್ಯಕ್ಷ ಮಹೇಶ್, ಗೀತಾಮಣಿ, ಮಹದೇವು, ತಾಪಂ ಸದಸ್ಯರಾದ ಹುಯಿಲಾಳು ಮಹದೇವು, ಮಾಲೇಗೌಡ, ಆಶಾ, ಸಿದ್ದನಾಯ್ಕ ಕೆಂಪೇಗೌಡ, ಭಾಗ್ಯ ಮಮತಾ, ಗ್ರಾಮದ ಯಜಮಾನರಾದ ವಿಷಕಂಠನಾಯ್ಕ, ಕುಮಾರ, ಕೋಡಿ ಕುಮಾರ್, ಪಿ.ಮಹದೇವ, ಶಿವರಾಜು, ಸ್ವಾಮಿ, ಆಶಾ, ಅಂಗನವಾಡಿ ಕಾರ್ಯಕರ್ತರು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಶಿಕ್ಷಕ ವೃಂದ, ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು. ಹಸಿರು ದಳ ಸಂಸ್ಥೆ ಸ್ಟೋನ್ ಸೂಪ್ ಸಂಸ್ಥೆ, ರೋಟರಿ ಸಂಸ್ಥೆ, ಎಸ್‌ವಿಪಿ ಇಂಡಿಯಾ ಸಂಸ್ಥೆ, ಜೀರೋ ವೇಸ್ಟ್ ಸಂಸ್ಥೆ ಈ ಎಲ್ಲಾ ಎನ್‌ಜಿಓಗಳ ಸಹಯೋಗದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.



ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿ ಸರ್ಕಾರಿ ಕನ್ನಡ ಮತ್ತು ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ತರಗತಿ ಉತ್ತೀರ್ಣಗೊಂಡು ಶಾಲೆ ಬಿಟ್ಟಿದ್ದ ಮಕ್ಕಳ ಪೈಕಿ ಎಂ.ಎಸ್.ದೇವಿ, ಲಕ್ಷ್ಮಿ ಹಾಗೂ ವಿ.ಮಾದೇಶ ಎಂಬ ವಿದ್ಯಾರ್ಥಿಗಳನ್ನು ಮತ್ತೆ ಶಾಲೆಗೆ ಕರೆ ತರುವಲ್ಲಿ ಹಂಪಾಪುರ ಹೋಬಳಿ ಶಿಕ್ಷಣ ಸಂಯೋಜಕ ಕೃಷ್ಣಮೂರ್ತಿ ಮತ್ತು ಬಿಆರ್‌ಪಿ ಶ್ವೇತ ಯಶಸ್ವಿಯಾಗಿದ್ದಾರೆ. ಈ ವೇಳೆ ಶಾಲಾ ಮುಖ್ಯ ಶಿಕ್ಷಕ ಬಿ.ಎನ್.ನಾಗಾರ್ಜುನ, ಪ್ರೌಢಶಾಲಾ ಪ್ರಭಾರ ಮುಖ್ಯಶಿಕ್ಷಕಿ ಯಶೋಧ ಚಂದ್ರಶೇಖರ್, ಜಸಿಂತಾ ಲೋಬೋ, ಕವಿತ, ಶಶಿಕಲಾ ಮತ್ತಿತರರಿದ್ದರು.

ಅಂತಾರಾಷ್ಟ್ರೀಯ ಕರಾಟೆ ಸ್ಪರ್ಧೆ: ಹುಣಸೂರು ಪ್ರಥಮ



ಹುಣಸೂರು, ಆ.23– ಶಿವಮೊಗ್ಗದಲ್ಲಿ ನಡೆದ ಅಂತಾರಾಷ್ಟ್ರೀಯ ಕರಾಟೆ ಸ್ಪರ್ಧೆಯಲ್ಲಿ ಹುಣಸೂರಿನ ಕರಾಟೆ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಗಳಿಸಿ ಉತ್ತಮ ಸಾಧನೆಗೈದಿದ್ದಾರೆ.

ಶಿವಮೊಗ್ಗದಲ್ಲಿ ಆ.20, 21 ರಂದು ನಡೆದ ಅಂತಾರಾಷ್ಟ್ರೀಯ ಕರಾಟೆ ಸ್ಪರ್ಧೆಯಲ್ಲಿ ಶ್ರೀಲಂಕಾ, ಮಲೇಷ್ಯಾ, ಪಾಕಿಸ್ತಾನ, ಜಪಾನ್, ನ್ಯೂಜಿಲ್ಯಾಂಡ್, ಅಮೆರಿಕ ಸೇರಿದಂತೆ ಇತರೆ ದೇಶಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕರಾಟೆ ಸ್ಪರ್ಧೆಯಲ್ಲಿ ಹುಣಸೂರಿನ ವಿದ್ಯಾರ್ಥಿಗಳಾದ ತೇಜಸ್, ಸಿಂಚನ, ಚಂದನಾ, ವೈಭವ್, ಉಮ್ಮೆಕುಲ್ಸುಮ್, ಉಮ್ಮೆಹಾನಿ, ಹರ್ಷಿತಾ, ಕೃತನು, ಮೌನಿತ್ ಪ್ರಥಮ ಸ್ಥಾನ ಗಳಿಸಿ ಅತ್ಯುತ್ತಮ ಸಾಧನೆಗೈದಿದ್ದಾರೆ ಎಂದು ಕರಾಟೆ ತರಬೇತುದಾರ ಕೆ.ಮನು ತಿಳಿಸಿದ್ದಾರೆ.



ಹೆಚ್.ಡಿ.ಕೋಟೆ–ಸರಗೂರು ತಾಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷರಾಗಿ ಶಿವಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ವೆಂಕಿ, ಉಪಾಧ್ಯಕ್ಷರಾಗಿ ಪಾರಿ, ಕಾರ್ಯಾಧ್ಯಕ್ಷರಾಗಿ ನಿಂಗರಾಜ್, ಗೌರವಾಧ್ಯಕ್ಷರಾಗಿ ರಘುರಾಮ್, ಸಹ ಕಾರ್ಯದರ್ಶಿ ಪರಮೇಶ್, ಖಜಾಂಚಿ ರಮೇಶ್, ಸಂಚಾಲಕ ಕುಮಾರ್, ಲೆಕ್ಕ ಪರಿಶೋಧಕರಾಗಿ ರವಿ, ಸಲಹಾ ಸಮಿತಿ ಸದಸ್ಯರಾಗಿ ಮನೋಜ್, ಹೊನ್ನೇಗೌಡ, ನಿರ್ದೇಶಕರಾಗಿ ಕುಮಾರ್, ಗುರುಮೂರ್ತಿ, ಸುರೇಶ್, ಕೃಷ್ಣ ನಂಜುಂಡ, ಚಿಕ್ಕ ರೇವಣ್ಣ, ರವಿ ಆಯ್ಕೆಯಾದರು.

ಸುಂದರ, ಸ್ವಚ್ಛ ಪರಿಸರ ನಿರ್ಮಾಣಕ್ಕೆ ಸಹಕರಿಸಿ

ಕಸದ ಬುಟ್ಟಿ ವಿತರಿಸಿ ಪುರಸಭಾ ಸದಸ್ಯ ಬಾದಾಮಿ ಮಂಜು ಕರೆ



ತಿ.ನರಸೀಪುರ, ಆ.23– ಒಣ ಕಸ, ಹಸಿ ಕಸ ಬೇರ್ಪಡಿಸಿ ಪುರಸಭೆಯ ಕಸದ ವಾಹನಗಳಿಗೆ ನೀಡುವ ಮೂಲಕ ಸುಂದರ, ಸ್ವಚ್ಛ ಪರಿಸರ ನಿರ್ಮಿಸಲು ಸಹಕರಿಸುವಂತೆ ಪಟ್ಟಣ ಜನತೆಗೆ ಪುರಸಭಾ ಸದಸ್ಯ ಬಾದಾಮಿ ಮಂಜು ಕರೆ ನೀಡಿದರು.

ಸ್ವಚ್ಛ ಭಾರತ್ ಯೋಜನೆಯಡಿ ಪುರಸಭಾ ವ್ಯಾಪ್ತಿಯ ಪಟ್ಟಣದ 22ನೇ ವಾರ್ಡ್‌ನ ಮಸೀದಿ ಬೀದಿ, ಕಡ್ಲೆ ರಂಗಮ್ಮನ ಬೀದಿ, ಹಳೆ ಕುರುಬರ ಬೀದಿಗಳ ಜನತೆಗೆ ಉಚಿತವಾಗಿ ಕಸದ ಬುಟ್ಟಿ ವಿತರಿಸಿ ಮಾತನಾಡಿದ ಅವರು, ಸ್ವಚ್ಛ ಸಮಾಜ ನಿರ್ಮಾಣ ಹಾಗೂ ತಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಕಸದಿಂದ ಮುಕ್ತಿಗೊಳಿಸಲು ಕಸವನ್ನು ಎಲ್ಲೆಂದರಲ್ಲಿ ಎಸೆಯದೆ, ಒಣ ಕಸ ಹಾಗೂ ಹಸಿ ಕಸವನ್ನು ಬೇರ್ಪಡಿಸಿ ನಮ್ಮ ಕಸದ ವಾಹನಗಳಿಗೆ ನೀಡುವಂತೆ ಅವರು ಮನವಿ ಮಾಡಿದರು.

ಕಸವನ್ನು ಬೀದಿಗೆ ಎಸೆದರೆ ದಂಡ: ಪುರಸಭೆ ಮುಖ್ಯಾಧಿಕಾರಿ ಹೆಚ್.ಆರ್.ಬಸವರಾಜು ಮಾತನಾಡಿ, ಕಸವನ್ನು ಎಲ್ಲೆಂದರಲ್ಲಿ ಬಿಸಾಡುವುದರಿಂದ ರೋಗ ರುಜಿನ ಹರಡುವುದಲ್ಲದೆ, ಪರಿಸರ ಹಾಳಾಗುತ್ತದೆ. ಕಸವನ್ನು ಬೀದಿಗೆ ಎಸೆದರೆ ಅವರಿಗೆ ದಂಡ ವಿಧಿಸಲಾಗುವುದು. ಇದಕ್ಕೆ ಅವಕಾಶ ನೀಡದಂತೆ ವಾರ್ಡ್‌ನ ನಾಗರಿಕರು ಸಹಕರಿಸುವಂತೆ ತಿಳಿಸಿದರು.

ಈ ವೇಳೆ ಪರಿಸರ ಅಭಿಯಂತರೆ ಲೋಕೇಶ್ವರಿ, ಮುಖಂಡರಾದ ಗ್ಯಾಸ್ ಉಮೇಶ್, ಭರತ್, ರಾಜು ಹಾಗೂ ಪುರಸಭೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಕುರುಬ ಸಮುದಾಯದ ಮುಖಂಡರು ಜೆಡಿಎಸ್‌ಗೆ ಸೇರ್ಪಡೆ



ಕೆ.ಆರ್.ನಗರ, ಆ.23– ಜೆಡಿಎಸ್ ತತ್ವ ಸಿದ್ಧಾಂತ ಒಪ್ಪಿ ಪಕ್ಷಕ್ಕೆ ಸೇರ್ಪಡೆಗೊಳ್ಳುವವರನ್ನು ಗೌರವಯುತವಾಗಿ ನಡೆಸಿಕೊಳ್ಳುವ ಜೊತೆಗೆ ಉನ್ನತ ಸ್ಥಾನಮಾನ ನೀಡಲಾಗುವುದು ಎಂದು ಶಾಸಕ ಸಾರಾ.ಮಹೇಶ್ ತಿಳಿಸಿದರು.

ತಾಲೂಕಿನ ಮೂಡಲುಕೊಪ್ಪಲು ಗ್ರಾಮದಲ್ಲಿ ಕುರುಬ ಸಮುದಾಯದ ಮುಖಂಡರನ್ನು ಪಕ್ಷಕ್ಕೆ ಬರಮಾಡಿಕೊಂಡು ಮಾತನಾಡಿದ ಅವರು, ನನ್ನ ಅಧಿಕಾರಾವಧಿಯಲ್ಲಿ ಜಾತ್ಯತೀತವಾಗಿ, ಪಕ್ಷಾತೀತವಾಗಿ ಅಭಿವೃದ್ಧಿ ಕಾರ್ಯ ಮಾಡಿದ್ದೇನೆ. ಅದನ್ನು ಮನಗಂಡು ಕುರುಬ ಸಮುದಾಯದ ಮುಖಂಡರು ಜೆಡಿಎಸ್ ಸೇರುತ್ತಿದ್ದಾರೆ ಎಂದರು.

ಮುಖಂಡ ರುದ್ರೇಶ್ ಮಾತನಾಡಿ, ಚುನಾವಣೆಗೂ ಮೊದಲೇ ಪಕ್ಷ ಸೇರ್ಪಡೆ ಪರ್ವ ಪ್ರಾರಂಭವಾಗಿದೆ. ತಾಲೂಕಿನಲ್ಲಿ ಸರ್ಕಾರದ ಅನುದಾನದ ಜೊತೆಗೆ ಸ್ವಂತ ಹಣದಿಂದ ಜನ ಸಾಮಾನ್ಯರ ಕಷ್ಟ ಸುಖಗಳಿಗೆ ಸ್ಪಂದಿಸುವ ಅಭಿವೃದ್ಧಿಯ ಹರಿಕಾರ ಸಾ.ರಾ.ಮಹೇಶ್ ಅವರ ಆಡಳಿತ ಮೆಚ್ಚಿ ಅವರ ನಾಯಕತ್ವ ಬಲಪಡಿಸುವ ಉದ್ದೇಶದಿಂದ 5 ಸಾವಿರಕ್ಕೂ ಹೆಚ್ಚು ಕುರುಬ ಸಮುದಾಯದ ಮುಖಂಡರು ಮುಂದಿನ ದಿನಗಳಲ್ಲಿ ಜೆಡಿಎಸ್ ಸೇರ್ಪಡೆಗೊಳ್ಳಲಿದ್ದಾರೆ ಎಂದರು.

ಇದೇ ವೇಳೆ ಕುರುಬ ಸಮುದಾಯದ ಮುಖಂಡರಾದ ಶಿವಕುಮಾರ್, ಹೇಮಂತ್, ಸೋಮಶೇಖರ್, ಅಭಿ, ಸತೀಶ್, ಕಾರ್ತಿಕ್, ನಾಗರಾಜ್, ರವೀಶ್, ರಾಜೇಗೌಡ, ಕೃಷ್ಣೇಗೌಡ ಸೇರಿದಂತೆ 15 ಮಂದಿ ಜೆಡಿಎಸ್ ಸೇರ್ಪಡೆಗೊಂಡರು.

ಕಾರ್ಯಕ್ರಮದಲ್ಲಿ ತಾಲೂಕು ಜೆಡಿಎಸ್ ವಕ್ತಾರ ಕೆ.ಎಲ್.ರಮೇಶ್, ಮುಖಂಡರಾದ ಎಂ.ಟಿ.ಕುಮಾರ್, ನರೇಂದ್ರ, ಕೃಷ್ಣೇಗೌಡ, ಕೃಷ್ಣಶೆಟ್ಟಿ, ಮಹದೇವ, ಶಿವಣ್ಣ, ರಂಗಣ್ಣ, ಮೋಹನ್ ಕುಮಾರಿ, ನಗರಾಧ್ಯಕ್ಷ ಹರ್ಷಿತ್ ಕುಮಾರ್ ಸೇರಿದಂತೆ ಇನ್ನಿತರರಿದ್ದರು.

ವಿದ್ಯಾರ್ಥಿಗಳಿಗೆ ಜ್ಞಾನದ ಹಸಿವು ಅಗತ್ಯ : ಶಾಸಕ ಮಹದೇವ್



ಬೆಟ್ಟದಪುರ, ಆ.23– ವಿದ್ಯಾರ್ಥಿಗಳಿಗೆ ಜ್ಞಾನದ ಹಸಿವು ಇರಬೇಕು. ಆಗ ಮಾತ್ರ ಉನ್ನತ ಸ್ಥಾನಕ್ಕೇರಲು ಸಾಧ್ಯ ಎಂದು ಶಾಸಕ ಕೆ.ಮಹದೇವ್ ತಿಳಿಸಿದರು.

ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ಕ್ರೀಡೆ ಎನ್‌ಎಸ್‌ಎಸ್ ರೆಡ್‌ಕ್ರಾಸ್ ಸ್ಕೌಟ್ಸ್ ಅಂಡ್ ಗೈಡ್ಸ್ ಚಟುವಟಿಕೆಗಳ ಸಮಾರೋಪವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವಕರು ದೇಶದ ಬೆನ್ನೆಲುಬು ಅವರಿಗೆ ದೇಶವನ್ನು ಬದಲಾವಣೆ ಮಾಡುವ ಶಕ್ತಿ ಇದೆ ವಿದ್ಯಾರ್ಥಿಗಳು ಕೀಳರಿಮೆ ಬಿಟ್ಟು ಗುರುಗಳ ಮಾರ್ಗದರ್ಶನದಲ್ಲಿ ಪ್ರಗತಿ ಹೊಂದಬೇಕೆಂದು ತಿಳಿಸಿದರು.

ಕಾಲೇಜು ಶಿಕ್ಷಣ ಇಲಾಖೆ ನಿರ್ದೇಶಕ ಎಸ್.ಬಿ.ಅಪ್ಪಾಜಿಗೌಡ ಮಾತನಾಡಿ, ಸರ್ಕಾರ ಗ್ರಾಮೀಣ ವಿದ್ಯಾರ್ಥಿಗಳಿಗೆ ಹಲವು ಸೌಲಭ್ಯಗಳನ್ನು ಒದಗಿಸುತ್ತಿದೆ. ಮಹಿಳೆಯರಿಗೆ ಹೆಚ್ಚು ಆದ್ಯತೆ ನೀಡುತ್ತಿರುವುದರಿಂದ ಅವರು ಮುಂದಾಗಿ ಕುಟುಂಬದ ನಿರ್ವಹಣೆ ಜೊತೆಗೆ ದೇಶದ ಆರ್ಥಿಕ ವ್ಯವಸ್ಥೆ ಸಹ ಸರಿದೂಗಿಸಿಕೊಳ್ಳಲು ಅನುಕೂಲಕರವಾಗಲಿದೆ ಎಂದರು.

ನಿವೃತ್ತ ಜಂಟಿ ನಿರ್ದೇಶಕ ಟಿ.ಸಿ ವಸಂತರಾಜೇ ಅರಸ್ ಮಾತನಾಡಿದರು.

ಅಂತಾರಾಷ್ಟ್ರೀಯ ಜನಪದ ಗಾಯಕ ಅಮ್ಮ ರಾಮಚಂದ್ರ ಜಿ, ಪ್ರಾಂಶುಪಾಲೆ ಚೈತ್ರ, ತಾಲೂಕು ಜೆಡಿಎಸ್ ಅಧ್ಯಕ್ಷ ಅಣ್ಣಯ್ಯ ಶೆಟ್ಟಿ, ತಾಪಂ ಮಾಜಿ ಸದಸ್ಯ ಮಲ್ಲಿಕಾರ್ಜುನ್, ಜೆಡಿಎಸ್ ಮುಖಂಡ ಗಗನ್, ಗ್ರಾಪಂ ಸದಸ್ಯ ರಾಜಶೇಖರ್, ದೊರೆಸ್ವಾಮಿ, ತಾಲೂಕು ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ಪ್ರೀತಿ ಅರಸ್, ಪ್ರಾಧ್ಯಾಪಕರಾದ ಉದಯಕುಮಾರ್, ರೂಪ ಕುಮಾರ್, ರೂಪ, ಶಿಲ್ಪಶ್ರೀ ಮತ್ತಿತರರಿದ್ದರು.

ರಾಹುಲ್ ದ್ರಾವಿಡ್‌ಗೆ ಕೊರೊನಾ



ನವದೆಹಲಿ: ಟೀಂ ಇಂಡಿಯಾ ಮುಖ್ಯ ಕೋಚ್ ರಾಹುಲ್ ದ್ರಾವಿಡ್‌ಗೆ ಕೊರೊನಾ ದೃಢವಾಗಿದ್ದು, ಈ ಹಿನ್ನೆಲೆಯಲ್ಲಿ ಏಷ್ಯಾಕಪ್ ಟೂರ್ನಿಯಿಂದ ಹೊರಗುಳಿಯಲಿದ್ದಾರೆ ಎಂದು ಬಿಸಿಸಿಐ ತಿಳಿಸಿದೆ. ಆ.28ರಂದು ನಡೆಯುವ ಭಾರತ, ಪಾಕಿಸ್ತಾನ ಹೈವೋಲ್ಟೇಜ್ ಕದನಕ್ಕೂ ಮೊದಲು ಭಾರತಕ್ಕೆ ಮೊದಲ ಆಘಾತವಾಗಿದೆ. ಏಷ್ಯಾ ಕಪ್‌ಗಾಗಿ ಯುಎಇಗೆ ತೆರಳುವ ಟೀಂ ಇಂಡಿಯಾ ಸದಸ್ಯರಿಗೆ ಹಾಗೂ ಸಿಬ್ಬಂದಿಗೆ ಕೊರೊನಾ ಪರೀಕ್ಷೆ ಮಾಡಲಾಗಿತ್ತು. ಈ ವೇಳೆ ದ್ರಾವಿಡ್‌ಗೆ ಕೊರೊನಾ ದೃಢಪಟ್ಟಿದೆ.

ಸಮಾನತೆ ಕ್ರಾಂತಿ ಹುಟ್ಟು ಹಾಕುವಲ್ಲಿ ನಾರಾಯಣಗುರು ಪಾತ್ರ ಪ್ರಮುಖ

ಶಾಸಕ ಎಂ.ಅಶ್ವಿನ್ ಕುಮಾರ್



ತಿ.ನರಸೀಪುರ, ಆ.23– ಅಸಮಾನತೆ ತಾಂಡವವಾಡುತ್ತಿದ್ದ ಕಾಲದಲ್ಲಿ ಸಾಮಾಜಿಕ ಹಾಗೂ ಸಮಾನತೆಯ ಕ್ರಾಂತಿ ಹುಟ್ಟು ಹಾಕುವಲ್ಲಿ ಬ್ರಹ್ಮಶ್ರೀ ನಾರಾಯಣಗುರು ಪಾತ್ರ ಪ್ರಮುಖವಾದದು ಎಂದು ಶಾಸಕ ಎಂ.ಅಶ್ವಿನ್ ಕುಮಾರ್ ತಿಳಿಸಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ತಾಲೂಕು ಆಡಳಿತ, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಆರ್ಯ ಈಡಿಗರ ಸಂಘದ ಸಂಯುಕ್ತಾಶ್ರಯದಲ್ಲಿ ನಡೆದ ಬ್ರಹ್ಮಶ್ರೀ ನಾರಾಯಣ ಗುರುಗಳ 166ನೇ ಜಯಂತಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶೋಷಿತ ಸಮುದಾಯಗಳು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಿದರೆ ಮಾತ್ರ ಮುಂದೆ ಬರಲು ಸಾಧ್ಯ ಎಂದು ಪ್ರತಿಪಾದಿಸಿ ಮಾರ್ಗದರ್ಶನ ನೀಡಿದ ದಾರ್ಶನಿಕರನ್ನು ಕೇವಲ ಒಂದೇ ಜಾತಿಗೆ ಸೀಮಿತ ಮಾಡುವುದು ಸರಿಯಲ್ಲ. ವಿದ್ಯೆ, ಸ್ವತಂತ್ರ, ಸಂಘಟನೆ, ಹೋರಾಟದಿಂದ ಮಾತ್ರ ಸಮಸ್ಯೆ ಪರಿಹಾರ ಸಾಧ್ಯ ಎಂದು ತಿಳಿದ ನಾರಾಯಣ ಗುರುಗಳು ಸಮಾಜವನ್ನು ಶೈಕ್ಷಣಿಕವಾಗಿ ಮೇಲೆತ್ತುವ ಚಿಂತನೆ ಕಂಡುಕೊಂಡರು. ಶಿಕ್ಷಣ ಹಾಗೂ ಜ್ಞಾನದ ಕೊರತೆಯಿಂದಾಗಿ ಜನರಿಗೆ ಸಮಸ್ಯೆಗಳು ಎದುರಾಗುತ್ತಿರುವುದನ್ನು ಮನಗಂಡ ಅವರು ಶಿಕ್ಷಣದಿಂದ ಎಲ್ಲಾ ಸಮಸ್ಯೆಗಳ ನಿರ್ಮೂಲನೆ ಸಾಧ್ಯ ಎಂದು ಅರಿತು ಶಿಕ್ಷಣ ಸಂಸ್ಥೆಗಳನ್ನು ಆರಂಭಿಸುವ ಕಾರ್ಯಕ್ಕೆ ಕೈ ಹಾಕಿದರು. ಒಟ್ಟಿನಲ್ಲಿ ಅವರ ತತ್ವ ಸಿದ್ಧಾಂತಗಳ ದಾರಿಯಲ್ಲಿ ನಡೆದಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದರು.

ಮುಖ್ಯ ಭಾಷಣಕಾರ ಕರೋಹಟ್ಟಿ ಪ್ರಭುಸ್ವಾಮಿ ಮಾತನಾಡಿ, ಅಂದು ಕೇರಳದಲ್ಲಿ ಬಹುಸಂಖ್ಯಾತರು ದೇವಸ್ಥಾನದತ್ತ ಸುಳಿಯುವಂತಿರಲಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಕ್ರಾಂತಿಕಾರಕ ನಿಲುವು ತಾಳಿದ ನಾರಾಯಣ ಗುರುಗಳು ಅರಿವೀಪುರಂ ಎಂಬಲ್ಲಿ ಅಸ್ಪೃಶ್ಯರಿಗಾಗಿಯೇ ಶಿವನ ದೇವಸ್ಥಾನ ನಿರ್ಮಿಸುತ್ತಾರೆ. ಇದಕ್ಕೆ ಬ್ರಾಹ್ಮಣ ಸಮುದಾಯ ವಿರೋಧ ವ್ಯಕ್ತವಾದರೂ, ಸುಮಾರು 70ಕ್ಕೂ ಹೆಚ್ಚು ದೇವಾಲಯಗಳನ್ನು ಸ್ಥಾಪಿಸುವ ಅವರು, ದೇವಸ್ಥಾನದಲ್ಲಿ ಮೂರ್ತಿಗೆ ಬದಲು ಗರ್ಭಗುಡಿಯಲ್ಲಿ ಜ್ಯೋತಿ ಬೆಳಗಿಸುತ್ತಾರೆ. ಅವರು ನಿರ್ಮಿಸಿದ ಇನ್ನು ಕೆಲ ದೇವಾಲಯಗಳ ಗರ್ಭಗುಡಿಯಲ್ಲಿ ಮೂರ್ತಿಗೆ ಬದಲು ಸತ್ಯ, ಧರ್ಮ, ದಯೆ ಪ್ರೇಮ ಎಂಬ ಬರಹವುಳ್ಳ ಫಲಕಗಳನ್ನಿಡುತ್ತಾರೆ. ಮತ್ತೊಂದು ವಿಶೇಷವೆಂದರೆ ಗರ್ಭಗುಡಿಯಲ್ಲಿ ಕನ್ನಡಿ ಪ್ರತಿಷ್ಠಾಪಿಸಿ 'ನಿಮ್ಮಲ್ಲಿಯೇ ದೇವರಿದ್ದಾನೆ' ಎಂಬ ಸಂದೇಶ ಸಾರುತ್ತಾರೆ ಎಂದರು.

> ಈಡಿಗ ಸಮಾಜದ ಸರ್ವರು ಶಿಕ್ಷಣ ಪಡೆಯಬೇಕು. ಆ ಮೂಲಕ ಸಮಾಜಮುಖಿಯಾಗಿ ಕೆಲಸ ಮಾಡಬೇಕು ಎನ್ನುವುದು ನಾರಾಯಣಗುರುಗಳ ಸಂದೇಶವಾಗಿತ್ತು. ಎಲ್ಲಾ ದಾನಕ್ಕಿಂತ ವಿದ್ಯಾದಾನ ಶ್ರೇಷ್ಠ. ಬೇರೆ ಏನೇ ದಾನ ಮಾಡಿದರೂ ಅದು ಇರದೆ ಹೋಗಬಹುದು. ಆದರೆ ವಿದ್ಯೆ ನಾವು ಇರುವ ತನಕ ಅಳಿಸಲಾಗದ ಸಂಪತ್ತು. ಹಾಗಾಗಿ ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡಿಸಲು ಮುಂದಾಗಬೇಕು.
> - ಮಂಜು ಕುಮಾರ್,
> ಆರ್ಯ ಈಡಿಗ ಸಮಾಜದ ಅಧ್ಯಕ್ಷ.

ತಹಶೀಲ್ದಾರ್ ಸಿ.ಜಿ.ಗೀತಾ ಮಾತನಾಡಿದರು. ತಾಪಂ ಇಓ ಸಿ.ಕೃಷ್ಣ, ಜಿಪಂ ಮಾಜಿ ಸದಸ್ಯ ಜೈಪಾಲ್ ಭರಣಿ, ಆರ್ಯ ಈಡಿಗರ ಸಂಘದ ಕಾರ್ಯದರ್ಶಿ ಕಿರಗಸೂರು ಶಂಕರ್, ಸಂಘದ ಹಿರಿಯ ಮಾರ್ಗದರ್ಶಕ ಬಾರ್ ಅನಂತಮೂರ್ತಿ, ಮೂಗೂರು ಸಿದ್ದರಾಜು, ಪ್ರಶಾಂತ್ ಕುಮಾರ್, ರಮೇಶ್, ರೇಣುಕಾ, ಸಿ.ಪುಟ್ಟಮಲ್ಲಯ್ಯ, ಕಂದಾಯಾಧಿಕಾರಿ ಚೆಲುವರಾಜ್, ನಿತಿನ್ ಮತ್ತಿತರರಿದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಸೀತಾರಾಮಂ (ತೆ): ಬೆ.10.30ಕ್ಕೆ, ಕಾರ್ತಿಕೇಯ 2(ತೆ): ಮ.1.35ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ಗಾಳಿಪಟ–2(ಕ): ರಾ.10ಕ್ಕೆ.
ಸ್ಕ್ರೀನ್ 2	ತಿರುಚಿಟ್ರಂಬಲಂ (ತ): ಬೆ.10.40ಕ್ಕೆ, ಮ.1.30ಕ್ಕೆ, ಸಂ.4.10ಕ್ಕೆ, ವಿಕ್ರಾಂತ್ ರೋಣ (3ಡಿ) (ಕ): ರಾ.7ಕ್ಕೆ, ಎನ್ನ ತಾನ್ ಕೇಸ್ ಕೊಡು (ಮ): ರಾ.9.55ಕ್ಕೆ.
ಸ್ಕ್ರೀನ್ 3	ಲವ್ 360 (ಕ): ಬೆ.10.35ಕ್ಕೆ, ಸಂ.4.15ಕ್ಕೆ, ಗಾಳಿಪಟ–2 (ಕ): ಮ.1.15ಕ್ಕೆ, ಲಾಲ್ ಸಿಂಗ್ ಚಡ್ಡಾ (ಹಿಂ): ಸಂ.6.55ಕ್ಕೆ, ಥಲ್ಲುಮಾಲ (ಮ): ರಾ.10.05ಕ್ಕೆ.
ಸ್ಕ್ರೀನ್ 4	ಗಾಳಿಪಟ–2 (ಕ): ಬೆ.10.10ಕ್ಕೆ, ಮ.1.05ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.9.55ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಗಾಳಿಪಟ–2 (ಕ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ತಿರುಚಿಟ್ರಂಬಲಂ (ತ): ಬೆ.9.50ಕ್ಕೆ, ಕಾರ್ತಿಕೇಯ 2 (ತೆ): ಮ.12.50ಕ್ಕೆ, ರಾ.7.10ಕ್ಕೆ, ಸೀತಾರಾಮಂ (ತೆ): ಮ.3.50ಕ್ಕೆ, ರಾ.7.40ಕ್ಕೆ.
ಸ್ಕ್ರೀನ್ 3	ಗಾಳಿಪಟ 2 (ಕ): ಬೆ.11ಕ್ಕೆ, ಲವ್ 360 (ಕ): ಮ.2ಕ್ಕೆ, ರಾ.7.40ಕ್ಕೆ, ತಿರುಚಿಟ್ರಂಬಲಂ (ತ): ಸಂ.4.50ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ನೋಪ್ (ಇಂ): ಬೆ.10.05ಕ್ಕೆ, ಮ.3.55ಕ್ಕೆ, ರಾ.10ಕ್ಕೆ, ವಿಕ್ರಾಂತ್ ರೋಣ (3ಡಿ) (ಕ): ಮ.12.50ಕ್ಕೆ, ಲಾಲ್‌ಸಿಂಗ್ ಚಡ್ಡಾ (ಹಿಂ): ಸಂ.6.40ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಲವ್ 360 (ಕ): ಬೆ.10.45ಕ್ಕೆ, ತಿರುಚಿಟ್ರಂಬಲಂ (ತ): ಮ.1.30ಕ್ಕೆ, ಸಂ.6.40ಕ್ಕೆ, ಥಲ್ಲುಮಾಲ (ಮ): ರಾ.9.15ಕ್ಕೆ.
ಸ್ಕ್ರೀನ್ 2	ಲವ್ 360 (ಕ): ಮ.1.30ಕ್ಕೆ, ತಿರುಚಿಟ್ರಂಬಲಂ (ತ): ರಾ.9.15ಕ್ಕೆ.
ಸ್ಕ್ರೀನ್ 3	ಗಾಳಿಪಟ–2 (ಕ): ಮ.1ಕ್ಕೆ, ಸಂ.4ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಗಾಳಿಪಟ–2 (ಕ): ಬೆ.10.30ಕ್ಕೆ, ಸಂ.6.15ಕ್ಕೆ, ರಾ.9.15ಕ್ಕೆ, ಸೀತಾರಾಮಂ (ತೆ): ಮ.1.30ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಗಾಳಿಪಟ–2 (ಕ): ಬೆ.9.10ಕ್ಕೆ, ಮ.3.40ಕ್ಕೆ, ಸಂ.6.50ಕ್ಕೆ, ರಾ.10ಕ್ಕೆ, ರವಿ ಬೋಪಣ್ಣ (ಕ): ಬೆ.9.50ಕ್ಕೆ, ಮ.12.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ವಿಕ್ರಾಂತ್ ರೋಣ (3ಡಿ)(ಕ): ಮ.3.50ಕ್ಕೆ, ರಾ.10.10ಕ್ಕೆ, ವಿರುಮನ್ (ತ): ಬೆ.9.30ಕ್ಕೆ, ಮ.12.40ಕ್ಕೆ, ರಾ.7ಕ್ಕೆ, ಥಲ್ಲುಮಾಲ (ಮ): ಸಂ.4.10ಕ್ಕೆ, ಮಾರ್ಚೆಲಾ ನಿಯೋಜಕ ವರ್ಗಂ (ತೆ): ರಾ.9.40ಕ್ಕೆ, ಕಾರ್ತಿಕೇಯ–2(ತೆ): ಮ.12.20ಕ್ಕೆ, ರಕ್ಷಾಬಂಧನ್ (ಹಿಂ): ಬೆ.10.25ಕ್ಕೆ, ಮ.1.40ಕ್ಕೆ, ಸಂ.4.20ಕ್ಕೆ, ರಾ.7.20ಕ್ಕೆ, ರಾ.9.50ಕ್ಕೆ, ಲಾಲ್‌ಸಿಂಗ್ ಚಡ್ಡಾ (ಹಿಂ): ಬೆ.8.50ಕ್ಕೆ, ಮ.12.15ಕ್ಕೆ, ಮ.12.55ಕ್ಕೆ, ಮ.3.40ಕ್ಕೆ, ಸಂ.6.50ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ವಿರುಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ವಿಕ್ರಾಂತ್ ರೋಣ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಮಿಸ್ ಮಲ್ಲಿಗೆ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ರಕ್ಷಾಬಂಧನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಗಾಳಿಪಟ –2 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಗಾಳಿಪಟ–2 (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ತಿರುಚಿಟ್ರಂಬಲಂ (ತ)	4 ಪ್ರದರ್ಶನಗಳು
ಸಂಗಂ	
ಲವ್ 360 (ಕ)	4 ಪ್ರದರ್ಶನಗಳು
ಲಿಡೋ	
ತೀಸ್ ಮಾರ್ ಖಾನ್ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ವಿರುಮನ್ (ತ)	4 ಪ್ರದರ್ಶನಗಳು
ಸ್ಟರ್ಲಿಂಗ್	
ಓ ಮೈ ಲವ್ (ಕ)	4 ಪ್ರದರ್ಶನಗಳು
ಸ್ಕೈಲೈನ್	
ಅಂಜನ (ಕ)	4 ಪ್ರದರ್ಶನಗಳು
ಪ್ರಭಾ	
ಕಾರ್ತಿಕೇಯ–2 (ತೆ)	4 ಪ್ರದರ್ಶನಗಳು

ಕಾರ್ಮಿಕರ ಕಲ್ಯಾಣ ನಿಧಿ ಸದುಪಯೋಗ ಅಗತ್ಯ



ಪಿರಿಯಾಪಟ್ಟಣ, ಆ.23– ಹೆಚ್ಚು ಕಾರ್ಮಿಕರಿರುವ ಈ ದೇಶದಲ್ಲಿ ಕಡಿಮೆ ಕಾರ್ಮಿಕರ ನೋಂದಣಿಯಿಂದ ಕೇಂದ್ರದ ಕಲ್ಯಾಣ ಮಂಡಳಿ ನಿಧಿಯು ಕೇವಲ ಶೇ.25 ರಷ್ಟು ಮಾತ್ರ ಸದುಪಯೋಗವಾಗುತ್ತಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್ ವಿಷಾದ ವ್ಯಕ್ತಪಡಿಸಿದರು.

ಪಟ್ಟಣದ ಕಾಳಿಕಾಂಬ ಕಟ್ಟಡ ಕಾರ್ಮಿಕರ ಸಂಘದಲ್ಲಿ ನೋಂದಾಯಿತ ಕಾರ್ಮಿಕರಿಗೆ ಗುರುತಿನ ಚೀಟಿ ಮತ್ತು ಇ–ಶ್ರಮ್ ಕಾರ್ಡ್ ವಿತರಿಸಿ ಮಾತನಾಡಿದ ಅವರು, ಕೇಂದ್ರದ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕ ಕಲ್ಯಾಣ ಯೋಜನೆಗಾಗಿಯೇ 14 ಲಕ್ಷ ಕೋಟಿ ರೂ. ಮೀಸಲಿದ್ದು, ಇದರಲ್ಲಿ ಕೇವಲ ಶೇ.25 ಮಾತ್ರ ಕಾರ್ಮಿಕರಿಗೆ ವಿನಿಯೋಗವಾಗುತ್ತಿದೆ. ಉಳಿದ ಶೇ.75 ರಷ್ಟು ಹಣ ಮತ್ತೆ ಸರ್ಕಾರದ ಖಜಾನೆಗೆ ವಾಪಸ್ಸಾಗುತ್ತಿದೆ ಸರ್ಕಾರದ ಹೊಣೆಗಾರಿಕೆ ಜೊತೆಗೆ ಜನಸಾಮಾನ್ಯರಿಗೆ ಇದರ ಬಗ್ಗೆ ಅರಿವಿಲ್ಲದಿರುವುದೇ ಇದಕ್ಕೆ ಕಾರಣ ಎಂದರು.

ಕಾರ್ಮಿಕರ ಕಲ್ಯಾಣ ನಿಧಿ ಸದುಪಯೋಗಕ್ಕೆ ಸಂವಿಧಾನಾತ್ಮಕವಾಗಿ ಯಾವುದೇ ಹಿಡಿತವಿಲ್ಲದಿರುವುದರ ಜೊತೆಗೆ ಕಾರ್ಮಿಕರಿಗೆ ಕೆಲವೊಂದು ಬದ್ಧತೆ ಹಾಗೂ ಅವಕಾಶಗಳು ಸಿಗಬೇಕಾದಲ್ಲಿ ಸಂವಿಧಾನದಲ್ಲಿ ಕೆಲವೊಂದು ಬದಲಾವಣೆ ಅತ್ಯವಶ್ಯಕ ಎಂದು ವಿಶ್ಲೇಷಿಸಿದರು.

ಕೋವಿಡ್ ವೇಳೆ ಸಾವಿರಾರು ಕಾರ್ಮಿಕರು ಮೃತಪಟ್ಟಿದ್ದು, ಕಾರ್ಮಿಕ ಇಲಾಖೆ ಬೇಜವಾಬ್ದಾರಿಯಿಂದ ಮೃತಪಟ್ಟ ಕಾರ್ಮಿಕರಿಗೆ ಯಾವುದೇ ಪರಿಹಾರ ಸಿಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಮಿಕ ಇಲಾಖೆಯಿಂದ ತಾಲೂಕಿನಾದ್ಯಂತ ಪ್ರತಿ ತಿಂಗಳು ಸರ್ಕಾರದಿಂದ ಕಾರ್ಮಿಕರಿಗೆ ಸಿಗುವ ಸವಲತ್ತುಗಳ ಬಗ್ಗೆ ಅರಿವು ಮೂಡಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಕಾಳಿಕಾಂಬ ಕಟ್ಟಡ ಕಾರ್ಮಿಕ ಸಂಘಟನೆ ಅಧ್ಯಕ್ಷ ನಂದಕುಮಾರ್, ಮೈಸೂರು ಜಿಲ್ಲಾ ವಿಶ್ವಕರ್ಮ ಸಂಘಟನೆ ಮುಖಂಡ ಕೆಂಡಗಣ್ಣಪ್ಪ ಕಾರ್ಮಿಕರ ಸಂಘಟನೆ ಮತ್ತು ಸರ್ಕಾರದ ಮಟ್ಟದಲ್ಲಿ ಹೋರಾಟ ಹಾಗೂ ಕಾರ್ಮಿಕರಿಗೆ ಸಿಗುವ ನೆರವಿಗೆ ಬಗ್ಗೆ ಮಾಹಿತಿ ನೀಡಿದರು.


ಈ ವೇಳೆ ದರ್ಶನ್ ಅಭಿಮಾನಿ ಸಂಘದ ಅಧ್ಯಕ್ಷ ಮಂಜು, ಕಾಳಿಕಾಂಬ ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾ ಕಾರ್ಯದರ್ಶಿ ತಿರುನೀಲಕಂಠ, ಪುರಸಭಾ ಸದಸ್ಯ ರವಿ, ಟೌನ್ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕುಮಾರ್‌ಗೌಡ, ಖಜಾಂಚಿ ಯೋಗೀಶ್, ಹಿರಣ್ಣಯ್ಯ ಸೇರಿದಂತೆ ಕಾರ್ಮಿಕರಿದ್ದರು.

ಶಿವಕುಮಾರ್ ನಿಧನ



ಹುಣಸೂರು, ಆ.23– ನಗರದ ನಿವಾಸಿ ಶಿವಕುಮಾರ್(60) ಮಂಗಳವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ನಗರದ ತಾಲೂಕು ಕಚೇರಿ ಪಕ್ಕದಲ್ಲಿರುವ ಸ್ಮಶಾನದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀ ಲೋಕೇಶ್ (ಪೈಲ್ವಾನ್)ರವರು

ಇವರು ದಿ.16.08.2022 ಮಂಗಳವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿ:25.08.2022 ಗುರುವಾರದಂದು ಬೆಳಿಗ್ಗೆ 10.30ರಿಂದ ಪಾಲಹಳ್ಳಿ ಗ್ರಾಮದ ತ್ರಿಪುರ ಸುಂದರಿ ಸಮುದಾಯ ಭವನದಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ

ಭೋಜನ: ಮಧ್ಯಾಹ್ನ 12.00 ಗಂಟೆಗೆ

ದುಃಖತಪ್ತರು: ಮೃತರ ತಾಯಿ ಶ್ರೀಮತಿ ಗೌರಮ್ಮ, ಶ್ರೀ ಲೋಹಿತ್ ನಾಗರಾಜ್, ಮೃತರ ಪತ್ನಿ ಶ್ರೀಮತಿ ಗೀತಾ ಲೋಕೇಶ್, ಮಕ್ಕಳು ಸಹೋದರರು, ಅಕ್ಕ - ತಂಗಿಯರು ಹಾಗೂ ಬಂಧುಮಿತ್ರರು.

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಅದರ ಮಾಲೀಕರಾದ ಬನಶಂಕರಿ ಬೆಂಗಳೂರು ದಕ್ಷಿಣ–560050, ಎಸ್‌ಬಿಎಮ್ ಕಾಲೋನಿ, ಶ್ರೀನಿವಾಸನಗರ, 14ನೇ ಮೇನ್, ಮನೆ ನಂ. 481/1 ರಲ್ಲಿ ವಾಸವಾಗಿರುವ ಲೇಟ್ ಸಿ. ನಾಗರಾಜ್ ಮತ್ತು ಲೇಟ್ ಸರಸ್ವತಿ.ಎಸ್ ರವರ ಒಬ್ಬರೇ ವಾರಸುದಾರರಾದ ಪ್ರಸನ್ನ.ಎನ್ ರವರಿಂದ ಖರೀದಿಸಲು ಇಚ್ಛಿಸಿರುತ್ತಾರೆ. ಸರಸ್ವತಿ.ಎಸ್‌ರವರು ಸೂರ್ಯ ಗೃಹ ನಿರ್ಮಾಣ ಸಹಕಾರ ಸಂಘದಿಂದ ಷೆಡ್ಯೂಲ್ ಸ್ವತ್ತನ್ನು ಖರೀದಿಸಿರುತ್ತಾರೆ. ಸದರಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದ ಮೂಲ ಕ್ರಯ ಪತ್ರದ ಸಂಖ್ಯೆ ಎಮ್‌ವೈಎನ್–1–11384–2006–07 ಎಮ್‌ವೈಎನ್‌ಡಿ 102 ಮೂಲ ಪತ್ರ ಕಳೆದುಹೋಗಿರುತ್ತದೆ. ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾರಿಗಾದರೂ ಯಾವುದೇ ತಂಟೆ ತಕರಾರು ಇದ್ದಲ್ಲಿ ಈ ಪ್ರಕಟಣೆ ದಿನಾಂಕದಿಂದ 7 ದಿವಸಗಳೊಳಗೆ ಈ ಕೆಳಕಂಡ ವಿಳಾಸದಾರರಿಗೆ ಯಾವುದೇ ವ್ಯಕ್ತಿಗಳು ದಾಖಲೆ ಸಹಿತ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಮುಂದೆ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ತಂಟೆ ತಕರಾರು ಇಲ್ಲವೆಂದು ತಿಳಿದು ವ್ಯವಹರಿಸುತ್ತಾರೆ. 7 ದಿನಗಳ ನಂತರ ಬಂದ ಯಾವುದೇ ದೂರನ್ನು ಸ್ವೀಕರಿಸಲಾಗುವುದಿಲ್ಲ. ನಮ್ಮ ಅಭಿಪ್ರಾಯದಲ್ಲಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ವಿಧವಾದ ವ್ಯಾಜ್ಯಗಳಾಗಲಿ ದಾವೆಗಳಾಗಲಿ ಇರುವುದಿಲ್ಲ. ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಅದರ ಮಾಲೀಕರಿಂದ ಖರೀದಿಸಬಹುದಾಗಿದೆ. ಯಾವುದೇ ದಾಖಲೆ ಇಲ್ಲದೆ ಸುಳ್ಳು ತಕರಾರನ್ನು ನೀಡಿದವರ ವಿರುದ್ಧ ಕ್ರಿಮಿನಲ್ ಕೇಸನ್ನು ದಾಖಲಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಷೆಡ್ಯೂಲ್

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಶ್ರೀರಾಂಪುರ ಗ್ರಾಮಕ್ಕೆ ಸೇರಿದ 100/1ಎ, 100/1ಬಿ, 100/1ಸಿ, 100/2ಎ, 100/2ಬಿ, 100/2ಸಿ, ಮತ್ತು 104 ವಸತಿ ಉದ್ದೇಶಕ್ಕಾಗಿ ಅನ್ಯಕ್ರಾಂತವಾಗಿರುವ ಸರ್ವೆ ನಂಬರಿನ ಜಮೀನು 10 ಎಕರೆ 20.5 ಗುಂಟೆ ಜಮೀನಿನಲ್ಲಿ ಸೂರ್ಯ ಗೃಹ ನಿರ್ಮಾಣ ಸಹಕಾರ ಸಂಘ ನಿರ್ಮಿಸಿರುವ ಸೂರ್ಯ ಬಡಾವಣೆಯಲ್ಲಿರುವ 26ನೇ ಸಂಖ್ಯೆಯ ನಿವೇಶನ ಇದರ ವಿಸ್ತೀರ್ಣ ಪೂರ್ವ ಪಶ್ಚಿಮ 18.00 ಮೀಟರ್‌ಗಳು, ಉತ್ತರ ದಕ್ಷಿಣ 12 ಮೀಟರ್‌ಗಳು ಒಟ್ಟು ವಿಸ್ತೀರ್ಣ ಅಂದಾಜು 216.00 ಚದರ ಮೀಟರ್‌ಗಳುಳ್ಳ ನಿವೇಶನಕ್ಕೆ ಚಕ್ಕುಬಂದಿ.

ಪೂರ್ವಕ್ಕೆ: ಬೌಂಡರಿ, ಪಶ್ಚಿಮಕ್ಕೆ: ರಸ್ತೆ, ಉತ್ತರಕ್ಕೆ: 27ನೇ ನಂಬರ್ ಸ್ವತ್ತು, ದಕ್ಷಿಣಕ್ಕೆ: 25ನೇ ನಂಬರ್ ಸ್ವತ್ತು.

Sd/- **M.S.Vani**, B.A.L, LL.B,
Advocate & Notary, Roll No. 7334.
#369, Madhav Bhavan, JLB Road, Mysore.
Ph.: 9448342572
